22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 133 | ನವದೆಹಲಿ | ಬೆಲೆ ₹ 10 | ನವೆಂಬರ್ 13, 2024 ಬುಧವಾರ

## ಒಳಪುಟಗಳಲ್ಲಿ

ಜಾರ್ಖಂಡ್ ವಿಧಾನಸಭೆಗೆ ಇಂದು ಮೊದಲ ಹಂತದ ಮತದಾನ - ಪು.4

## ಮುಸ್ಲಿಮರಿಗೆ ಮೀಸಲಾತಿ ಪ್ರಸ್ತಾವನೆ ಬಂದಿಲ್ಲ ಸಿಎಂ ಸಿದ್ದರಾಮಯ್ಯ

**ಬೆಂಗಳೂರು, ನ.12:** ಕಾಮಗಾರಿಗಳಲ್ಲಿ ಮುಸ್ಲೀಮರಿಗೆ ಮೀಸಲಾತಿ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಕೆಲವು ಮಾಧ್ಯಮಗಳಲ್ಲಿ ಸುಳ್ಳು ಸುದ್ದಿಗಳನ್ನು ಹಬ್ಬಿಸುತ್ತಿದ್ದಾರೆಂದು ಮುಖ್ಯಮಂತ್ರಿ ಕಾರ್ಯಾಲಯ ತಿಳಿಸಿದೆ. ಮೀಸಲಾತಿ ನೀಡಬೇಕೆಂಬ ಬೇಡಿಕೆ ಬಂದಿರುವುದು ನಿಜ, ಆದರೆ, ಈ ಕುರಿತು ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ರಾಜ್ಯದ ಮೂರು ವಿಧಾನಸಭಾ ಕ್ಷೇತ್ರಗಳಿಗೆ ನ. 13ರಂದು ಉಪಚುನಾವಣೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಆಡಳಿತಾರೂಢ ಕಾಂಗ್ರೆಸ್ ಪಕ್ಷದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುವ ಸಾಧ್ಯತೆ ತಪ್ಪಿಸಲು ಈ ಸ್ಪಷ್ಟನೆ ನೀಡಲಾಗಿದೆ ಎನ್ನಲಾಗಿದೆ. ಆದರೆ, ಅಲ್ಪಸಂಖ್ಯಾತ ಸಮುದಾಯದ ಜನಪ್ರತಿನಿಧಿಗಳು ನೀಡಿದ ಮನವಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಆರ್ಥಿಕ ಇಲಾಖೆ ಪ್ರಧಾನ ಕಾರ್ಯದರ್ಶಿಗಳಿಗೆ ಪತ್ರ ರವಾನೆ ಮಾಡಿ ಕಾನೂನಿನ ರೀತಿ 2ಬಿ ಅಡಿ ಈ ಸಮುದಾಯಕ್ಕೆ ಶೇ.4ರಷ್ಟು ಮೀಸಲಾತಿ ಕಲ್ಪಿಸುವಂತೆ ಆದೇಶಿಸಿದ್ದಾರೆ.

## ಅಭಿವೃದ್ಧಿ ಕಾರ್ಯಗಳಿಗೆ ಬ್ರೇಕ್ ಹಾಕುವಲ್ಲಿ ಪ್ರತಿಪಕ್ಷ ನಾಯಕರು ಪಿಎಚ್‌ಡಿ ಮಾಡಿದ್ದಾರೆ



**ಮುಂಬೈ, ನ.12:** ಅಭಿವೃದ್ಧಿ ಕಾರ್ಯಗಳಿಗೆ ಬ್ರೇಕ್ ಹಾಕುವಲ್ಲಿ ವಿರೋಧ ಪಕ್ಷಗಳ ನಾಯಕರು ಪಿಎಚ್‌ಡಿ ಮಾಡಿದ್ದಾರೆ. ಅದರಲ್ಲಿ ಕಾಂಗ್ರೆಸ್ ಡಬಲ್ ಪಿಎಚ್‌ಡಿ ಮಾಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ವಾಗ್ದಾಳಿ ನಡೆಸಿದ್ದಾರೆ. ಮಹಾರಾಷ್ಟ್ರ ವಿಧಾನಸಭೆ ಚುನಾವಣೆ ಹಿನ್ನೆಲೆ ಚಂದ್ರಾಪುರ ಜಿಲ್ಲೆಯ ಚಿಮೂರ್ ಪಟ್ಟಣದಲ್ಲಿ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಉದ್ಧವ್ ಠಾಕ್ರೆ ಅವರ ಶಿವಸೇನೆ, ಶರದ್ ಪವಾರ್ ಅವರ ರಾಷ್ಟ್ರವಾದಿ ಕಾಂಗ್ರೆಸ್ ಪಕ್ಷ ಮತ್ತು ಕಾಂಗ್ರೆಸ್‌ನ ಮೈತ್ರಿ ಮಹಾರಾಷ್ಟ್ರದ ಬೆಳವಣಿಗೆಗೆ ಹಾನಿಕಾರಕವಾಗಿದೆ ಎಂದು ಕಿಡಿ ಕಾರಿದರು. ಚಂದ್ರಾಪುರದ ಜನರು ರೈಲು ಸಂಪರ್ಕಕ್ಕಾಗಿ ವರ್ಷಗಳಿಂದ ಬೇಡಿಕೆಯಿಡುತ್ತಿದ್ದಾರೆ, ಆದರೆ ಕಾಂಗ್ರೆಸ್ ಮತ್ತು ಅಘಾಡಿ ಅದಕ್ಕೆ ಅವಕಾಶ ನೀಡಲಿಲ್ಲ, ಮುಂದಿನ ಐದು ವರ್ಷಗಳಲ್ಲಿ ಬಿಜೆಪಿಯ ಮಹಾರಾಷ್ಟ್ರವನ್ನು ಅಭಿವೃದ್ಧಿ ಮಾಡಲಿದೆ ಎಂದು ಪ್ರಧಾನಿ ಮೋದಿ ಜನರಿಗೆ ಭರವಸೆ ನೀಡಿದರು. ಆಡಳಿತಾರೂಢ ಮಹಾಯುತಿಯ ಜೊತೆಗೆ ಕೇಂದ್ರದ ಎನ್‌ಡಿಎ ಸರ್ಕಾರ ಎಂದರೆ ಮಹಾರಾಷ್ಟ್ರದಲ್ಲಿ ಡಬಲ್ ಎಂಜಿನ್ ಸರ್ಕಾರ, ಇದರರ್ಥ ಅಭಿವೃದ್ಧಿಯ ದ್ವಿಗುಣ ವೇಗ ಎಂದರ್ಥ ಎಂದು ಹೇಳಿದರು.

ಕಾಂಗ್ರೆಸ್ ಮತ್ತು ಗಾಂಧಿ ಕುಟುಂಬದ ವಿರುದ್ಧ ವಾಗ್ದಾಳಿ ನಡೆಸಿದ ಮೋದಿ, ಸ್ವಾತಂತ್ರ್ಯ ನಂತರ ಕಾಂಗ್ರೆಸ್ ಹಿಂದುಳಿದ ಸಮುದಾಯಗಳ ಪ್ರಗತಿಗೆ ಅಡ್ಡಿಪಡಿಸಿದೆ ಎಂದು ಆರೋಪಿಸಿದರು. ದಲಿತರು, ಹಿಂದುಳಿದವರು ಮತ್ತು ಆದಿವಾಸಿಗಳು ಪ್ರಗತಿ ಸಾಧಿಸಲು ಕಾಂಗ್ರೆಸ್ ಎಂದಿಗೂ ಅವಕಾಶ ನೀಡಲಿಲ್ಲ ಎಂದು ಹೇಳಿದರು.

## ನ.21-23: ನ್ಯೂಸ್9 ಜಾಗತಿಕ ಶೃಂಗಸಭೆ: ಪ್ರಧಾನಿ ಮೋದಿ ಭಾಗಿ

**ನವದೆಹಲಿ, ನ.12:** ಟಿವಿ9 ನೆಟ್‌ವರ್ಕ್ ಜರ್ಮನಿಯಲ್ಲಿ ನ್ಯೂಸ್9 ಜಾಗತಿಕ ಶೃಂಗಸಭೆಯನ್ನು ಹಮ್ಮಿಕೊಂಡಿದೆ. ಭಾರತ ಮತ್ತು ಜರ್ಮನಿ ನಡುವಿನ ಸಂಬಂಧವನ್ನು ಗಾಢವಾಗಿಸಲು ಮತ್ತು ಸುಸ್ಥಿರ ಬೆಳವಣಿಗೆಯನ್ನು ಹೆಚ್ಚಿಸುವ ಉದ್ದೇಶದಿಂದ ನಡೆಸಲಾಗುತ್ತಿದೆ. ಸಭೆಯು ನವೆಂಬರ್ 21–23 ರ ಅವಧಿಯಲ್ಲಿ ಸ್ಟುಟ್‌ಗಾರ್ಟ್‌ನಲ್ಲಿ ನಡೆಯಲಿದೆ, ಪ್ರಧಾನಿ ನರೇಂದ್ರ ಮೋದಿ ಅವರು ಮುಖ್ಯ ಭಾಷಣ ಮಾಡಲಿದ್ದಾರೆ.




ಟಿವಿ9 ನೆಟ್‌ವರ್ಕ್ ಜರ್ಮನಿಯಲ್ಲಿ ನ್ಯೂಸ್9 ಜಾಗತಿಕ ಶೃಂಗಸಭೆಯನ್ನು ಹಮ್ಮಿಕೊಂಡಿದೆ. ಭಾರತ ಮತ್ತು ಜರ್ಮನಿ ನಡುವಿನ ಸಂಬಂಧವನ್ನು ಗಾಢವಾಗಿಸಲು ಮತ್ತು ಸುಸ್ಥಿರ ಬೆಳವಣಿಗೆಯನ್ನು ಹೆಚ್ಚಿಸುವ ಉದ್ದೇಶದಿಂದ ನಡೆಸಲಾಗುತ್ತಿದೆ. ಸಭೆಯು ನವೆಂಬರ್ 21–23 ರ ಅವಧಿಯಲ್ಲಿ ಸ್ಟುಟ್‌ಗಾರ್ಟ್‌ನಲ್ಲಿ ನಡೆಯಲಿದೆ, ಪ್ರಧಾನಿ ನರೇಂದ್ರ ಮೋದಿ ಅವರು ಮುಖ್ಯ ಭಾಷಣ ಮಾಡಲಿದ್ದಾರೆ.

ನೈರುತ್ಯ ಜರ್ಮನಿಯ ರಾಜ್ಯವಾದ ಬಾಡೆನ್–ವುರ್ಟೆಂಬರ್ಗ್‌ನ ರಾಜಧಾನಿ MHP ಅರೆನಾದಲ್ಲಿ ಟಿವಿ9 ನೆಟ್‌ವರ್ಕ್ ಮತ್ತು ಬುಂಡೆಸ್ಲಿಗಾ ಕ್ಲಬ್ VfB ಸ್ಟುಟ್‌ಗಾರ್ಟ್ ಜಂಟಿಯಾಗಿ ಆಯೋಜಿಸಿರುವ ಶೃಂಗಸಭೆಯಲ್ಲಿ ಮೋದಿ ಭಾಷಣ ಮಾಡಲಿದ್ದಾರೆ.

ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮತ್ತು ಸಂಪರ್ಕ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರು ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಮೋದಿಯವರ ಭಾಷಣವು ಯುರೋಪಿನ ಅತಿದೊಡ್ಡ ಆರ್ಥಿಕತೆಯೊಂದಿಗೆ ತನ್ನ ಪಾಲುದಾರಿಕೆಯನ್ನು ಬಲಪಡಿಸುವ ಭಾರತದ ಬದ್ಧತೆಯನ್ನು ಒತ್ತಿಹೇಳುತ್ತದೆ ಈ ವರ್ಷದ ಆರಂಭದಲ್ಲಿ, ಮಹಾರಾಷ್ಟ್ರ ಮತ್ತು ಬಾಡೆನ್–ವುರ್ಟೆಂಬರ್ಗ್ ಭಾರತದ ರಾಜ್ಯದಿಂದ ನುರಿತ ಕೆಲಸಗಾರರನ್ನು ನೇಮಿಸಿಕೊಳ್ಳುವ ಕುರಿತು ತಿಳುವಳಿಕೆ ಪತ್ರಕ್ಕೆ ಸಹಿ ಹಾಕಿದವು. ಈ ಒಪ್ಪಂದವು ನೂರಾರು ಸಾವಿರ ಕಾರ್ಮಿಕರ ನೇಮಕಾತಿಗೆ ಕಾರಣವಾಗಬಹುದು ಎಂದು ಮಹಾರಾಷ್ಟ್ರದ ಅಧಿಕಾರಿಗಳು ಹೇಳಿದ್ದಾರೆ. ಮೂರು ದಿನಗಳ ಕಾಲ ಎರಡೂ ದೇಶಗಳ ವಿವಿಧ ಕ್ಷೇತ್ರಗಳ ಪರಿಣಿತರು ಪಾಲ್ಗೊಂಡು ಚರ್ಚಿಸಲಿದ್ದಾರೆ. ಭಾರತ ಮತ್ತು ಜರ್ಮನಿಯ ಕ್ರೀಡೆ, ಬಿಸಿನೆಸ್, ಕಲೆ ಇತ್ಯಾದಿ ಕ್ಷೇತ್ರಗಳಲ್ಲಿ ಕೊಡುಕೊಳ್ಳುವಿಕೆ ಇತ್ಯಾದಿ ದ್ವಿಪಕ್ಷೀಯ ಸಂಬಂಧಗಳ ಬಗ್ಗೆ ಈ ಸಮಿಟ್‌ನಲ್ಲಿ ಗಮನ ಹರಿಸಲಾಗುತ್ತದೆ.

ಫುಟ್ಬಾಲ್‌ನ ಪವರ್‌ಹೌಸ್ ಆಗಿರುವ ಜರ್ಮನಿಯಿಂದ ಭಾರತದ ಫುಟ್ಬಾಲ್ ಕ್ಷೇತ್ರ ಹೇಗೆ ನೆರವು ಪಡೆದುಕೊಳ್ಳಬಹುದು ಎಂಬುದನ್ನೂ ಚರ್ಚಿಸಲಾಗುತ್ತದೆ. ಸ್ಟುಟ್‌ಗಾರ್ಟ್‌ನಲ್ಲಿನ ಎಂಎಚ್‌ಪಿ ಅರೆನಾ ಕ್ರೀಡಾಂಗಣದಲ್ಲಿ ನವೆಂಬರ್ 21ರಂದು ಸಂಜೆ 4ಗಂಟೆಗೆ ನ್ಯೂಸ್9 ಗ್ಲೋಬಲ್ ಸಮಿಟ್ ಕಾರ್ಯಕ್ರಮ ಆರಂಭವಾಗಲಿದೆ. ಟಿವಿ9 ನೆಟ್‌ವರ್ಕ್ ಸಿಇಒ ಬರುಣ್ ದಾಸ್ ಸೋಮವಾರ, ಸಂಸ್ಥೆಯು ತನ್ನ ವಾಟ್ ಇಂಡಿಯಾ ಥಿಂಕ್ಸ್ ಟುಡೇ ಸಮಾವೇಶದ ಯಶಸ್ಸಿನ ನಂತರ ಜಾಗತಿಕ ಶೃಂಗಸಭೆಯನ್ನು ನಡೆಸಲು ನಿರ್ಧರಿಸಿದೆ ಎಂದು ಹೇಳಿದರು.

## ಸಮನ್ಸ್ ಪ್ರಶ್ನಿಸಿ ಕೇಜ್ರಿವಾಲ್ ಹೈಕೋರ್ಟ್ ಮೊರೆ

**ನವದೆಹಲಿ, ನ. 12:** ದೆಹಲಿ ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದ ಮನಿ ಲಾಂಡರಿಂಗ್ ಪ್ರಕರಣದಲ್ಲಿ ತಮಗೆ ಸಮನ್ಸ್ ನೀಡಿರುವುದನ್ನು ಪ್ರಶ್ನಿಸಿ ಎಎಪಿ ನಾಯಕ ಅರವಿಂದ್ ಕೇಜ್ರಿವಾಲ್ ಅವರು ಸಲ್ಲಿಸಿದ ಮನವಿಯ ಬಗ್ಗೆ ದೆಹಲಿ ಹೈಕೋರ್ಟ್ ಮಂಗಳವಾರ ಜಾರಿ ನಿರ್ದೇಶನಾಲಯದ ಪ್ರತಿಕ್ರಿಯೆ ಕೇಳಿದೆ. ಅದಾಗ್ಯೂ, ನ್ಯಾಯಮೂರ್ತಿ ಮನೋಜ್ ಕುಮಾರ್ ಓಹ್ರಿ ಅವರು ಕೇಜ್ರಿವಾಲ್ ಅವರ ವಿರುದ್ಧ ದಾಖಲಾಗಿದರುವ ಕ್ರಿಮಿನಲ್ ಪ್ರಕರಣದ ವಿಚಾರಣೆಗೆ ತಡೆ ನೀಡಲು ನಿರಾಕರಿಸಿದ್ದಾರೆ.ಪ್ರಕರಣದಲ್ಲಿ ಇಡಿ ಸಲ್ಲಿಸಿದ ದೂರಿನ ಮೇರೆಗೆ ಕೇಜ್ರಿವಾಲ್ ಅವರಿಗೆ ನೀಡಲಾದ ಸಮನ್ಸ್ ಅನ್ನು ಪ್ರಶ್ನಿಸಿದ ಅರ್ಜಿಯ ಆಧಾರದಲ್ಲಿ ಹೈಕೋರ್ಟ್ ಜಾರಿ ನಿರ್ದೇಶನಾಲಯಕ್ಕೆ (ಇಡಿ) ನೋಟಿಸ್ ಜಾರಿ ಮಾಡಿದೆ. ಒಬ್ಬ ಅಧಿಕಾರಿಯಿಂದ ಸಮನ್ಸ್ ಜಾರಿಗೊಳಿಸಲಾಗಿದ್ದು, ಮತ್ತೊಬ್ಬ ಅಧಿಕಾರಿಯಿಂದ ದೂರು ದಾಖಲಿಸಲಾಗಿದೆ ಎಂಬ ಕಾರಣಕ್ಕೆ ಕೇಜ್ರಿವಾಲ್ ಪರ ವಕೀಲರು ಈ ದೂರಿನ ನಿರ್ವಹಣೆಯ ಬಗ್ಗೆ ನ್ಯಾಯಾಲಯದಲ್ಲಿ ಪ್ರಶ್ನಿಸಿದ್ದಾರೆ.

ಸಮನ್ಸ್ ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿದ್ದ ಸೆಷನ್ಸ್ ನ್ಯಾಯಾಲಯದ ಸೆಪ್ಟೆಂಬರ್ 17ರ ಆದೇಶವನ್ನು ಪ್ರಶ್ನಿಸಿ ಕೇಜ್ರಿವಾಲ್ ಅವರು ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಹೈಕೋರ್ಟ್‌ನಲ್ಲಿ ಅರ್ಜಿಯ ವಿಚಾರಣೆಯ ಸಂದರ್ಭ, ಇಡಿ ಪರವಾಗಿ ಹಾಜರಾದ ವಕೀಲರು ಅರ್ಜಿಯ ನಿರ್ವಹಣೆಯ ಬಗ್ಗೆ ಪ್ರಾಥಮಿಕ ಆಕ್ಷೇಪಣೆಯನ್ನು ಎತ್ತಿದ್ದಾರೆ.

ಕೇಜ್ರಿವಾಲ್ ಅವರ ಮನವಿಯು ಎರಡನೇ ಪರಿಷ್ಕರಣೆ ಅರ್ಜಿಯಾಗಿದ್ದು, ಇದನ್ನು ಸಿಆರ್‌ಪಿಸಿಯ ಸೆಕ್ಷನ್ 482ರ ಅಡಿಯಲ್ಲಿ ಸಲ್ಲಿಸಲಾಗಿದೆ. ಅದನ್ನು ಕಾನೂನಿನಲ್ಲಿ ನಿರ್ಬಂಧಿಸಲಾಗಿದೆ ಎಂದು ಅವರು ವಾದಿಸಿದ್ದಾರೆ. ಈ ಅರ್ಜಿಯಲ್ಲಿ ಮಾಡಲಾಗಿರುವ ಆಧಾರಗಳು ವಿಚಾರಣಾ ನ್ಯಾಯಾಲಯದ ಮುಂದೆ ಸಲ್ಲಿಸಲಾದ ಆಧಾರಗಳಿಗೆ ಸಮಾನವಾಗಿವೆ ಎಂದು ಅವರು ವಾದಿಸಿದ್ದಾರೆ.



ಆದರೆ, ಸಹಾಯಕ ನಿರ್ದೇಶಕ ಶ್ರೇಣಿಯ ಇಡಿ ಅಧಿಕಾರಿಯೊಬ್ಬರು ಕೇಜ್ರಿವಾಲ್ ಅವರಿಗೆ ಸಮನ್ಸ್ ನೀಡಿದ್ದಾರೆ. ಆದರೆ ಅದೇ ಶ್ರೇಣಿಯ ಇನ್ನೊಬ್ಬ ಇಡಿ ಅಧಿಕಾರಿಯಿಂದ ದೂರನ್ನು ದಾಖಲಿಸಿದ್ದಾರೆ. ನಿಯಮಗಳ ಪ್ರಕಾರ ಹೀಗೆ ಮಾಡುವಂತಿಲ್ಲ ಎಂದು ಕೇಜ್ರಿವಾಲ್ ಅವರ ವಕೀಲರು ವಾದಿಸಿದ್ದಾರೆ. ಸಮನ್ಸ್‌ಗೆ ಸಹಿ ಮಾಡಿದ ಅಧಿಕಾರಿ ಲಭ್ಯವಿದ್ದರೂ ಇನ್ನೊಬ್ಬ ಅಧಿಕಾರಿಯಿಂದ ನ್ಯಾಯಾಲಯಕ್ಕೆ ದೂರು ಸಲ್ಲಿಸಲಾಗಿದೆ ಎಂದು ವಕೀಲರು ಹೇಳಿದ್ದಾರೆ. ಹೈಕೋರ್ಟ್ ಡಿಸೆಂಬರ್ 19 ರಂದು ಮುಂದಿನ ವಿಚಾರಣೆಗೆ ಪ್ರಕರಣವನ್ನು ಪಟ್ಟಿ ಮಾಡಿದೆ.

## ವಿದ್ಯೆ ಯಾರೊಬ್ಬರ ಸ್ವತ್ತೂ ಅಲ್ಲ: ಸಿ.ಎಂ.ಸಿದ್ದರಾಮಯ್ಯ



**ಎಚ್.ಡಿ.ಕೋಟೆ, ನ.12:** ವಿದ್ಯೆ ಯಾರೊಬ್ಬರ ಸ್ವತ್ತೂ ಅಲ್ಲ. ವಾಲ್ಮೀಕಿ, ವ್ಯಾಸ, ಕನಕದಾಸ ಎಲ್ಲರೂ ಶೂದ್ರ, ದಲಿತ ಸಮುದಾಯದವರು. ಮೇಲ್ವರ್ಗಕ್ಕೆ ಮಾತ್ರ ಶಿಕ್ಷಣ ಎನ್ನುವುದು ತಪ್ಪು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು. ಮೈಸೂರು ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ವತಿಯಿಂದ ಆಯೋಜಿಸಿದ್ದ ಎಚ್.ಡಿ.ಕೋಟೆ ವಿಧಾನಸಭಾ ಕ್ಷೇತ್ರದಲ್ಲಿನ 443.64 ಕೋಟಿಯ ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿ, ಫಲಾನುಭವಿಗಳಿಗೆ ಕೃಷಿ ಸಲಕರಣೆಗಳನ್ನು ವಿತರಿಸಿದ ಬಳಿಕ ವಾಲ್ಮೀಕಿ ಜಯಂತಿ ಪ್ರಯುಕ್ತ ಮಹರ್ಷಿ ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು. ನಾವು ಈಗಾಗಲೇ ಸರ್ಕಾರದ ವತಿಯಿಂದ ವಾಲ್ಮೀಕಿ ಜಯಂತಿ ಆಚರಿಸುತ್ತಿದ್ದು ರಾಜ್ಯ ಮಟ್ಟದ ವಾಲ್ಮೀಕಿ ಪ್ರಶಸ್ತಿಯನ್ನೂ ನೀಡುತ್ತಿದ್ದೇವೆ. ವಾಲ್ಮೀಕಿಯವರು ಸಂಸ್ಕೃತದಲ್ಲಿ 20 ಸಾವಿರ ಶ್ಲೋಕಗಳನ್ನು ರಚಿಸಿದ್ದಾರೆ. ಶೂದ್ರ ವರ್ಗದ ಜನ ವಿದ್ಯೆ ಕಲಿಯುವುದೇ ನಿಷಿದ್ಧವಾಗಿದ್ದ ಕಾಲದಲ್ಲಿ ವಿದ್ಯೆ ಕಲಿತು, ಸಂಸ್ಕೃತವನ್ನೂ ಕಲಿತು ರಾಮಾಯಣ ರಚಿಸಿದ್ದು ಬಹಳ ದೊಡ್ಡ ಹೋರಾಟ ಮತ್ತು ಸಾಧನೆ ಎಂದರು. ಮಹಾಭಾರತ ಬರೆದ ವ್ಯಾಸರು ಬೆಸ್ತರು, ರಾಮಾಯಣ ಬರೆದ ವಾಲ್ಮೀಕಿ ಬೇಡ ಸಮುದಾಯದವರು, ಶಾಕುಂತಲ ಬರೆದ ಕಾಳಿದಾಸರು ಕುರುಬ ಸಮುದಾಯದವರು. ವಿದ್ಯೆ ಯಾರೊಬ್ಬರ ಸ್ವತ್ತೂ ಅಲ್ಲ. ಅವಕಾಶಗಳು ಸಿಗಬೇಕು ಅಷ್ಟೆ. ನಮ್ಮ ಜೀವನವನ್ನು ರೂಪಿಸಿಕೊಳ್ಳುವ ಶಿಲ್ಪಿ ನಾವೇ. ಆದ್ದರಿಂದ ವಿದ್ಯೆ ಕಲಿಯಲೇಬೇಕು. ಶೂದ್ರ ಜಾತಿಯ ಕನಕದಾಸರು ದಾಸಶ್ರೇಷ್ಠರಾದರು. ಆದ್ದರಿಂದ ವಿದ್ಯಾವಂತರಾಗಲು ಜಾತಿ ಅಡ್ಡಿ ಬರುವುದಿಲ್ಲ. ಮೇಲ್ವರ್ಗದವರಿಗೆ ಮಾತ್ರ ವಿದ್ಯೆ ಎನ್ನುವುದನ್ನು ನಮ್ಮಲ್ಲಿ ಬಿತ್ತಿದ್ದಾರೆ. ಇದು ತಪ್ಪು ಎಂದರು. ನಮ್ಮಪ್ಪ ಚನ್ನಪ್ಪಯ್ಯ ಅನ್ನುವವರ ಮೇಲ್ವರ್ಗದವರ ಮಾತು ಕೇಳಿ, ಕುರುಬರೆಲ್ಲಾ ಲಾಯರ್ ಓದೋಕೆ ಆಗಲ್ಲ ಎನ್ನುತ್ತಿದ್ದರು. ಆದರೆ ನಾನು ಹಠ ತೊಟ್ಟು ಕಾನೂನು ಓದಿ ಲಾಯರ್ ಆದೆ. ಮುಖ್ಯಮಂತ್ರಿಯೂ ಆದೆ ಎಂದರು. ಇಂದು ನಾವು ಆಚರಿಸುತ್ತಿರುವ ಪ್ರಜಾಪ್ರಭುತ್ವಕ್ಕೆ ವಾಲ್ಮೀಕಿ ಅವರು ಅವತ್ತೇ ಅಡಿಪಾಯ ಹಾಕಿದ್ದರು. ಮಹಾತ್ಮಗಾಂಧಿಯವರು ಹೇಳುವ ರಾಮರಾಜ್ಯವನ್ನು ವಾಲ್ಮೀಕಿ ಅವರು ರಾಮಾಯಣದಲ್ಲೇ ಚಿತ್ರಿಸಿದ್ದಾರೆ. ಆದರೂ ವಾಲ್ಮೀಕಿ ಅವರು ದರೋಡೆಕೋರ ಆಗಿದ್ದರು ಎಂದೆಲ್ಲಾ ಸುಳ್ಳು ಕತೆ ಸೃಷ್ಟಿಸಿದ್ದಾರೆ. ಇವೆಲ್ಲಾ ನಂಬೋಕೆ ಹೋಗಬೇಡಿ ಎಂದರು. ವಾಲ್ಮೀಕಿ ಮಹಾನ್ ಮೇದಾವಿ, ವಿದ್ಯಾವಂತ ಆಗಿದ್ದ ಎಂದರು.

**ಅಭಿವೃದ್ಧಿಗೆ ಹಣ ಇಲ್ಲ ಅಂದ್ರೆ 443 ಕೋಟಿ ಎಲ್ಲಿಂದ ಬಂತು: ಸಿ.ಎಂ.ಸಿದ್ದರಾಮಯ್ಯ ಪ್ರಶ್ನೆ?**

**ಎಚ್.ಡಿ.ಕೋಟೆಯಲ್ಲಿ 443 ಕೋಟಿ ಮೊತ್ತದ ಅಭಿವೃದ್ಧಿ ಕಾರ್ಯ ಉದ್ಘಾಟಿಸಿದ್ದೇನೆ. ಶಂಕುಸ್ಥಾಪನೆಯನ್ನೂ ನೆರವೇರಿಸಿದ್ದೇನೆ. ರಾಜ್ಯ ಸರ್ಕಾರದ ಬಳಿ ಸಂಬಳ ಕೊಡಲು, ಅಭಿವೃದ್ಧಿಗೆ ಹಣ ಇಲ್ಲ ಬಿಜೆಪಿಯವರು ಹಸಿ ಸುಳ್ಳು ಹರಡಿಸುತ್ತಾರೆ. ನಮ್ಮಲ್ಲಿ ಹಣ ಇಲ್ಲದಿದ್ದರೆ ಈ 443 ಕೋಟಿ ಎಲ್ಲಿಂದ ಬಂತು? ಯಾವುದಾದರೂ ರಾಜ್ಯ ಸರ್ಕಾರಿ ನೌಕರರಿಗೆ ಸಂಬಳ ನಿಂತಿದೆಯಾ? ಎಂದು ಪ್ರಶ್ನಿಸಿದರು. ರಾಜ್ಯದ ಕೋಟಿ ಕೋಟಿ ಫಲಾನುಭವಿಗಳು ನಮ್ಮ ಐದೂ ಗ್ಯಾರಂಟಿ ಯೋಜನೆಗಳ ಫಲವನ್ನು ಪ್ರತೀ ತಿಂಗಳೂ ಪಡೆಯುತ್ತಿದ್ದಾರೆ. ಆದರೂ ಬಿಜೆಪಿಯವರು ಗ್ಯಾರಂಟಿ ಯೋಜನೆಗಳಿಗೂ ಹಣ ಇಲ್ಲ ಎಂದು ಸುಳ್ಳು ಹರಡಿಸುತ್ತಿದ್ದಾರೆ. ಸುಳ್ಳೇ ಬಿಜೆಪಿಯ ಮನೆ ದೇವರು ಎಂದರು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ಜನಸಂಖ್ಯೆಗೆ ಅನುಗುಣವಾಗಿ ಅಭಿವೃದ್ಧಿ ಅನುದಾನವನ್ನು ಮೀಸಲಿಟ್ಟಿದ್ದು ನಮ್ಮ ಸರ್ಕಾರ. ಇದನ್ನು ಭಾರತದಲ್ಲಿ ಬೇರೆ ಯಾವ ಸರ್ಕಾರವೂ ಕೊಟ್ಟಿರಲಿಲ್ಲ ಎಂದರು. ವಾಲ್ಮೀಕಿ ಅಭಿವೃದ್ಧಿ ನಿಗಮಕ್ಕೆ ಮೀಸಲಿಟ್ಟಿದ್ದ ಹಣದಲ್ಲಿ ಒಂದು ಪೈಸೆ ಕೂಡ ಕಡಿಮೆ ಆಗದಂತೆ ಕೊಡಲಾಗುವುದು. ಪರಿಶಿಷ್ಠ ವರ್ಗದ ಮಂತ್ರಿಯಾಗಿದ್ದ ನಾಗೇಂದ್ರ ಅವರ ಮೇಲೂ ಸುಳ್ಳು ಕೇಸು ಹಾಕಿದ್ದರು. ಈಗ ನಾಗೇಂದ್ರ ಅವರು ಜೈಲಿನಿಂದ ಹೊರಗೆ ಬಂದಿದ್ದಾರೆ. ಉಪ ಚುನಾವಣೆ ಮುಗಿದ ಬಳಿಕ ಈ ಬಗ್ಗೆ ಒಳ್ಳೆ ತೀರ್ಮಾನ ಮಾಡ್ತೀನಿ ಎಂದರು.**

## ನವದೆಹಲಿಯ ಚಾಣಕ್ಯಪುರಿ, ಕೌಟಿಲ್ಯಮಾರ್ಗದಲ್ಲಿರುವ ನೂತನ ಕರ್ನಾಟಕ ಭವನ 'ಕಾವೇರಿ' ಉದ್ಘಾಟನೆಗೊಳ್ಳಲು ಸಜ್ಜಾಗಿರುವ ದೃಶ್ಯ



## ದೆಹಲಿ ಕರ್ನಾಟಕ ಭವನಕ್ಕೆ ಕಳೆ ತಂದುಕೊಟ್ಟ ಸಿ.ಮೋಹನ್ ಕುಮಾರ್

**ಸಿ.ಮೋಹನ್ ಕುಮಾರ್**
ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿ ಹಾಗೂ ಸಹಾಯಕ ನಿವಾಸಿ ಆಯುಕ್ತರು

○ ಹೌದು ರಾಷ್ಟ್ರ ರಾಜಧಾನಿ ನವದೆಹಲಿಯ ಕರ್ನಾಟಕ ಭವನ ಎಂದರೆ ಕರ್ನಾಟಕದ ಮಟ್ಟಿಗೆ ಅತ್ಯಂತ ಮಹತ್ವ ಪಡೆದಿದೆ. ಕರ್ನಾಟಕದಿಂದ ದೆಹಲಿಗೆ ಬರುವ ಮುಖ್ಯಮಂತ್ರಿ ಸೇರಿದಂತೆ ಸಚಿವರು, ಅಧಿಕಾರಿಗಳು ವಿವಿಧ ಕೆಲಸಗಳಿಗೆ ದೆಹಲಿಗೆ ಬರಲೇಬೇಕು. ಇಲ್ಲಿ ಅವರೆಲ್ಲರಿಗೂ ಉಳಿದುಕೊಳ್ಳುವ ತಾಣವೆಂದರೆ ಕರ್ನಾಟಕ ಭವನ. ರಾಜ್ಯಪಾಲರು, ಲೋಕಾಯುಕ್ತರು, ಅನೇಕ ಬಾರಿ ಕರ್ನಾಟಕದಿಂದ ದೆಹಲಿಗೆ ವರ್ಗವಾಗಿ ಬರುವ ನ್ಯಾಯಮೂರ್ತಿಗಳು ಮತ್ತು ಹೊಸದಾಗಿ ಆಯ್ಕೆಯಾಗುವ ಲೋಕಸಭಾ, ರಾಜ್ಯಸಭಾ ಸದಸ್ಯರಿಗೆ ವಸತಿ ದೊರೆಯುವವರೆಗೂ ಕರ್ನಾಟಕ ಭವನದಲ್ಲೇ ಅವರ ವಾಸ. ಅವರೆಲ್ಲರಿಗೂ ಸಕಲ ವ್ಯವಸ್ಥೆ ಕಲ್ಪಿಸುವ ಹೊಣೆ ಕರ್ನಾಟಕ ಭವನದ್ದು.

ಆ ಎಲ್ಲ ಜವಾಬ್ದಾರಿಗಳನ್ನು ಮೇಲಧಿಕಾರಿ ಸಿ.ಮೋಹನ್ ಕುಮಾರ್ ಅವರಿಗೇ ವಹಿಸುತ್ತಾರೆ.

○ ಕರ್ನಾಟಕ ಭವನ ಒಟ್ಟು ನಾಲ್ಕು ಭವ್ಯ ಕಟ್ಟಡಗಳನ್ನು ಹೊಂದಿದ್ದು, ನೂತನ ಭವನ 52 ಸುಸಜ್ಜಿತ ಕೊಠಡಿಗಳು ಸೇರಿದಂತೆ ಒಟ್ಟು 160 ಕೊಠಡಿಗಳು, 200 ಜನ ಸಿಬ್ಬಂದಿಗಳು, 36 ಸುಸಜ್ಜಿತ ವಾಹನಗಳೂ ಕರ್ನಾಟಕ ಭವನಕ್ಕೆ ಬರುವವರ ಸೇವೆಗೆ ಸಿದ್ಧವಾಗಿರುತ್ತವೆ. ನವದೆಹಲಿಯಲ್ಲಿದ್ದುಕೊಂಡು ಇವೆಲ್ಲವುಗಳನ್ನೂ ನಿರ್ವಹಿಸುವ ಅತ್ಯಂತ ದಕ್ಷ ಅಧಿಕಾರಿ ಸಹಾಯಕ ನಿವಾಸಿ ಆಯುಕ್ತರು, ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿಗಳೂ ಆದ ಸಿ.ಮೋಹನ್ ಕುಮಾರ್ ಯಾವುದೇ ಚ್ಯುತಿ ಬಾರದಂತೆ ನಿರ್ವಹಿಸಿಕೊಂಡು ಬರುತ್ತಿದ್ದಾರೆ.

○ ಕಳೆದ ಜುಲೈ ತಿಂಗಳಲ್ಲಿ ಅಂದರೆ ಸುಮಾರು ನಾಲ್ಕು ತಿಂಗಳ ಹಿಂದೆ ಕರ್ನಾಟಕ ಭವನಕ್ಕೆ ಸಹಾಯಕ ನಿವಾಸಿ ಆಯುಕ್ತರಾಗಿ ಬಡ್ತಿ ಪಡೆದಿರುವ ಮೋಹನ್‌ಕುಮಾರ್ ಕರ್ನಾಟಕದಿಂದ ಬರುವ ಮುಖ್ಯಮಂತ್ರಿಗಳು, ರಾಜ್ಯಪಾಲರು, ಮಂತ್ರಿಗಳು, ನ್ಯಾಯಾಧೀಶರು, ಲೋಕಾಯುಕ್ತರೂ ಸೇರಿದಂತೆ ವಿವಿಧ ಅಧಿಕಾರಿಗಳ ಶಿಷ್ಟಾಚಾರ, ಸಾರಿಗೆ, ಅತಿಥಿ ಗೃಹಗಳ ನಿರ್ವಹಣೆ ಎಲ್ಲ ಹೊಣೆಯನ್ನೂ ಹೊತ್ತು ಅತ್ಯಂತ ಸಮರ್ಪಕವಾಗಿ ನಿರ್ವಹಿಸಿಕೊಂಡು ಬರುತ್ತಿದ್ದಾರೆ.

○ ಸಿ. ಮೋಹನ್ ಕುಮಾರ್ ಅವರು 1989ರಲ್ಲಿ ಕರ್ನಾಟಕ ಭವನದಲ್ಲಿ ಉದ್ಯೋಗಿಯಾಗಿ ಸೇವೆ ಸಲ್ಲಿಸಿ ಹಂತಹಂತವಾಗಿ ಬಡ್ತಿ ಪಡೆದರು. ಹಿಂದೆ ಎಲ್ಲ ಹುದ್ದೆಗಳಲ್ಲಿ ನಿಷ್ಠೆಯಿಂದ ಕರ್ತವ್ಯ ನಿರ್ವಹಿಸಿ ಸೈ ಎನಿಸಿಕೊಂಡವರು. ಮೂಲತಃ ಮೈಸೂರಿನವರಾದ ಮೋಹನ್ ಕುಮಾರ್ ತಮ್ಮ ಸ್ನಾತಕೋತ್ತರ ವಿದ್ಯಾಭ್ಯಾಸ ಎಲ್ಲವೂ ಮೈಸೂರಿನಲ್ಲಿ ಪೂರೈಸಿದವರು.

○ ಮೋಹನ್ ಕುಮಾರ್‌ರನ್ನು ನವದೆಹಲಿಯ ತಮ್ಮ ಕಚೇರಿಯಲ್ಲಿ 'ದೆಹಲಿವಾರ್ತೆ' ಮಾತನಾಡಿಸಿದಾಗ, ನಾನು ಈ ಹುದ್ದೆಗೆ ಏರುತ್ತೇನೆಂದು ಭಾವಿಸಿರಲಿಲ್ಲ. ನನಗೆ ಈ ಹುದ್ದೆ ದೇವರು ಕೊಟ್ಟ ಹುದ್ದೆ ಎಂದು ಭಾವಿಸುತ್ತೇನೆ. ಭವನದ ಎಲ್ಲ ಹಿರಿಯ ಮತ್ತು ಕಿರಿಯ ಅಧಿಕಾರಿಗಳ ಬಗ್ಗೆ ಪ್ರೀತಿ ವಿಶ್ವಾಸದಿಂದ ಅತ್ಯಂತ ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

○ **ಮೊದಲ ಆದ್ಯತೆ ಶುಚಿತ್ವಕ್ಕೆ :**

ನಮ್ಮ ಕರ್ನಾಟಕ ಭವನಕ್ಕೆ ಬರುವ ಮುಖ್ಯಮಂತ್ರಿಗಳು, ಮಂತ್ರಿಗಳು, ಸರ್ಕಾರದ ಅಧಿಕಾರಿಗಳಿಗೆ ಮೊದಲ ಆಧ್ಯತೆಯಂತೆ, ಸ್ವಚ್ಛವಾದ ಕೊಠಡಿ, ಶುದ್ಧ ಮತ್ತು ರುಚಿಯಾದ ಊಟೋಪಚಾರ ಒದಗಿಸುವುದು. ವಾಹನ ಸೌಲಭ್ಯ ಒದಗಿಸುವುದು, ನಮ್ಮ ಹೆಚ್ಚಿನ ಜವಾಬ್ದಾರಿಯಾಗಿದೆ ಎನ್ನುತ್ತಾರೆ ಮೋಹನ್‌ಕುಮಾರ್ ಅವರು.

○ ಭವನಕ್ಕೆ ಯಾರೇ ಬಂದರೂ ಆತ್ಮೀಯತೆಯಿಂದ ಬರಮಾಡಿಕೊಂಡು, ಎಲ್ಲ ಸಚಿವರಿಗೆ, ಎಲ್ಲ ಅಧಿಕಾರಿಗಳ ಅಗತ್ಯಗಳನ್ನು ಪೂರೈಸಿ, ಎಲ್ಲ ಮಂತ್ರಿಗಳ ಹಾಗೂ ಅಧಿಕಾರಿಗಳ ಪ್ರೀತಿ–ವಿಶ್ವಾಸ ಗಳಿಸಿದ್ದಾರೆ.

○ ಕರ್ನಾಟಕ ಭವನದಲ್ಲಿ ಸದ್ಯ ಉದ್ಘಾಟನೆಗೆ ಸಿದ್ಧಗೊಂಡಿರುವ, ಚಾಣಕ್ಯಪುರಿ, ಕೌಟಿಲ್ಯ ಮಾರ್ಗದಲ್ಲಿರುವ ನೂತನ ಭವನ 'ಕಾವೇರಿ' ಸೇರಿ ಒಟ್ಟು ನಾಲ್ಕು ಭವನಗಳು ಇದ್ದು, ಸುಮಾರು 200 ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಮುಖ್ಯಮಂತ್ರಿಗಳು, ಸಚಿವರಿಗೆ, ಅಧಿಕಾರಿಗಳಿಗೆ, ಅಧಿವೇಶನದ ಕಾಲದಲ್ಲಿ ಸಂಸದರಿಗೂ ಸೇರಿದಂತೆ 36 ವಾಹನಗಳಿದ್ದು, ಎಲ್ಲವನ್ನೂ ಸುಸ್ಥಿತಿಯಲ್ಲಿರುವಂತೆ ನೋಡಿಕೊಳ್ಳುತ್ತೇವೆ ಎಂದರು.

○ ಕರ್ನಾಟಕದಿಂದ ಹೊರರಾಜ್ಯಗಳಿಗೆ ಹೋದ ಕನ್ನಡಿಗರಿಗೆ ಏನೇ ಅನಾನುಕೂಲವಾದಲ್ಲಿ, ಅಪಘಾತ ಅಥವಾ ವಿಪತ್ತಿನ ವಿಶೇಷ ಸಂದರ್ಭದಲ್ಲಿ, ಸಾವು–ನೋವು ಸಂಭವಿಸಿದಲ್ಲಿ, ಹಗಲೂ ರಾತ್ರಿ ಎನ್ನದೇ ಅವರ ಅಗತ್ಯಗಳಿಗನುಸಾರವಾಗಿ ಅವರ ಸೇವೆಗೈದು, ಅವರನ್ನು ಮರಳಿ ಅವರ ಸ್ವಸ್ಥಾನಗಳಿಗೆ ಕಳಿಸುವ ಎಲ್ಲ ಜವಾಬ್ದಾರಿಯನ್ನು ಅತ್ಯಂತ ಕಾಳಜಿಯಿಂದ ನಿರ್ವಹಿಸುತ್ತೇವೆ ಎಂದು ಸಹಾಯಕ ನಿವಾಸಿ ಆಯುಕ್ತ ಸಿ.ಮೋಹನ್ ಕುಮಾರ್ ಅವರು ಕಳಕಳಿಯಿಂದ ಹೇಳಿಕೊಂಡರು. ಹೀಗಾಗಿ ಅವರು ಎಲ್ಲರಿಗೂ ಅಚ್ಚುಮೆಚ್ಚಿನವರಾಗಿದ್ದಾರೆ.

○○○○

## ನಿತ್ಯ ಪಂಚಾಂಗ 13.11.2024 ಬುಧವಾರ



ಶ್ರೀ ಕ್ರೋಧಿ ನಾಮ ಸಂವತ್ಸರ,
ದಕ್ಷಿಣಾಯನ-ಶರದ್ ಋತು,
ಚಾಂದ್ರಮಾನ, ಆಶ್ವಯುಜ ಕಾರ್ತಿಕ ಶುದ್ಧ

ದ್ವಾದಶಿ, ರೇವತಿ ನಕ್ಷತ್ರ,
ಪ್ರದೋಷ, ಕ್ಷೀರಾಬ್ಧಿ ದ್ವಾದಶಿ,
ವ್ಯಾಸರಾಜಮಠ ಧಾತ್ರಹವನ, ಉಡುಪಿ ಲಕ್ಷದೀಪೋತ್ಸವ,
ಸಂತ ನಾಮದೇವ ಜಯಂತಿ

| ದಿನ | ರಾಹುಕಾಲ | ಯಮಗಂಡ | ಗುಳಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

### ದೇಶದಲ್ಲಿ 1.28 ಲಕ್ಷ ಸ್ಟಾರ್ಟ್‌ಅಪ್ ಕಾರ್ಯನಿರ್ವಹಣೆ

# 1.30 ಕೋಟಿ ಜನರಿಗೆ ಉದ್ಯೋಗ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ



**ದಾವಣಗೆರೆ, ನ.12–** ದೇಶದಲ್ಲಿಂದು 1 ಲಕ್ಷದ 28 ಸಾವಿರ ಸ್ಟಾರ್ಟ್ ಅಪ್‌ಗಳು ಕೆಲಸ ಮಾಡುತ್ತಿವೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ.

ದಾವಣಗೆರೆಯುಲ್ಲಿಂದು ಜಿಎಂ ವಿಶ್ವವಿದ್ಯಾಲಯದಲ್ಲಿ ವಿದ್ಯಾರ್ಥಿ ನಿಲಯಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, 2016 ರಲ್ಲಿ ಕೇವಲ 450 ಸ್ಟಾರ್ಟ್ ಅಪ್‌ಗಳಿದ್ದವು. ಇದೀಗ ಇವುಗಳ ಸಂಖ್ಯೆ 1 ಲಕ್ಷದ 28 ಸಾವಿರ ದಾಟಿದ್ದು 1 ಕೋಟಿ 30 ಲಕ್ಷ ಜನರಿಗೆ ಉದ್ಯೋಗ ನೀಡಿವೆ ಎಂದರು. ಜಗತ್ತಿನಲ್ಲಿ ಮಾನವ ಸಂಪನ್ಮೂಲ ಕಡಿಮೆ ಇದೆ.

ಅದರೆ ಭಾರತದಲ್ಲಿ ಮಾನವ ಸಂಪನ್ಮೂಲ ಹೆಚ್ಚಾಗಿದ್ದು ಇದೀಗ ಜಗತ್ತು ಭಾರತದತ್ತ ನೋಡುತ್ತಿದೆ. ಇಲ್ಲಿ ಬಂಡವಾಳ ಹೂಡಲು ಇಡೀ ಜಗತ್ತಿನ ಮುಂದುವರಿದ ದೇಶಗಳು ಮುಂದೆ ಬರುತ್ತಿವೆ ಎಂದರು.

ಕಾರ್ಯಕ್ರಮದಲ್ಲಿ ವಿಧಾನಸಭಾ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಮಾಜಿ ಸಂಸದ ಜಿ.ಎಂ.ಸಿದ್ದೇಶ್ವರ ಉಪಸ್ಥಿತರಿದ್ದರು.

### ತುಮಕೂರು-ಬೆಂಗಳೂರು ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ವಿಳಂಬ

# ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಸಚಿವ ವಿ.ಸೋಮಣ್ಣ



**ನೆಲಮಂಗಲ, ನ.12–** ತುಮಕೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ವಿಳಂಬ ವಿಚಾರವಾಗಿ ಕೇಂದ್ರ ಸಚಿವ ವಿ.ಸೋಮಣ್ಣ ಅಧಿಕಾರಿಗಳಿಗೆ ತರಾಟೆಗೆ ತೆಗೆದುಕೊಂಡಿದ್ದಾರೆ.

ತುಮಕೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಕಾಮಗಾರಿ ವಿಳಂಬವಾಗುತ್ತಿದ್ದು, ಇದರಿಂದಾಗಿ ಅಪಘಾತಗಳು ಸಂಭವಿಸುತ್ತಿವೆ ಎಂಬ ದೂರುಗಳು ಬಂದಿದ್ದವು. ಹೀಗಾಗಿ ಇಂದು ಕೇಂದ್ರ ಸಚಿವ ವಿ.ಸೋಮಣ್ಣ ತುಮಕೂರು ನೆಲಮಂಗಲ ರಾಷ್ಟ್ರೀಯ ಹೆದ್ದಾರಿ ಅಷ್ಟಪಥ ರಸ್ತೆ ಕಾಮಗಾರಿ ಪರಿಶೀಲನೆ ನಡೆಸಿದರು.

ಈ ವೇಳೆ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ವಿಳಂಬ ಸಂಬಂಧ ಅಧಿಕಾರಿಗಳಿಗೆ ಕ್ಲಾಸ್ ತೆಗೆದುಕೊಂಡ ಕೇಂದ್ರ ಸಚಿವ ಸೋಮಣ್ಣ ದಿನೇ ದಿನೇ ಅಪಘಾತ ಪ್ರಕರಣಗಳು ಹೆಚ್ಚಾಗುತ್ತಿದ್ದು, ಇವುಗಳ ತಡೆಗೆ ಕಟ್ಟುನಿಟ್ಟಿನ ಕ್ರಮ ತೆಗೆದು ಕೊಳ್ಳುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿ ತಾಕೀತು ಮಾಡಿದರು.

# ಸಾಲದ ಮೊತ್ತ ಕಡಿತ ಮಾಡದಿರಲು ಸಚಿವ ಶಿವಾನಂದ ಪಾಟೀಲ ಆಗ್ರಹ



**ಹುಬ್ಬಳ್ಳಿ, ನ.12–** ಸಹಕಾರಿ ಸಂಸ್ಥೆಗಳಿಗೆ ರಿಯಾಯಿತಿ ದರದಲ್ಲಿ ನೀಡುವ ಸಾಲದ ಮೊತ್ತವನ್ನು ಕಡಿಮೆ ಮಾಡುವುದರಿಂದ ಕೃಷಿ ಕ್ಷೇತ್ರಕ್ಕೆ ಹಿನ್ನಡೆಯಾಗಲಿದ್ದು, ಈ ಮೊದಲಿನ ಪ್ರಮಾಣದಲ್ಲೇ ಸಾಲ ನೀಡಬೇಕು ಎಂದು ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಆಗ್ರಹಪಡಿಸಿದರು.

ಹುಬ್ಬಳ್ಳಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಸುಮಾರು 63 ಲಕ್ಷ ರೈತರಿದ್ದು, ಈ ಪೈಕಿ ಸುಮಾರು 30 ಲಕ್ಷ ರೈತರು ಕೃಷಿ ಸಾಲಕ್ಕೆ ಡಿಸಿಸಿ ಬ್ಯಾಂಕುಗಳನ್ನು ಅವಲಂಬಿಸಿದ್ದಾರೆ. ನಬಾರ್ಡ್ ರಿಯಾಯಿತಿ ದರದ ಸಾಲದ ಮೊತ್ತ ಕಡಿಮೆ ಮಾಡಿದರೆ ಡಿಸಿಸಿ ಬ್ಯಾಂಕುಗಳ ಕೃಷಿ ಸಾಲ ವಿತರಣೆಯ ಸಾಮರ್ಥ್ಯ ಕಡಿಮೆ ಯಾಗಲಿದ್ದು, ಇದು ಕೃಷಿ ಕ್ಷೇತ್ರದ ಹಿನ್ನಡೆಗೆ ಕಾರಣವಾಗಲಿದೆ ಎಂದರು.

ರಾಜ್ಯದಲ್ಲಿ ಈಗಾಗಲೇ ಕೃಷಿ ಚಟುವಟಿಕೆಗಳು ಚುರುಕಾಗಿವೆ. ರೈತರಿಗೆ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಕೃಷಿ ಚಟುವಟಿಕೆಗೆ ಹಣದ ಅಗತ್ಯವಿದ್ದು, ರೈತರು ಸಹಕಾರಿ ಬ್ಯಾಂಕುಗಳ ಕೃಷಿ ಸಾಲದ ನಿರೀಕ್ಷೆಯಲ್ಲಿದ್ದಾರೆ. ನಬಾರ್ಡ್ ಸಾಲದ ಮೊತ್ತ ಕಡಿಮೆ ಮಾಡುವುದರಿಂದ ಮುಂಗಾರು ಹಂಗಾಮು ಮಾತ್ರ ಅಲ್ಲ ಹಿಂಗಾರು ಹಂಗಾಮಿಗೂ ಕೃಷಿ ಸಾಲ ವಿತರಣೆಗೆ ಸಮಸ್ಯೆಯಾಗಲಿದೆ. ಎಲ್ಲ ರೈತರಿಗೂ ವಾಣಿಜ್ಯ ಬ್ಯಾಂಕುಗಳಲ್ಲಿ ಸಾಲ ಪಡೆಯುವ ಪರಿಸ್ಥಿತಿ ಇಲ್ಲ. ಹೆಚ್ಚು ಷರತ್ತುಗಳಿಲ್ಲದೆ ಕೃಷಿ ಸಾಲ ವಿತರಣೆ ವ್ಯವಸ್ಥೆ ಇರುವುದು ಸಹಕಾರಿ ಬ್ಯಾಂಕುಗಳಲ್ಲಿ ಮಾತ್ರ ಎಂದರು.

### ಮುಡಾ ಹಗರಣದಲ್ಲಿ ಸಿಕ್ಕಿಬಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ತಲೆದಂಡ ನಿಶ್ಚಿತ

# ಅಧಿವೇಶನಕ್ಕೂ ಮೊದಲೇ ಸಿದ್ದರಾಮಯ್ಯ ರಾಜೀನಾಮೆ: ಅಶೋಕ್




**ಸಿದ್ದರಾಮಯ್ಯರದ್ದು ಟಿಪ್ಪು ಸಂಸ್ಕೃತಿ, ಮುಸ್ಲಿಮರು ಏನೇ ಕೇಳಿದರೂ ಕೊಟ್ಟುಬಿಡುತ್ತಾರೆ ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ವಿಪಕ್ಷ ನಾಯಕ ಆರ್ ಅಶೋಕ್ ಏಕವಚನದಲ್ಲಿ ವಾಗ್ದಾಳಿ ನಡೆಸಿದ್ದಾರೆ.**

**ದಾವಣಗೆರೆಯಲ್ಲಿ ಆರ್ ಅಶೋಕ್ ಮಾಧ್ಯಮಗಳೊಂದಿಗೆ ಮಾತನಾಡಿ, ಸಿಎಂ ಸಿದ್ದರಾಮಯ್ಯ ಮುಸ್ಲಿಮರು ನಾಲ್ಕು ಕೇಳಿದರೆ ಎಂಟು ಕೊಡುತ್ತಾನೆ. ಉತ್ತರ ಕರ್ನಾಟಕದ ಅವನ್ಯಾರು ಮಾಜಿ ಸಚಿವ ಹೇಳಿದ್ದಾನಲ್ಲ. ಸಿದ್ದರಾಮಯ್ಯ ಸಿಎಂ ಆಗಿದ್ದಾಗಲೇ ಎಲ್ಲವನ್ನು ಬಾಚಿಕೊಳ್ಳಿ ಎಂದು. ಹಾಗಾಗಿ ಸಿದ್ದರಾಮಯ್ಯ ಮುಸ್ಲಿಮರು ನಾಲ್ಕು ಕೇಳಿದರೆ ಎಂಟು ಕೊಡುತ್ತಾನೆ ಎಂದು ಏಕವಚನದಲ್ಲಿ ವಾಗ್ದಾಳಿ ಮಾಡಿದರು.**

**ದಾವಣಗೆರೆ, ನ.12–** ವಿಧಾನಮಂಡಲದ ಚಳಿಗಾಲದ ಅಧಿವೇಶನಕ್ಕೂ ಮುನ್ನವೇ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡಲಿದ್ದಾರೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ತಿಳಿಸಿದರು.

'ಕಳೆದ ಅಧಿವೇಶನದಲ್ಲಿ ಸಚಿವರೊಬ್ಬರ ತಲೆದಂಡವಾಗಿದೆ. 16 ತಿಂಗಳಲ್ಲಿ 16 ಸ್ವರೂಪದ ಭ್ರಷ್ಟಾಚಾರವನ್ನು ರಾಜ್ಯ ಸರ್ಕಾರ ಮಾಡಿದೆ. 'ಮುಡಾ' ಹಗರಣದಲ್ಲಿ ಸಿಕ್ಕಿಬಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತಲೆದಂಡ ನಿಶ್ಚಿತ' ಎಂದು ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಅಭಿಪ್ರಾಯಪಟ್ಟರು.

'ತಮ್ಮ ಹಗರಣ ಮುಚ್ಚಿಕೊಳ್ಳುವ ಉದ್ದೇಶದಿಂದ ವಿರೋಧ ಪಕ್ಷಗಳ ಬಾಯಿ ಮುಚ್ಚಿಸುವ ಪ್ರಯತ್ನವನ್ನು ಸಿದ್ದರಾಮಯ್ಯ ಮಾಡುತ್ತಿದ್ದಾರೆ. ಕೋವಿಡ್‌ಗೆ ಸಂಬಂಧಿಸಿದಂತೆ ಆಯೋಗವೊಂದನ್ನು ರಚಿಸಿ ಸೇಡಿನ ರಾಜಕಾರಣ ಮಾಡುತ್ತಿದ್ದಾರೆ. ಇದಕ್ಕೆ ಬಿಜೆಪಿ ಜಗ್ಗುವುದಿಲ್ಲ'. 'ವಿಧಾನಸಭಾ ಉಪಚುನಾವಣೆ ಯಲ್ಲಿ ಹಣದ ಹೊಳೆಯೇ ಹರಿಯುತ್ತಿದೆ. ಮದ್ಯದ ಲಾಬಿ, ಭ್ರಷ್ಟಾಚಾರದಿಂದ ಸಂಗ್ರಹಿಸಿದ ಹಣವನ್ನು ಮತದಾರರಿಗೆ ಹಂಚಲಾಗುತ್ತಿದೆ. ಚುನಾವಣಾ ಆಯೋಗ ಬಿಗಿ ಕ್ರಮಕೈಗೊಳ್ಳಬೇಕು' ಎಂದರು.

ವಕ್ಫ್ ಮಂಡಳಿಯ ಆಸ್ತಿ ಹತ್ತು ವರ್ಷಗಳಲ್ಲಿ ಶೇ.30ರಷ್ಟು ಹೆಚ್ಚಾಗಿದೆ. ಇದು ಹೀಗೆ ಮುಂದುವರಿದರೆ ದೇಶ ವಿರೋಧಿ ಶಕ್ತಿಗಳಿಗೆ ಕುಮ್ಮಕ್ಕು ಸಿಕ್ಕು ದೊಡ್ಡ ಅಪಾಯ ಎದುರಾಗುವ ಸಾಧ್ಯತೆ ಇದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಆರೋಪಿಸಿದರು. 'ವಕ್ಫ್ ಆಸ್ತಿಯನ್ನು ಮುಸ್ಲಿಂ ಸಮುದಾಯದವರ ಬಳಕೆಗೆ ನೀಡಲಾಗುತ್ತದೆ. ಆಗ ಅಲ್ಲಿ ಎಂಥ ಚಟುವಟಿಕೆಗಳು ನಡೆಯುತ್ತವೆ ಎಂಬುದನ್ನು ಬಿಡಿಸಿ ಹೇಳುವ ಅಗತ್ಯವಿಲ್ಲ. ವಿಶೇಷ ಸ್ಥಾನ ಪಡೆದಿದ್ದ ಕಾಶ್ಮೀರ ಭಯೋತ್ಪಾದಕರ ನೆಲೆಯಾಗಿರಲಿಲ್ಲವೇ' ಎಂದು ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಪ್ರಶ್ನಿಸಿದರು. 'ವಕ್ಫ್ ಆಸ್ತಿಯನ್ನು ಹೆಚ್ಚಿಸಿಕೊಳ್ಳಲು ರಾಜ್ಯದ ಹಲವು ನಗರಗಳಲ್ಲಿ ಸರ್ವೇ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ. ಗ್ರಾಮ ಪಂಚಾಯಿತಿಗಳಿಗೂ ನೋಟಿಸ್ ಜಾರಿ ಮಾಡಲಾಗಿದೆ. ರೈತರಿಗೆ ನೋಟಿಸ್ ನೀಡದೇ ಭೂದಾಖಲೆಗಳಲ್ಲಿ ವಕ್ಫ್ ಮಂಡಳಿ ಹೆಸರು ನಮೂದಿಸಲಾಗಿದೆ. ರೈತರಿಂದ ವಶಕ್ಕೆ ಪಡೆದ ಭೂಮಿಯನ್ನು ಕೂಡಲೇ ಹಿಂತಿರುಗಿಸಬೇಕು'. 'ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಮುಸ್ಲಿಂ ತುಷ್ಟೀಕರಣ ರಾಜಕಾರಣ ಮಾಡುತ್ತಿದೆ. ಮತಾಂಧರಾಗಿರುವ ಸಚಿವ ಜಮೀರ್ ಅಹಮ್ಮದ್ ಮುಂದೆಬಿಟ್ಟು ವಕ್ಫ್ ಅದಾಲತ್‌ಗಳನ್ನು ನಡೆಸಿ ಸಾಮಾನ್ಯ ರೈತರ ಭೂಮಿಯನ್ನು ಕಬಳಿಸಲಾಗುತ್ತಿದೆ' ಎಂದು ಕಿಡಿಕಾರಿದರು.

ಪ್ರಲ್ಹಾದ ಜೋಶಿ, ಕೇಂದ್ರ ಸಚಿವಶಿಕ್ಷಣ, ಉದ್ಯೋಗದಲ್ಲಿ ನೀಡುತ್ತಿರುವ ಮೀಸಲಾತಿ ಸಂವಿಧಾನ ಬಾಹಿರ ಎಂಬುದನ್ನು ನ್ಯಾಯಾಲಯ ಈಗಾಗಲೇ ಸ್ಪಷ್ಟಪಡಿಸಿದೆ.

ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ ನೀಡುವುದು ತಪ್ಪು. ಆರ್.ಅಶೋಕ್, ವಿರೋಧ ಪಕ್ಷದ ನಾಯಕ ಕೇಂದ್ರ ಸಚಿವ ಎಚ್.ಡಿ.ಕುಮಾರ ಸ್ವಾಮಿ ಅವರನ್ನು 'ಕರಿಯಾ' ಎಂದು ಕರೆದು ಜನಾಂಗೀಯ ನಿಂದನೆ ಮಾಡಲಾಗಿದೆ. ಎಚ್.ಡಿ.ದೇವೇಗೌಡ ಕುಟುಂಬವನ್ನು ಅವಹೇಳನ ಮಾಡಿದ್ದು ಖಂಡನೀಯ.

# ಸುಳ್ಳು ಹೇಳುವುದು ನಮಗೆ ಅಗತ್ಯವಿಲ್ಲ ಪ್ರತಿಪಕ್ಷಕ್ಕೆ ಸಚಿವ ರೆಡ್ಡಿ ತಿರುಗೇಟು



**ಬೆಂಗಳೂರು, ನ.12–** ವಿರೋಧ ಪಕ್ಷದ ನಾಯಕರೇ, ಸುಳ್ಳು ಹೇಳುವುದು, ಜನರ ದಾರಿ ತಪ್ಪಿಸುವುದು ತಮಗೆ ಮತ್ತು ತಮ್ಮ ಬಿ.ಜೆ.ಪಿ ಪಕ್ಷಕ್ಕೆ ಸಿದ್ಧಿಸಿರುವ ಕಲೆ. ನಮಗೆ ಅದರ ಅವಶ್ಯಕತೆಯಿಲ್ಲ. ಇಂದೇ ಸ್ಥಳ ಮತ್ತು ಸಮಯವನ್ನು ನಿಗದಿ ಮಾಡಿ ನಾನು ಬಹಿರಂಗ ಚರ್ಚೆಗೆ ಸಿದ್ಧನಿದ್ದೇನೆ. ಅಂಕಿ ಅಂಶಗಳೇ ನಮ್ಮ ಅಭಿವೃದ್ಧಿಗೆ ಹಾಗೂ ಸಾಧನೆಗೆ ಮಾನದಂಡ ಎಂಬುದನ್ನು ಹತ್ತು ಹಲವು ಬಾರಿ ನಾನು ತಿಳಿಸಿದ್ದೇನೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಬಿಜೆಪಿ ಆರೋಪಗಳಿಗೆ ತಿರುಗೇಟು ನೀಡಿದ್ದಾರೆ.

ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಸಚಿವರು, ಸಾರಿಗೆ ಸಂಸ್ಥೆಗಳನ್ನು ಅಧೋಗತಿ ತಂದು ನಿಲ್ಲಿಸಿರುವುದು ತಮ್ಮ ಪಕ್ಷದ ಅಧಿಕಾರಾವಧಿಯಲ್ಲಿ ಎಂಬುದಕ್ಕೆ ಶ್ವೇತಪತ್ರ ಹೊರಡಿಸಿ ತಮ್ಮ ಅವಧಿಯ ಆಡಳಿತವನ್ನು ಜನರಿಗೆ ತೋರಿಸಬೇಕೆಂಬ ತಮ್ಮ ಮಹದಾಸೆಗೆ ನಾವು ಅಭಾರಿ. ನಮ್ಮ ಸರ್ಕಾರದ ಶಕ್ತಿ ಯೋಜನೆಯಿಂದ ಸಾರಿಗೆ ಸಂಸ್ಥೆಗಳ ಆದಾಯದಲ್ಲಿ ಗಣನೀಯ ವೃದ್ಧಿಯಾದರೂ ಸಾರಿಗೆ ಸಂಸ್ಥೆಗಳಿಗೆ ಶಕ್ತಿ ತುಂಬಲು ಸಾಧ್ಯವಾಗಿಲ್ಲದಿರುವುದು ತಮ್ಮ ಸರ್ಕಾರದ ಕೊಡುಗೆ ಶಕ್ತಿ ಯೋಜನೆಯಿಂದ ದಿನನಿತ್ಯ ಪ್ರಯಾಣಿಸುವ ಪ್ರಯಾಣಿಕರ ಸಂಖ್ಯೆ 84 ಲಕ್ಷದಿಂದ 1.08 ಕೋಟಿಗೆ ಏರಿಕೆ ಆಗಿದೆ. ಆದಾಯದಲ್ಲಿ ಗಣನೀಯ ವೃದ್ಧಿ ಆಗಿದೆ ಎಂದು ತಿಳಿಸಿದರು.ನಾವು ಈಗಾಗಲೇ ಹಲವು ಬಾರಿ ತಿಳಿಸಿದ್ದೇನೆ, ಆದಾಯವೇ ಬೇರೆ ಲಾಭವೇ ಬೇರೆ. ಆದಾಯದಲ್ಲಿ ಗಣನೀಯ ಹೆಚ್ಚಳವಾಗಿದ್ದರೂ ಸಹ ಲಾಭವನ್ನು ಗಳಿಸಲು ಸಾಧ್ಯವಿಲ್ಲ, ಏಕೆಂದರೆ ತಮ್ಮ ಪಕ್ಷದವರು ಬಾಕಿ ಇಟ್ಟು ಹೋಗಿರುವ ರೂ.5900 ಕೋಟಿ ನಷ್ಟ ಸಾರಿಗೆ ಸಚಿವರಾಗಿ, ಹಲವು ಬಾರಿ ಅನೇಕ ಖಾತೆಗಳ ಸಚಿವರಾಗಿ ಕಾರ್ಯ ನಿರ್ವಹಿಸಿದ್ದರೂ, ಈ ಬಗ್ಗೆ ತಮಗೆ ಅರ್ಥವಾಗದಿದ್ದರೆ ನಾನು ಏನು ಮಾಡಲು ಸಾಧ್ಯ. ಈ ಬಗ್ಗೆ ಕೂಲಂಕುಷವಾಗಿ ಮಾಹಿತಿ ಸಂಗ್ರಹಿಸಿ ನಂತರ ಟ್ವೀಟ್ ಮಾಡಿದರೆ ಒಳಿತು ಎಂದಿದ್ದಾರೆ.

ತಮ್ಮ ಬಿ.ಜೆ.ಪಿ ಪಕ್ಷದ ಆಡಳಿತದ ಐದು ವರ್ಷಗಳಲ್ಲಿ ಯಡಿಯೂರಪ್ಪ ಹಾಗೂ ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿಗಳಾಗಿದ್ದಾಗ, ಸಾರಿಗೆ ಸಂಸ್ಥೆಗಳನ್ನು ರೂ.5900 ಕೋಟಿ ನಷ್ಟದಲ್ಲಿಟ್ಟು ಹೋಗಿದ್ದಾರೆ. ಕಳೆದ 5 ವರ್ಷಗಳಲ್ಲಿ ಬಿ.ಎಂ.ಟಿ.ಸಿ ಹೊರತುಪಡಿಸಿ ಬೇರೆ ಯಾವುದೇ ಸಾರಿಗೆ ನಿಗಮಗಳಿಗೆ ಬಸ್‌ಗಳ ಸೇರ್ಪಡೆಯೇ ಮಾಡದೇ, ಡಕೋಟ ಬಸ್ಸುಗಳನ್ನು ಕಾರ್ಯಾಚರಣೆ ಮಾಡಲು ಬಿಟ್ಟು ಹೋಗಿದ್ದೀರಾ. ನಮ್ಮ ಸರ್ಕಾರ 6200 ಬಸ್ಸುಗಳ ಸೇರ್ಪಡೆಗೆ ಅನುಮೋದನೆ ನೀಡಿದ್ದು, ಕಳೆದೊಂದು ವರ್ಷದಲ್ಲಿಯೇ 3450 ಹೊಸ ಬಸ್ಸುಗಳ ಸೇರ್ಪಡೆಯಾಗಿದೆ. ಡಕೋಟಾ ಬಸ್ಸುಗಳನ್ನು ಪುನಶ್ಚೇತನ ಮಾಡುವ ಕಾರ್ಯವನ್ನು ಸಹ ಕೈಗೆತ್ತಿಕೊಂಡು 1300 ಬಸ್ಸುಗಳ ಪುನಶ್ಚೇತನ ಕಾರ್ಯಮಾಡಿದ್ದೇವೆ ಎಂದು ಸಚಿವರು ವಿವರಿಸಿದರು.

# ಮನೆಗೆಲಸ, ಸೆಕ್ಯೂರಿಟಿ ಗಾರ್ಡ್ ಕೆಲಸಕ್ಕೆ ಹೊಸಬರನ್ನು ಸೇರಿಸಿಕೊಳ್ಳುವಾಗ ಎಚ್ಚರಿಕೆ ವಹಿಸಿ: ಪೋಲಿಸ್ ಆಯುಕ್ತರ ಮನವಿ



**ಬೆಂಗಳೂರು,ನ.12–** ಹೊರಗಿನವರನ್ನು ತಮ ಮನೆಗಳಲ್ಲಿ ಕೆಲಸಕ್ಕೆ ಹಾಗೂ ಸೆಕ್ಯೂರಿಟಿ ಗಾರ್ಡ್‌ಗಳಾಗಿ ಸೇರಿಸಿಕೊಳ್ಳುವಾಗ ಜಾಗ್ರತೆ ವಹಿಸಬೇಕೆಂದು ಸಾರ್ವಜನಿಕ ರಲ್ಲಿ ನಗರ ಪೊಲೀಸ್ ಆಯುಕ್ತ ಬಿ.ದಯಾನಂದ ಮನವಿ ಮಾಡಿಕೊಂಡಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ, ಇತ್ತೀಚಿನ ದಿನಗಳಲ್ಲಿ ಮನೆಗಳಲ್ಲಿ ಕೆಲಸಕ್ಕಿರುವವರೇ ಹಣ, ಆಭರಣ ಕಳ್ಳತನ ಮಾಡುತ್ತಿರುವ ಪ್ರಕರಣಗಳು ಹೆಚ್ಚಾಗುತ್ತಿವೆ.ಕೆಲಸಕ್ಕೆ ನೇಮಿಸಿಕೊಳ್ಳುವ ಅಂತಾರಾಜ್ಯ , ಅಂತರ್ದೇಶದವರ ಬಗ್ಗೆ ಎಚ್ಚರಿಕೆ ವಹಿಸಬೇಕೆಂದರು.

ಮನೆಗೆಲಸಕ್ಕೆ ಹಾಗೂ ಗಾರ್ಡನ್ ನೋಡಿಕೊಳ್ಳಲು ಸೇರಿದಂತೆ ವಿವಿಧ ಕೆಲಸಗಳಿಗೆ ಹೊರಗಿನವರನ್ನು ಸೇರಿಸಿಕೊಳ್ಳುವಾಗ ಜಾಗೃತಿ ವಹಿಸುವುದು ಅತಿಮುಖ್ಯ. ನಿಮ ಭದ್ರತೆ– ನಿಮ ರಕ್ಷಣೆ– ನಿಮ ಕೈಯಲ್ಲಿರಲಿ ಎಂದು ಆಯುಕ್ತರು ತಿಳಿಸಿದರು. ಹೊರಗಿನವರನ್ನು ಮನೆಗೆಲಸಕ್ಕೆ, ಜ್ಯುವೆಲರಿ ಅಂಗಡಿಗಳಲ್ಲಿ ಕೆಲಸಕ್ಕೆ ಸೇರಿಸಿಕೊಳ್ಳುವಾಗ ಅವರ ಪೂರ್ವಪರಗಳನ್ನು ವಿಚಾರಿಸಿ ಅವರು ಯಾವ ರಾಜ್ಯ, ಯಾವ ದೇಶದವರು ಎಂಬ ಮಾಹಿತಿಗಳನ್ನು ಸಂಗ್ರಹಿಸಿಟ್ಟುಕೊಳ್ಳಿ ಅವರ ಆಧಾರ್ ಕಾರ್ಡ್ ಸೇರಿದಂತೆ ದಾಖಲಾತಿಗಳನ್ನು ಪಡೆದುಕೊಳ್ಳಬೇಕೆಂದು ಮಾಲೀಕರಿಗೆ ತಿಳಿಸಿದರು.

ಕೆಲಸಗಾರರ ಬಗ್ಗೆ ಮಾಹಿತಿ ಇಲ್ಲದಿದ್ದರೆ ಅವರನ್ನು ಹುಡುಕುವಷ್ಟರಲ್ಲಿ ಹಣ, ಆಭರಣದೊಂದಿಗೆ ಗಡಿದಾಟಿ ಹೋಗಿರುತ್ತಾರೆ. ಹಣವನ್ನು ಖರ್ಚು ಮಾಡಿಕೊಂಡಿರುತ್ತಾರೆ. ಆಭರಣವನ್ನು ಮಾರಿಬಿಡುತ್ತಾರೆ. ಹಾಗಾಗಿ ಕೆಲಸಗಾರರ ಹಾಗೂ ಸೆಕ್ಯೂರಿಟಿಗಾರ್ಡ್‌ಗಳ ಭಾವಚಿತ್ರ ಸೇರಿದಂತೆ ಅವರ ವಿಳಾಸದ ವಿವರ ಹಾಗೂ ದಾಖಲಾತಿಗಳನ್ನು ಪಡೆದುಕೊಂಡರೆ ಅವರಿಗೂ ಸಹ ಭಯವಿರುತ್ತದೆ. ಅಲ್ಲದೆ ಪೊಲೀಸರಿಗೂ ಸಹ ಅವರನ್ನು ಹುಡುಕಲು ಸುಲಭವಾಗುತ್ತದೆ ಎಂದರು. ತಾವು ಹೊರಗೆ ಹೋಗುವಾಗ ಸೆಕ್ಯುರಿಟಿಗಾರ್ಡ್ ಹಾಗೂ ಮನೆಕೆಲಸದ ವರ ಮೇಲೆ ಸಂಪೂರ್ಣ ಅವಲಂಬಿತ ರಾಗಬೇಡಿ. ಮನೆ ಕೀ ಅಥವಾ ಅಂಗಡಿ ಕೀಯನ್ನು ಕೊಡದೆ ತಾವೇ ತೆಗೆದುಕೊಂಡು ಹೋಗಿ. ನೀವು ಬೀಗಹಾಕಿ ಹೊರಗೆ ಹೋಗುವಾಗ ಎಲ್ಲಿಗೆ ಹೋಗುತ್ತೇವೆ, ಯಾವಾಗ ಬರುತ್ತೇವೆಂದು ಅವರಿಗೆ ಹೇಳಬೇಡಿ ಎಂದು ಸಲಹೆ ನೀಡಿದರು. ನಿಮ್ಮ ವ್ಯಾಪಾರ–ವಹಿವಾಟುಗಳ ಬಗ್ಗೆ, ನಿಮಲ್ಲಿರುವ ಹಣ, ಆಭರಣದ ಬಗ್ಗೆ ಮನೆಗೆಲಸದವರಿಗೆ ಗೊತ್ತಾಗಬಾರದು. ನಿಮ ಬಳಿ ಇರುವ ಹಣ, ಆಭರಣದ ಬಗ್ಗೆ ತಿಳಿದುಕೊಂಡು ಕೆಲವೊಂದು ಬಾರಿ ನಿಮ್ಮ ಜೀವಕ್ಕೆ ಕುತ್ತಾಗುವ ಪ್ರಕರಣಗಳು ನಡೆಯಬಹುದು. ಹಾಗಾಗಿ ನೀವು ಕೆಲಸಗಾರರ ಮೇಲೆ ಅವಲಂಬಿತ ರಾಗಬೇಡಿ ಎಂದು ಆಯುಕ್ತರು ಹೇಳಿದರು.

## ಇಲಾಖೆಗಳೊಂದಿಗೆ ಸಮನ್ವಯ ಸಾದನೆಗೆ ಕ್ರಮ ಕಾರ್ಯಪಡೆ ಸಜ್ಜುಗೊಳಿಸಲು ಖರ್ಗೆ ಆಗ್ರಹ



**ಬೆಂಗಳೂರು ನ.12 :** ರಾಜ್ಯದ ಗ್ರಾಮೀಣ ಪ್ರದೇಶಗಳ ಇ–ಸ್ವತ್ತು ಮಂಜೂರಾತಿ ಪ್ರಕ್ರಿಯೆಯನ್ನು ಸರಳೀಕರಣ ಹಾಗೂ ಸಬಲೀಕರಣ ಗೊಳಿಸಲು ಕಂದಾಯ ಇಲಾಖೆ ಹಾಗೂ ನಗರಾಭಿವೃದ್ಧಿ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸುವ ಸಲುವಾಗಿ ಕಾರ್ಯಪಡೆಯೊಂದನ್ನು ರಚಿಸುವುದಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಇ–ಖಾತ ಸಂಬಂಧದಲ್ಲಿ ಬುಧವಾರ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಸಭೆಯ ಹಿನ್ನೆಲೆಯಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಇಂದು ಗ್ರಾಮೀಣಾಭಿವೃದ್ಧಿ ಇಲಾಖೆಯ ಅಧಿಕಾರಿಗಳೊಂದಿಗೆ ಸುದೀರ್ಘವಾಗಿ ಚರ್ಚೆ ನಡೆಸಿದರು.

ಗ್ರಾಮಠಾಣ ವ್ಯಾಪ್ತಿಯ ಹೊರಭಾಗದ ಬಹಳಷ್ಟು ಪ್ರದೇಶಗಳಲ್ಲಿ ಶಾಲೆಗಳು, ಉದ್ದಿಮೆಗಳು ಹಾಗೂ ವಸತಿ ಸಮುಚ್ಛಯಗಳು ನಿರ್ಮಾಣಗೊಂಡಿದ್ದು, ಬಹುಪಾಲು ಆಸ್ತಿಗಳು ಗ್ರಾಮ ಪಂಚಾಯತಿ ತೆರಿಗೆ ವ್ಯಾಪ್ತಿಗೆ ಒಳಪಡದೆ ಇರುವುದರಿಂದ ಗ್ರಾಮ ಪಂಚಾಯತಿಗಳ ಸಂಪನ್ಮೂಲ ಕ್ರೋಢೀಕರಣದಲ್ಲಿ ಹಿನ್ನಡೆ ಉಂಟಾಗಿದೆ. ಗ್ರಾಮ ಪಂಚಾಯತಿಗಳನ್ನು ಆರ್ಥಿಕವಾಗಿ ಸದೃಢಗೊಳಿಸು ವಲ್ಲಿ ಸಬಲೀಕರಣ ಹಾಗೂ ನಾಗರಿಕರಿಗೆ ಇ–ಸ್ವತ್ತು ದಾಖಲೆ ಪಡೆಯುವ ಪ್ರಕ್ರಿಯೆಯನ್ನು ಸರಳೀಕರಣಗೊಳಿಸುವ ಅನಿವಾರ್ಯತೆ ಇರುವುದರಿಂದ ಸಮಸ್ಯೆಗಳನ್ನು ಬಗಹರಿಸಿ ಪರಿಹಾರಗಳನ್ನು ಕಂಡುಕೊಳ್ಳಲು ಕಾರ್ಯಪಡೆಯನ್ನು ರಚಿಸಲಾಗುವುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಗ್ರಾಮಗಳಿಗೆ ಹೊಂದಿಕೊಂಡಂತೆ ಕಂದಾಯ ಭೂಮಿಯಲ್ಲಿ ಬಡಾವಣೆಗಳು ನಿರ್ಮಾಣಗೊಂಡಿದ್ದು, ಇಂತಹ ಬಡಾವಣೆಗಳಲ್ಲಿನ ನಿವಾಸಿಗಳು ಇ–ಸ್ವತ್ತು ದಾಖಲೆಯನ್ನು ಸುಗಮವಾಗಿ ಪಡೆದುಕೊಳ್ಳುವಲ್ಲಿ ಪರಿಹಾರಗಳನ್ನು ಕಾರ್ಯಪಡೆ ಸೂಚಿಸಲಿದೆ ಎಂದೂ ಸಚಿವರು ಹೇಳಿದರು.

# ಉದ್ದುದ್ದ ಭಾಷೆಗಳಿಂದ ಕನ್ನಡ ಅಭಿವೃದ್ಧಿ ಆಗದು: ಬೈರಮಂಗಲ ರಾಮೇಗೌಡ

**ಬೆಂಗಳೂರು, ನ.12–** ಉದ್ದುದ್ದ ಭಾಷಣಗಳು ಕನ್ನಡ ಹಾಗೆ, ಹೀಗೆ ಎನ್ನುವ ಮಾತುಗಳಿಂದ ಕನ್ನಡದ ಉದ್ಧಾರ ಆಗುವುದಿಲ್ಲ ಬೆಂಗಳೂರಿನಲ್ಲಿ ಅನ್ಯ ಭಾಷೀ ಕರ ಸಂಖ್ಯೆ ಹೆಚ್ಚಾಗುತ್ತಿದೆ ಎಲ್ಲಾ ವಿಭಾಗಗಳಲ್ಲಿಯೂ ಅವರೇ ಕಾರ್ಯ ನಿರ್ವಹಿಸುತ್ತಿದ್ದಾರೆ ಅವರು ಮಾತನಾಡುವ ಭಾಷೆಗೆ ಅವರದೇ ಆದ ಭಾಷೆಯಲ್ಲಿ ನಾವು ಉತ್ತರಿಸುತ್ತಿದ್ದೇವೆ ಅದು ಬಿಟ್ಟು ಕನ್ನಡದಲ್ಲಿ ಮಾತನಾಡಿ ಎಂದು ಹೇಳುವುದರ ಜೊತೆಗೆ ಕನ್ನಡದಲ್ಲಿ ಉತ್ತರಿಸುವಂತಾಗಬೇಕು ಮಾತಿನ ಗುಂಡು ಹೊಡೆಯುವ ಮೂಲಕ ಕನ್ನಡದ ಅಭಿವೃದ್ಧಿ ಮಾಡಬೇಕು ಎಂದು ಬಿಎಂ ಶ್ರೀ ಪ್ರತಿಷ್ಠಾನದ ಅಧ್ಯಕ್ಷ , ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ. ಬೈರಮಂಗಲ ರಾಮೇಗೌಡ ವಿದ್ಯಾರ್ಥಿಗಳಿಗೆ ಕಾರ್ಯ ನೀಡಿದರು.

ಅವರು ಯಶವಂತಪುರ ವಿಧಾನಸಭಾ ಕ್ಷೇತ್ರ ಕನ್ನಡ ಸಾಹಿತ್ಯ ಪರಿಷತ್ ಆಯೋಜಿಸಿದೆ ಕನ್ನಡ ರಾಜ್ಯೋತ್ಸವದ ಆಚರಣೆಯ ನಿಮಿತ್ತ ಆರು ದಿನಗಳ ನಿರಂತರ ನಾಟಕೋತ್ಸವ ಕಾರ್ಯಕ್ರಮವನ್ನು ಕೆಂಗೇರಿ ಉಪನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ತಾಯಿ ಭುವನೇಶ್ವರಿಗೆ ಪುಷ್ಪಾರ್ಚನೆ ಮಾಡಿ ಅಭಿನಂದನೆ ಸ್ವೀಕರಿಸಿ ಮಾತ ನಾಡುತ್ತಿದ್ದರು.

ಧ್ವಜಾರೋಹಣ ಮಾಡಿ ಕನ್ನಡ ರಾಜ್ಯೋತ್ಸವವನ್ನು ಒಂದು ದಿನ ಆಚರಿಸುವುದಕ್ಕಿಂತ ವೈವಿಧ್ಯಮಯವಾಗಿ ಮನಸ್ಸಿಗೆ ಹೃದಯಕ್ಕೆ ಹತ್ತಿರವಾಗುವಂತಹ ಕಾರ್ಯಕ್ರಮಗಳನ್ನು ಮಾಡುವಲ್ಲಿ ಯಶವಂತಪುರ ವಿಧಾನಸಭಾ ಕ್ಷೇತ್ರ ಕಾಸ್ ಅಪ ಮುಂದೆ ಇರುವುದು ಶ್ಲಾಘನೀಯ ಎಂದ ಭೈರಮಂಗಲ ರಾಮೇಗೌಡ ನಾಟಕಗಳ ಮೂಲಕ ಕನ್ನಡದ ಜಾಗೃತಿ ಮೂಡಿಸುತ್ತಿರುವುದು ಶ್ಲಾಘನೀಯ ಎಂದರು.

ಕನ್ನಡದ ಅಭಿವೃದ್ಧಿಗೆ ಅನ್ಯ ಭಾಷೆಕರೊಂದಿಗೆ ಕನ್ನಡದಲ್ಲೇ ಮಾತನಾಡಬೇಕು ಮಾತಿನ ಗುಂಡು ಹೊಡೆಯಬೇಕು ಆಗ ಮಾತ್ರ ಸಾಧ್ಯ ಎಂದು ರಾಮೇಗೌಡ ಅಭಿಪ್ರಾಯ ಪಟ್ಟರು. ಬೆಂಗಳೂರು ನಗರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎಂ ಪ್ರಕಾಶಮೂರ್ತಿ ಮಾತನಾಡಿ ನಾಟಕೋತ್ಸವದ ಮೂಲಕ ಆರು ದಿನಗಳ ಕಾಲ ಕನ್ನಡ ರಾಜ್ಯೋತ್ಸವ ಆಚರಿಸುತ್ತಿರುವ ಕಾರ್ಯ ಮೆಚ್ಚುವಂಥದ್ದು ಎಲ್ಲರೂ ಕನ್ನಡದ ಅಭಿವೃದ್ಧಿಗೆ ಕಂಕಣಬದ್ಧರಾಗಬೇಕು ಎಂದು ಕರೆ ನೀಡಿದರು.




**ಕನ್ನಡ ಸಾಹಿತ್ಯ ಪರಿಷತ್ತು ಯಶವಂತಪುರ ವಿಧಾನಸಭಾ ಕ್ಷೇತ್ರ ನಾಟಕೋತ್ಸವ ಮೂಲಕ ಕನ್ನಡ ರಾಜ್ಯೋತ್ಸವಕ್ಕೆ ಚಾಲನೆ ನೀಡಲಾಯಿತು. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ, ಬೈರಮಂಗಲ ರಾಮೇಗೌಡ ಅವರನ್ನು ಪುಸ್ತಕಗಳ ಗುಚ್ಚ ನೀಡಿ ಅಭಿನಂದಿಸಲಾಯಿತು. ಯಶವಂತಪುರ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಹೆಚ್. ಎಸ್. ಸುಧೀಂದ್ರ ಕುಮಾರ್, ಬೆಂಗಳೂರ್ ನಗರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಎಂ. ಪ್ರಕಾಶಮೂರ್ತಿ ಪ್ರಾಂಶುಪಾಲ ಡಾ, ಲಕ್ಷ್ಮೀನಾರಾಯಣ ,ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಹಂ.ಗು.ರಾಜೇಶ್, ಕ್ಷೇತ್ರ ಪದಾಧಿಕಾರಿಗಳಾದ ಎ. ಎನ್. ಶಿವಸ್ವಾಮಿ, ವಿ.ವಿ. ಸತ್ಯನಾರಾಯಣ ,ಚಂದ್ರಹಾಸ, ಶಿವರಾಮ್,ಬಿ.ಎಸ್. ಪಾರಿಜಾತ ಉಪಸ್ಥಿತರಿದ್ದಾರೆ.**

ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಡಾಕ್ಟರ್ ಲಕ್ಷ್ಮೀನಾರಾಯಣ ಮಾತನಾಡಿ ವಿಶಿಷ್ಟ ರೀತಿಯಲ್ಲಿ ರಾಜ್ಯೋತ್ಸವ ಆಚರಿಸುವ ಮೂಲಕ ಅದ್ದೂರಿ ತನಕ್ಕಿಂತ ಅರ್ಥ ಪೂರ್ಣವಾಗಿದೆ ಎಂದು ಶ್ಲಾಘನೆ ವ್ಯಕ್ತಪಡಿಸಿದರು.

ಕನ್ನಡ ಸಾಹಿತ್ಯ ಪರಿಷತ್ತು ಯಶವಂತಪುರ ವಿಧಾನಸಭಾ ಕ್ಷೇತ್ರ ಅಧ್ಯಕ್ಷ ಹೆಚ್ ಎಸ್ ಸುಧೀಂದ್ರ ಕುಮಾರ್ ಅಧ್ಯಕ್ಷತೆ ವಹಿಸಿ ಮಾತನಾಡಿ ಕ್ಷೇತ್ರದಲ್ಲಿ ವಿಶೇಷ ವಿಶಿಷ್ಟ ರೀತಿಯಲ್ಲಿ ಪ್ರತಿ ವರ್ಷವೂ ರಾಜ್ಯೋತ್ಸವವನ್ನು ಆಚರಿಸಲಾಗುತ್ತಿದೆ ಸಮಾರಂಭದಲ್ಲಿ ಹಾರ ತುರಾಯಗಳನ್ನ ಸಮರ್ಪಣೆ ಮಾಡದೆ ಕನ್ನಡ ಪುಸ್ತಕಗಳನ್ನು ನೀಡುವ ಮೂಲಕ ವಿಶಿಷ್ಟ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದೇವೆ ರಂಗ ಪರಂಪರೆ ಟ್ರಸ್ಟ್ ಆಶ್ರಯದಲ್ಲಿ ಆರು ದಿನಗಳ ಕಾಲ ವಿವಿಧ ಕಾಲೇಜುಗಳಲ್ಲಿ ನಾಟಕೋತ್ಸವ ಆಚರಣೆಯ ಮೂಲಕ ವಿದ್ಯಾರ್ಥಿಗಳಿಗೆ ನಾಟಕದ ಅಭಿರುಚಿ ಬೆಳೆಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳ ಲಾಗಿದೆ ಎಂದು ವಿವರಿಸಿದರು.

ನಾಟ್ಯ ಸರಸ್ವತಿ ಶಾಂತಲಾ ಕನ್ನಡ ಕಲಾಸಂಘದ ಕಾರ್ಯದರ್ಶಿ ಆಂಜನೇಯ, ರಂಗಪರಂಪರೆ ಟ್ರಸ್ಟ್ ವ್ಯವಸ್ಥಾಪಕ ಟ್ರಸ್ಟಿ ಧನ್ವಂತರಿ ಬಿ.ಎ., ಬೆಂಗಳೂರು ನಗರ ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಹಂ. ಗು. ರಾಜೇಶ್ ಉಪಸ್ಥಿತರಿದ್ದರು.

ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಡಾಕ್ಟರ್ ಬೈರಮಂಗಲ ರಾಮೇಗೌಡ ಅವರನ್ನು ಈ ಸಂದರ್ಭದಲ್ಲಿ ಅಭಿನಂದಿಸಿ ಪುಸ್ತಕಗಳ ಗುಚ್ಛವನ್ನ ಸಮರ್ಪಿಸಲಾಯಿತು. ಸಾಹಿತಿ ಬಿಎಸ್ ಪಾರಿಜಾತ ಕಾರ್ಯಕ್ರಮ ನಿರೂಪಿಸಿದರು. ಮಾಜಿ ಬಿಬಿಎಂಪಿ ಸದಸ್ಯ ವಿ.ವಿ. ಸತ್ಯನಾರಾಯಣ ವಂದಿಸಿದರು.

ಸಾಹಿತ್ಯ ಪರಿಷತ್ತಿನ ಪದಾಧಿಕಾರಿಗಳಾದ ಎ.ಎನ್. ಶಿವ ಸ್ವಾಮಿ, ಗಂಗಾ ರೇವಯ್ಯ ಆರ್ ಚಂದ್ರಹಾಸ ಶಿವರಾಮ್ ಹೆಚ್ ಹೆಚ್ ಎಂ ಕೃಷ್ಣಮೂರ್ತಿ ಉಪಸ್ಥಿತರಿದ್ದರು.

ರಂಗ ಪರಂಪರೆ ಟ್ರಸ್ಟ್ ನವರು 36 ಅಲ್ಲ 63 ಹಾಸ್ಯ ನಾಟಕ ಪ್ರದರ್ಶಿಸಿದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಆರ್‌ಡಿಎಕ್ಸ್ ಇಟ್ಟು ಅಯೋಧ್ಯೆಯ ಶ್ರೀರಾಮ ಮಂದಿರ ಸ್ಫೋಟಿಸುವ ಬೆದರಿಕೆ



**ಲಖನೌ, ನ. 12 :** ಅಯೋಧ್ಯೆಯಲ್ಲಿರುವ ಶ್ರೀರಾಮ ಜನ್ಮಭೂಮಿ ದೇವಸ್ಥಾನವನ್ನು ಆರ್ಡಿಎಕ್ಸ್‌ನೊಂದಿಗೆ ಸ್ಫೋಟಿಸುವ ಮತ್ತು ಬಾಬರಿ ಮಸೀದಿಯನ್ನು ನಿರ್ಮಿಸುವ ಬೆದರಿಕೆಗಳು ಬಂದಿವೆ. ಟ್ರಸ್ಟ್‌ನ ಸಿಎ ಚಂದನ್ ಕುಮಾರ್ ರಾಯ್ ರಾಮಜನ್ಮಭೂಮಿ ಪೊಲೀಸ್ ಠಾಣೆಯಲ್ಲಿ ಅಪರಿಚಿತ ವ್ಯಕ್ತಿಯ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ. ಆಗಸ್ಟ್ 22, 2024 ರಂದು ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ನ ಹೆಲ್ಪ್ ಡೆಸ್ಕ್ ವಾಟ್ಸಾಪ್‌ಗೆ ಈ ಸಂದೇಶ ಬಂದಿದೆ. ಉರ್ದು ಭಾಷೆಯಲ್ಲಿ ಬರೆದ ಸಂದೇಶದಲ್ಲಿ ರಾಮಜನ್ಮಭೂಮಿ ದೇವಸ್ಥಾನವನ್ನು ನಾಲ್ಕು ಸಾವಿರ ಕಿಲೋ ಆರ್‌ಡಿಎಕ್ಸ್‌ನಿಂದ ಧ್ವಂಸ ಮಾಡುವುದಾಗಿ ಬೆದರಿಕೆ ಹಾಕಲಾಗಿದೆ. ಪ್ರಕರಣದ ತನಿಖೆಯ ವೇಳೆ ಬಿಹಾರ ಪ್ರಾಂತ್ಯದ ಭಾಗಲ್ಪುರ ಜಿಲ್ಲೆಯ ಬಾಬರ್ ಗಂಜ್ ನಿವಾಸಿ ಮೊಹಮ್ಮದ್ ಅಮನ್ ಹೆಸರು ಬೆಳಕಿಗೆ ಬಂದಿದೆ.

ಪ್ರಕರಣ ಬೆನ್ನಲ್ಲೇ ಪ್ರಕರಣದ ತನಿಖೆ ನಡೆಸುತ್ತಿರುವ ಇನ್ಸ್‌ಪೆಕ್ಟರ್ ರಜನೀಶ್ ಕುಮಾರ್ ಪಾಂಡೆ ಅವರಿಗೆ ನ್ಯಾಯಾಲಯ ಸಮನ್ಸ್ ಜಾರಿ ಮಾಡಿದೆ. ಈಗಾಗಲೇ ಜೈಲಿನಲ್ಲಿ ಬಂಧಿತರಾಗಿರುವ ಆರೋಪಿ ಮೊಹಮ್ಮದ್ ಅಮಾನ್ ಅವರ ಜಾಮೀನು ಅರ್ಜಿ ವಿಚಾರಣೆಯ ವೇಳೆ ಹೆಚ್ಚುವರಿ ಸೆಷನ್ಸ್ ನ್ಯಾಯಾಧೀಶ ಋಋಋ ಅಶೋಕ್ ಕುಮಾರ್ ದುಬೆ ಈ ಆದೇಶ ನೀಡಿದ್ದಾರೆ.

ಘಟನೆಯ ತನಿಖೆ ನಡೆಸುತ್ತಿರುವ ಸಬ್ ಇನ್ಸ್‌ಪೆಕ್ಟರ್ ರಜನೀಶ್ ಕುಮಾರ್ ಪಾಂಡೆ ಅವರಿಗೆ ಮೂಲ ಕೇಸ್ ಡೈರಿ ಮತ್ತು ಅದರ ಎಲ್ಲಾ ನಮೂನೆಗಳೊಂದಿಗೆ ನ್ಯಾಯಾಲಯಕ್ಕೆ ಹಾಜರಾಗುವಂತೆ ನ್ಯಾಯಾಲಯ ಆದೇಶಿಸಿದೆ.



ಮಹಾರಾಷ್ಟ್ರ ವಿಧಾನಸಭೆ ಚುನಾವಣೆಗೆ ಪಕ್ಷದ ಅಭ್ಯರ್ಥಿಗಳನ್ನು ಬೆಂಬಲಿಸುವ ಚುನಾವಣಾ ರ್‍ಯಾಲಿಯಲ್ಲಿ ಲೋಕಸಭೆಯ ವಿರೋಧ ಪಕ್ಷದ ನಾಯಕ ಮತ್ತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮಂಗಳವಾರ ಗೊಂಡಿಯಾದಲ್ಲಿ ಪಕ್ಷದ ಕಾರ್ಯಕರ್ತರನ್ನು ಭೇಟಿ ಮಾಡಿದರು.

# ಕುಮಾರಸ್ವಾಮಿಗೆ ಅಪಮಾನ ಮಾಡಿಲ್ಲ ಇಡೀ ಒಕ್ಕಲಿಗ ಜನಾಂಗಕ್ಕೆ ಅವಮಾನ: ಎಚ್.ಡಿ. ದೇವೇಗೌಡ



**ಬೆಂಗಳೂರು, ನ, 12;** ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರನ್ನು ಕರಿಯ ಕುಮಾರಸ್ವಾಮಿ ಎನ್ನುವ ಮೂಲಕ ನಿಂದನಾತ್ಮಕ ಭಾಷೆ ಬಳಸಿರುವ ಸಚಿವ ಜಮೀರ್ ಅಹಮದ್ ಖಾನ್‌ರನ್ನು ಸಂಪುಟದಿಂದ ಕೈಬಿಡುವಂತೆ ರಾಜ್ಯ ಒಕ್ಕಲಿಗರ ಸಂಘ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಆಗ್ರಹಿಸಿದೆ. ಜಮೀರ್ ಅವರು ಬಳಸಿರುವ ಭಾಷೆಯಿಂದ ಕುಮಾರಸ್ವಾಮಿ ಅವರಿಗೆ ಮಾತ್ರ ಅಪಮಾನ ಮಾಡಿಲ್ಲ, ಇಡೀ ಒಕ್ಕಲಿಗ ಜನಾಂಗಕ್ಕೆ ಮಾಡಿದ ಅವಹೇಳನವಾಗಿದೆ, ನಾಡಿನ ಜನರಿಗೂ ಅಪಮಾನ ಮಾಡಿದಂತೆ, ಎರಡು ಬಾರಿ ಕರ್ನಾಟಕ ಮುಖ್ಯಮಂತ್ರಿಯಾಗಿದ್ದವರ ಬಗ್ಗೆ ಆಡಿರುವ ಮಾತುಗಳು ಸಚಿವರಾದವರಿಗೆ ಶೋಭೆ ತರುವುದಿಲ್ಲ.

ಸಭ್ಯತೆಯ ಎಲ್ಲೆ ಮೀರಿ ಮಾತನಾಡುವ ಈ ವ್ಯಕ್ತಿ, ಸಚಿವ ಸ್ಥಾನದಲ್ಲಿ ಮುಂದುವರಿಯ ಬಾರದು, ಒಕ್ಕಲಿಗ ಜನಾಂಗದ ಸರ್ವೋಚ್ಚ ನಾಯಕ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರ ಕುಟುಂಬದ ಬಗ್ಗೆಯೂ ಜಮೀರ್ ಲಘುವಾಗಿ ಮಾತನಾಡಿರುವುದನ್ನು ಸಂಘ ತೀವ್ರವಾಗಿ ಖಂಡಿಸಿದೆ.

ಚನ್ನಪಟ್ಟಣ ಉಪಚುನಾವಣೆಯಲ್ಲಿ ಕಳೆದ ಭಾನುವಾರ ಜಮೀರ್ ಅವರು, ಚುನಾವಣಾ ಪ್ರಚಾರ ಭಾಷಣ ಮಾಡುವಾಗ ಉರ್ದು ಭಾಷೆಯಲ್ಲಿ ಕುಮಾರಸ್ವಾಮಿ ಅವರ ಬಣ್ಣದ ಬಗ್ಗೆ ಮಾತನಾಡಿದ ಅವರು, ಜನಾಂಗೀಯ ನಿಂದನೆ ಮಾಡಿರುವುದು ಮಾಧ್ಯಮಗಳಲ್ಲಿ ವರದಿಯಾಗಿದೆ, ಇದನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದಿದೆ. ಜಮೀರ್ ಅಹಮದ್ ಅವರು ರಾಜಕೀಯವಾಗಿ ಯಾರಿಗೂ ನೋವಾಗದಂತೆ ಟೀಕೆ-ಟಿಪ್ಪಣಿ ಮಾಡಲು ಅಭ್ಯಂತರವಿಲ್ಲ, ಆದರೆ, ಸಾರ್ವಜನಿಕ ಜೀವನದಲ್ಲಿ ಇದ್ದು, ವ್ಯಕ್ತಿಗತ, ಸಮಾಜದ ಹಿತಕ್ಕೆ ಧಕ್ಕೆಯಾಗುವಂತೆ, ಕೇಂದ್ರ ಸಚಿವರ ವರ್ಣದ ಬಗ್ಗೆ ನಿಂದನಾತ್ಮಕವಾಗಿ ಮಾತನಾಡಿರುವುದು ಸಚಿವರಾದವರ ಘನತೆಗೆ ಸರಿಯಾದುದಲ್ಲ.

ತಮ್ಮ ಹೇಳಿಕೆಯನ್ನು ಮಾಧ್ಯಮಗಳ ಮುಂದೆ ಮತ್ತೆ ಸಮರ್ಥನೆ ಮಾಡಿಕೊಂಡಿರುವುದನ್ನು ನೋಡಿದರೆ ಬಾಯಿತಪ್ಪಿನಿಂದ ಆಡಿರುವ ಮಾತಲ್ಲ, ಉದ್ದೇಶ ಪೂರ್ವಕವಾಗಿ ಆಡಿರುವುದಾಗಿದೆ ಎಂದೆನಿಸುತ್ತದೆ. ನಮ್ಮ ಜನಾಂಗದ ನಾಯಕರಾದ ಕುಮಾರಸ್ವಾಮಿ ಹಾಗೂ ದೇವೇಗೌಡ ಅವರ ಕುಟುಂಬದ ಬಗ್ಗೆ ಅವಮಾನಕರ ಭಾಷೆ ಬಳಸಿರುವುದಕ್ಕೆ ಸಾರ್ವಜನಿಕವಾಗಿ ಕ್ಷಮೆ ಯಾಚಿಸಬೇಕು ಹಾಗೂ ಇನ್ನು ಮುಂದೆ ಮಾತನಾಡುವಾಗ ಸೌಜನ್ಯದ ಎಲ್ಲೆ ಮೀರದಂತೆ ಎಚ್ಚರ ವಹಿಸಬೇಕು ಎಂದು ಒತ್ತಾಯಿಸಿದೆ. ಜಮೀರ್ ಅವರು ಕೂಡಲೇ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಸಮಸ್ತ ಒಕ್ಕಲಿಗ ಜನಾಂಗದ ಪರವಾಗಿ ಒತ್ತಾಯಿಸುವುದಾಗಿ ಸಂಘ ತಿಳಿಸಿದೆ.

## ನೂತನ ಸಿಜೆಐ ಸಂಜೀವ್ ಖನ್ನಾ ಸೂಚನೆ

# ತುರ್ತು ವಿಚಾರಣೆಗೆ ಇ-ಮೇಲ್ ಕಳುಹಿಸಿ



**ನವದೆಹಲಿ, ನ. 12 :** ಪ್ರಕರಣಗಳ ತುರ್ತು ಪಟ್ಟಿಗೆ ಮತ್ತು ವಿಚಾರಣೆಗೆ ಇನ್ನು ಮುಂದೆ ಮೌಖಿಕ ಮನವಿಗಳನ್ನು ಅನುಮತಿಸಲಾಗುವುದಿಲ್ಲ ಎಂದು ಸುಪ್ರೀಂಕೋರ್ಟ್‌ನ ನೂತನ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಘೋಷಿಸಿದ್ದಾರೆ. ಅಂತಹ ಪ್ರಕರಣಗಳಿಗಾಗಿ ವಕೀಲರು ಇಮೇಲ್ ಅಥವಾ ಲಿಖಿತ ಪತ್ರಗಳ ಮೂಲಕ ವಿನಂತಿಗಳನ್ನು ಸಲ್ಲಿಸಬೇಕಾಗುತ್ತದೆ ಎಂದು ಅವರು ಸೂಚಿಸಿದ್ದಾರೆ. ಸಾಂಪ್ರದಾಯಿಕವಾಗಿ, ವಕೀಲರು ತಮ್ಮ ಪ್ರಕರಣಗಳನ್ನು ಸಿಜೆಐ ನೇತೃತ್ವದ ಪೀಠದ ಮುಂದೆ ಪ್ರತಿನಿತ್ಯದ ವಿಚಾರಣೆಯ ಪ್ರಾರಂಭದಲ್ಲಿ ತುರ್ತು ಆಧಾರದ ಮೇಲೆ ಔಟ್-ಆಫ್-ಟರ್ನ್ ಪಟ್ಟಿಗಳು ಮತ್ತು ವಿಚಾರಣೆಗಳನ್ನು ಕೋರುತ್ತಿದ್ದರು.

ಇನ್ನು ಮುಂದೆ ಯಾವುದೇ ಲಿಖಿತ ಅಥವಾ ಮೌಖಿಕ ಉಲ್ಲೇಖಗಳನ್ನು ಪರಿಗಣಿಸುವುದಿಲ್ಲ. ತುರ್ತು ಕಾರಣಗಳನ್ನು ತಿಳಿಸಿ ಇಮೇಲ್ಗಳು ಅಥವಾ ಲಿಖಿತ ಸ್ಲಿಪ್ಗಳು ಅಥವಾ ಪತ್ರಗಳನ್ನು ಸಲ್ಲಿಸಿದರೆ ಮಾತ್ರ ಅದನ್ನು ಸ್ವೀಕರಿಸಲಾಗುತ್ತದೆ ಎಂದು ಸಿಜೆಐ ಹೇಳಿದ್ದಾರೆ. ಸೋಮವಾರ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ 51ನೇ ಸಿಜೆಐ ಆಗಿ ಪ್ರಮಾಣ ವಚನ ಸ್ವೀಕರಿಸಿದ ನ್ಯಾಯಮೂರ್ತಿ ಖನ್ನಾ, ನ್ಯಾಯಾಂಗ ಸುಧಾರಣೆಗಳಿಗೆ ಜನಕೇಂದ್ರಿತ ಕಾರ್ಯಸೂಚಿಯ ಮಹತ್ವವನ್ನು ಪುನರುಚ್ಚರಿಸಿದ್ದಾರೆ.

ಜನರ ಸ್ಥಾನಮಾನವನ್ನು ಲೆಕ್ಕಿಸದೆ ಅವರಿಗೆ ಸುಲಭವಾಗಿ ನ್ಯಾಯ ಸಿಗುವಂತೆ ಮಾಡಲು ಮತ್ತು ಸಮಾನತೆಯನ್ನು ಖಚಿತಪಡಿಸುವುದು ನ್ಯಾಯಾಂಗದ ಸಾಂವಿಧಾನಿಕ ಕರ್ತವ್ಯವಾಗಿದೆ ಎಂದು ಅವರು ಒತ್ತಿ ಹೇಳಿದ್ದಾರೆ.

# ಕುಮಾರಸ್ವಾಮಿಗೆ ಜಮೀರ್ ಖಾನ್ ಕ್ಷಮೆಯಾಚನೆ



**ಬೆಂಗಳೂರು, ನ. 12 :** ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಕುಮಾರಸ್ವಾಮಿ ಅವರನ್ನು ಕರಿಯ ಎಂದು ಕರೆದಿದ್ದ ಸಚಿವ ಜಮೀರ್‌ಅಹ್ಮದ್ ಖಾನ್ ಕೊನೆಗೂ ಕ್ಷಮೆ ಯಾಚಿಸಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸಚಿವ ಕುಮಾರಸ್ವಾಮಿ ಅವರನ್ನು ತಾವು ಕರಿಯ ಎಂದು ಕರೆದಿರುವುದಕ್ಕೆ ಕ್ಷಮೆ ಕೋರುತ್ತೇನೆ.

ತಮ್ಮ ಮಾತಿನಿಂದ ಜೆಡಿಎಸ್ ನಾಯಕರಿಗೆ ನೋವಾಗಿದ್ದರೆ ವಿಷಾದಿಸುತ್ತೇನೆ ಎಂದರು. ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರನ್ನು ನಾನು ಮೊದಲಿನಿಂದಲೂ ಕರಿಯಣ್ಣ ಎಂದು ಕರೆಯುತ್ತಿದ್ದೆ. ಕುಮಾರಸ್ವಾಮಿ ಕೂಡ ನನ್ನನ್ನು ಕುಳ್ಳ ಎಂದು ಕರೆಯುತ್ತಿದ್ದರು. ಹಾಗಾಗಿ ನಾನು ಈ ರೀತಿ ಮಾತನಾಡಿದ್ದೆ. ಏನೇ ಇರಲಿ ನನ್ನ ಮಾತಿಗೆ ಕ್ಷಮೆ ಕೋರುತ್ತೇನೆ ಎಂದರು.

ಮಾಜಿ ಪ್ರಧಾನಿ ದೇವೇಗೌಡರ ಬಗ್ಗೆ ನನಗೆ ಗೌರವವಿದೆ. ಹಿಂದೆ ಅವರು ಮುಸ್ಲಿಂ ಮತ ಬೇಡ ಎಂದು ಹೇಳಿದ್ದರು. ಈಗ ದುಡ್ಡು ಕೊಟ್ಟು ಮತ ಖರೀದಿಸಲು ಮುಂದಾಗಿದ್ದಾರೆ ಎಂಬ ಮಾಹಿತಿ ಇತ್ತು. ಇದನ್ನು ಉಲ್ಲೇಖಿಸಿ ನಾನು ಕುಮಾರಸ್ವಾಮಿ ವಿರುದ್ಧ ಕರಿಯಾ ಪದ ಬಳಸಿದ್ದೆ ಅಷ್ಟೆ ಎಂದು ಅವರು ಹೇಳಿದರು. ಕೇಂದ್ರ ಸಚಿವ ಕುಮಾರಸ್ವಾಮಿ ಅವರನ್ನು ಸಚಿವ ಜಮೀರ್‌ಅಹ್ಮದ್ ಖಾನ್ ಉರ್ದುವಿನಲ್ಲಿ ಮಾತನಾಡುವಾಗ ಕಾರಿಯ ಎಂದು ಕರೆದಿದ್ದರು. ಈ ವೀಡಿಯೊ ಎಲ್ಲೆಡೆ ವೈರಲ್ ಆಗಿ ಜಮೀರ್‌ಅಹ್ಮದ್ ವಿರುದ್ಧ ಜೆಡಿಎಸ್-ಬಿಜೆಪಿ ನಾಯಕರು ಆಕ್ರೋಶ ಹೊರ ಹಾಕಿ ಕ್ಷಮೆಗೆ ಒತ್ತಾಯಿಸಿದ್ದರು.

ಕುಮಾರಸ್ವಾಮಿ ಅವರನ್ನು ತಾವು ಕರಿಯ ಎಂದು ಕರೆದಿದ್ದು ವಿವಾದಕ್ಕೆ ಒಳಗಾಗುತ್ತಿದ್ದಂತೆಯೇ ಎಚ್ಚೆತ್ತ ಸಚಿವ ಜಮೀರ್ ಈಗ ಕ್ಷಮೆ ಕೇಳಿ ವಿವಾದಕ್ಕೆ ತೆರೆ ಎಳೆಯುವ ಪ್ರಯತ್ನ ನಡೆಸಿದ್ದಾರೆ.

# ಯಡಿಯೂರಪ್ಪಗೆ ರಾಜ್ಯ ಸರ್ಕಾರ ಮತ್ತೊಂದು ಶಾಕ್



**ಬೆಂಗಳೂರು, ನ, 12 ;** ಇಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪಗೆ ರಾಜ್ಯ ಸರ್ಕಾರ ಮತ್ತೊಂದು ಶಾಕ್ ಕೊಟ್ಟಿದೆ. ಕೋವಿಡ್ ಬಳಿಕ ಕೆಕೆಆರ್‌ಡಿಬಿ ಅಕ್ರಮದ ಕುರಿತು ತನಿಖೆಗೆ ಸರ್ಕಾರ ತಂಡ ರಚಿಸಿದೆ. ಕೋವಿಡ್ ಹಗರಣದ ತನಿಖೆಗೆ ಬಳಿಕ ಯಡಿಯೂರಪ್ಪ ವಿರುದ್ಧ ಮತ್ತೊಂದು ಹಗರಣದ ತನಿಖೆಗೆ ಸರ್ಕಾರ ಸಮಿತಿ ರಚನೆ ಮಾಡಿದೆ.

ಕಲ್ಯಾಣ-ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಕ್ರಮದ ಕುರಿತು ತನಿಖೆಗೆ ಆದೇಶ ಹೊರಡಿಸಿದೆ. 300 ಕೋಟಿ ಅನುದಾನ ಅಕ್ರಮ ಆಗಿದೆ ಎಂದು ತನಿಖೆಗೆ ಸರ್ಕಾರ ಸಮಿತಿ ರಚನೆ ಮಾಡಿದೆ. 50-50 ಸೈಟ್ ಪಡೆದವರ ಮತ್ತೊಂದು ಪಟ್ಟಿ ಲಭ್ಯ 125 ಜನರಿಗೆ ಬರೋಬ್ಬರಿ 928 ಸೈಟ್ ಹಂಚಿಕೆ. 2020-2023ರ ಅವಧಿಯಲ್ಲಿ ಕಲ್ಯಾಣ ಕರ್ನಾಟಕ ಮಾನವ ಸಂಪನ್ಮೂಲ, ಕೃಷಿ ಮತ್ತು ಸಾಂಸ್ಕೃತಿಕ ಸಂಘ ರಚನೆ ಮಾಡಲಾಗಿತ್ತು. ಈ ಅವಧಿಯಲ್ಲಿ ದತ್ತಾತ್ರೇಯ ಪಾಟೀಲ್ ರೇವೂರ್ ಅಧ್ಯಕ್ಷರಾಗಿದ್ದರು. ಆಗ ಯಡಿಯೂರಪ್ಪ ಅವರು ಸಿಎಂ ಆಗಿದ್ದರು. ಪ್ರತಿ ವರ್ಷ 100 ಕೋಟಿಯಂತೆ 300 ಕೋಟಿ ಅನುದಾನ ಬಿಡುಗಡೆ ಮಾಡಲಾಗಿತ್ತು. ಈ ಅನುದಾನದಲ್ಲಿ ದುರ್ಬಳಕೆ ಆಗಿದೆ ಎನ್ನುವ ಆರೋಪ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ ಸರ್ಕಾರ ತನಿಖೆಗೆ ಸಮಿತಿ

ಯಡಿಯೂರಪ್ಪ ಸಿಎಂ ಆಗಿದ್ದಾಗ 2020-2023 ರಲ್ಲಿ ಕೆಕೆಆರ್‌ಡಿಬಿಗೆ 300 ಕೋಟಿ ಅನುದಾನ ಬಿಡುಗಡೆ ಆಗಿತ್ತು. ಈ ಅನುದಾನ ವೆಚ್ಚ ಮಾಡುವಲ್ಲಿ ವ್ಯಾಪಕ ಅಕ್ರಮ ಆಗಿದೆ ಅನ್ನೋ ಆರೋಪ. ಈಗ ಅಕ್ರಮದ ತನಿಖೆ ನಡೆಸಲು ನಿವೃತ್ತ ಐಎಎಸ್ ಸುಧೀರ್ ಕುಮಾರ್ ನೇತೃತ್ವದಲ್ಲಿ ಸಮಿತಿ ರಚನೆ.

ಕೋವಿಡ್ ಅವಧಿಯಲ್ಲಿ ಮೃತಪಟ್ಟ ಶಿಕ್ಷಕರ ಕುಟುಂಬಕ್ಕೆ ಪರಿಹಾರ ನೀಡಿಕೆ. ದೇಶಿ ಹಸು ಸಾಕಣೆಗೆ ಪ್ರೋತ್ಸಾಹ ಧನ ವಿತರಣೆ. 1 ಕೋಟಿ ಸಸಿ ನೆಟ್ಟಿರುವ ಬಗ್ಗೆಯೂ ತನಿಖೆ.

# ಕೋವಿಡ್ ಬಿಜೆಪಿ ಅಕ್ರಮ: ಡಿ'ಕುನ್ಹಾ ಸಮಿತಿ ವರದಿಯಲ್ಲಿ ಬಯಲು



**ಬೆಂಗಳೂರು, ನ. 12 :** ಇಡೀ ಜಗತ್ತನ್ನು ಹಿಂಡಿ ಹಿಪ್ಪೆಮಾಡಿದ್ದ ಕೊರೊನಾ ಸಾಂಕ್ರಾಮಿಕ ರೋಗ ಸಂದರ್ಭದಲ್ಲಿ ಅಂದಿನ ಬಿಜೆಪಿ ಸರ್ಕಾರದಲ್ಲಿ ಭಾರಿ ಅಕ್ರಮ ನಡೆದಿದೆ ಎಂದು ನ್ಯಾಯಮೂರ್ತಿ ಡಿ'ಕುನ್ಹಾ ಸಮಿತಿ ವರದಿಯಲ್ಲಿ ಬಹಿರಂಗವಾಗಿದೆ. ನಾವು ಪ್ರತಿಪಕ್ಷದಲ್ಲಿದ್ದಾಗಲೂ ಈ ಬಗ್ಗೆ ಸಾಕಷ್ಟು ಗಮನ ಸೆಳೆದಿದ್ದೆವು. ಅದಕ್ಕೀಗ ಮುದ್ರೆ ಬಿದ್ದಿದೆ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ.ಶರಣ ಪ್ರಕಾಶ್ ಪಾಟೀಲ್ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷ ಡಾ. ಅಜಯ್‌ಸಿಂಗ್ ತಿಳಿಸಿದ್ದಾರೆ.

ಕಲಬುರಗಿಯಲ್ಲಿ ಉಭಯ ನಾಯಕರು ಜಂಟಿ ಪತ್ರಿಕಾಗೋಷ್ಠಿ ನಡೆಸಿ ಬಿಜೆಪಿ ಆಡಳಿತಾವಧಿಯಲ್ಲಿ ನಡೆದಿರುವ ಭ್ರಷ್ಟಾಚಾರದ ಕುರಿತು ಇನ್ನಷ್ಟು ವಿವರ ನೀಡಿದರು. ಕೊರೊನಾ ಸಂದರ್ಭದಲ್ಲಿ ಮಾರುಕಟ್ಟೆ ದರಕ್ಕಿಂತ ಹೆಚ್ಚು ದರ ನೀಡಿ ವೈದ್ಯಕೀಯ ಸಾಧನಗಳು, ಉಪಕರಣಗಳನ್ನು ಖರೀದಿ ಮಾಡಲಾಗಿದೆ. ಬಿಜೆಪಿಯು ಹೆಣದ ಮೇಲೆ ಹಣ ಮಾಡಿದೆ. 49 ಕೋಟಿ ರೂಪಾಯಿ ವಸೂಲಿ ಮಾಡಲು ಕುನ್ಹಾ ಸಮಿತಿ ವರದಿ ನೀಡಿದೆ ಎಂದು ಸಚಿವ ಶರಣ ಪ್ರಕಾಶ್ ತಿಳಿಸಿದರು. ವೈದ್ಯಕೀಯ ಶಿಕ್ಷಣ, ಆರೋಗ್ಯ ಇಲಾಖೆಯಲ್ಲಿ ಭಾರಿ ಮೊತ್ತದ ಭ್ರಷ್ಟಾಚಾರ ಆಗಿದೆ. ಪಿಪಿಇ ಕಿಟ್, ಸಿ.ಟಿ. ಸ್ಕ್ಯಾನ್, ವೆಂಟಿಲೇಟರ್ ಖರೀದಿಯಲ್ಲಿ ಭಾರಿ ಮೊತ್ತದ ಅವ್ಯವಹಾರವಾಗಿದೆ. ಈಗಾಗಲೇ ಇಲಾಖೆ ಹಿಂದಿನ ಕಾರ್ಯದರ್ಶಿಗೆ ನೋಟಿಸ್ ನೀಡಲಾಗಿದೆ ಎಂದು ಸಚಿವರು ವಿವರಿಸಿದರು.

**ಅಂತಿಮ ವರದಿಯಲ್ಲಿ ಇನ್ನಷ್ಟು ಭ್ರಷ್ಟಾಚಾರ ಬಯಲು:** ಕಿದ್ವಾಯಿ ಅಸ್ಪತ್ರೆಯ ಆರ್ ಟಿಪಿಸಿಆರ್ ಟೆಸ್ಟಿಂಗ್ ನಲ್ಲಿ 200 ಕೋಟಿ ರೂ.ಗಳಿಗೂ ಹೆಚ್ಚು ಮೊತ್ತದ ಅವ್ಯವಹಾರ ಮಾಡಲಾಗಿದೆ. ನ್ಯಾಯಮೂರ್ತಿ ಡಿ'ಕುನ್ಹಾ ಸಮಿತಿ ನೀಡಿರುವುದು ಕೇವಲ ಮಧ್ಯಂತರ ವರದಿ. ಅಂತಿಮ ವರದಿಯಲ್ಲಿ ಇನ್ನು ಬಹಳಷ್ಟು ಭ್ರಷ್ಟಾಚಾರ ಬಯಲಾಗುತ್ತದೆ ಎಂದು ಶರಣ ಪ್ರಕಾಶ್ ಪಾಟೀಲ್ ಸ್ಪಷ್ಟಪಡಿಸಿದರು.

**ನ್ಯಾ.ಕುನ್ಹಾ ವಿರುದ್ಧ ಕೇಂದ್ರ ಸಚಿವರ ಹೇಳಿಕೆ ಆಕ್ಷೇಪಾರ್ಹ:** ನ್ಯಾ. ಡಿ'ಕುನ್ಹಾ ಅವರು ಕೈ ಏಜೆಂಟ್ ರೀತಿ ವರದಿ ನೀಡಿದ್ದಾರೆ ಎಂದು ಬಿಜೆಪಿ ನಾಯಕರು ಆರೋಪ ಮಾಡುತ್ತಿದ್ದಾರೆ. ಪ್ರಹ್ಲಾದ್ ಜೋಶಿ ಅವರು ಓರ್ವ ಕೇಂದ್ರ ಮಂತ್ರಿಯಾಗಿ ಈ ರೀತಿ ಹೇಳಿಕೆ ನೀಡುವುದು ಎಷ್ಟು ಸರಿ. ಇದು ಆಕ್ಷೇಪಾರ್ಹ. ಅವರು ತಮ್ಮ ಸ್ಥಾನದ ಘನತೆಗೆ ತಕ್ಕಂತೆ ಹೇಳಿಕೆ ನೀಡಬೇಕು. ಈಗಾಗಲೇ ಅವರ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಲಾಗಿದೆ ಎಂದು ತಿಳಿಸಿದರು.

ಬಿಜೆಪಿಯದ್ದು ವಿಭಜನೆ ರಾಜಕಾರಣ. ನಮ್ಮ ಗ್ಯಾರಂಟಿ ಯೋಜನೆಗಳ ಬಗ್ಗೆ ಟೀಕೆ ಮಾಡಿದ್ದಾರೆ. ಖುದ್ದು ಪ್ರಧಾನಿಯೇ ಗ್ಯಾರಂಟಿ ಅನುಷ್ಠಾನ ಮಾಡೋಕೆ ಆಗೊಲ್ಲ ಎಂದಿದ್ದರು. ಆದರೆ ಈಗ ನಮ್ಮ ಗ್ಯಾರಂಟಿ ಯೋಜನೆಗಳನ್ನು ಕಾಪಿ ಮಾಡುತ್ತಿದ್ದಾರೆ. ಸುಮ್ಮನೇ ನಮ್ಮ ರಾಜ್ಯ ದಿವಾಳಿಯಾಗಿದೆ ಎಂದು ಸುಳ್ಳು ಹೇಳುತ್ತಿದ್ದಾರೆ. ರಾಜ್ಯ ಎಲ್ಲಿ ದಿವಾಳಿಯಾಗಿದೆ ಎನ್ನುವುದನ್ನು ತೋರಿಸಬೇಕು. ಜನರನ್ನು ಪ್ರಧಾನಿ ದಿಕ್ಕು ತಪ್ಪಿಸುತ್ತಿದ್ದಾರೆ ಎಂದು ಆರೋಪಿಸಿದರು.

**ಸರ್ಕಾರ ಉರುಳಿಸಲು ಯಾರಿಂದಲೂ ಸಾಧ್ಯವಿಲ್ಲ:** ಯಡಿಯೂರಪ್ಪ ಜೊತೆ ಕೈ ಜೋಡಿಸಿದ್ದೇ ಸರ್ಕಾರ ಕೆಡುವವುದಕ್ಕೆ ಎಂದು ಮಾಜಿ ಪ್ರಧಾನಿ ದೇವೇಗೌಡ ಹೇಳಿದ್ದಾರೆ. ನಾವೇನು ಬಿಟ್ಟಿ ಬಂದಿದ್ದೀವಾ ಕರುನಾಡಿನ ಮತದಾರರು ನಮ್ಮನ್ನ ಆಯ್ಕೆ ಮಾಡಿದ್ದಾರೆ. ಅಭೂತಪೂರ್ವ ಬೆಂಬಲ ಕೊಟ್ಟಿದ್ದಾರೆ. ಸರ್ಕಾರ ಕೆಡವೋದು ಅಂದ್ರೆ ಶಾಸಕರನ್ನು ಖರೀದಿಸುತ್ತಾರೆ.

ಬಿಜೆಪಿಗರು ಆಪರೇಷನ್ ಮಾಡೋದ್ರಲ್ಲಿ ನಿಸ್ಸೀಮರು. ಅವರು ಇದುವರೆಗೆ ಅಧಿಕಾರಕ್ಕೆ ಬಂದಿರೋದೇ ವಾಮಮಾರ್ಗದಿಂದ. ಸರ್ಕಾರ ಬೀಳಿಸಲು ಯಾರಿಂದಲೂ ಸಾಧ್ಯವಿಲ್ಲ. ದೇವೆಗೌಡರು ಬಹಳ ಹಿರಿಯರು. ಅವರ ಬಗ್ಗೆ ನಾನು ಜಾಸ್ತಿ ಮಾತನಾಡೋಲ್ಲ ಎಂದು ಸಚಿವರು ತಿಳಿಸಿದರು.

# ಮುಕ್ತ, ನ್ಯಾಯಸಮ್ಮತ ಮತದಾನಕ್ಕೆ ಚುನಾವಣಾ ಆಯೋಗ ಸಿದ್ದತೆ

**ಬೆಂಗಳೂರು, ನ. 12 :** ಆಡಳಿತ ಮತ್ತು ಪ್ರತಿಪಕ್ಷಗಳ ನಡುವಿನ ಮಿನಿ ಮಹಾಸಮರ ಎಂದೇ ಹೇಳಲಾಗಿರುವ ರಾಜ್ಯದ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ಇಂದು ಮತದಾನ ನಡೆಯಲಿದ್ದು, ಕಾಂಗ್ರೆಸ್, ಬಿಜೆಪಿ ಹಾಗೂ ಜೆಡಿಎಸ್ ಅಭ್ಯರ್ಥಿಗಳ ರಾಜಕೀಯ ಭವಿಷ್ಯವನ್ನು ಮತದಾರ ಬರೆಯಲಿದ್ದಾನೆ. ಬೆಳಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆವರೆಗೆ ಮತದಾನ ನಡೆಯಲಿದ್ದು, ಮುಕ್ತ ಮತ್ತು ನ್ಯಾಯಸಮ್ಮತ ಮತದಾನಕ್ಕೆ ಚುನಾವಣಾ ಆಯೋಗ ಎಲ್ಲಾ ರೀತಿಯ ಸಿದ್ದತೆಗಳನ್ನು ಕೈಗೊಂಡಿದೆ. ಮೂರು ಕ್ಷೇತ್ರಗಳಿಗೆ ಜಿಲ್ಲಾ ಕೇಂದ್ರಗಳಿಂದ ಚುನಾವಣಾಧಿಕಾರಿಗಳು, ಇವಿಎಂ ಸೇರಿದಂತೆ ಮತ್ತಿತರ ಸಾಮಗ್ರಿಗಳೊಂದಿಗೆ ತಮಗೆ ನಿಗದಿಪಡಿಸಿದ ಮತಗಟ್ಟೆಗೆ ಇಂದೇ ತೆರಳಿದ್ದಾರೆ. ಗಣಿ ಜಿಲ್ಲೆ ಸಂಡೂರು ಮೀಸಲು ಕ್ಷೇತ್ರದಲ್ಲಿ ಅತಿ ಕಡಿಮೆ 6, ಹಾವೇರಿ ಜಿಲ್ಲೆ ಶಿಗ್ಗಾವಿಯಲ್ಲಿ 8 ಹಾಗೂ ರಾಮನಗರ ಜಿಲ್ಲೆ ಚನ್ನಪಟ್ಟಣದಲ್ಲಿ ಅತಿಹೆಚ್ಚು 31 ಪಕ್ಷೇತರರು ಸೇರಿದಂತೆ ಒಟ್ಟು 45 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಪಾರದರ್ಶಕ ಹಾಗೂ ನ್ಯಾಯಸಮತ ಮತದಾನಕ್ಕೆಆಯೋಗ ಬಿಗಿಯಾದ ಕ್ರಮಗಳನ್ನು ತೆಗೆದುಕೊಂಡಿದ್ದು, ಮತದಾನ ನಡೆಯುವ ಮೂರು ಕ್ಷೇತ್ರಗಳ ವ್ಯಾಪ್ತಿಯಲ್ಲಿ ಸೋಮವಾರ ಸಂಜೆ 6 ಗಂಟೆಯಿಂದ ಗುರುವಾರ ಬೆಳಗ್ಗೆ 6 ಗಂಟೆವರೆಗೆ ಮದ್ಯ ಮಾರಾಟಕ್ಕೆ ನಿಷೇಧ ಹೇರಲಾಗಿದೆ.ಜಿಲ್ಲಾ ವ್ಯಾಪ್ತಿಯಲ್ಲಿ ಚೆಕ್‌ಪೋಸ್ಟ್‌ಗಳನ್ನು ನಿರ್ಮಿಸಲಾಗಿದ್ದು, ಮತದಾರರಲ್ಲದವರು ಕ್ಷೇತ್ರ ಬಿಟ್ಟು ತೆರಳಿದ್ದಾರೆ.

ಇಂದು ಮೂರು ಕ್ಷೇತ್ರಗಳಲ್ಲಿ ಅಭ್ಯರ್ಥಿಗಳು ಮನೆ ಮನೆಗೆ ತೆರಳಿ ಮತಯಾಚನೆ ಮಾಡಿದರು. ಈ ಉಪಚುನಾವಣೆಯಲ್ಲಿ ಕಾಂಗ್ರೆಸ್ ಇಲ್ಲವೇ ಎನ್ಡಿಎ ಗೆದ್ದರೆ ಸರ್ಕಾರದ ಮೇಲೆ ನೇರವಾಗಿ ಹೆಚ್ಚಿನ ಪರಿಣಾಮ ಬೀರುವ ಸಾಧ್ಯತೆಗಳಿಲ್ಲ. ಆಡಳಿತಾರೂಢ ಕಾಂಗ್ರೆಸ್ ಮೂರು ಕ್ಷೇತ್ರಗಳನ್ನು ಗೆದ್ದು ರಾಜ್ಯದ ಮತದಾರರು ತಮ ಸರ್ಕಾರದ ಪರವಾಗಿ ಇದ್ದಾರೆಂಬುದನ್ನು ಬಿಂಬಿಸಲು ಶಕ್ತಿ ಮೀರಿ ಪ್ರಯತ್ನಿಸಿದೆ. ಹೀಗಾಗಿಯೇ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಸೇರಿದಂತೆ ಸಂಪುಟದ ಸಹೋದ್ಯೋಗಿಗಳು ಹಾಗೂ ಶಾಸಕರು ಕಾಲಿಗೆ ಚಕ್ರ ಕಟ್ಟಿಕೊಂಡವರಂತೆ ಪ್ರಚಾರ ನಡೆಸಿದ್ದಾರೆ. ಇನ್ನು ಸರ್ಕಾರಕ್ಕೆ ಉಪಚುನಾವಣೆಯಲ್ಲಿ ಮುಖಭಂಗ ಉಂಟು ಮಾಡಲು ಬಿಜೆಪಿ-ಜೆಡಿಎಸ್ ನಾಯಕರು ಸೇರಿಗೆ ಸವ್ವಾಸೇರು ಎಂಬಂತೆ ಪ್ರಚಾರ ನಡೆಸಿದ್ದಾರೆ. ಹಲವು ಗೊಂದಲಗಳ ನಡುವೆಯೇ ಮೂರು ಕ್ಷೇತ್ರಗಳಲ್ಲಿ ಕಾಂಗ್ರೆಸ್ಗೆ ಸರಿಸಾಟಿ ಎಂಬಂತೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಸೇರಿದಂತೆ ಉಭಯ ಪಕ್ಷಗಳ ಮುಖಂಡರು ಹಳೆಯ ವೈರತ್ವವನ್ನು ಮರೆತು ಪ್ರಚಾರ ನಡೆಸಿದ್ದು ವಿಶೇಷವಾಗಿತ್ತು. ರಾಜಕೀಯ ಜಿದ್ದಾಜಿದ್ದಿಗೆ ಹೆಸರುವಾಸಿಯಾಗಿರುವ ಚನ್ನಪಟ್ಟಣದಲ್ಲಿ ಕಾಂಗ್ರೆಸ್ ಹಾಗೂ ಜೆಡಿಎಸ್ ನಡುವೆ ನೇರ ಹಣಾಹಣಿ ಏರ್ಪಟ್ಟಿದೆ. ಕೇಂದ್ರ ಸಚಿವರಾಗಿರುವ ಹೆಚ್.ಡಿ. ಕುಮಾರಸ್ವಾಮಿ ಹಾಗೂ ಡಿ.ಕೆ. ಶಿವಕುಮಾರ್ ನಡುವಿನ ಪ್ರತಿಷ್ಠೆಯ ಕಣವಾಗಿರುವ ಈ ಕ್ಷೇತ್ರದಲ್ಲಿ ಹಿಂದೆಂದಿಗಿಂತಲೂ ತುರುಸಿನ ಸ್ಪರ್ಧೆ ಏರ್ಪಟ್ಟಿದೆ.

ಚನ್ನಪಟ್ಟಣದಂತೆ ಸಂಡೂರು ಕೂಡ ರಾಜ್ಯದ ಗಮನ ಸೆಳೆದ ಕ್ಷೇತ್ರವಾಗಿದೆ. ಕಾಂಗ್ರೆಸ್‌ನ ಭದ್ರಕೋಟೆ ಎನಿಸಿದ ಈ ಮೀಸಲು ಕ್ಷೇತ್ರದಲ್ಲಿ ಮೊದಲ ಬಾರಿಗೆ ಕಮಲ ಅರಳಿಸಲು ಬಿಜೆಪಿ ಶಕ್ತಿ ಮೀರಿ ಪ್ರಯತ್ನಿಸುತ್ತಿದೆ. ರಾಜಕೀಯ ಚಾಣಾಕ್ಷತೆಗೆ ಹೆಸರುವಾಸಿಯಾಗಿರುವ ಮಾಜಿ ಸಚಿವ ಗಾಲಿ ಜನಾರ್ಧನ ರೆಡ್ಡಿ ಕ್ಷೇತ್ರದ ಉಸ್ತುವಾರಿಯಾಗಿ ಚಿತ್ರಣವನ್ನೇ ಬದಲಾಯಿಸಿದ್ದಾರೆಂಬ ಮಾತು ಕೇಳಿ ಬರುತ್ತಿದೆ. ಸಂಸದ ತುಕಾರಾಂ ಪತ್ನಿ ಅನ್ನಪೂರ್ಣ ಅಭ್ಯರ್ಥಿಯಾಗಿದ್ದು, ಶತಾಯ ಗತಾಯ ಗೆಲ್ಲಿಸಲು ಪಣ ತೊಟ್ಟಿದ್ದಾರೆ. ಸಚಿವ ಸಂತೋಷ್ ಲಾಡ್ ಸೇರಿದಂತೆ ಅನೇಕರು ಪ್ರಚಾರ ನಡೆಸಿದ್ದಾರೆ. ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ರಾಜೀನಾಮೆಯಿಂದ ತೆರವಾಗಿರುವ ಶಿಗ್ಗಾವಿಯಲ್ಲಿ ಬಿಜೆಪಿ ಹಾಗೂ ಕಾಂಗ್ರೆಸ್ ನಡುವೆ ನೇರ ಹಣಾಹಣಿ ಇದೆ. ಕ್ಷೇತ್ರವನ್ನು ಉಳಿಸಿಕೊಳ್ಳುವ ಅನಿವಾರ್ಯತೆಯಲ್ಲಿರುವ ಬೊಮ್ಮಾಯಿ ತಮ ಪುತ್ರ ಭರತ್ ಬೊಮ್ಮಾಯಿಯನ್ನು ಕಣಕ್ಕಿಳಿಸಿ ಅದೃಷ್ಟ ಪರೀಕ್ಷೆಗೊಡ್ಡಿದ್ದಾರೆ. ಕಾಂಗ್ರೆಸ್ ಪಠಾಣ್ ಯಾಸೀರ್ಗೆ ಟಿಕೆಟ್ ನೀಡಿದ್ದು, ಮತದಾರ ಯಾರಿಗೆ ಒಲಿಯುತ್ತಾನೆ ಎಂಬುದು ನ.23ರ ಫಲಿತಾಂಶದಲ್ಲಿ ಬಹಿರಂಗಗೊಳ್ಳಲಿದೆ. ಮೂರು ಕ್ಷೇತ್ರದಲ್ಲಿ ಮತದಾನ ಮಾಡಲು ಅನುಕೂಲವಾಗುವಂತೆ ವೇತನ ಸಹಿತ ರಜೆ ಘೋಷಣೆ ಮಾಡಿ ಅಧಿಸೂಚನೆ ಹೊರಡಿಸಲಾಗಿದೆ.

ಈ ಕುರಿತು ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ ಸರ್ಕಾರದ ಅಧೀನ ಕಾರ್ಯದರ್ಶಿ-1 (ಪ) ಇಲಾಖೆ (ರಾಜ್ಯ ಶಿಷ್ಟಾಚಾರ) ಅಧಿಸೂಚನೆ ಹೊರಡಿಸಿದ್ದಾರೆ. ಈ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವ ಎಲ್ಲಾ ರಾಜ್ಯ ಸರ್ಕಾರಿ ಕಚೇರಿಗಳಿಗೆ, ಶಾಲಾ ಕಾಲೇಜುಗಳಿಗೆ (ಅನುದಾನಿತ ಶಿಕ್ಷಣ ಸಂಸ್ಥೆಗಳು ಒಳಗೊಂಡಂತೆ) ಹಾಗೂ ರಾಷ್ಟ್ರೀಕೃತ ಬ್ಯಾಂಕುಗಳು, ಜೀವವಿಮಾ ನಿಗಮ, ಹಣಕಾಸು ಸಂಸ್ಥೆಗಳು ಇನ್ನಿತರೇ ಔದ್ಯಮಿಕ ಸಂಸ್ಥೆಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುತ್ತಿರುವ ಎಲ್ಲಾ ಅರ್ಹ ಮತದಾರರಿಗೆ ಸೀಮಿತವಾದಂತೆ ಹಾಗೂ ಮತದಾನ ಮಾಡಲು ಅನುಕೂಲವಾಗುವಂತೆ 1951 ಕಲಂ 135 ಬಿ ಅಡಿಯಲ್ಲಿನ ಎಲ್ಲಾ ಉಪಬಂಧಗಳನ್ವಯ ಒಂದು ದಿನದ ವೇತನ ಸಹಿತ ರಜೆ ಮಂಜೂರು ಮಾಡಲು ಅಧಿಕಾರವುಳ್ಳ ಅಧಿಕಾರಿಗಳು ಮಂಜೂರು ಮಾಡತಕ್ಕದ್ದು ಎಂಬ ಷರತ್ತಿಗೊಳಪಟ್ಟು ಒಂದು ದಿನದ ವೇತನ ಸಹಿತ ರಜೆಯನ್ನು ನೀಡಲು ಆದೇಶಿಸಿದೆ ಎಂದು ಹೇಳಿದರು.

### ಚನ್ನಪಟ್ಟಣ

ಒಟ್ಟು ಅಭ್ಯರ್ಥಿಗಳು 31
ಜೆಡಿಎಸ್- ನಿಖಿಲ್‌ಕುಮಾರಸ್ವಾಮಿ
ಕಾಂಗ್ರೆಸ್- ಸಿ.ಪಿ.ಯೋಗೇಶ್ವರ್
ಒಟ್ಟು ಮತದಾರರು 2,36,836
ಪುರುಷರು - 1,12,271
ಮಹಿಳೆಯರು- 1,20,557

### ಶಿಗ್ಗಾವಿ

ಒಟ್ಟು ಅಭ್ಯರ್ಥಿಗಳು 8
ಬಿಜೆಪಿ- ಭರತ್ ಬೊಮ್ಮಾಯಿ
ಕಾಂಗ್ರೆಸ್-ಯಾಸೀರ್ ಪಠಾಣ್
ಒಟ್ಟು ಮತದಾರರು 2,36,790
ಪುರುಷರು - 1,21,067
ಮಹಿಳೆಯರು- 1,15,717

### ಸಂಡೂರು

ಒಟ್ಟು ಅಭ್ಯರ್ಥಿಗಳು 6
ಬಿಜೆಪಿ - ಬಂಗಾರು ಹನುಮಂತು
ಕಾಂಗ್ರೆಸ್- ಇ. ಅನ್ನಪೂರ್ಣ
ಒಟ್ಟು ಮತದಾರರು -2,36,047
ಪುರುಷರು - 1,17,739
ಮಹಿಳೆಯರು- 1,18,279


# ಮಣಿಪುರ ಹಿಂಸಾಚಾರ: ಇಬ್ಬರ ಶವ ಪತ್ತೆ, 6 ಮಂದಿ ನಾಪತ್ತೆ

**ಇಂಫಾಲ್, ನ. 12:** ಮಣಿಪುರದ ಜಿರಿಬಾಮ್ನ ಬಳಿಯ ಮನೆಗಳಿಂದ ಮೈತೆಯಿ ಸಮುದಾಯದ ಇಬ್ಬರು ವ್ಯಕ್ತಿಗಳ ಶವಗಳನ್ನು ಮಂಗಳವಾರ ಬೆಳಗ್ಗೆ ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ. ಭದ್ರತಾ ಪಡೆಗಳು ಈ ಪ್ರದೇಶದಲ್ಲಿ 10 ಶಂಕಿತ ಉಗ್ರರನ್ನು ಹೊಡೆದುರುಳಿಸಿದ್ದಾಗಿ ಹೇಳಿದ ಒಂದು ದಿನದ ನಂತರ ಈ ಘಟನೆ ನಡೆದಿದೆ.



ಸೋಮವಾರ ನಡೆದ ಗುಂಡಿನ ಚಕಮಕಿಯಿಂದ ಆ ಪ್ರದೇಶದಲ್ಲಿನ ಪರಿಹಾರ ಶಿಬಿರದಲ್ಲಿ ವಾಸಿಸುತ್ತಿದ್ದ ಆರು ಮಂದಿ ನಾಪತ್ತೆಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಹ್ಮಾರ್ ಸಮುದಾಯ ಬಹುಸಂಖ್ಯಾತರಾಗಿರುವ ನೆರೆಯ ಫೆರ್ಜಾಲ್ ಜಿಲ್ಲೆಯ ಬೆಟ್ಟಗಳ ಸಮೀಪವಿರುವ ಜಿರಿಬಾಮ್ ಜಿಲ್ಲೆಯ ಜಕುರಾಧೋರ್ ಮತ್ತು ಬೊರೊಬೆಕ್ರಾ ಪ್ರದೇಶಗಳಲ್ಲಿ ಸೋಮವಾರ ಮಧ್ಯಾಹ್ನ ಹ್ಮಾರ್ ಸಮುದಾಯ ಮತ್ತು ಭದ್ರತಾ ಪಡೆಗಳ ನಡುವೆ ದೊಡ್ಡ ಗುಂಡಿನ ಚಕಮಕಿಗೆ ನಡೆದಿತ್ತು. ಜಕುರಾದೋರ್ನಲ್ಲಿರುವ ಸಿಆರ್‌ಪಿಎಫ್ ಪೋಸ್ಟ್ ಮತ್ತು ಹತ್ತಿರದ ಬೊರೊಬೆಕ್ರಾ ಪೊಲೀಸ್ ಠಾಣೆಯ ಮೇಲೆ ಗುಂಡಿನ ದಾಳಿ ನಡೆದ ನಂತರ ಈ ಗುಂಡಿನ ಚಕಮಕಿ ನಡೆದಿದೆ ಎಂದು ಪೊಲೀಸರು ಹೇಳಿದ್ದಾರೆ. ಶಂಕಿತ ಉಗ್ರರು ಮುಂಜಾನೆಯೇ ಈ ಪ್ರದೇಶದಲ್ಲಿನ ಮೈತೇಯಿ ಬಾಹುಳ್ಯದ ಪ್ರದೇಶಗಳ ಮನೆಗಳು ಮತ್ತು ಅಂಗಡಿಗಳ ಮೇಲೆ ದಾಳಿ ನಡೆಸಿದ್ದರು ಎಂದು ಸ್ಥಳೀಯ ನಿವಾಸಿಗಳು ತಿಳಿಸಿದ್ದಾರೆ. ಮಂಗಳವಾರ ಬೆಳಗ್ಗೆ ಲೈಶ್ರಾಮ್ ಬರೇಲ್ ಸಿಂಗ್ (63) ಮತ್ತು ಮೈಬಮ್ ಕೇಶ್ವೋ ಸಿಂಗ್ (71) ಎಂದು ಗುರುತಿಸಲಾದ ಇಬ್ಬರ ಶವಗಳನ್ನು ಪೊಲೀಸರು ಜಕುರಾಧೋರ್ ಪ್ರದೇಶದ ಮನೆಗಳಿಂದ ವಶಪಡಿಸಿಕೊಂಡಿದ್ದಾರೆ. ಈ ಇಬ್ಬರು ಬೊರೊಬೆಕ್ರಾ ಪೊಲೀಸ್ ಠಾಣೆಯ ಪರಿಹಾರ ಶಿಬಿರದಲ್ಲಿ ತಂಗಿದ್ದರು ಎಂದು ಸ್ಥಳೀಯ ನಿವಾಸಿಗಳು ಹೇಳಿದ್ದಾರೆ. ಸೋಮವಾರದ ಗುಂಡಿನ ದಾಳಿಯಿಂದ ಶಿಬಿರದಿಂದ 10 ಮಂದಿ ನಾಪತ್ತೆಯಾಗಿದ್ದಾರೆ.

ಹಗಲಿನ ವೇಳೆಯಲ್ಲಿ, ಪರಿಹಾರ ಶಿಬಿರದಲ್ಲಿ ವಾಸಿಸುವ ಜನರು ಹೊರಗೆ ಹೋಗುತ್ತಾರೆ. ನಿನ್ನೆಯ ಗುಂಡಿನ ದಾಳಿ ನಂತರ ಜನರು ಇಲ್ಲಿಂದ ಓಡಲು ಪ್ರಾರಂಭಿಸಿದರು. ದಾಳಿ ಕಡಿಮೆಯಾದ ನಂತರ, ಪರಿಹಾರ ಶಿಬಿರದಿಂದ 10 ಜನರು ನಾಪತ್ತೆಯಾಗಿರುವುದನ್ನು ನಾವು ಕಂಡುಕೊಂಡಿದ್ದೇವೆ. ಎಂದು ಅವರು ಹೇಳಿದ್ದಾರೆ. ಇಂದು ಬೆಳಿಗ್ಗೆ, ಎರಡು ಶವಗಳು ಪತ್ತೆಯಾಗಿವೆ ಮತ್ತು ಇನ್ನಿಬ್ಬರು ಜೀವಂತವಾಗಿ ಪತ್ತೆಯಾಗಿದ್ದಾರೆ. ಆರು ಜನರು ಇನ್ನೂ ಕಾಣೆಯಾಗಿದ್ದಾರೆ, ಅವರಲ್ಲಿ ಮೂವರು ಮಹಿಳೆಯರು ಮತ್ತು ಮೂವರು ಮಕ್ಕಳು ಮತ್ತು ಅವರು ಎಲ್ಲಿರಬಹುದು ಅಥವಾ ಅವರಿಗೆ ಏನಾರಿರಬಹುದು ಎಂದು ನಾವು ಆತಂಕದಲ್ಲಿದ್ದೇವೆ ಎಂದು ಅವರು ಹೇಳಿದರು.




ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಮಂಗಳವಾರನವದೆಹಲಿಯಲ್ಲಿ ರಾಜ್ಯಗಳು–ಕೇಂದ್ರಾಡಳಿತ ಪ್ರದೇಶಗಳ ಕಾರ್ಯದರ್ಶಿಗಳೊಂದಿಗೆ ಉನ್ನತ ಮತ್ತು ತಾಂತ್ರಿಕ ಶಿಕ್ಷಣದ ರಾಷ್ಟ್ರೀಯ ಕಾರ್ಯಾಗಾರದಲ್ಲಿ ಪಾಲ್ಗೊಂಡರು.

# ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಪೇಜಾವರ ಮಠಕ್ಕೆ ಭೇಟಿ



**ಮುಂಬಯಿ, ನ.12:** ರೈಲ್ವೆ ಹಾಗೂ ವಾರ್ತಾ ಮತ್ತು ಪ್ರಸಾರ ಇಲಾಖೆ ಮಂತ್ರಿ ಅಶ್ವಿನಿ ವೈಷ್ಣವ್ ಅವರು ಭಾನುವಾರ ತಮ್ಮ ಸಮುದಾಯದ ಕಾರ್ಯಕ್ರಮವೊಂದರಲ್ಲಿ ಪಾಲ್ಗೊಳ್ಳಲು ಮುಂಬಯಿಗೆ ಆಗಮಿಸಿದ್ದ ಸಂದರ್ಭದಲ್ಲಿ ಮುಂಬಯಿ ಸಾಂತಾಕ್ರೂಜ್ ಪೂರ್ವದಲ್ಲಿರುವ ಪೇಜಾವರ ಮಠದ ಶಾಖೆಗೆ ಭೇಟಿ ನೀಡಿದರು. ಮಠದ ವ್ಯವಸ್ಥಾಪಕ ವಿದ್ವಾನ್ ರೆಂಜಾಳ ರಾಮದಾಸ ಉಪಾಧ್ಯಾಯ ಮತ್ತಿತರರು ಅವರನ್ನು ಬರಮಾಡಿಕೊಂಡ ಶ್ರೀಕೃಷ್ಣನ ದರ್ಶನ ಮಾಡಿಸಿ ಪ್ರಸಾದ ಸಹಿತ ಶ್ರೀಮಠದ ಗೌರವ ನೀಡಿ ಸತ್ಕರಿಸಿದರು.

### ಈಗ ಬಿಜೆಪಿಯನ್ನು ನಾಯಿ ಮಾಡುವ ಸಮಯ ಬಂದಿದೆ

# ಮಹಾರಾಷ್ಟ್ರ ಕಾಂಗ್ರೆಸ್ ಮುಖ್ಯಸ್ಥ ನಾನಾ ಪಟೋಲೆ ವಾಗ್ದಾಳಿ

**ಮುಂಬೈ, ನ. 12 :** ಮಹಾರಾಷ್ಟ್ರ ಕಾಂಗ್ರೆಸ್ ಮುಖ್ಯಸ್ಥ ನಾನಾ ಪಟೋಲೆ ಅವರು ಬಿಜೆಪಿಯನ್ನು ನಾಯಿಗೆ ಹೋಲಿಸುವ ಮೂಲಕ ವಿವಾದವನ್ನು ಹುಟ್ಟುಹಾಕಿದ್ದಾರೆ. ಒಬಿಸಿ ಸಮುದಾಯವನ್ನು ದುರುಪಯೋಗಪಡಿಸಿಕೊಂಡ ಪಕ್ಷಕ್ಕೆ ತನ್ನ ಸ್ಥಾನವನ್ನು ತೋರಿಸಬೇಕು ಎಂದು ಅವರು ಪ್ರತಿಪಾದಿಸಿದ್ದಾರೆ. ಅಕೋಲಾದಲ್ಲಿ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಪಟೋಲೆ, ಮಹಾ ವಿಕಾಸ್ ಅಘಾಡಿ ಸರ್ಕಾರವನ್ನು ಉರುಳಿಸಿದ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು. ಬಿಜೆಪಿ ಜನರು ತಮ್ಮನ್ನು ತಾವು ದೇವರು ಮತ್ತು ವಿಶ್ವಗುರು ಎಂದು ಪರಿಗಣಿಸುತ್ತಾರೆ. ಮಹಾರಾಷ್ಟ್ರದಲ್ಲಿ ಫಡ್ನವೀಸ್ ತಮ್ಮನ್ನು ತಾವು ದೇವರೆಂದು ಪರಿಗಣಿಸುತ್ತಾರೆ ಪಟೋಲೆ ಹೇಳಿದರು.



ಒಬಿಸಿ ಸಮುದಾಯಕ್ಕೆ ಬಿಜೆಪಿ ಅಗೌರವ ತೋರುತ್ತಿದೆ ಎಂದು ಆರೋಪಿಸಿದ ಪಟೋಲೆ, ನಿಮ್ಮನ್ನು ನಾಯಿ ಎಂದು ಕರೆಯುವ ಬಿಜೆಪಿಗೆ ಅಕೋಲಾ ಜಿಲ್ಲೆಯ ಒಬಿಸಿ ಜನರು ಮತ ಹಾಕುತ್ತಾರೆಯೇ ಈಗ ಬಿಜೆಪಿಯನ್ನು ನಾಯಿ ಮಾಡುವ ಸಮಯ ಬಂದಿದೆ ಎಂದು ಹೇಳಿದರು. ಮಹಾರಾಷ್ಟ್ರದಿಂದ ಬಿಜೆಪಿಯನ್ನು ಕಿತ್ತೊಗೆಯುವ ಸಮಯ ಬಂದಿದೆ. ಈ ಪಕ್ಷ ಸುಳ್ಳಿನ ಕಂತೆಯೊಂದಿಗೆ ಅಧಿಕಾರಕ್ಕೆ ಬಂದಿದೆ ಮತ್ತು ಈಗ ತನ್ನ ಸ್ಥಾನವನ್ನು ತೋರಿಸುವ ಸಮಯ ಬಂದಿದೆ.

ಮಹಾ ವಿಕಾಸ್ ಅಘಾಡಿ ನಾಯಕರು ನಿರಾಶೆಗೊಂಡಿದ್ದಾರೆ ಮತ್ತು ಹತಾಶರಾಗಿದ್ದಾರೆ ಎಂದು ಬಿಜೆಪಿ ನಾಯಕ ಮತ್ತು ಮಾಜಿ ಸಂಸದ ಕಿರಿತ್ ಸೋಮಯ್ಯ ಮಹಾರಾಷ್ಟ್ರ ಕಾಂಗ್ರೆಸ್ ಮುಖ್ಯಸ್ಥರನ್ನು ನಾನಾ ಪಟೋಲೆ ತರಾಟೆಗೆ ತೆಗೆದುಕೊಂಡರು. ಅವರು ಈಗ ಬಿಜೆಪಿಯವರನ್ನು ನಾಯಿಗಳು ಎಂದು ಕರೆಯುತ್ತಿದ್ದಾರೆ, ಅವರು ಸೋಲನ್ನು ನೋಡಬಹುದು ಆದ್ದರಿಂದ ಹತಾಶೆಯಿಂದ ಈ ಭಾಷಣಗಳನ್ನು ಮಾಡುತ್ತಿದ್ದಾರೆ ಎಂದು ವ್ಯಂಗ್ಯ ಮಾಡಿದರು.

### ಧರ್ಮ ಆಧಾರಿತ ವಾಟ್ಸಪ್ ಗ್ರೂಪ್ ರಚನೆ

# ಕೇರಳ ಸರ್ಕಾರದಿಂದ ಇಬ್ಬರು ಐಎಎಸ್ ಅಧಿಕಾರಿಗಳ ಅಮಾನತು

**ತಿರುವನಂತಪುರಂ, ನ. 12 :** ಧರ್ಮ ಆಧಾರಿತ ವಾಟ್ಸಪ್ ಗ್ರೂಪ್ ರಚನೆ, ಹಿರಿಯ ಅಧಿಕಾರಿ ವಿರುದ್ಧ ಟೀಕೆ ಆರೋಪದ ಮೇಲೆ ಇಬ್ಬರು ಐಎಎಸ್ ಅಧಿಕಾರಿಗಳನ್ನು ಕೇರಳ ಸರ್ಕಾರ ಅಮಾನತು ಮಾಡಿದೆ. ಕೈಗಾರಿಕೆ ಮತ್ತು ವಾಣಿಜ್ಯ ನಿರ್ದೇಶಕ ಕೆ. ಗೋಪಾಲಕೃಷ್ಣನ್ ಅವರು ಸರ್ಕಾರಿ ಅಧಿಕಾರಿಗಳೊಂದಿಗೆ ಧರ್ಮ ಆಧಾರಿತ ವಾಟ್ಸಾಪ್ ಗ್ರೂಪ್ ಮಾಡಿದ್ದರು. ಕೃಷಿ ಅಭಿವೃದ್ಧಿ ಮತ್ತು ರೈತರ ಕಲ್ಯಾಣ ಇಲಾಖೆಯ ವಿಶೇಷ ಕಾರ್ಯದರ್ಶಿ ಎನ್. ಪ್ರಶಾಂತ್ ಅವರು ಹಿರಿಯ ಅಧಿಕಾರಿಯ ವಿರುದ್ಧ ಟೀಕೆ ಮತ್ತು ಗಂಭೀರ ಆರೋಪ ಮಾಡಿದ ಹಿನ್ನೆಲೆಯಲ್ಲಿ ಅಮಾನತುಗೊಳಿಸಲಾಗಿದೆ.



ಮುಖ್ಯ ಕಾರ್ಯದರ್ಶಿ ಶಾರದಾ ಮುರಳೀಧರನ್ ಅವರ ವರದಿಯ ಮೇರೆಗೆ ಮುಖ್ಯಮಂತ್ರಿಗಳು ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡಿದ್ದಾರೆ. ಕಳೆದ ತಿಂಗಳು ಮಲ್ಲು ಹಿಂದೂ ಆಫೀಸರ್ಸ್ ಎಂಬ ಹೆಸರಿನ ವಾಟ್ಸಪ್ ಗ್ರೂಪ್ ರಚಿಸಿದ್ದಕ್ಕಾಗಿ 2013ರ ಬ್ಯಾಚ್ ಅಧಿಕಾರಿ ಗೋಪಾಲಕೃಷ್ಣನ್ ಅವರನ್ನು ಅಮಾನತುಗೊಳಿಸಲಾಗಿದೆ. ಐಎಎಸ್ ಅಧಿಕಾರಿ ತನ್ನ ಫೋನ್ ಹ್ಯಾಕ್ ಆಗಿದೆ ಎಂದು ಹೇಳಿಕೊಂಡಿದ್ದರು. ಅಧಿಕಾರಿಗಳ ಪ್ರಕಾರ, ಫೋನ್‌ನ ಫೊರೆನ್ಸಿಕ್ ಪರೀಕ್ಷೆಯು ಅದನ್ನು ಹ್ಯಾಕ್ ಮಾಡಲಾಗಿದೆ ಎಂದು ದೃಢಪಡಿಸಲಿಲ್ಲ. 2007 ರ ಬ್ಯಾಚ್ ಅಧಿಕಾರಿ ಎನ್. ಪ್ರಶಾಂತ್ ಪ್ರಕರಣದಲ್ಲಿ, ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎ. ಜಯತಿಲಕ್ ವಿರುದ್ಧ ಫೇಸ್‌ಬುಕ್ ಪೋಸ್ಟ್‌ನಲ್ಲಿ ಆಕ್ರೋಶ ವ್ಯಕ್ತಪಡಿಸಿದ ನಂತರ ಈ ಕ್ರಮ ತೆಗೆದುಕೊಳ್ಳಲಾಗಿದೆ.

ಹಿರಿಯ ಅಧಿಕಾರಿ ತಮ್ಮ ವಿರುದ್ಧ ಆಧಾರ ರಹಿತ ಸುದ್ದಿ ವರದಿ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಜಯತಿಲಕ್ ಅವರು ಆಧಾರರಹಿತ ಆರೋಪಗಳನ್ನು ಹರಡುವ ಮೂಲಕ ತಮ್ಮನ್ನು ದುರ್ಬಲಗೊಳಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಪ್ರಶಾಂತ್ ಆರೋಪಿಸಿದ್ದರು. ಹಿರಿಯ ಅಧಿಕಾರಿಯನ್ನು ಸೈಕೋಪಾತ್ ಎಂದು ಟೀಕಿಸಿದ್ದರು. ಕೇರಳದ ಕಂದಾಯ ಸಚಿವ ಕೆ.ರಾಜನ್, ಸರ್ಕಾರಿ ಅಧಿಕಾರಿಗಳು ಸೇವೆಯಲ್ಲಿದ್ದಾಗ ಶಿಸ್ತನ್ನು ಅನುಸರಿಸಬೇಕು. ಯಾರಾದರೂ ಅದನ್ನು ಉಲ್ಲಂಘಿಸಿದರೆ ಕಠಿಣ ಕ್ರಮ ಎದುರಿಸಬೇಕಾಗುತ್ತದೆ ಎಂದು ಈ ಹಿಂದೆ ಎಚ್ಚರಿಕೆ ನೀಡಿದ್ದರು.

# ಕನ್ನಡ ಸಂಘ ಸಾಂತಾಕ್ರೂಜ್: ಸುಜಾತಾ ಆರ್.ಶೆಟ್ಟಿ ಅಧ್ಯಕ್ಷೆಯಾಗಿ ಪುನಾರಾಯ್ಕೆ

**ಮುಂಬಯಿ, ನ. 10 :** ಕನ್ನಡ ಸಂಘ ಸಾಂತಕ್ರೂಜ್ ಇದರ 2024–27ರ ಕಾಲಾವಧಿಗೆ ಅಧ್ಯಕ್ಷರಾಗಿ ಸುಜಾತಾ ಆರ್ ಶೆಟ್ಟಿ ಅವರು ಪುನಾರಾಯ್ಕೆಯಾಗಿದ್ದು, ಕಳೆದ ಗುರುವಾರ ಸಾಂತಾಕ್ರೂಜ್ ಪೂರ್ವದಲ್ಲಿನ ಬಿಲ್ಲವ ಭವನದ ಕಿರು ಸಭಾಗೃಹದಲ್ಲಿ 67ನೇ ವಾರ್ಷಿಕ ಮಹಾಸಭೆಯಲ್ಲಿ 2024–27ರ ಕಾಲಾವಧಿಗೆ ಕಾರ್ಯಕಾರಿ ಸಮಿತಿಯ ಆಯ್ಕೆ ನೇರವೇರಿತು.




ಗೌರವ ಅಧ್ಯಕ್ಷರಾಗಿ ಎಲ್ ವಿ. ಅಮೀನ್, ಉಪಾಧ್ಯಕ್ಷ ಭುಜಂಗ ಆರ್.ಶೆಟ್ಟಿ, ಗೌರವ ಪ್ರಧಾನ ಕಾರ್ಯದರ್ಶಿ ಜಯ ವಿ.ಪೂಜಾರಿ, ಗೌರವ ಕೋಶಾಧಿಕಾರಿ ಸುಧಾಕರ್ ಉಚ್ಚಿಲ್, ಗೌರವ ಜೊತೆ ಕಾರ್ಯದರ್ಶಿ ಚಂದ್ರಹಾಸ ಜೆ.ಕೋಟ್ಯಾನ್, ಜೊತೆ ಕೋಶಾಧಿಕಾರಿ ಬಿ. ರವೀಂದ್ರ ಅಮೀನ್, ಸಾಮಾಜಿಕ ಮತ್ತು ಸಾಂಸ್ಕೃತಿಕ ಸಮಿತಿಯ ಕಾರ್ಯಾಧ್ಯಕ್ಷೆ ವನಿತಾ ವೈ ನೋಂದಾ, ಕಾರ್ಯದರ್ಶಿಯಾಗಿ ಲಕ್ಷ್ಮೀ ಎನ್. ಕೋಟ್ಯಾನ್, ಶಿಕ್ಷಣ ಸಮಿತಿಯ ಕಾರ್ಯಾಧ್ಯಕ್ಷರಾಗಿ ವಿಜಯಕುಮಾರ್ ಕೆ. ಕೋಟ್ಯಾನ್, ಕಾರ್ಯದರ್ಶಿ ಶಕಿಲಾ ಪಿ.ಶೆಟ್ಟಿ, ಆಡಳಿತ ಸಮಿತಿಯ ಸದಸ್ಯರಾಗಿ ಸುಮಾ ಎಂ.ಪೂಜಾರಿ, ಶಾಲಿನಿ ಜಿ.ಶೆಟ್ಟಿ, ಲಿಂಗಪ್ಪ ಅಮೀನ್, ವಾಸುದೇವ ರಾವ್ ಅವರನ್ನು ಆಯ್ಕೆ ಮಾಡಲಾಯಿತು. ಲೆಕ್ಕ ಪರಿಶೋಧಕರಾಗಿ ಸಿಎ। ಪ್ರಕಾಶ್ ಶೆಟ್ಟಿ, ಸಲಹಾ ಸಮಿತಿಯ ಸದಸ್ಯರಾಗಿ ಎಂ.ಎನ್ ಸುನಿಲ್, ನಾರಾಯಣ್ ಎಸ್.ಶೆಟ್ಟಿ, ಬಿ.ಆರ್ ಪೂಂಜ, ಡಾ। ಆರ್ ಕೆ.ಶೆಟ್ಟಿ, ಭೋಜ ಎನ್ ಶೆಟ್ಟಿ ಮೊದಲಾದವರನ್ನು ಪುನರ್ ಆಯ್ಕೆ ಮಾಡಲಾಯಿತು.

### ಜಾರ್ಖಂಡ್ ವಿಧಾನಸಭೆಗೆ ಇಂದು ಮೊದಲ ಹಂತದ ಮತದಾನ

# 43 ಕ್ಷೇತ್ರಗಳಿಗೆ ಚುನಾವಣೆ, 683 ಅಭ್ಯರ್ಥಿಗಳ ಭವಿಷ್ಯ ನಿರ್ಧಾರ

**ರಾಂಚಿ, ನ. 12 :** ಜಾರ್ಖಂಡ ವಿಧಾನಸಭೆಗೆ ಮಂಗಳವಾರ ಮೊದಲ ಹಂತದ ಮತದಾನ ನಡೆಯಲಿದೆ. ಮೊದಲ ಸುತ್ತಿನಲ್ಲಿ 15 ಜಿಲ್ಲೆಗಳ 43 ಸ್ಥಾನಗಳಿಗೆ ಮತದಾನ ನಡೆಯಲಿದೆ. ಮೊದಲ ಹಂತದಲ್ಲಿ 683 ಅಭ್ಯರ್ಥಿಗಳಿದ್ದು ಅಖಾಡದಲ್ಲಿದ್ದು ನಾಳೆ ಅವರ ಭವಿಷ್ಯ ಇವಿಎಂಗಳಲ್ಲಿ ಭದ್ರವಾಗಲಿದೆ.




ಮೊದಲ ಸುತ್ತಿನಲ್ಲಿ ಗರಿಷ್ಠ ಆರು ಸ್ಥಾನಗಳು ಪೂರ್ವ ಸಿಂಗ್ಭೂಮ್ ಜಿಲ್ಲೆಯಲ್ಲಿವೆ. ಪಲಮು, ಪಶ್ಚಿಮ ಸಿಂಗ್ಭೂಮ್ ಮತ್ತು ರಾಂಚಿ ಜಿಲ್ಲೆಗಳಲ್ಲಿ ತಲಾ ಐದು ವಿಧಾನಸಭಾ ಸ್ಥಾನಗಳಿದ್ದು, ಕೊಡೆರ್ಮಾ ಮತ್ತು ರಾಮಗಢ ಜಿಲ್ಲೆಯಲ್ಲಿ ತಲಾ ಒಂದು ಸ್ಥಾನವಿದೆ. ಇಂಡಿಯಾ ಒಕ್ಕೂಟದ ಭಾಗವಾಗಿರುವ ಆಡಳಿತಾರೂಢ ಜಾರ್ಖಂಡ್ ಮುಕ್ತಿ ಮೋರ್ಚಾ, ಆಲ್ ಜಾರ್ಖಂಡ್ ಸ್ಟೂಡೆಂಟ್ಸ್ ಯೂನಿಯನ್, ಜನತಾ ದಳ ಯುನೈಟೆಡ್ ಒಳಗೊಂಡು ಎನ್ಡಿಎ ಒಕ್ಕೂಟದ ವಿರುದ್ಧ ಸ್ಪರ್ಧೆ ಮಾಡಿದೆ.

ಮೊದಲ ಹಂತದಲ್ಲಿ ಒಟ್ಟು 43 ಸ್ಥಾನಗಳ ಪೈಕಿ ಜೆಎಂಎಂ 23 ಸ್ಥಾನಗಳಲ್ಲಿ ಮತ್ತು ಕಾಂಗ್ರೆಸ್ 17 ಸ್ಥಾನಗಳಲ್ಲಿ ತನ್ನ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಲಾಲು ಪ್ರಸಾದ್ ಯಾದವ್ ಅವರ ರಾಷ್ಟ್ರೀಯ ಜನತಾ ದಳ (ಆರ್ಜೆಡಿ) ಒಟ್ಟು ಐದು ಸ್ಥಾನಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಎನ್ಡಿಎಯಲ್ಲಿ ಬಿಜೆಪಿ 43 ರಲ್ಲಿ 36 ಸ್ಥಾನಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಸುದೇಶ್ ಮಹತೋ ಅವರ ಎಜೆಎಸ್ಯು ನಾಲ್ಕು ಸ್ಥಾನಗಳಲ್ಲಿ, ನಿತೀಶ್ ಕುಮಾರ್ ಅವರ ಜೆಡಿಯು ಎರಡು ಸ್ಥಾನಗಳಲ್ಲಿ ಮತ್ತು ಚಿರಾಗ್ ಪಾಸ್ವಾನ್ ಅವರ ಎಲ್ಜೆಪಿ (ಆರ್) ಒಂದು ಸ್ಥಾನದಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಇದಲ್ಲದೇ ಇತರೆ ಸಣ್ಣ ಪಕ್ಷಗಳೂ ಸ್ಪರ್ಧೆಯನ್ನು ಕುತೂಹಲ ಮೂಡಿಸಿದೆ.

ಮಾಜಿ ಮುಖ್ಯಮಂತ್ರಿ ಚಂಪೈ ಸೊರೆನ್, ಆರೋಗ್ಯ ಸಚಿವ ಬನ್ನಾ ಗುಪ್ತಾ, ರಾಜ್ಯಸಭಾ ಸಂಸದ ಮಹುವಾ ಮಜಿ, ಮಾಜಿ ಮುಖ್ಯಮಂತ್ರಿ ಮಧು ಕೋಡಾ ಅವರ ಪತ್ನಿ ಗೀತಾ ಕೋಡಾ ಮತ್ತು ಮಾಜಿ ಮುಖ್ಯಮಂತ್ರಿ ರಘುಬರ್ ದಾಸ್ ಅವರ ಸೊಸೆ ಪೂರ್ಣಿಮಾ ದಾಸ್ ಅವರಂತಹ ಪ್ರಮುಖ ಮುಖಗಳ ಮೊದಲ ಹಂತದ ಚುನಾವಣಾ ಅಖಾಡದಲ್ಲಿ ಗಮನ ಸೆಳೆದಿವೆ. ಚುನಾವಣೆಗಾಗಿ ಚುನಾವಣಾ ಆಯೋಗವು ಸಕಲ ತಯಾರಿ ಮಾಡಿಕೊಂಡಿದೆ. ರಾಜ್ಯಾದ್ಯಂತ ಒಟ್ಟು 15,344 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ,

225 ಸೂಕ್ಷ್ಮ ಮತಗಟ್ಟೆಗಳು ಎಂದು ಘೋಷಿಸಿದೆ. ಭದ್ರತಾ ಸುವ್ಯವಸ್ಥೆ ಕಾಪಾಡಲು ಮತ್ತು ಚುನಾವಣಾ ಪ್ರಕ್ರಿಯೆಯನ್ನು ಸುಗಮಗೊಳಿಸಲು 200 ಕಂಪನಿಗಳ ಭದ್ರತಾ ಪಡೆಗಳನ್ನು ನಿಯೋಜಿಸಿದೆ. ಮೊದಲ ಹಂತದಲ್ಲಿ 1 ಕೋಟಿ 37 ಲಕ್ಷ ಮಂದಿ ಮತದಾರರು ಮತ ಚಲಾಯಿಸಲಿದ್ದಾರೆ. ನವೆಂಬರ್ 20 ರಂದು ಬಾಕಿ 38 ಕ್ಷೇತ್ರಗಳಿಗೆ ಎರಡನೇ ಹಂತದಲ್ಲಿ ಚುನಾವಣೆ ನಡೆಯಲಿದ್ದು, ನವೆಂಬರ್ 23 ರಂದು ಮತ ಎಣಿಕೆ ನಡೆಯಲಿದೆ.

### ಮಲ್ಲಿಕಾರ್ಜುನ್ ಖರ್ಗೆ ಮನೆಯನ್ನು ರಜಾಕರು ಸುಟ್ಟು ಹಾಕಿದರು

# ಮಹಾರಾಷ್ಟ್ರ ಚುನಾವಣೆ: ಬಿರುಸುಗೊಂಡ ವಾಕ್ಸಮರ

**ಮುಂಬೈ, ನ. 12 :** ಮಹರಾಷ್ಟ್ರ ವಿಧಾನಸಭೆ ಚುನಾವಣೆಯಲ್ಲಿ ಪ್ರಚಾರದ ಅಬ್ಬರ ತೀವ್ರಗೊಂಡಿದ್ದು ಮಾತಿನ ಮೊಣಚು ತೀಕ್ಷ್ಣವಾಗಿದೆ. ಅಚಲಪುರದಲ್ಲಿ ನಡೆದ ರ್‍ಯಾಲಿಯಲ್ಲಿ ಮಾತನಾಡಿದ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಮಹಾ ವಿಕಾಸ್ ಅಘಾಡಿ ನಾಯಕರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ಮಲ್ಲಿಕಾರ್ಜುನ್ ಖರ್ಗೆ ಅವರನ್ನು ಕೇಂದ್ರೀಕರಿಸಿದ ಯೋಗಿ ಆದಿತ್ಯನಾಥ್, ಕಳೆದ ಮೂರು ದಿನಗಳಿಂದ ನಾನು ಖರ್ಗೆ ಅವರ ಹೇಳಿಕೆಗಳನ್ನು ಗಮನಿಸುತ್ತಿದ್ದೇನೆ, ನಾನು ಯೋಗಿ, ನನಗೆ ರಾಷ್ಟ್ರವೇ ಮೊದಲು, ಆದರೆ ಖರ್ಗೆ ಅವರಿಗೆ ತುಷ್ಟೀಕರಣ ರಾಜಕೀಯವು ಮೊದಲು ಎಂದು ಹೇಳಿದರು.




ಖರ್ಗೆಯವರ ಗ್ರಾಮವಾದ ವಾರ್ವಟ್ಟಿ ಹಿಂದೆ ಹೈದರಾಬಾದ್ನ ನಿಜಾಮರ ಆಳ್ವಿಕೆಗೆ ಒಳಪಟ್ಟಿತು.

ಆ ಸಮಯದಲ್ಲಿ, ಬ್ರಿಟಿಷ್ ಸಾಮ್ರಾಜ್ಯವು ರಾಷ್ಟ್ರವನ್ನು ವಿಭಜಿಸಲು ಮುಸ್ಲಿಂ ಲೀಗ್ ಅನ್ನು ಪ್ರೋತ್ಸಾಹಿಸಿತು ಅದಕ್ಕೆ ಕಾಂಗ್ರೆಸ್ ನಾಯಕತ್ವವು ಶರಣಾಯಿತು. ಸ್ವಾತಂತ್ರ್ಯದ ನಂತರ ಅಧಿಕಾರ ಕಳೆದುಕೊಳ್ಳುವ ಭೀತಿಯಲ್ಲಿ ನಿಜಾಮನು ಹಿಂಸಾಚಾರ ಶುರು ಮಾಡಿದ ಇದಕ್ಕೆ ಖರ್ಗೆ ಯವರ ಗ್ರಾಮವು ಬಲಿಯಾಯಿತು. ರಜಾಕಾರರು ಖರ್ಗೆ ಅವರ ಮನೆಯನ್ನು ಸುಟ್ಟುಹಾಕಿದರು, ಅವರ ಕುಟುಂಬವೂ ನಿಜಾಮನ ಬಲಕ್ಕೆ ಸುಟ್ಟುಹೋಯಿತು ಎಂದು ಹೇಳಿದರು. ಆದರೆ ಖರ್ಗೆ ಅವರು ಈ ಸತ್ಯವನ್ನು ಒಪ್ಪಿಕೊಳ್ಳಲು ಬಯಸುವುದಿಲ್ಲ, ಕಾರಣ ಇದನ್ನು ಅವರು ಅದನ್ನು ಹೇಳಿದರೆ ಮುಸ್ಲಿಂ ಮತಗಳು ಕೈ ತಪ್ಪುತ್ತವೆ ಎಂದು ಅವರಿಗೆ ತಿಳಿದಿದೆ. ಅವರು ಮತಕ್ಕಾಗಿ ತಮ್ಮ ಕುಟುಂಬದ ತ್ಯಾಗವನ್ನು ಮರೆತಿದ್ದಾರೆ ಮತ್ತು ಈಗ ಕಾಂಗ್ರೆಸ್ ಇತಿಹಾಸವನ್ನು ತಿರುಚಲು ಪ್ರಯತ್ನಿಸುತ್ತಿದೆ ಎಂದು ಸಿಎಂ ಯೋಗಿ ವಾಗ್ದಾಳಿ ನಡೆಸಿದರು.

ಇನ್ನು ಕರ್ನಾಟಕದ ವಿಚಾರವನ್ನು ಪರೋಕ್ಷವಾಗಿ ಪ್ರಸ್ತಾಪಿಸಿದ ಅವರು, ನಮ್ಮನ್ನು ವಿಭಜಿಸಿದರೆ ಗಣಪತಿ ಪೂಜೆಯ ಮೇಲೆ ದಾಳಿ ನಡೆಯುತ್ತದೆ, ಲ್ಯಾಂಡ್ ಜಿಹಾದ್ ಅಡಿಯಲ್ಲಿ ಭೂಮಿಯನ್ನು ಕಿತ್ತುಕೊಳ್ಳಲಾಗುತ್ತದೆ, ಹೆಣ್ಣು ಮಕ್ಕಳ ಸುರಕ್ಷತೆಗೆ ಅಪಾಯವಿದೆ ಹೀಗಾಗೀ ನಾವು ಒಟ್ಟಾಗಬೇಕು ಎಂದರು. ಇಂದು ಯುಪಿಯಲ್ಲಿ ಲವ್ ಜಿಹಾದ್ ಅಥವಾ ಲ್ಯಾಂಡ್ ಜಿಹಾದ್ ಇಲ್ಲ, ನಮ್ಮ ಹೆಣ್ಣುಮಕ್ಕಳ ಭದ್ರತೆಗೆ ಯಾರಾದರೂ ಅಡ್ಡಿಪಡಿಸಿದರೆ, ಸರ್ಕಾರಿ ಮತ್ತು ಬಡವರ ಭೂಮಿಯನ್ನು ಕಿತ್ತುಕೊಂಡರೆ ಅವರ ಟಿಕೆಟ್ ಕಟ್ ಮಾಡಲು ಯಮರಾಜ ಸಿದ್ಧ ಎಂದು ಈಗಾಗಲೇ ಘೋಷಿಸಲಾಗಿದೆ ಎಂದರು.

# ಬಿಜೆಪಿ-ಎನ್‌ಸಿಪಿ ಮೈತ್ರಿ ಸಭೆಯಲ್ಲಿ ಅದಾನಿ ಭಾಗಿ

**ಮುಂಬೈ, ನ. 12:** ಮಹಾರಾಷ್ಟ್ರದ 2019ರ ವಿಧಾನಸಭೆಯ ಚುನಾವಣೆಯ ನಂತರ ಬಿಜೆಪಿ ಮತ್ತು ಅವಿಭಜಿತ ಎನ್‌ಸಿಪಿ ಜೊತೆಗೆ ನಡೆದಿದ್ದ ಸಭೆಯಲ್ಲಿ ಪ್ರಧಾನಿ ಮೋದಿ ಅವರ ಆಪ್ತ ಉದ್ಯಮಿ ಗೌತಮ್ ಅದಾನಿ ಕೂಡಾ ಭಾಗವಹಿಸಿದ್ದರು ಎಂದು ಮಹಾರಾಷ್ಟ್ರದ ಉಪ ಮುಖ್ಯಮಂತ್ರಿ ಅಜಿತ್ ಪವಾರ್ ಅವರು ಸಂದರ್ಶನವೊಂದರಲ್ಲಿ ಬಹಿರಂಗಪಡಿಸಿದ್ದಾರೆ.



ಬಿಜೆಪಿ ನಾಯಕ ದೇವೇಂದ್ರ ಫಡ್ನವಿಸ್ ಅವರು ಮುಖ್ಯಮಂತ್ರಿಯಾಗಿ ಮತ್ತು ತಾನು ಉಪಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಮುಂಜಾನೆ ಸಮಾರಂಭಕ್ಕೂ ಮುನ್ನ ನಡೆದ ಬೆಳವಣಿಗೆಗಳ ಬಗ್ಗೆ ಅಜಿತ್ ಪವಾರ ಮಾತನಾಡಿದ್ದಾರೆ. ಮಹಾರಾಷ್ಟ್ರ ನಿಮಗೆ ಗೊತ್ತಿಲ್ಲವೇ ಇದು ಐದು ವರ್ಷಗಳ ಹಿಂದೆ ನಡೆದ ಘಟನೆ. ಸಭೆ ಎಲ್ಲಿ ನಡೆಯಿತು ಎಂಬುದು ಎಲ್ಲರಿಗೂ ಗೊತ್ತು ಎಲ್ಲರೂ ಅಲ್ಲಿದ್ದರು. ಮತ್ತೊಮ್ಮೆ ಹೇಳುತ್ತೇನೆ. ಅಮಿತ್ ಶಾ ಇದ್ದರು, ಗೌತಮ್ ಅದಾನಿ ಇದ್ದರು, ಪ್ರಫುಲ್ ಪಟೇಲ್ ಇದ್ದರು, ದೇವೇಂದ್ರ ಫಡ್ನವಿಸ್ ಇದ್ದರು, ಅಜಿತ್ ಪವಾರ್ ಇದ್ದರು, ಪವಾರ್ ಸಾಹೇಬ್ (ಶರದ್ ಪವಾರ್) ಇದ್ದರು ಎಂದು ಸ್ವತಂತ್ರ ಮಾಧ್ಯಮ ನ್ಯೂಸ್ ಮಿನಿಟ್‌ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿರುವ ಅಜಿತ್ ಪವಾರ್ ಹೇಳಿದ್ದಾರೆ.

ಆದರೆ, ಶರದ್ ಪವಾರ್ ಅವರನ್ನು ಬೆಂಬಲಿಸದಿರಲು ನಿರ್ಧರಿಸಿದ್ದರಿಂದ, ಅಜಿತ್ ಅವರ ವಿರುದ್ಧ ಬಂಡಾಯ ಎದ್ದಿದ್ದರು. ಆದರೆ ನಂತರ ಅಜಿತ್ ಪವಾರ್ ಅವರು ತಮ್ಮ ಬೆಂಬಲಿಗ ಶಾಸಕರೊಂದಿಗೆ ಮತ್ತೆ ಶರದ್ ಪವಾರ್ ಅವರ ಪಕ್ಷಕ್ಕೆ ಮರಳಿದ್ದರು. ಅದ ಅದಾಗ್ಯೂ, ಕೇವಲ 5 ದಿನಗಳಿಗೆ ಸರ್ಕಾರ ಪತನವಾಗಿತ್ತು. ಕೆಲವು ದಿನಗಳ ನಂತರ, ಅವಿಭಜಿತ ಎನ್‌ಸಿಪಿ ಮತ್ತು ಶಿವಸೇನೆಯು ಕಾಂಗ್ರೆಸ್ನೊಂದಿಗೆ ಮಹಾರಾಷ್ಟ್ರದಲ್ಲಿ ಮಹಾ ವಿಕಾಸ್ ಅಘಾಡಿ ಸರ್ಕಾರವನ್ನು ರಚಿಸಿತ್ತು. ಈ ವೇಳೆ ಶರದ್ ಪವಾರ್ ಅವರ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅಜಿತ್ ಪವಾರ್ ಶರದ್ ಪವಾರ್ ಅವರ ಮನಸ್ಸನ್ನು ಎಂದಿಗೂ ಊಹಿಸಲು ಸಾಧ್ಯವಿಲ್ಲ. ಜಗತ್ತಿನಲ್ಲಿ ಒಬ್ಬನೇ ವ್ಯಕ್ತಿಯೂ ಊಹಿಸಲು ಸಾಧ್ಯವಿಲ್ಲ. ನಮ್ಮ ಚಿಕ್ಕಮ್ಮ ಆಗಲಿ, ಅವರ ಮಗಳು ಸುಪ್ರಿಯಾ ಅವರಿಗೆ ಕೂಡ ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಅಜಿತ್ ಪವಾರ್ ಅವರ ಹೇಳಿಕೆ ಈಗ ರಾಜಕೀಯ ಚರ್ಚಕ್ಕೆ ದಾರಿ ಮಾಡಿಕೊಟ್ಟಿದೆ.

ಗೌತಮ್ ಅದಾನಿ ಭಾಗವಹಿಸಿದ್ದ ಸಭೆಯ ಬಗ್ಗೆ ಕೇಳಿದ ಪ್ರಶ್ನೆಗೆ ಎನ್‌ಸಿಪಿ–ಎಸ್‌ಪಿ ನಾಯಕಿ ಸುಪ್ರಿಯಾ ಸುಳೆ ಪ್ರತಿಕ್ರಿಯಿಸಿದ್ದು, ಅಂತಹ ಯಾವುದೇ ಸಭೆಯ ಬಗ್ಗೆ ನನಗೆ ತಿಳಿದಿಲ್ಲ ಎಂದು ಹೇಳಿದ್ದಾರೆ. ಅವರು ಸಂದರ್ಶನದಲ್ಲಿ ಪ್ರಸ್ತಾಪಿಸಿದ ಅಂತಹ ಯಾವುದೇ ಸಭೆಯ ಬಗ್ಗೆ ನನಗೆ ಸಂಪೂರ್ಣವಾಗಿ ತಿಳಿದಿಲ್ಲ ಎಂದು ನನಗೆ ಸ್ಪಷ್ಟವಾಗಿ ಹೇಳುತ್ತೇನೆ ಎಂದು ಅವರು ಹೇಳಿದ್ದಾರೆ.

ಈ ಬಗ್ಗೆ ರಾಜ್ಯಸಭಾ ಸಂಸದೆ ಮತ್ತು ಶಿವಸೇನೆ ವಕ್ತಾರ ಪ್ರಿಯಾಂಕಾ ಚತುರ್ವೇದಿ ಅವರು ಪ್ರತಿಕ್ರಿಯಿಸಿದ್ದು, ಸಚಿವ ಸಂಪುಟದ ಹಿರಿಯ ಸಚಿವರೊಬ್ಬರು ಡಿಜಿಟಲ್ ವೇದಿಕೆಗೆ ನೀಡಿದ ಸಂದರ್ಶನದ ಪ್ರಕಾರ, ಮಹಾರಾಷ್ಟ್ರದಲ್ಲಿ ಬಿಜೆಪಿಯನ್ನು ಹೇಗೆ ಅಧಿಕಾರಕ್ಕೆ ತರಬೇಕು ಎಂದು ನಿರ್ಧರಿಸುವ ಸಭೆಗಳಲ್ಲಿ ಗೌತಮ್ ಅದಾನಿ ಭಾಗವಹಿಸಿದ್ದಾರೆ. ಇದು ಕೆಲವು ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ ಎಂದು ಹೇಳಿದ್ದಾರೆ.

ಅವರು ಬಿಜೆಪಿಯ ಅಧಿಕೃತ ಸಂಧಾನಕಾರರೇ ಮೈತ್ರಿಗಳನ್ನು ಸರಿಪಡಿಸುವ ಜವಾಬ್ದಾರಿಯನ್ನು ಅವರಿಗೆ ನೀಡಲಾಗಿದೆಯೇ ಮಹಾರಾಷ್ಟ್ರದಲ್ಲಿ ಯಾವುದೇ ಬೆಲೆ ತೆತ್ತಾದರೂ ಬಿಜೆಪಿಯನ್ನು ಅಧಿಕಾರಕ್ಕೆ ತರಲು ಉದ್ಯಮಿಯೊಬ್ಬರು ಏಕೆ ಇಷ್ಟು ಉತ್ಸಾಹದಿಂದ ಮತ್ತು ನಿಕಟವಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಅವರು ಕೇಳಿದ್ದಾರೆ. ಕಾಂಗ್ರೆಸ್ ಪಕ್ಷವು ಈ ಬಗ್ಗೆ ಯಾವುದೇ ಪ್ರತಿಕ್ರಿಯೆಗಳನ್ನು ನೀಡುವುದಿಲ್ಲ ಎಂದು ಹೇಳಿದ್ದಾಗಿ **TNIE** ವರದಿ ಮಾಡಿದೆ.

ಅಷ್ಟೆ ಅಲ್ಲದೆ, ಅದಾನಿ ಗ್ರೂಪ್ನ ವಕ್ತಾರರೂ ಇದಕ್ಕೆ ಪ್ರತಿಕ್ರಿಯಿಸಲು ನಿರಾಕರಿಸಿದೆ. ಈ ಸಭೆ ಐದು ವರ್ಷಗಳ ಹಿಂದೆ ನಡೆದಿದೆ ಎಂದು ಅಜಿತ್ ಪವಾರ್ ಸಂದರ್ಶನದಲ್ಲಿ ಹೇಳಿದ್ದರೂ, ಅವರು ಪ್ರಸ್ತಾಪಿಸಿದ ಸಭೆ 2017 ರಲ್ಲಿ ಸಂಭವಿಸಿದೆ ಎಂದು ಬಿಜೆಪಿ ಮೂಲಗಳು ತಿಳಿಸಿವೆ

# ಭ್ರಷ್ಟಾಚಾರದ ಕೂಪದಲ್ಲಿ ಕುಳಿತ ಸಿಎಂ: ಛಲವಾದಿ ನಾರಾಯಣಸ್ವಾಮಿ ಆರೋಪ

**ಬೆಂಗಳೂರು, ನ, 12;** ಕಾಂಗ್ರೆಸ್ ಸರಕಾರವು 38 ಇಲಾಖೆಗಳಲ್ಲಿ ಭ್ರಷ್ಟಾಚಾರದಲ್ಲಿ ಮುಳುಗಿದೆ. ಇದೆಲ್ಲವನ್ನೂ ನಮ್ಮ ಮುಖಂಡರು ಒಂದೊಂದಾಗಿ ಬೆಳಕಿಗೆ ತರುತ್ತಿದ್ದಾರೆ. ಮುಖ್ಯಮಂತ್ರಿಗಳು ಭ್ರಷ್ಟಾಚಾರದ ಕೂಪದಲ್ಲಿ ಕುಳಿತಿದ್ದಾರೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದ್ದಾರೆ. ನಗರದ ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿಗಳ ಕುಟುಂಬವು ಮುಡಾದ 14 ನಿವೇಶನ ವಾಪಸ್ ಮಾಡಿದ್ದು, ಪ್ರಿಯಾಂಕ್ ಖರ್ಗೆಯವರು 5 ಎಕರೆ ವಾಪಸ್ ಮಾಡಿದ್ದರಿಂದ ಭ್ರಷ್ಟಾಚಾರ ಸಾಬೀತಾಗಿದೆ. ಅದರ ತನಿಖೆ ಏನಿದ್ದರೂ ನಿಮ್ಮ ಕಸರತ್ತು ಅಷ್ಟೇ ಎಂದು ವ್ಯಂಗ್ಯವಾಡಿದರು. ಸಿದ್ದರಾಮಯ್ಯನವರೇ, ನೀವು ಮಾತನಾಡುವಾಗ ಯಾವ ಮಟ್ಟಕ್ಕೆ ಹೋಗುತ್ತೀರಿ ಪ್ರಧಾನಿಯವರ ಯೋಗ್ಯತೆ, ತಮ್ಮ ಯೋಗ್ಯತೆಯನ್ನು ಅರ್ಥ ಮಾಡಿಕೊಳ್ಳಬೇಕು. ವಯಸ್ಸು, ಅಧಿಕಾರದಲ್ಲಿ ನೀವು ಅವರ ಮಟ್ಟಕ್ಕಿದ್ದರೆ ಅವರನ್ನು ಪ್ರಶ್ನೆ ಮಾಡುವುದರಲ್ಲಿ ಅರ್ಥವಿದೆ. ಸಣ್ಣಸಣ್ಣ ವ್ಯಕ್ತಿಗಳೂ ಪ್ರಧಾನಮಂತ್ರಿಗಳನ್ನು ಕೀಳು ಭಾಷೆಯಲ್ಲಿ ಮಾತನಾಡುವುದು ಎಷ್ಟು ಸರಿ ಎಂದು ಕೇಳಿದರು.



ಈಚೆಗೆ ವೈನ್ ಮರ್ಚೆಂಟ್ ಅಸೋಸಿಯೇಶನ್ನವರು ಒಂದು ಆಪಾದನೆ ಮಾಡಿದ್ದಾರೆ. ಸುಮಾರು 500 ಕೋಟಿಗಳಷ್ಟು ಹಣವನ್ನು ಅಬಕಾರಿ ಸಚಿವರು ವಸೂಲಿ ಮಾಡಿದ್ದಾಗಿ ಅವರೇ ಹೇಳಿದ್ದಾರೆ. ಬಳಿಕ ಸುಳಿಗೆ ನಮ್ಮ ಗಮನಕ್ಕೂ ಬಂದಿದ್ದು, 700 ಕೋಟಿ ಲೂಟಿಯಾಗಿದೆ ಎಂದು ನಾವು ತಿಳಿಸಿದ್ದೆವು. ಇದು ಚುನಾವಣೆ ನಡೆಯುವ ಕಾರಣ ನಡೆದಿದೆ. ಈ ವಿಚಾರವನ್ನು ನಮ್ಮ ಪ್ರಧಾನಿಗಳು ಮಹಾರಾಷ್ಟ್ರದ ಚುನಾವಣೆ ಪ್ರಚಾರದ ಸಂದರ್ಭದಲ್ಲಿ ತಿಳಿಸಿದ್ದಾರೆ ಎಂದು ವಿವರಿಸಿದರು. ವೈನ್ ಮರ್ಚೆಂಟ್‌ಗಳಿಗೆ ಆಗುವ ತೊಂದರೆಗಳನ್ನು ಮುಂದಿಟ್ಟುಕೊಂಡು 25ರಂದು ಇಡೀ ರಾಜ್ಯದಲ್ಲಿ ಅಂಗಡಿ ಮುಂಗಟ್ಟುಗಳ ಬಾಗಿಲು ಹಾಕಿ ಹೋರಾಟ ಮಾಡುವುದಾಗಿ ಘೋಷಿಸಿದ್ದಾರೆ. ಅಬಕಾರಿ ಇಲಾಖೆಯಲ್ಲಿ ಹೊಸದಾಗಿ ಲೈಸನ್ಸ್ ಪಡೆಯಲು 4.50 ಲಕ್ಷ ರೂ. ಸರಕಾರಿ ಶುಲ್ಕ ಕಟ್ಟಬೇಕಿದೆ. ಹೊಸ ಲೈಸನ್ಸ್ ಪಡೆಯಲು 70–80 ಲಕ್ಷ ಖರ್ಚಾಗುತ್ತದೆ. ಇದು ಎಲ್ಲಿ ಹೋಗುತ್ತದೆ ಎಂದು ಛಲವಾದಿ ನಾರಾಯಣಸ್ವಾಮಿ ಅವರು ಪ್ರಶ್ನಿಸಿದರು.

ಒಂದು ವರ್ಷಕ್ಕೆ ಲೈಸನ್ಸ್ ನವೀಕರಿಸಲು 4.60 ಲಕ್ಷ ರೂ. ಕಟ್ಟಬೇಕು. 6 ಲಕ್ಷ ಲಂಚ ಕೊಡಬೇಕು. ಇದು ಎಲ್ಲರಿಗೂ ಗೊತ್ತಿರುವ ಸತ್ಯ. ಇದಾದ ನಂತರ ಏನೇ ದೂರುಗಳಿಲ್ಲದಿದ್ದರೂ ಒಂದು ಬಾರ್ ಅಂಡ್ ರೆಸ್ಟೋರೆಂಟ್ ಅಥವಾ ಒಂದು ಮದ್ಯದ ಅಂಗಡಿಯವರ ಮೇಲೆ ಇಲಾಖೆಯು 2 ಕೇಸ್ ಕಡ್ಡಾಯವಾಗಿ ಹಾಕುತ್ತದೆ. ಆಪಾದನೆ ತಪ್ಪಿಸಲು ಕೇಸ್ ಹಾಕುವುದಲ್ಲದೆ, 2 ಸಾವಿರ ರೂ. ದಂಡ, 25 ಸಾವಿರ ಲಂಚ ಕೇಳುತ್ತಾರೆ ಎಂದು ಆರೋಪಿಸಿದರು. ಅಬಕಾರಿ ಇಲಾಖೆ ಹಗರಣವನ್ನು ಅಲ್ಲಗಳೆಯುವ ಭರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನೀವು ಭ್ರಷ್ಟಾಚಾರ ಸಾಬೀತು ಪಡಿಸಿದರೆ ನಾನು ರಾಜಕೀಯ ನಿವೃತ್ತಿ ಪಡೆಯುವುದಾಗಿ ಹೇಳಿದ್ದಾರೆ. ಗುತ್ತಿಗೆದಾರರ ಸಂಘದವರು ಬಿಜೆಪಿ ಸರಕಾರ ಶೇ 40 ವಸೂಲಿ ಮಾಡುತ್ತಿದೆ ಎಂದು ಆಪಾದಿಸಿದ್ದರಲ್ಲವೇ? ಅದನ್ನು ಅವರು ಸಾಬೀತು ಪಡಿಸಿದ್ದಾರಾ ನೀವು ಅದನ್ನು ಚುನಾವಣಾ ಮುಖ್ಯ ವಿಷಯ ಮಾಡಿಕೊಂಡಿರಲ್ಲವೇ ಇದುವರೆಗೂ ಅದನ್ನು ಸಾಬೀತುಪಡಿಸಲು ನಿಮಗೆ ಆಗಿದೆಯೇ ಎಂದು ಪ್ರಶ್ನೆಗಳನ್ನು ಕೇಳಿದರು.

ಗುತ್ತಿಗೆದಾರರ ಸಂಘ ಸತ್ಯ ಹೇಳಿದ್ದೆಂದು ತಿಳಿಸುವ ಮತ್ತು ನಂಬುವ ಮುಖ್ಯಮಂತ್ರಿಗಳು ವೈನ್ ಮರ್ಚೆಂಟ್ ಅಸೋಸಿಯೇಶನ್ನ ಆರೋಪವನ್ನು ಅಲ್ಲಗಳೆಯಲು ಕಾರಣ ಏನಿದೆ? ಎಂದು ಕೇಳಿದರಲ್ಲದೆ, ಸಿದ್ದರಾಮಯ್ಯನವರು ಭ್ರಷ್ಟಾಚಾರದ ಪಿತಾಮಹ ಎಂದು ಆರೋಪಿಸಿದರು. ಮಾಡುವುದನ್ನು ಮಾಡಿ ಅದನ್ನು ಮರೆಮಾಚುವ ಪರಿಪಾಠವನ್ನು ಸಿಎಂ ಅವರು ಮೈಗೂಡಿಸಿಕೊಂಡಿದ್ದಾರೆ. ಪತ್ರಕರ್ತರು ಪ್ರಶ್ನಿಸಿದರೆ, ನೀನ್ಯಾರು ಕೇಳಲಿಕ್ಕೆ ಎನ್ನುತ್ತಾರೆ. ಪತ್ರಕರ್ತರು ಇರುವುದೇ ಸತ್ಯಾಂಶಗಳನ್ನು ಹೊರಕ್ಕೆ ತರಲು ಎಂದು ಗಮನ ಸೆಳೆದರು. ಭ್ರಷ್ಟಾಚಾರ ಮಾಡುವುದೇ ಅಬಕಾರಿ ಇಲಾಖೆ– ಸಚಿವರ ಕೆಲಸ. ಡಿ.ಸಿ.ಗಳು, ಎ.ಸಿಗಳಿಗೆ ವರ್ಗಾವಣೆಗೂ ಹಣ ನಿಗದಿಯಾಗಿದೆ ಎಂದು ದೂರಿದರು.

ಮದ್ಯಪಾನ ಸಂಯಮ ಮಂಡಳಿ ಕುಡಿಯಬಾರದೆಂದು ಗಾಂಧೀಜಿ ತತ್ವಗಳನ್ನು ಮುಂದಿಟ್ಟರೆ, ಸರಕಾರ ಅಬಕಾರಿ ಇಲಾಖೆಗೆ ಹೆಚ್ಚು ಮಾರಾಟದ, ಹಣ ಸಂಗ್ರಹದ ವಿಚಾರದಲ್ಲಿ ತನ್ನ ಗುರಿ ನಿಗದಿ ಮಾಡುತ್ತದೆ ಎಂದು ಟೀಕಿಸಿದರು.

**3 ಉಪ ಚುನಾವಣೆಗಳಲ್ಲಿ ಹೆಂಡ, ಹಣದ ಹೊಳೆ:** ಶ್ರೀಮಂತರು ಹೇಗೋ ಕುಡಿದುಕೊಳ್ಳುತ್ತಾರೆ. ಬಡವರು ಇಲ್ಲಿ ಟಾರ್ಗೆಟ್ ಆಗುತ್ತಾರೆ. ಗ್ಯಾರಂಟಿ ಜಾರಿ ಕುರಿತು ಹೇಳಿ ಮದ್ಯದ ಬೆಲೆ ಏರಿಸುತ್ತಾರೆ. ವೈನ್ ಮಾರಾಟಗಾರರ ಸಂಘದ ಆಪಾದನೆ ಮೇಲೆ ಸಿಎಂ ಕ್ರಮ ಜರುಗಿಸಿದ್ದಾರಾ? ತಲೆಯನ್ನೇ ಕೆಡಿಸಿಕೊಂಡಿಲ್ಲ. ಈ 3 ಉಪ ಚುನಾವಣೆಗಳಲ್ಲಿ ಹೆಂಡದ ಹಣದ ಹೊಳೆ ಹರಿದಿದೆ. ಕಾಂಗ್ರೆಸ್ಸಿನವರು ಗೆದ್ದೇಗೆಲ್ಲುವುದಾಗಿ ಹೇಳುತ್ತಿದ್ದಾರೆ. ನಿಮ್ಮ ನಾಲಿಗೆಗಳನ್ನು ಎಷ್ಟು ಹರಿಬಿಟ್ಟಿದ್ದೀರೆಂದು ಜನರು ನೋಡುತ್ತಿದ್ದಾರೆ ಎಂದು ಛಲವಾದಿ ನಾರಾಯಣಸ್ವಾಮಿ ಅವರು ಆಕ್ಷೇಪಿಸಿದರು. ರಾಜ್ಯದ ಕಾಂಗ್ರೆಸ್ ಸರಕಾರ ಸಂಪೂರ್ಣವಾಗಿ ಭ್ರಷ್ಟಾಚಾರದಲ್ಲಿ ಮುಳುಗಿದೆ ಎಂದು ಆರೋಪಿಸಿದರಲ್ಲದೆ, ರಾಜ್ಯ ಸರಕಾರದ ಭ್ರಷ್ಟಾಚಾರ, ಹಗರಣಗಳನ್ನು ಬಯಲಿಗೆ ತರುವ ಮೂಲಕ ಆ ಕುರಿತು ಪದೇಪದೇ ಗಮನ ಸೆಳೆಯಲಾಗುತ್ತಿದೆ ಎಂದು ತಿಳಿಸಿದರು. ಪಕ್ಷದ ರಾಜ್ಯ ಮುಖ್ಯ ವಕ್ತಾರ ಅಶ್ವತ್ಥನಾರಾಯಣ್, ರಾಜ್ಯ ವಕ್ತಾರ ಪ್ರಕಾಶ್ ಅವರು ಇದ್ದರು.



ಬೆಂಗಳೂರಿನ ಗಾಂಧಿ ಭವನದಲ್ಲಿ ಮಂಗಳವಾರ ನಡೆದ ಕರ್ನಾಟಕ ರೈತಸಂಘಗಳ ಏಕೀಕರಣ ಸಮಾವೇಶದಲ್ಲಿ ಶಾಸಕ ದರ್ಶನ್ ಪುಟ್ಟಣ್ಣಯ್ಯ ಹಾಗೂ ರೈತ ಮುಖಂಡರು ಪಾಲ್ಗೊಂಡಿದ್ದರು.

# ಭಾರತ ಆರೋಗ್ಯ ಕ್ಷೇತ್ರದಲ್ಲಿ ಆಮೂಲಾಗ್ರ ಬದಲಾವಣೆ: ಎಚ್.ಡಿ.ಕೆ

**ಬೆಂಗಳೂರು, ನ. 12 :** ಆರೋಗ್ಯವಂತ ಭಾರತ ನಿರ್ಮಾಣಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಬಹುದೊಡ್ಡ ಕ್ರಾಂತಿ ಆಗಿದೆ ಎಂದು ಕೇಂದ್ರದ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಹೇಳಿದರು. ರಾಜರಾಜೇಶ್ವರಿ ವೈದ್ಯಕೀಯ ಕಾಲೇಜಿನ 14ನೇ ಬ್ಯಾಚ್‌ನ (2023) ಘಟಿಕೋತ್ಸವದಲ್ಲಿ ಭಾಗವಹಿಸಿ ಘಟಿಕೋತ್ಸವ ಭಾಷಣ ಮಾಡಿದ ಅವರು, ಕಳೆದ ಹತ್ತು ವರ್ಷಗಳ ಅವಧಿಯಲ್ಲಿ ಭಾರತ ಆರೋಗ್ಯ ಕ್ಷೇತ್ರದಲ್ಲಿ ಆಮೂಲಾಗ್ರ ಬದಲಾವಣೆಯನ್ನು ಕಂಡಿದೆ ಎಂದರು. ಶ್ರೀಸಾಮಾನ್ಯನಿಗೂ ಅತ್ಯಂತ ಸುಲಭ ದರದಲ್ಲಿ ಆರೋಗ್ಯ ಸೇವೆ ಲಭ್ಯವಾಗುತ್ತಿದೆ.

ಪ್ರಧಾನಿಗಳ ಸಾಮಾಜಿಕ ಕಾಳಜಿ ಹಾಗೂ ದೂರದೃಷ್ಟಿಯಿಂದ ಇದೆಲ್ಲಾ ಸಾಧ್ಯವಾಗಿದೆ ಎಂದು ಅವರು ಹೇಳಿದರು. ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ನಮ ದೇಶದಲ್ಲಿ ಆರೋಗ್ಯ ವ್ಯವಸ್ಥೆ ಅತ್ಯಂತ ಬಲಿಷ್ಠವಾಗಿ ಬೆಳೆದಿದ್ದು, ದೇಶದ ಆರ್ಥಿಕ, ಸಾಮಾಜಿಕ ಅಭಿವೃದ್ಧಿಗೆ ಬೆನ್ನೆಲುಬಾಗಿ ಕೆಲಸ ಮಾಡುತ್ತಿದೆ. ಈಗ ಪ್ರತಿಯೊಬ್ಬ ನಾಗರಿಕನಿಗೂ ಅತ್ಯಂತ ಗುಣಮಟ್ಟದ ವೈದ್ಯಕೀಯ ಸೇವೆ ದೊರೆಯುತ್ತಿದೆ ಎಂದು ಅವರು ಹೇಳಿದರು. ಕಳೆದ ಹತ್ತು ವರ್ಷಗಳಲ್ಲಿ ಆರೋಗ್ಯ ಕ್ಷೇತ್ರದಲ್ಲಿ ಅನೇಕ ಸುಧಾರಣೆಗಳು ಜಾರಿಗೆ ಬಂದಿವೆ.




ಅದರಲ್ಲಿ ಆಯುಷಾನ್ ಭಾರತ್ ಯೋಜನೆಯು ಒಂದು. ಇದು ಜಗತ್ತಿನಲ್ಲಿಯೇ ಅತಿದೊಡ್ಡ ಆರೋಗ್ಯ ಸೇವಾ ಯೋಜನೆ. ದೇಶದ 500 ದಶಲಕ್ಷ ಜನರು ಆರೋಗ್ಯ ವಿಮೆ ವ್ಯಾಪ್ತಿಗೆ ಬಂದಿದ್ದಾರೆ. ಜತೆಗೆ, ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆ, ಪಿಎಂ ಆತನಿರ್ಭರ ಸ್ವಾಸ್ಥ ಭಾರತ್ ಯೋಜನೆ, ಡಿಜಿಟಲ್ ಆರೋಗ್ಯ ಮಿಷನ್, ಮಿಶನ್ ಇಂದ್ರ ಧನುಷ್, ಜನೌಷಧಿ ಕೇಂದ್ರಗಳ ಸ್ಥಾಪನೆ ಸೇರಿದಂತೆ ಅನೇಕ ಸರಿಸಾಟಿ ಇಲ್ಲದ ಕಾರ್ಯಕ್ರಮಗಳನ್ನು ಮೋದಿ ಸರ್ಕಾರ ಜಾರಿ ಮಾಡಿದೆ ಎಂದರು.ಈ ಸಂದರ್ಭದಲ್ಲಿ ರಾಜರಾಜೇಶ್ವರಿ ವೈದ್ಯ ಕಾಲೇಜಿನ ಸಂಸ್ಥಾಪಕ ಕುಲಪತಿ ಡಾ.ಎ.ಸಿ.ಷಣುಗಂ, ಕಾಲೇಜಿನ ಅಧ್ಯಕ್ಷ ಅರುಣ್ ಕುಮಾರ್, ಡೀನ್ ಡಾ.ಸತ್ಯಮೂರ್ತಿ, ಕಾರ್ಯ ನಿರ್ವಾಹಕ ನಿರ್ದೇಶಕ ಡಾ.ಎಸ್.ವಿಜಯಾನಂದ ಮುಂತಾದವರು ಉಪಸ್ಥಿತರಿದ್ದರು.

# ಎಚ್‌ಎಂಟಿ ಭೂಮಿ: ಐಎಫ್‌ಎಸ್ ಅಧಿಕಾರಿಗಳಿಗೆ ನೋಟಿಸ್

**ಬೆಂಗಳೂರು, ನ. 12 :** ಎಚ್.ಎಂ.ಟಿ. ವಶದಲ್ಲಿರುವ ಅರಣ್ಯ ಭೂಮಿ, ಅರಣ್ಯ ಸ್ವರೂಪ ಕಳೆದುಕೊಂಡಿದೆ ಎಂದು ಡಿನೋಟಿಫಿಕೇಷನ್ಗೆ ಅನುಮತಿ ಕೋರಿ ಅರ್ಜಿ ಸಲ್ಲಿಸಿದ್ದ ನಿವೃತ್ತ ಐಎಎಸ್ ಅಧಿಕಾರಿ ಮತ್ತು ಮೂವರು ಐ.ಎಫ್.ಎಸ್. ಅಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ನೀಡಲಾಗಿದೆ.



ಈ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾಗಿ ನಿವೃತ್ತರಾಗಿರುವ ಸಂದೀಪ್ ದವೆ, ನಿವೃತ್ತ ಪ್ರಧಾನ ಕಾರ್ಯದರ್ಶಿ ವಿಜಯಕುಮಾರ್ ಗೋಗಿ ಹಾಗೂ ಹಾಲಿ ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಾಗಿರುವ ಐಟಿಸಿ ವಿಭಾಗದ ಸ್ಮಿತಾ ಬಿಜ್ಜೂರ್, ತಾಂತ್ರಿಕ ಕೋಶದ ಆರ್. ಗೋಕುಲ್ ಅವರಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿದೆ.ಅನ್ಯ ಉದ್ದೇಶಕ್ಕೆ ಭೂ ಪರಿವರ್ತನೆ ಆಗದ ಹೊರತು ಒಮ್ಮೆ ಅರಣ್ಯ ಎಂದು ನಮೂದಾದ ಭೂಮಿ ಎಂದೆಂದಿಗೂ ಅರಣ್ಯವೇ ಆಗಿರುತ್ತದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಹೀಗಾಗಿ ಅರಣ್ಯ ಸಂರಕ್ಷಣಾ ಕಾಯಿದೆ 1980ರಡಿ ಅರಣ್ಯ ಭೂಮಿಯನ್ನು ಅರಣ್ಯೇತರ ಬಳಕೆಗೆ ಪರಿಹಾರ ಭೂಮಿ ಒದಗಿಸುವುದರೊಂದಿಗೆ ಎನ್.ಪಿ.ವಿ.ಮೊತ್ತ ಪಾವತಿಸಿ ಕಡ್ಡಾಯವಾಗಿ ಅನುಮತಿ ಪಡೆಯಬೇಕಾಗುತ್ತದೆ.

ನಿಯಮಾವಳಿ ಉಲ್ಲಂಘನೆಹೀಗೆ ಅನುಮತಿ ನೀಡಿದರೂ ಸಹ ಅರಣ್ಯ ಭೂಮಿಯನ್ನು ಗುತ್ತಿಗೆ ಮಾತ್ರ ನೀಡಿ, ಗುತ್ತಿಗೆ ಅವಧಿ ಮುಗಿದ ಬಳಿಕ ಅರಣ್ಯ ಇಲಾಖೆಗೆ ಮರಳಿ ಪಡೆಯಬೇಕಾಗುತ್ತದೆ. ಆದರೆ ಎಚ್.ಎಂ.ಟಿ. ತನ್ನ ವಶದಲ್ಲಿರುವ ಅರಣ್ಯ ಭೂಮಿಯನ್ನು ವಿವಿಧ ಸರ್ಕಾರಿ, ಖಾಸಗಿ ಸಂಸ್ಥೆ, ವ್ಯಕ್ತಿಗಳಿಗೆ ಭಾಗಶಃ ಮಾರಾಟ ಮಾಡಿದೆ.

ನಿಯಮ ಉಲ್ಲಂಘನೆ ಮತ್ತು ಕರ್ತವ್ಯಲೋಪ ಎಸಗಿ, ಅರಣ್ಯ, ಪರಿಸರಕ್ಕೆ ಘೋರ ಅನ್ಯಾಯ ಎಸಗಲು ಕಾರಣರಾಗಿದೆ. ನಿಯಮ ಉಲ್ಲಂಘಿಸಿ ಸಾವಿರಾರು ಕೋಟಿ ರೂ. ಬೆಲೆ ಬಾಳುವ ಭೂಮಿಯನ್ನು ಡಿ ನೋಟಿಫೈ ಮಾಡಲು ಐಎ ಸಲ್ಲಿಸಿದ ಅಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ನೀಡುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದರು.

## ಟ್ಯಾಕ್ಸಿಕ್ ಚಿತ್ರ ವಿರುದ್ಧ ಎಫ್‌ಐಆರ್ ದಾಖಲೆ

**ಬೆಂಗಳೂರು, ನ. 12 :** ಅಕ್ರಮವಾಗಿ ಮರ ಕಡಿದಿದ್ದರ ಕಾರಣ ಟ್ಯಾಕ್ಸಿಕ್ ಚಿತ್ರ ತಂಡದ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಆದರೇ ಇದೇ ಕಾರಣಕ್ಕೆ ಚಿತ್ರ ಬಿಡುಗಡೆಗೆ ಯಾವುದೇ ತೊಂದ್ರೆ ಇಲ್ಲ. ಚಿತ್ರತಂಡದ ನಿರ್ಧರಿಸಿದಂತೆ ಸಿನಿಮಾ ಬಿಡುಗಡೆಯಾಗಲಿದೆ ಎಂಬುದಾಗಿ ಅರಣ್ಯ ಸಚಿವ ಈಶ್ವರ್ ಖಂಡ್ರೆ ಹೇಳಿದ್ದಾರೆ. ಮಂಗಳವಾರ ವಿಕಾಸಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದಂತ ಅವರು, ಪೀಣ್ಯದ ಹೆಚ್.ಎಂ.ಟಿ ಅರಣ್ಯ ಪ್ರದೇಶದಲ್ಲಿ ಟ್ಯಾಕ್ಸಿಕ್ ಸಿನಿಮಾ ಚಿತ್ರೀಕರಣಕ್ಕಾಗಿ ಅಕ್ರಮವಾಗಿ ಮರಗಳನ್ನು ಕಡಿದಿದ್ದು ಗಮನಕ್ಕೆ ಬಂದಿತ್ತು. ಸ್ಥಳಕ್ಕೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ಕೂಡ ನಡೆಸಿದ್ದರು ಎಂದರು.

ಈ ಹಿಂದೆ ಹೆಚ್.ಎಂ.ಟಿ. ಅರಣ್ಯ ಪ್ರದೇಶದಲ್ಲಿ ಮರಗಳು ಹೇಗಿದ್ದವು. ಟ್ಯಾಕ್ಸಿಕ್ ಚಿತ್ರೀಕರಣದ ಸಮಯದಲ್ಲಿ ಹೇಗಿದೆ ಎನ್ನುವ ಸ್ಯಾಟಲೈಟ್ ಚಿತ್ರಗಳನ್ನು ಬಿಡುಗಡೆ ಮಾಡಲಾಗಿತ್ತು. ಅದರಲ್ಲಿ ಅಕ್ರಮವಾಗಿ ಮರಗಳನ್ನು ಕಡಿದದ್ದು ಗಮನಕ್ಕೆ ಬಂದಿತ್ತು ಎಂದು ತಿಳಿಸಿದರು. ಅನುಮತಿಯಿಲ್ಲದೇ ಅರಣ್ಯ ಪ್ರದೇಶದಲ್ಲಿನ ಮರಗಳನ್ನು ಕಡಿದಿದ್ದರಿಂದಾಗಿ ಟ್ಯಾಕ್ಸಿಕ್ ಚಿತ್ರತಂಡ ಸೇರಿದಂತೆ ಇತರರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಯಾರು ಮರ ಕಡಿದಿದ್ದಾರೋ ಗೊತ್ತಿಲ್ಲ. ಮರ ಕಡಿದವ ವಿರುದ್ಧ ಕಾನೂನು ಕ್ರಮವಾಗಲಿದೆ ಎಂಬುದಾಗಿ ಹೇಳಿದರು.

# ಬೆಳ್ಳಂಬೆಳಗ್ಗೆ ಲೋಕಾಯುಕ್ತ ಅಧಿಕಾರಿಗಳ ದಾಳಿ

**ಬೆಂಗಳೂರು, ನ. 12 :** ಕರ್ನಾಟಕದ ನಾನಾ ಸ್ಥಳಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ಬೆಳ್ಳಂಬೆಳಿಗ್ಗೆ ದಾಳಿನಡೆಸಿದ್ದಾರೆ. ಭ್ರಷ್ಟ ಅಧಿಕಾರಿಗಳ ಮನೆಗಳ ಮೇಲೆ ದಾಳಿ ನಡೆಸಿ ಶಾಕ್ ನೀಡಿದ್ದಾರೆ. ಬೀದರ್, ಮೈಸೂರು, ಧಾರವಾಡ, ಬೆಳಗಾವಿ ಸಹಿತ ಹಲವು ಕಡೆಗಳಲ್ಲಿ ನಾನಾ ಇಲಾಖೆಗಳ ಅಧಿಕಾರಿಗಳ ನಿವಾಸದ ಮೇಲೆ ದಾಳಿ ನಡೆದಿದೆ. ಈಗಾಗಲೇ ಅಧಿಕಾರಿಗಳಿಂದ ಮಾಹಿತಿ ಕಲೆ ಹಾಕುತ್ತಿರುವ ಲೋಕಾಯುಕ್ತ ತಂಡಗಳು, ಅಕ್ರಮ ಆಸ್ತಿ, ಹಣದ ಮೇಲೆ ನಿಗಾ ಇರಿಸಿವೆ. ಮನೆಯಲ್ಲಿ ಸಂಗ್ರಹವಾಗಿರುವ ಆಭರಣಗಳು, ಐಷಾರಾಮಿ ವಸ್ತುಗಳು, ಕಾರು, ಬೈಕ್, ಮನೆ, ತೋಟ, ಜಮೀನು ಸಹಿತ ವಿವಿಧ ಆಸ್ತಿಗಳ ಮಾಹಿತಿಯನ್ನು ಜಾಲಾಡುತ್ತಿದ್ದಾರೆ. ಇದು ಸಂಜೆವರೆಗೂ ಮುಂದುವರೆಯಲಿದ್ದು, ರಾತ್ರಿ ಹೊತ್ತಿಗೆ ಅಕ್ರಮ ಆಸ್ತಿ ವಿವರ, ಅಧಿಕಾರಿಗಳ ದಾಳಿ ಮಾಹಿತಿ ಸಿಗಲಿದೆ.

ಬೀದರ್ ನಲ್ಲಿ ದಾಳಿ–ಗಡಿಜಿಲ್ಲೆ ಬೀದರ್‌ನಲ್ಲಿ ಬೆಳ್ಳಂಬೆಳ್ಳಿಗೆ ಬೀದರ್ ಜಿಲ್ಲಾ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕ ರವೀಂದ್ರಕುಮಾರ್ ರೊಟ್ಟೆ ಅವರ ನಿವಾಸದ ಮೇಲೆ ಲೋಕಾಯುಕ್ತ ದಾಳಿ ನಡೆದಿದೆ. ಅಕ್ರಮ ಆಸ್ತಿ ಗಳಿಕೆ ಹಿನ್ನೆಲೆ ಲೋಕಾ ಪೊಲೀಸರ ತಂಡ ದಾಳಿ ನಡೆಸಿ ಎಲ್ಲಾ ದಾಖಲೆಗಳನ್ನು ಪರಿಶೀಲಿಸುತ್ತಿದೆ. ರವೀಂದ್ರಕುಮಾರ್ ರೊಟ್ಟೆಗೆ ಲೋಕಾ ಶಾಕ್ ನೀಡಿದ್ದು, ಅವರ ಬೀದರ್, ಬೆಂಗಳೂರು ನಿವಾಸದ ಮೇಲೆ ದಾಳಿ ಮಾಡಲಾಗಿದೆ. ಬೀದರ್‌ನ ನೌಬಾದ್‌ನಲ್ಲಿರುವ ಕಚೇರಿ ಮೇಲೆ ಏಕಕಾಲಕ್ಕೆ ದಾಳಿಯಾಗಿದ್ದು ಬೀದರ್‌ನ ಗುಂಪಾ ನಿವಾಸದಲ್ಲೂ ದಾಖಲೆಗಳ ಪರಿಶೀಲನೆ ನಡೆದಿದೆ. ಲೋಕಾಯುಕ್ತ ಡಿವೈಎಸ್ಪಿ ಹನುಮಂತ ನೇತೃತ್ವದಲ್ಲಿ ದಾಳಿ ನಡೆಸಲಾಗಿದೆ. ಸದ್ಯ ಬೀದರ್ ಜಿಲ್ಲಾ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕ ರವೀಂದ್ರಕುಮಾರ್ ರೊಟ್ಟೆ ಇದಕ್ಕೂ ಮೊದಲು ಬೀದರ್ ಡಿಸಿ ಕಚೇರಿಯಲ್ಲಿ ಶಿರಸ್ತೇದಾರ ಹಾಗೂ ಬಿಬಿಎಂಪಿಯಲ್ಲಿ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದಾರೆ. ಮೈಸೂರಲ್ಲೂ ದಾಳಿ–ಮೈಸೂರು ಮಹಾನಗರ ಪಾಲಿಕೆಯ ವಲಯ ಸಹಾಯಕ ಆಯುಕ್ತರಾಗಿರುವ ನಾಗೇಶ್ ಅವರ ಮನೆ ಮೇಲೂ ದಾಳಿಯಾಗಿದೆ. ]ಮೈಸೂರಿನಲ್ಲಿರುವ ಅವರ ಕಚೇರಿ, ಮನೆಯ ಜತೆಗೆ ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣದಲ್ಲಿರುವ ನಾಗೇಶ್ ನಿವಾಸದ ಮೇಲೆ ದಾಳಿ ಮಾಡಲಾಗಿದೆ.

ಮೈಸೂರು ಲೋಕಾಯುಕ್ತ ಎಸ್ಪಿ ಟಿ.ಜೆ. ಉದೇಶ್ ಮಾರ್ಗದರ್ಶನದಲ್ಲಿಯೇ ದಾಳಿ ನಡೆಸಿ ದಾಖಲೆಗಳನ್ನು ಜಪ್ತಿ ಮಾಡಲಾಗಿದೆ. ನಾಗೇಶ್ ಅವರು ಚನ್ನಪಟ್ಟಣ ನಗರಸಭೆ ಆಯುಕ್ತ, ಶ್ರೀರಂಗಪಟ್ಟಣ ತಹಸಿಲ್ದಾರ್ ಕೂಡ ಆಗಿದ್ದರು. ಧಾರವಾಡ, ಬೆಳಗಾವಿ–ಧಾರವಾಡದಲ್ಲಿ ಕೆಐಎಡಿಬಿ ಎಇಇ ಗೋವಿಂದ ಭಜಂತ್ರಿ ಮನೆ ಮೇಳೆ ದಾಳಿಯಾಗಿದೆ.

# ವಿಜ್ಞಾನ–ತಂತ್ರಜ್ಞಾನ ಇಲಾಖೆಯ ಟೆಲಿಸ್ಕೋಪ್ ವಿತರಣಾ ಕಾರ್ಯಕ್ಕೆ ಇಸ್ರೋ ಅಧ್ಯಕ್ಷರ ಶ್ಲಾಘನೆ

**ಬೆಂಗಳೂರು ನ. 12 :** ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಮಹತ್ವಾಕಾಂಕ್ಷಿ ಯೋಜನೆಯಾದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಟೆಲಿಸ್ಕೋಪ್ ಒದಗಿಸುವ ಯೋಜನೆ ಬಹಳ ವಿಶೇಷವಾಗಿದ್ದು, ಭವಿಷ್ಯದ ವೈಜ್ಞಾನಿಕ ಕ್ಷೇತ್ರಕ್ಕೆ ಉತ್ತಮ ಕೊಡುಗೆ ನೀಡಲಿದೆ ಎಂದು ಇಸ್ರೋ ಚೇರ್ಮನ್ ಸೋಮನಾಥ್ ಅಭಿಪ್ರಾಯ ವ್ಯಕ್ತಪಡಿಸಿದರು. ಮಂಗಳವಾರ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ವಿದ್ಯಾರ್ಥಿಗಳೊಂದಿಗಿನ ಸಂವಾದ ಕಾರ್ಯಕ್ರಮದಲ್ಲಿ




ಮಾತನಾಡಿದ ಅವರು, ಯೋಜನೆಯ ಬಗ್ಗೆ ಶ್ಲಾಘಿಸಿದರು. ಮಕ್ಕಳಲ್ಲಿ ವಿಜ್ಞಾನ ಹಾಗೂ ತಂತ್ರಜ್ಞಾನ ಕ್ಷೇತ್ರದ ಬಗ್ಗೆ ಆಸಕ್ತಿ ಮೂಡಿಸುವ ನಿಟ್ಟಿನಲ್ಲಿ ಹಮ್ಮಿಕೊಂಡಿರುವ ಯೋಜನೆ ಬಹಳ ವಿಶೇಷ ವಾಗಿದೆ. ಸಣ್ಣ ವಯಸ್ಸಿನಲ್ಲೇ ಬಾಹ್ಯಾಕಾಶದ ಬಗ್ಗೆ ಆಸಕ್ತಿ ಬೆಳೆಸುವುದರಿಂದ ಮಕ್ಕಳಲ್ಲಿ ಹೊಸ ಸಾಧ್ಯತೆಗಳ ಬಗ್ಗೆ ಅರಿವು ಮೂಡಿಸ ಬಹುದಾಗಿದೆ. ಇಂತಹ ಯೋಜನೆಯನ್ನು ಯೋಜಿಸಿ ಅನುಷ್ಠಾನಗೊಳಿಸುತ್ತಿರುವ ಸರ್ಕಾರದ ಕ್ರಮ ಅನುಕರಣೀಯ. ಈ ಯೋಜನೆಯಿಂದ ಭವಿಷ್ಯದ ವೈಜ್ಞಾನಿಕ ಕ್ಷೇತ್ರದಲ್ಲಿ ನಮ್ಮ ಮಕ್ಕಳ ಕೊಡುಗೆಯೂ ಹೆಚ್ಚಲಿದೆ ಎಂದರು. ಕಾರ್ಯಕ್ರಮದಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ವೈಜ್ಞಾನಿಕ ಮನೋಭಾವ ಹಾಗೂ ವೈಚಾರಿಕತೆ ಯನ್ನು ಹೆಚ್ಚಿಸಲು ಹೆಚ್ಚಿನ ಆದ್ಯತೆ ನೀಡುತ್ತಿದೆ. ಮೊದಲ ಹಂತದಲ್ಲಿ 833 ವಸತಿ ಶಾಲೆಗಳಿಗೆ ಟೆಲಿಸ್ಕೋಪ್ ನೀಡುವ ಕಾರ್ಯಕ್ರಮ ಬಹಳ ಮಹತ್ವದ್ದಾಗಿದೆ. ಎಲ್ಲಾ ಮಕ್ಕಳು ಬಾಹ್ಯಾಕಾಶ ಕ್ಷೇತ್ರದ ಬಗ್ಗೆ ಆಸಕ್ತಿ ಹೆಚ್ಚಿಸಿಕೊಳ್ಳಬೇಕು, ಸಂಶೋಧನೆಗೆ ಪ್ರೋತ್ಸಾಹ ನೀಡಬೇಕು ಎನ್ನುವ ಉದ್ದೇಶ ಹೊಂದಿದ್ದೇವೆ ಎಂದರು.

# ಭಸ್ಮಾಸುರ, ಬಕಾಸುರನಂತೆ ವರ್ತಿಸುವ ಕಾಂಗ್ರೆಸ್ ಪಕ್ಷಕ್ಕೆ ಬುದ್ಧಿ ಕಲಿಸಿ: ಸಿ.ಟಿ.ರವಿ ಕರೆ

**ಬೆಂಗಳೂರು, ನ, 12;** ಕಾಂಗ್ರೆಸ್ ಪಕ್ಷದ ಬಕಾಸುರ ಮತ್ತು ಭಸ್ಮಾಸುರನ ವರ್ತನೆಗೆ ರಾಜ್ಯದ ಜನತೆ ಪಾಠ ಕಲಿಸಬೇಕು. ಭಸ್ಮಾಸುರ ಹಾಗೂ ಬಕಾಸುರನಂತೆ ವರ್ತನೆ ಮಾಡುವ ಕಾಂಗ್ರೆಸ್ ಪಕ್ಷಕ್ಕೆ 3 ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆಯಲ್ಲಿ ಬುದ್ಧಿ ಕಲಿಸಬೇಕು ಎಂದು ವಿಧಾನಪರಿಷತ್ ಸದಸ್ಯ ಮತ್ತು ಬಿಜೆಪಿ ನಿಕಟಪೂರ್ವ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ಮನವಿ ಮಾಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಕ್ಫ್ ಬೋರ್ಡ್ ಹೆಸರಿನಲ್ಲಿ ನಮ್ಮ ಭೂಮಿ ಕಿತ್ತುಕೊಳ್ಳುವ ಕೆಲಸ, ರೈತರ, ದಲಿತರ ಭೂಮಿ ಕಿತ್ತುಕೊಳ್ಳುವ ಕೆಲಸ ನಡೆಯುವುದನ್ನು ನಾವು ನೋಡುತ್ತಿದ್ದೇವೆ. ಕಾಂಗ್ರೆಸ್ ಪಕ್ಷ ಆಧುನಿಕ ಭಸ್ಮಾಸುರನಂತೆ ವರ್ತಿಸುತ್ತಿದೆ. ಬಕಾಸುರ ಮತ್ತು ಭಸ್ಮಾಸುರ ಎರಡೂ ಸೇರಿದರೆ ಏನಾಗುತ್ತದೋ ಅದು ಕಾಂಗ್ರೆಸ್ ಆಗಿದೆ ಎಂದು ಆರೋಪಿಸಿದರು. ಕರ್ನಾಟಕ ಸರಕಾರದ ಸಚಿವ ಜಮೀರ್ ಅಹಮದ್ ಅವರು ದೇವೇಗೌಡರ ಕುಟುಂಬವನ್ನು ಒಂದೊಂದು ರೂಪಾಯಿಯೂ ಹಾಕಿ ಕೊಂಡುಕೊಳ್ಳುವುದಾಗಿ ತಿಳಿಸಿದ್ದಾರೆ. ಅವರು ಹೇಳಿದ ಮಾತು ಅಧಿಕಾರದ ಮದ, ಹಣದ ಮದ ತಲೆಗೇರಿದರೆ ಮನುಷ್ಯ ಹುಚ್ಚುಚ್ಚಾಗಿ ಆಡುತ್ತಾನಂತೆ ಎಂಬಂತಿದೆ. ಇವರಿಗೆ ಅಧಿಕಾರ–ಹಣದ ಮದ ಆ ರೀತಿ ಹುಚ್ಚುಚ್ಚು ಮಾತುಗಳನ್ನು ಆಡಿಸಿದೆ ಎಂದು ಅನಿಸುತ್ತದೆ ಎಂದು ವಿಶ್ಲೇಷಿಸಿದರು.

ಈ ಹುಚ್ಚುಗಳನ್ನು ಜನರು ಮಾತ್ರ ಇಳಿಸಲು ಸಾಧ್ಯ ಎಂದ ಅವರು, ಜಮೀರ್ ಅಹಮದ್ ಅವರ ಬಳಿ



ಲೂಟಿ ಹೊಡೆದ ಹಣವಿದ್ದು, ಒಕ್ಕಲಿಗರು, ಹಿಂದೂಗಳನ್ನು ಕೊಂಡುಕೊಳ್ಳಬಹುದೆಂಬ ಸೊಕ್ಕು ಮೂಡಿಸಿದೆ. ಲೂಟಿ ಹೊಡೆದ ದುಡ್ಡಿರುವವರು ಮಾತ್ರ ಇಂಥ ದುರಹಂಕಾರದ ಮಾತನಾಡುತ್ತಾರೆ. ಲೂಟಿ ಹೊಡೆದ ಹಣ ಬಹಳ ಇದ್ದಂತಿದೆ. ಈ ಸೊಕ್ಕನ್ನು ಇಳಿಸಬೇಕು; ಪ್ರಜಾಪ್ರಭುತ್ವದಲ್ಲಿ ಜಮೀರ್ ಅಹಮದ್ ಥರದವರು ಅಪಸವ್ಯ ಇದ್ದಂತೆ. ಅವರ ಅವಸವ್ಯವನ್ನು ದೂರ ಹಾಕಲು ಒಂದೊಂದು ಮಾತಿಗೂ ಜನರು ಉತ್ತರ ನೀಡುವ ಮಾದರಿಯಲ್ಲಿ ಮತ ಹಾಕಬೇಕೆಂದು ವಿನಂತಿಸಿದರು. ಜಮೀರ್ ಅವರು ವರ್ಣಭೇದದ ಮಾತನಾಡಿದ್ದಾರೆ. ನಮ್ಮ ಕೃಷ್ಣ, ರಾಮ, ಪರಶಿವನಂತ ದೇವಾನುದೇವತೆಗಳು ಕೃಷ್ಣವರ್ಣದಲ್ಲೇ ಭೂಮಿಗೆ ಬಂದವರು. ಈ 3 ಜನರೂ ಕೃಷ್ಣವರ್ಣದಲ್ಲೇ ದರ್ಶನ ಕೊಟ್ಟು ನಾನೇ ಕಪ್ಪು, ಉಳಿದವರನ್ನು ಕಪ್ಪೆಂದು ಯಾಕೆ ಆಡಿಕೊಳ್ಳುತ್ತೀಯ ಎಂದು ಅವರು ತಿಳಿಸಿದ್ದಾರೆ.

ನಮ್ಮ ಭಗವಂತನೇ ಕೃಷ್ಣವರ್ಣ. ಜಮೀರ್ ಮಾಡಿದ ಅಪಮಾನ ಅವರ ಸೊಕ್ಕಿನ ಪ್ರದರ್ಶನ. ಆ ಸೊಕ್ಕಿಗೆ ಉತ್ತರ ಕೊಡಿ ಎಂದು ಮನವಿಯನ್ನು ಜನತೆಯ ಮುಂದಿಟ್ಟರು. ಮುಖ್ಯಮಂತ್ರಿಗಳೇ, ನಿಮಗೆ ಕಿಂಚಿತ್ತಾದರೂ ಅವರ ಮಾತು ತಪ್ಪೆಂದು ಅನಿಸಿದರೆ ಜಮೀರ್ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಅಜ್ಜಂಪುರ ಪೀರ್ ಖಾದ್ರಿ ಅವರು, ಡಾ. ಅಂಬೇಡ್ಕರ್ ಅವರು ಇಸ್ಲಾಂಗೆ ಮತಾಂತರಗೊಳ್ಳಲು ಸಿದ್ಧವಾಗಿದ್ದರು ಎಂದು ಹೇಳಿ ತಮ್ಮ ಅಜ್ಞಾನದ ಪ್ರದರ್ಶನ ಮಾಡಿದ್ದಾರೆ. ಡಾ. ಅಂಬೇಡ್ಕರ್ ಅವರ ವ್ಯಕ್ತಿತ್ವಕ್ಕೆ ಅವಮಾನ ಮಾಡಿದ್ದಾರೆ.

**ಅಂಬೇಡ್ಕರ್ ಅವರು ನಾನು ಹಿಂದೂವಾಗಿ ಹುಟ್ಟಿದ್ದೇನೆ;** ಹಿಂದೂವಾಗಿ ಸಾಯುವುದಿಲ್ಲ ಎಂದು ಹೇಳಿದಾಗ, ಬಹಳ ಜನ ಅವರನ್ನು ಮತಾಂತರ ಮಾಡಿಸುವ ಪ್ರಯತ್ನ ಮಾಡಿದ್ದು ನಿಜ. ತಮ್ಮ ಮತಕ್ಕೆ ಅವರನ್ನು ಕರೆದುಕೊಳ್ಳುವ ಪ್ರಯತ್ನ ಮಾಡಿದ್ದು ನಿಜ. ಅದರಲ್ಲಿ ಹೈದರಾಬಾದ್ ನಿಜಾಮ ಅಧಿಕಾರ, ಜೊತೆಗೆ ಹಣದ ಆಸೆ ಆಮಿಷವನ್ನೂ ತೋರಿಸಿದ್ದರು ಎಂದು ವಿವರಿಸಿದರು. ಆದರೆ, ಬಾಬಾ ಸಾಹೇಬ ಅಂಬೇಡ್ಕರ್ ಅವರು ಬಹಳ ಸ್ಪಷ್ಟವಾದಿಯಾಗಿದ್ದರು. ನಾನು ನನ್ನ ಪ್ರತಿಭಟನೆ ದಾಖಲಿಸಲು ಮತಾಂತರವಾಗುತ್ತೇನೆ; ದೇಶಾಂತರ ಅಲ್ಲ ಮತ್ತು ಸಂಸ್ಕತಿಯಿಂದ ದೂರ ಹೋಗುವುದಿಲ್ಲ. ಇಸ್ಲಾಂ ಅಥವಾ ಕ್ರಿಶ್ಚಿಯಾನಿಟಿಗೆ ಹೋದರೆ ಮೂಲ ಸಂಸ್ಕತಿಯಿಂದ ದೂರ ಹೋಗಬೇಕಾಗುತ್ತದೆ. ಹಾಗಾಗಿ ನಾನು ಅವುಗಳನ್ನು ಸ್ವೀಕರಿಸುವುದಿಲ್ಲ ಎಂದಿದ್ದರು. ತಮ್ಮ ಥಾಟ್ಸ್ ಆಫ್ ಪಾಕಿಸ್ತಾನ್‌ನಲ್ಲಿ ಇಸ್ಲಾಂ ಬಗ್ಗೆ ವಿಶ್ಲೇಷಣೆ ಮಾಡಿದ್ದಾರೆ. ಇವತ್ತಿಗೂ ಕೂಡ ಪಬ್ಲಿಕ್ ಡೊಮೈನ್ನಲ್ಲಿ ಥಾಟ್ಸ್ ಆಫ್ ಪಾಕಿಸ್ತಾನ್ ಅಥವಾ ಭಾರತ ವಿಭಜನೆ ಎಂಬ ಪುಸ್ತಕ ಲಭ್ಯವಿದೆ ಎಂದರು. ಡಾ. ಅಂಬೇಡ್ಕರ್ ಅವರು ಇಸ್ಲಾಂ ಬಗ್ಗೆ ವಿಶ್ಲೇಷಣೆ ಮಾಡಿದ್ದು, ಇಸ್ಲಾಂ ಎಂದರೆ ಅಸಹಿಷ್ಣುತೆ (ಇನ್ ಟಾಲರೆನ್ಸ್); ಎಂದಿದ್ದರು.

**ಇವು ನನ್ನ ಮಾತುಗಳಲ್ಲ ;** ಅಂಬೇಡ್ಕರರ ಮಾತುಗಳು ಎಂದು ವಿವರ ನೀಡಿದರು. ಅಲ್ಲಿ ಮಹಿಳೆಯರಿಗೆ ಸಮಾನ ಹಕ್ಕಿಲ್ಲ; ಮಹಿಳೆಯರನ್ನು ಗುಲಾಮರ ರೀತಿಯಲ್ಲಿ ನಡೆಸಿಕೊಳ್ಳುತ್ತಾರೆ. ಬುರ್ಖಾ ಪದ್ಧತಿಯೂ ಗುಲಾಮಗಿರಿಯ ಪ್ರತೀಕ ಎಂದು ಡಾ. ಅಂಬೇಡ್ಕರ್ ಅವರು ಥಾಟ್ಸ್ ಆಫ್ ಪಾಕಿಸ್ತಾನ್‌ದಲ್ಲಿ ವಿಶ್ಲೇಷಿಸಿದ್ದಾರೆ ಎಂದು ತಿಳಿಸಿದರು.

**ಥಾಟ್ಸ್ ಆಫ್ ಪಾಕಿಸ್ತಾನ್ ಓದಲು ಪೀರ್ ಖಾದ್ರಿಗೆ ಸಲಹೆ :** ಇಸ್ಲಾಂ ಪ್ರತಿಪಾದಿಸಿದ್ದು ಬ್ರದರ್ ಹುಡ್ ಎಂಬ ಸಹೋದರತ್ವ (ಭಾಯಿಚಾರ) ಏನಿದೆಯೋ ಅದು ಕೇವಲ ಮುಸಲ್ಮಾನರಿಗೆ ಮಾತ್ರ. ಎಲ್ಲ ಮಾನವರಲ್ಲಿ ಅದು ಸಹೋದರತ್ವವನ್ನು ಬೆಳೆಸುವುದಿಲ್ಲ; ಕೇವಲ ಮುಸ್ಲಿಮರಿಗೆ ಮಾತ್ರ ಅದು ಸಹೋದರತ್ವವನ್ನು ಮಾಡುತ್ತದೆ ಎಂದು ಅಂಬೇಡ್ಕರರು ಹೇಳಿದ್ದರು ಎಂದರು. ಇದನ್ನು ಅಜ್ಜಂಪುರ ಪೀರ್ ಖಾದ್ರಿ ಅವರು ಓದಬೇಕಾದ ಅವಶ್ಯಕತೆ ಇದೆ. ಥಾಟ್ಸ್ ಆಫ್ ಪಾಕಿಸ್ತಾನ್ ಓದಿದರೆ ಅಜ್ಜಂಪುರ ಪೀರ್ ಖಾದ್ರಿ ಅವರ ಅಜ್ಞಾನದ ಹೇಳಿಕೆಗೆ ಜ್ಞಾನದ ಬೆಳಕು ಸಿಗುತ್ತದೆ ಎಂದು ವಿಶ್ಲೇಷಿಸಿದರು.

ಟರ್ಕಿ– ಗ್ರೀಕಿನ ಉದಾಹರಣೆ ಕೊಟ್ಟು ಜನರ ವಿನಿಮಯ ಕುರಿತು ಡಾ. ಅಂಬೇಡ್ಕರ್ ಅವರು ತಿಳಿಸಿದ್ದರು. ಪಾಕಿಸ್ತಾನ ಅನಿವಾರ್ಯವಾದರೆ ಮತ್ತು ಮತಾಂಧತೆಗೆ ಪೂರ್ಣವಿರಾಮ ಹಾಕಲು ಮುಂದಾಗಲು ತಿಳಿಸಿದ್ದರು. ಟರ್ಕಿ– ಗ್ರೀಕಿನ ಮಾದರಿಯಲ್ಲಿ ಟರ್ಕಿಯಿಂದ ಕ್ರಿಶ್ಚಿಯನ್ನರನ್ನು ಗ್ರೀಕಿಗೆ ಕಳುಹಿಸಿ, ಗ್ರೀಕ್ನಿಂದ ಮುಸಲ್ಮಾನರನ್ನು ಟರ್ಕಿಗೆ ಸ್ಥಳಾಂತರಿಸಿದ ಉದಾಹರಣೆ ಕೊಟ್ಟಿದ್ದರು ಪಾಕಿಸ್ತಾನಕ್ಕೆ ಸೇರಬಹುದಾದ ಜಾಗದಲ್ಲಿರುವ ಹಿಂದೂಗಳನ್ನು ಸುರಕ್ಷಿತವಾಗಿ ಭಾರತಕ್ಕೆ ಕರೆದುಕೊಂಡು ಬನ್ನಿ ಭಾರತದಲ್ಲಿರುವ ಮುಸಲ್ಮಾನರನ್ನು ಅಲ್ಲಿಗೆ ಸುರಕ್ಷಿತವಾಗಿ ಕಳಿಸಿ ಆಗ ಮಾತ್ರ ಮತಾಂಧತೆ ಎನ್ನುವುದು ಕೊನೆ ಆಗಲಿದೆ ಎಂದಿದ್ದರು.

ಅದು ಬೇರೆ ರೂಪದಲ್ಲಿ ಭಾರತದಲ್ಲಿ ತಲೆ ಎತ್ತಲಿದೆ ಎಂದು ಬರೆದಿದ್ದರೆಂದು ಹೇಳಿದರು. ಬ್ರಿಟಿಷ್ ಸರಕಾರ–ಕಾಂಗ್ರೆಸ್ ಪಕ್ಷ ಮತ್ತು ಮುಸ್ಲಿಂ ಲೀಗ್ ತ್ರಿಪಕ್ಷೀಯ ಒಪ್ಪಂದಕ್ಕೆ ಸಹಿ ಹಾಕಿದ್ದವು. ಭಾರತ ವಿಭಜನೆ ಆಗಿತ್ತು. ಅಲ್ಲಿರುವ ಹಿಂದೂಗಳನ್ನು ಬಲಾತ್ಕಾರ ಮಾಡಿದರು; ಮತಾಂತರ ಮಾಡಿದ್ದಲ್ಲದೆ ನಿರ್ವಸಿತರನ್ನಾಗಿ ಮಾಡಿ ಓಡಿಸಿದ್ದರು. ಇಲ್ಲಿ ಮತಾಂಧತೆಯ ಭೂತ ಬಲವಾಗಲು ಕಾರಣವಾದೆವು ಎಂದರು.



ಎಚ್.ಡಿ.ಕೋಟೆ ತಾಲೂಕಿನ ಕೆರೆಹಾಡಿ ಗಿರಿಜನ ಗ್ರಾಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಗಳವಾರ ಭೇಟಿ ನೀಡಿದ್ದರು.

# ಹಣ ಕೊಟ್ಟರೂ ಸಿಎಂ ಕಾರ್ಯಕ್ರಮಕ್ಕೆ ಜನ ಬರುತ್ತಿಲ್ಲ: ಬಿಎಸ್‌ವೈ

**ಹುಬ್ಬಳ್ಳಿ, ನ.12–** ಉಪಚುನಾವಣೆ ನಡೆಯುತ್ತಿರುವ ಮೂರು ಕ್ಷೇತ್ರದಲ್ಲಿ ನಾವೇ ಗೆಲ್ಲುವುದು ನಿಶ್ಚಿತ. ಕಾಂಗ್ರೆಸ್ ನಾಯಕರಿಗೆ ಸೋಲಿನ ಭಯ ಶುರುವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಸೋಲಿನ ಭಯದಿಂದ ನಾಲ್ಕೈದು ದಿನ ಸಂಡೂರಿನಲ್ಲಿದ್ದರು. ಅವರು ಏನೇ ಪ್ರಯತ್ನ ಮಾಡಿದರು ಭ್ರಷ್ಟ ಸರ್ಕಾರದ ವಿರುದ್ಧ ಜನ ಆಕ್ರೋಶಗೊಂಡಿದ್ದಾರೆ. ಚುನಾವಣೆ ಮುಗಿದ ಮೇಲೆ ಅವರಿಗೆ ಜನರ ಆಕ್ರೋಶ ಗೊತ್ತಾಗಲಿದೆ. ಶಿಗ್ಗಾವಿ ಕ್ಷೇತ್ರದಲ್ಲಿ ನಾವು ಸಜ್ಜಾಗಿದ್ದೇವೆ. ಇಲ್ಲಿ ಗೆಲುವು ನಮ್ಮದೇ ಎನ್ನುವುದು ಖಾತರಿಯಾಗುತ್ತಿದ್ದಂತೆ ಕಾಂಗ್ರೆಸ್ ನಾಯಕರಿಗೆ ಸೋಲಿನ ಭೀತಿ ಎದುರಾಗಿದೆ. ಹೀಗಾಗಿ ನಾನಾ ಆರೋಪಗಳನ್ನು ಮಾಡುತ್ತಿದ್ದಾರೆ. ಕ್ಷೇತ್ರಕ್ಕೆ ಮುಖ್ಯಮಂತ್ರಿ ಬರುತ್ತಾರೆ ಎಂದು ಹಣ ಕೊಟ್ಟು ಕರೆದರೂ ಜನರು ಬರುತ್ತಿಲ್ಲ. ಇದು ಭ್ರಷ್ಟ ಸರಕಾರದ ವಿಮಾನ ಉದ್ಧದ ಜನರ ಅಸಮಧಾನವಾಗಿದೆ. ಅಬಕಾರಿ ಇಲಾಖೆಯಲ್ಲಿ ಕೋಟಿ ಕೋಟಿ ಭ್ರಷ್ಟಾಚಾರ ಆಗಿದೆ ಎಂದು ಆರೋಪಿಸಿದರು.



ವಕ್ಫ್ ಆಸ್ತಿ ವಿಚಾರ ಸದ್ದಿನ ನಡುವೆ, ಮೂರೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಹಣ ಹಂಚಿಕೆಗೆ ಬಗ್ಗೆ ನೇರ ಪೈಪೋಟಿ ಉಂಟಾಗಿದೆ. ಶಿಗ್ಗಾವಿಯಲ್ಲಿ ಸಮುದಾಯವಾರು ಹಣ ಹಂಚಲು ಕಾಂಗ್ರೆಸ್ ಶಾಸಕರ ನಡುವೆ ಪೈಪೋಟಿ ಶುರುವಾಗಿದೆ. ಮುದಾಯ ವಾರು ಶಾಸಕರು ಹಣ ಹಂಚಿಕೆ ಮಾಡುತ್ತಿದ್ದಾರೆ. ಇಷ್ಟು ದೊಡ್ಡ ಪ್ರಮಾಣದಲ್ಲಿ ಹಣ ಹಂಚುವುದನ್ನು ಎಂದೂ ನೋಡಿರಲಿಲ್ಲ. ಉಪ ಚುನಾವಣೆ ಬಿಜೆಪಿ ವರ್ಸಸ್ ಕಾಂಗ್ರೆಸ್ಸಿನ ಹಣ ಎಂಬಂತಾಗಿದೆ. ಸರ್ಕಾರದಿಂದ ಲೂಟಿ ಮಾಡಿದ ಹಣವನ್ನು ಇಲ್ಲಿ ಹಂಚುತಿದ್ದಾರೆ.


ಹಾನಗಲ್ ರೈತ ಆತ್ಮಹತ್ಯೆ ಮಾಡಿಕೊಂಡುವುದನ್ನು ಬಿಜೆಪಿ ರಾಜಕಾರಣ ಮಾಡುತ್ತಿದೆ ಎಂದರು. ಆದರೆ ಮೃತ ರೈತನ ಪೋಷಕರೇ ರೈತನ ಹೊಲದಲ್ಲಿ ವಕ್ಫ್ ಎಂದು ನಮೂದಿಸಿರುವುದಕ್ಕೆ ತಮ್ಮ ಮಗ ಆತ್ಮಹತ್ಯೆ ಮಾಡಿಕೊಂಡಿದ್ದಾನೆಂದು ಹೇಳುವ ಮೂಲಕ ಕಾಂಗ್ರೆಸ್ ಬಾಯಿ ಬಂದ್ ಆಗಿದೆ ಎಂದರು.

ರೈತನ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಾಗಿದೆ. ಅದನ್ನು ತೆಗೆಸಲು ಆ ರೈತ ನಾಲ್ಕರಿಂದ ಐದು ವರ್ಷ ಅಲೆದಾಡಿದರೂ ನ್ಯಾಯ ಸಿಗುವುದಿಲ್ಲ ಎಂದು ಗೊತ್ತಾಗಿ ರೈತ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಅವರ ಕುಟುಂಬದವರು ಇದೇ ಕಾರಣಕ್ಕೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಬರೆದುಕೊಟ್ಟಿದ್ದಾರೆ.ರೈತರಿಗೆ ನೊಟಿಸ್ ಕೊಟ್ಟಿರುವುದನ್ನು ವಾಪಸ್ ಪಡೆಯುವುದು ನಾಟಕ, ಇದು ಸರ್ಕಾರದ ಕಣ್ಣೊರೆಸುವ ತಂತ್ರ. ಎಲ್ಲಿಯವರೆಗೆ ಗೆಜಟ್ ನೊಟಿಫಿಕೇಶನ್ ವಾಪಸ್ ಪಡೆಯುವುದಿಲ್ಲವೋ ಅಲ್ಲಿಯ ವರೆಗೆ ರೈತರಿಗೆ ಯಾವುದೇ ಅನುಕೂಲವಾಗುವುದಿಲ್ಲ ಎಂದು ಅವರು ಸರ್ಕಾರದ ವಿರುದ್ಧ ಕಿಡಿ ಕಾರಿದರು.

ಬಿಜೆಪಿ ಅವಧಿಯಲ್ಲಿ ಕೊವಿಡ್ ಹಗರಣದ ಕುರಿತ ಆರೋಪಕ್ಕೆ ಉತ್ತರಿಸಿದ ಅವರು, ಕೊವಿಡ್ ಸಂದರ್ಭದಲ್ಲಿ ಪಿಪಿಇ ಕಿಟ್ ಇರಲಿಲ್ಲ. ಜನ ಸಾಯುತ್ತಿದ್ದರು. ಆರೋಗ್ಯ ತುರ್ತು ಪರಿಸ್ಥಿತಿ ಇತ್ತು. ವೈದ್ಯರು ಪಿಪಿಇ ಕಿಟ್ ಇಲ್ಲದಿದ್ದರೆ ಕೆಲಸ ಮಾಡಲು ಆಗುತ್ತಿರಲಿಲ್ಲ. ಹೀಗಾಗಿ ಅವು ಎಲ್ಲಿ ಸಿಗುತ್ತವೆ ಎಂದು ತಿಳಿದು ಖರಿದಿ ಮಾಡಲಾಯಿತು. ರಾಷ್ಟ್ರೀಯ ವಿಪತ್ತು ಅಂತ ಘೋಷಣೆ ಮಾಡಲಾಗಿತ್ತು. ಜನರ ಪ್ರಾಣ ಉಳಿಸಲು ಸರ್ಕಾರ ನಿರ್ಧರಿಸಿ, ನಿಯಮದಂತೆಯೇ ಖರೀದಿ ಮಾಡಲಾಯಿತು ಎಂದು ಅವರು ವಿವರಿಸಿದರು.

ಇದೀಗ ಈ ಎಲ್ಲವನ್ನು ಕಾಂಗ್ರೆಸ್ ಚುನಾವಣೆ ಸಂದರ್ಭದಲ್ಲಿ ರಾಜಕೀಯವಾಗಿ ಬಳಕೆ ಮಾಡಿಕೊಳ್ಳಲು ಮುಂದಾಗಿದೆ. ಕಾಂಗ್ರೆಸ್ ಆರೋಪಿಸಿ ಹಗರಣಗಳ ವರದಿ ಸ್ವೀಕರಿಸದಿದ್ದರೂ ಅದರಲ್ಲಿನ ಕೆಲವು ಅಂಶವನ್ನು ಲೀಕ್ ಮಾಡಲಾಗುತ್ತಿದೆ. ಕಾಂಗ್ರೆಸ್ ನಾಯಕರು ತಮ್ಮ ಮೇಲಿನ ಆರೋಪ ಮರೆಮಾಚಲು ವಿರೊಧ ಪಕ್ಷವನ್ನು ದಮನ ಮಾಡಿ, ವಿರೋಧ ಪಕ್ಷದ ನಾಯಕರ ಧ್ವನಿ ಕುಗ್ಗಿಸುವ ಪ್ರಯತ್ನ ಮಾಡುತ್ತಿದ್ದಾರೆ. ಅದು ಆಗುವುದಿಲ್ಲ ಎಂದು ಅವರು ಎಚ್ಚರಿಕೆ ನೀಡಿದರು.

# ಸೂರ್ಯಘರ್ ಯೋಜನೆಗೆ ನೋಂದಾಯಿಸಿಕೊಳ್ಳಿ-ರಂಗನಾಥಬಾಬು




**ಬಳ್ಳಾರಿ, ನ.12–** ಸೋಲಾರ್ ರೂಫ್ ಟಾಪ್ ಅಳವಡಿಸುವ ಮೂಲಕ ಉಚಿತ ವಿದ್ಯುತ್ ಒದಗಿಸುವ ಗುರಿ ಹೊಂದಿರುವ ಸರ್ಕಾರದ ಮಹಾತ್ವಕಾಂಕ್ಷಿ ಸೂರ್ಯಘರ್ ಮುಫ್ತ್ ಬಿಜಲಿ ಯೋಜನೆಗೆ ನೋಂದಾಯಿಸಿಕೊಂಡು ಇದರ ಸದುಪಯೋಗ ಪಡೆದುಕೊಳ್ಳುವಂತೆ ಬಳ್ಳಾರಿ ಕಾರ್ಯ ಮತ್ತು ಪಾಲನ ಗ್ರಾಮೀಣ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ರಂಗನಾಥಬಾಬು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಯೋಜನೆಯಡಿ ಸೌರ ಫಲಕಗಳನ್ನು ಸ್ಥಾಪಿಸಲು, ಮಾನದಂಡ ವೆಚ್ಚದ ಶೇ.60 ರಷ್ಟು ಸಹಾಯಧನ ರೂಪದಲ್ಲಿ ಒದಗಿಸಲಾಗುತ್ತದೆ. 1 ಕಿವ್ಯಾ– 30,000 ರೂ., 2 ಕಿವ್ಯಾ– 60,000 ರೂ. ಹಾಗೂ 3 ಕಿವ್ಯಾ ಮತ್ತು ಅದಕ್ಕಿಂತ ಹೆಚ್ಚಿನ ಸಾಮರ್ಥ್ಯಕ್ಕೆ 78,000 ರೂ. ಗಳ ಸಹಾಯಧನ ನೀಡಲಾಗುತ್ತದೆ. www.pmsuryaghar.gov.in or https://gescomsrtpv.in/SRTPV/ ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ 1912 ಗೆ ಕರೆಮಾಡಿ ಅಥವಾ ಹತ್ತಿರದ ಜೆಸ್ಕಾಂ ಕಚೇರಿಗೆ ಭೇಟಿ ನೀಡುವಂತೆ ಕೋರಿದ್ದಾರೆ.

### ಸಿಎಂಗೆ ಡೆಡ್‌ಲೈನ್ ಕೊಟ್ಟ ಕೋಡಿಹಳ್ಳಿ ಚಂದ್ರಶೇಖರ್

# ಮಿಸ್ಟರ್ ಸಿದ್ದರಾಮಯ್ಯ ರೈತರ ಭೂಮಿ ವಾಪಸ್ ಕೊಡದಿದ್ರೆ ಸರಿಯಿರಲ್ಲ

**ಬೀದರ್, ನ.12–** ರೈತರ ಪಹಣಿಯಲ್ಲಿ ವಕ್ಫ್ ಆಸ್ತಿ ಹೆಸರು ವಿವಾದ ತೀವ್ರ ಸ್ವರೂಪ ಪಡೆಯುತ್ತಲೇ ರೈತರ ಸಂಘಟನೆ ಮುಖಂಡರ ಮೇಲೆ ಬಿಜೆಪಿ ನಾಯಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ ಬೆನ್ನಲ್ಲೇ ಎಚ್ಚೆತ್ತುಕೊಂಡಿರುವ ರೈತ ಮುಖಂಡ ಕೋಡಿಹಳ್ಳಿ ಚಂದ್ರಶೇಖರ್ ಸಿಎಂ ಸಿದ್ದರಾಮಯ್ಯ ವಿರುದ್ಧ ತಿರುಗಿ ಬಿದ್ದಿದ್ದಾರೆ.




ರೈತರ ಪಹಣಿಯಲ್ಲಿ ವಕ್ಫ್ ಆಸ್ತಿ ವಿಚಾರವಾಗಿ ಇಂದು ಬೀದರ್‌ನಲ್ಲಿ ನಡೆದ ಬೃಹತ್ ಪ್ರತಿಭಟನಾ ರ್‍ಯಾಲಿಯಲ್ಲಿ ಮಾತನಾಡಿದ ರೈತ ಮುಖಂಡ ಕೋಡಿಹಳ್ಳಿ ಚಂದ್ರಶೇಖರ್, ರೈತರ ಜಮೀನು ಗಳನ್ನು ವಾಪಸ್ ಕೊಡಬೇಕು. ಸಿಎಂ ಸಿದ್ದರಾಮಯ್ಯರಿಗೆ ಇದು ಕೊನೆ ಡೆಡ್‌ಲೈನ್. ನ.15 ರಂದು ಕಾವೇರಿಗೆ ರೈತ ಮುಖಂಡರು ಬರುತ್ತೇವೆ. ಅಂದು ಅಧಿಕಾರಿಗಳು ರೈತರ ಜಮೀನುಗಳನ್ನ ವಾಪಸ್ ಕೊಟ್ರೆ ಸರಿ. ಇಲ್ಲವಾದ್ರೆ ವಕ್ಫ್ ಸೇರಿದ ಜಮೀನುಗಳನ್ನ ನಾವೇ ಸ್ವಾಧೀನ ಪಡೆದುಕೊಳ್ಳುತ್ತೇವೆ ಎಂದು ಎಚ್ಚರಿಸಿದರು.

ಈ ಹಿಂದೆ ಮಾಡಿದ್ದ ವಕ್ಫ್ ಗೆಜೆಟ್ ನೋಟಿಫಿಕೇಶನ್ ರದ್ದು ಮಾಡಬೇಕು. ನೀವು ವಕ್ಫ್ ಹೆಸರಿನಲ್ಲಿ ಗೂಂಡಾಗಿರಿ ಮಾಡಿ ವಕ್ಫ್ ಟ್ರಸ್ಟ್ ಗೆ ನಮ್ಮ ರೈತರ ಜಮೀನು ಸೇರಿಸಿದ್ದೀರಿ. ವಕ್ಫ್ ನೋಟಿಸ್ ಗಳನ್ನು ವಾಪಸ್ ಪಡೆಯಿರಿ. ಎಲ್ಲೆಲ್ಲಿ ಗೊಂದಲ ಇದೆ ಅಲ್ಲಿ ಮಾತ್ರ ವಾಪಸ್‌ಗೆ ನಿರ್ದೇಶನ ಕೊಟ್ಟಂತಿದೆ. ಆದರೆ ಹೇಳೋದನ್ನು ಸ್ವಲ್ಪ ಗಮನವಿಟ್ಟು ಕೇಳಿ. ಈ ಹಿಂದೆ ವಕ್ಫ್ ಬೋರ್ಡ್‌ಗೆ ನೀಡಿದ್ದ ವಿಶೇಷ ಅಧಿಕಾರ ರದ್ದುಮಾಡಿ. ಮಿಸ್ಟರ್ ಸಿದ್ದರಾಮಯ್ಯನವರೇ, ನೀವು ರದ್ದುಮಾಡದಿದ್ರೆ ರಾಜ್ಯದಲ್ಲಿ ದೊಡ್ಡ ರೈತ ಕ್ರಾಂತಿಯಾಗುತ್ತದೆ ಎಂದು ಸಿಎಂ ಸಿದ್ದರಾಮಯ್ಯಗೆ ಕೊನೆಯದಾಗಿ ಡೆಡ್‌ಲೈನ್ ನೀಡಿದರು.

ಕೂಡಲೇ ಈ ಹಿಂದೆಮಾಡಿದ್ದ ವಕ್ಫ್ ಗೆಜೆಟ್ ನೋಟಿಫಿಕೇಶನ್ ರದ್ದುಮಾಡಬೇಕು. ನೀವು ವಕ್ಫ್ ಹೆಸರಿನಲ್ಲಿ ಗೂಂಡಾಗಿರಿ ಮಾಡಿ, ವಕ್ಫ್ ಟ್ರಸ್ಟ್‌ಗೆ ನಮ್ಮ ಜಮೀನು ಸೇರಿಸಿದ್ದೀರಿ. ಸಿಎಂ ವಕ್ಫ್ ನೋಟಿಸ್‌ಗಳನ್ನು ವಾಪಸ್ ಪಡೆಯಿರಿ ಎಂದು ಹೇಳಿದ್ದಾರೆ. ಆದರೆ ಎಲ್ಲೆಲ್ಲಿ ಗೊಂದಲ ಇದೆ ಅಲ್ಲಿ ಮಾತ್ರ ವಾಪಸ್‌ಗೆ ನಿರ್ದೇಶನ ಕೊಟ್ಟಂತಿದೆ ಅಂತ ಕೋಡಿಹಳ್ಳಿ ಹೇಳಿದ್ದಾರೆ.

# ಕೈಗಾ ಅಣು ಸ್ಥಾವರದ ರಕ್ಷಣಾ ಸಿಬ್ಬಂದಿ ಸಾವು

**ಕಾರವಾರ, ನ.12–** ತಮ್ಮ ಸರ್ವಿಸ್ ಪಿಸ್ತೂಲಿನಿಂದ ಗುಂಡು ಹಾರಿ ಇಲ್ಲಿನ ಕೈಗಾ ಪರಮಾಣು ಸ್ಥಾವರದಲ್ಲಿ ಕಾರ್ಯನಿರ್ವಹಿಸುತ್ತಿದ್ದ ರಕ್ಷಣಾ ಸಿಬ್ಬಂದಿ ಮೃತಪಟ್ಟಿರುವ ಘಟನೆ ನಡೆದಿದೆ. ಮೃತನನ್ನು ಬಿಹಾರ ಮೂಲಕ ಸಿಐಎಸ್‌ಎಫ್ ಸಿಬ್ಬಂದಿ ಅರವಿಂದ್. ಸದ್ಯ ರಕ್ಷಣಾ ಸಿಬ್ಬಂದಿಯ ಆತಹತ್ಯೆ ಯಿಂದ ಕೈಗಾದಲ್ಲಿ ಆತಂಕ ಸೃಷ್ಠಿಯಾಗಿದೆ. ಸ್ಥಾವರದೊಳಗೆ ವಾಹನದಲ್ಲಿ ಹೋಗುವಾಗ ಗುಂಡು ಹಾರಿದೆ. ವೈಯಕ್ತಿಕ ಕಾರಣ ದಿಂದಲೋ ಅಥವಾ ಅಧಿಕಾರಿಗಳ ಕಿರುಕುಳದಿಂದ ಆತಹತ್ಯೆ ಮಾಡಿಕೊಂಡಿ ದ್ದರೆಯೇ ಅಥವಾ ಆಕಸ್ಮಿಕವಾಗಿ ಗುಂಟು ಹಾರಿದೆಯೇ ಎಂಬುದು ತಿಳಿದುಬಂದಿಲ್ಲ.



ಮಲ್ಲಾಪುರ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ನಡೆಸುತ್ತಿದ್ದಾರೆ. ಸ್ಥಾವರದ ಬಳಗೆ ಅಧಿಕಾರಿಗಳಿಗೆ ಬೆಂಗಾವಲು ನೀಡುತ್ತಿದ್ದ ವಾಹನದ ಹಿಂದೆ ಅರವಿಂದ್ ಕುಳಿತ್ತಿದ್ದರು, ಏಕಾಏಕಿ ಗುಂಡಿನ ಸದ್ದು ಕೇಳಿ ವಾಹನಗಳನ್ನು ನಿಲ್ಲಿಸಿ ನೋಡಿದಾಗ ಅವರ ಎದೆಗೆ ಗುಂಡು ಹೊಕ್ಕಿ ರಕ್ತ ಚಿಮಿತ್ತು. ನಂತರ ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ತಿಳಿಸಿವೆ.

# ಪ್ರವಾಸಿಗರಿಂದ ಸ್ಥಳೀಯರಿಗೆ ಪ್ರತ್ಯಕ್ಷ–ಪರೋಕ್ಷ ಉದ್ಯೋಗ ಲಭ್ಯ

**ಕೊಡಗು, ನ.12–**ಜಿಲ್ಲೆಗೆ ಪ್ರತೀ ವರ್ಷ 40 ರಿಂದ 50 ಲಕ್ಷ ಪ್ರವಾಸಿಗರು ಭೇಟಿ ನೀಡುತ್ತಿದ್ದು, ಇಲ್ಲಿನ ಸ್ಥಳೀಯರಿಗೆ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸಾವಿರಾರು ಮಂದಿಗೆ ಉದ್ಯೋಗ ದೊರೆಯುತ್ತಿದೆ ಎಂದು ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕಿ ಅನಿತಾ ಭಾಸ್ಕರ್ ಅವರು ತಿಳಿಸಿದ್ದಾರೆ. ಮಡಿಕೇರಿಯಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು ಜಿಲ್ಲೆಯಲ್ಲಿ 4 ಸಾವಿರದಷ್ಟು ಹೋಂ ಸ್ಟೇಗಳಿದ್ದು, ಇಲ್ಲಿಯವರೆಗೆ 2010 ಹೋಂ ಸ್ಟೇಗಳು ಆನ್ಲೈನ್ ಮೂಲಕ ನೋಂದಣಿ ಮಾಡಿಸಿ ಪ್ರಮಾಣ ಪತ್ರ ಪಡೆದಿದ್ದಾರೆ ಎಂದು ತಿಳಿಸಿದರು.

2023ರ ಜನವರಿಯಿಂದ ಡಿಸೆಂಬರ್ ಅಂತ್ಯದವರೆಗೆ ಸುಮಾರು 43,69,507 ಮಂದಿ ಪ್ರವಾಸಿಗರು ಕೊಡಗು ಜಿಲ್ಲೆಗೆ ಭೇಟಿ ನೀಡಿದ್ದಾರೆ. 2024 ರ ಜನವರಿಯಿಂದ ಅಕ್ಟೋಬರ್ ಅಂತ್ಯದವರೆಗೆ 20,67,168 ಮಂದಿ ಪ್ರವಾಸಿಗರು ಭೇಟಿ ನೀಡಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ. ಮಾಹಿತಿ ನೀಡಿದರು. ಪ್ರವಾಸೋದ್ಯಮವು ಭಾರತದಲ್ಲಿ ಅತೀ ದೊಡ್ಡ ಸೇವಾ ವಲಯವಾಗಿದ್ದು, ರಾಷ್ಟ್ರದ ಜಿಡಿಪಿಗೆ ಪ್ರವಾಸೋದ್ಯಮ ಕೊಡುಗೆಗೆ ಶೇ.6ರಷ್ಟು, ರಾಜ್ಯದ ಕೊಡುಗೆ ಶೇ.14 ರಷ್ಟು ಅಧಿಕವಾಗಿದೆ. 30 ಲಕ್ಷಕ್ಕೂ ಅಧಿಕ ಉದ್ಯೋಗ ಸೃಷ್ಟಿ ಮಾಡಿರುವುದು ಪ್ರವಾಸೋದ್ಯಮದ ಮಹತ್ವವನ್ನು ಸಾರುತ್ತದೆ ಎಂದು ಕೊಡಗು ಜಿಲ್ಲಾ ಉಪ ನಿರ್ದೇಶಕರು ವಿವರಿಸಿದರು.

# ಇಂದು ಚನ್ನಪಟ್ಟಣ ಕ್ಷೇತ್ರಕ್ಕೆ ಚುನಾವಣೆ–ಸೂಕ್ತ ಬಂದೂಬಸ್ತ್‌ನಲ್ಲಿ ಮತ ಯಂತ್ರಗಳ ರವಾನೆ

**ರಾಮನಗರ, ನ.12–** ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಕ್ಕೆ ಬುಧವಾರ ನಡೆಯುವ ಮತದಾನಕ್ಕೆ ಕ್ಷೇತ್ರದಾದ್ಯಂತ ಬಿಗಿ ಬಂದೋಬಸ್ತ್ ಮಾಡಲಾಗಿದೆ.

ಯಾವುದೇ ಮತಗಟ್ಟೆಯಲ್ಲಿ ಲೋಪಕ್ಕೆಅವಕಾಶವಾಗದಂತೆ ಜಿಲ್ಲಾ ಆಡಳಿತ ಅಗತ್ಯ ಕ್ರಮಗಳನ್ನು ತೆಗೆದುಕೊಂಡಿದ್ದು, ಮಂಗಳವಾರ ಮತ ಪೆಟ್ಟಿಗೆಗಳನ್ನು ಮತಗಟ್ಟೆಗಳಿಗೆ ಸೂಕ್ತ ಬಂದೂಬಸ್ತ್‌ನೊಂದಿಗೆ ರವಾನೆ ಮಾಡಲಾಯಿತು. ಮಾದರಿ ನೀತಿ ಸಂಹಿತೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು 16 ಎಸ್‌ಎಸ್ಟಿ ತಂಡ ಮತ್ತು 9 ಎಫ್‌ಎಸ್‌ಟಿ ತಂಡಗಳನ್ನು ನಿಯೋಜಿಸಲಾಗಿದೆ.

ಚನ್ನಪಟ್ಟಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 276 ಮತಗಟ್ಟೆಗಳನ್ನು ರಚಿಸಲಾಗಿದ್ದು, ಎಲ್ಲಾ ಮತಗಟ್ಟೆಗಳಿಗೆ ವೆಬ್ ಕಾಸ್ಟಿಂಗ್‌ಗೆ ಪ್ರಕ್ರಿಯೆಗೆ ವ್ಯವಸ್ಥೆ



ಮಾಡಿಕೊಳ್ಳಲಾಗಿದೆ, 119 ಮೈಕ್ರೋ ವೀಕ್ಷಕರನ್ನು ನಿಯೋಜಿಸಲಾಗಿದೆ. ಅವರು ಚುನಾವಣಾ ವೀಕ್ಷಕರ ನಿರ್ದೇಶನದಂತೆ ಕಾರ್ಯನಿರ್ವಹಿಸುತ್ತಾರೆ. ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಕ್ಕೆ ಈಗಾಗಲೇ 8 ಪ್ಯಾರಾ ಮಿಲಿಟರಿ ತಂಡ ಜಿಲ್ಲೆಗೆ ಆಗಮಿಸಿದೆ, ಅದರಲ್ಲಿ 7 ಪ್ಯಾರಾ ಮಿಲಿಟರಿ ಪಡೆಯನ್ನು 197 ಮತಗಟ್ಟೆಗಳ ಬಂದೋಬಸ್ತ್ ಗೆ ನಿಯೋಜಿಸಲಾಗಿದೆ. 119 ಸೂಕ್ಷ್ಮ ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಅದರಲ್ಲಿ ಒಬ್ಬರು ಪೊಲೀಸ್ ಹಾಗೂ ಒಬ್ಬರು ಗೃಹ ರಕ್ಷಕರು (ಹೋಮ್ ಗಾರ್ಡ್) ಇರುತ್ತಾರೆ. ಸಾಮಾನ್ಯ ಮತಗಟ್ಟೆಗಳಿಗೆ ಪೊಲೀಸ್ ಸಿಬ್ಬಂದಿ ಹಾಗೂ 54 ಕ್ಲಸ್ಟರ್ ಮತಗಟ್ಟೆಗಳಿಗೆ ಎಎಸ್‌ಐ ರ್‍ಯಾಂಕ್ ಅಧಿಕಾರಿಗಳನ್ನು ಭದ್ರತೆಗಾಗಿ ನಿಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ನ.12ರ ಮಂಗಳವಾರ ಸಂಜೆ 6 ಗಂಟೆಯಿಂದ ನ.14ರ ಗುರುವಾರ ಬೆಳಿಗ್ಗೆ 6 ಗಂಟೆಯ ವರೆಗೆ ವಿವಿಧ ಷರತ್ತುಗಳನ್ನು ವಿಧಿಸಿ, ನಿಷೇಧಾಜ್ಞೆಯನ್ನು ಈಗಾಗಲೆ ಜಾರಿಗೊಳಿಸಲಾಗಿದೆ. ಚುನಾವಣಾ ಮತದಾನಕ್ಕೆ ಪಿಆರ್‌ಒ, ಎಪಿಆರ್‌ಒ ಹಾಗೂ ಪಿಒಎಸ್ ಸೇರಿದಂತೆ 1,252 ಮತಗಟ್ಟೆ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

# ಶೋಧನಾ ಕಾರ್ಯಚರಣೆ ನಡೆಸಿ ಇಬ್ಬರು ನಕ್ಸಲರ ಬಂಧನ

**ಚಿಕ್ಕಮಗಳೂರು,ನ.12–** ಕಾಫಿ ನಾಡು ಚಿಕ್ಕಮಗಳೂರು ಜಿಲ್ಲೆಯ ಮಲೆನಾಡು ಭಾಗಗಳಲ್ಲಿ ಮತ್ತೆ ನಕ್ಸಲರು ಸದ್ದು ಕೇಳಿ ಬಂದಿದ್ದು ನಕ್ಸಲ್ ನಿಗ್ರಹ ಪಡೆ ಸಿಬ್ಬಂದಿಗಳು ಕೂಂಬಿಂಗ್ ಕಾರ್ಯ ಚರಣೆ ನಡೆಸಿ, ಇಬ್ಬರನ್ನು ವಶಕ್ಕೆ ಪಡೆದಿದ್ದಾರೆ.

ಜಿಲ್ಲೆಯ ಜಯಪುರ ಪೊಲೀಸ್ ಠಾಣೆ ವ್ಯಾಪ್ತಿಯ ಮನೆಗಳಿಗೆ ನಕ್ಸಲರು ಭೇಟಿ ನೀಡಿರುವ ಶಂಕೆ ವ್ಯಕ್ತವಾಗಿದೆ ಈ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಅಮ್ಟೆ ಮತ್ತು ನಕ್ಸಲ್ ನಿಗ್ರಹ ಪಡೆಯ ಎಸ್.ಪಿ. ಜಿತೇಂದ್ರಕುಮಾರ್ ನೇತೃತ್ವದಲ್ಲಿ ತನಿಖೆ ಕೈಗೊಳ್ಳಲಾಗಿದೆ. ಪಶ್ಚಿಮ ವಲಯ ಐಜಿಪಿ ಅಮಿತ್ ಸಿಂಗ್ ಕೂಡ ಶೃಂಗೇರಿಯಲ್ಲಿ ಮುಖ ಮೂಡಿದ್ದಾರೆ. ಕೆಲವು ವರ್ಷಗಳಿಂದ ತಣ್ಣಗೆ ಇದ್ದ ಮಲೆನಾಡಿನಲ್ಲಿ ನಕ್ಸಲ್ ಚಟುವಟಿಕೆ ಮತ್ತೆ ಕಾಣಿಸಿಕೊಂಡಿರುವುದು ಸಾರ್ವಜನಿಕಲ್ಲಿ ಆತಂಕ ಸೃಷ್ಟಿಸಿದ್ದು ಸಾಕೆತ್ ರಾಜನ್ ಎನ್ ಕೌಂಟರ್ ಬಳಿಕ ನಕ್ಸಲ್ ಚಟುವಟಿಕೆ ಕೊಂಚ ಕಡಿಮೆಯಾಗಿತ್ತು. ಅರಣ್ಯ ಒತ್ತುವರಿ ತೆರುವಿನ ವಿರುದ್ಧ ಜನ ಆಕ್ರೋಷಿತರಾಗಿದ್ದು ಈ ವೇಳೆ ನಕ್ಸಲರು ಕಾಣಿಸಿಕೊಂಡಿರುವುದು ಮಲೆನಾಡಿನಲ್ಲಿ ಆತಂಕ ಹೆಚ್ಚಿದೆ. ನಕ್ಸಲರು ಬಂದು ಸ್ಥಳೀಯರನ್ನು ಭೇಟಿ ಮಾಡಿದ್ದಾರೆ ಎನ್ನಲಾಗಿದ್ದು ಈ ಬಗ್ಗೆ ಪೊಲೀಸರು ಇಬ್ಬರನ್ನು ವಶಕ್ಕೆ ಪಡೆದು ನಾಡ ಬಂದೂಕನ್ನು ವಶಕ್ಕೆ ಪಡೆಯ ಲಾಗಿದೆ. ಮಲೆನಾಡು ಭಾಗಗಳಲ್ಲಿ ಈಗಾಗಲೇ ಕೋಂಬಿಂಗ್ ಕಾರ್ಯಚಣೆ ನಡೆಯುತ್ತಿದ್ದು ಕಾಡಿನಿಂದ ವಾಪಸ್ ಬಂದ ಬಳಿಕ ಹೆಚ್ಚಿನ ಮಾಹಿತಿ ದೊರಕಲಿದೆ ಎಂದು ಐಜಿಪಿ ಅಮಿತ್ ಸಿಂಗ್ ತಿಳಿಸಿದ್ದಾರೆ.

# ಮರಾಠಾ ರೆಜಿಮೆಂಟ್ ಸೇನಾ ನೇಮಕಾತಿ ವೇಳೆ ನೂಕುನುಗ್ಗಲು: ಲಾಠಿ ಪ್ರಹಾರ

**ಬೆಳಗಾವಿ, ನ.12–** ಮರಾಠಾ ರೆಜಿಮೆಂಟ್ ಟೆರಿಟೋರಿಯಲ್ ಸೇನೆಯಲ್ಲಿನ ಸೈನಿಕರ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಸಂದರ್ಭದಲ್ಲಿ ನಿರೀಕ್ಷೆಗೂ ಮೀರಿ ಅಭ್ಯರ್ಥಿಗಳು ಬಂದಿದ್ದರಿಂದ ಬೆಳಗಾವಿ ಸಿಪಿಎಡ್ ಮೈದಾನ ಮುಂಭಾಗದ ರಸ್ತೆಯಲ್ಲಿ ನೂಕುನುಗ್ಗಲು ಉಂಟಾಯಿತು. ಈ ವೇಳೆ ಜನದಟ್ಟಣೆ ನಿಯಂತ್ರಿಸಲು ಪೊಲೀಸರು ಲಾಠಿ ಪ್ರಹಾರ ನಡೆಸಿದ ಪ್ರಸಂಗ ಜರುಗಿತು.

ಸೈನಿಕರ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಲು ಬೆಳಗಾವಿ, ಬಾಗಲಕೋಟೆ, ಧಾರವಾಡ ಸೇರಿದಂತೆ ರಾಜ್ಯದ 16 ಜಿಲ್ಲೆಗಳಿಂದ



30 ಸಾವಿರಕ್ಕೂ ಅಧಿಕ ಅಭ್ಯರ್ಥಿಗಳು ಬಂದಿದ್ದರು. ಒಮ್ಮಲೆ ಹೆಚ್ಚಿನ ಸಂಖ್ಯೆಯಲ್ಲಿ ಅಭ್ಯರ್ಥಿಗಳು ಪಾಲ್ಗೊಂಡ ಪರಿಣಾಮ ನೂಕುನುಗ್ಗಲು ಉಂಟಾಯಿತು. ಆಗ ಗುಂಪು ಚದುರಿಸಲು ಪೊಲೀಸರು ಲಾಠಿ ಬೀಸಿದ ದೃಶ್ಯ ಕಂಡಿತು. ಬಳಿಕ ಪೊಲೀಸರು ಮತ್ತು ಸೇನಾ ದಳದ ಸಿಬ್ಬಂದಿ ಎಲ್ಲರನ್ನೂ ಸರತಿ ಸಾಲಿನಲ್ಲಿ ನಿಲ್ಲಿಸಿದರು. ಇನ್ನೂ ಮುಂಜಾನೆ ನಗರದ ಸಿಪಿಎಡ್ ಮೈದಾನ ರಸ್ತೆಯಲ್ಲಿ ಕುಳಿತ ಅಭ್ಯರ್ಥಿ ಗಳ ಎತ್ತರ ಪರೀಕ್ಷೆಯನ್ನು ಮಾಡಲಾಯಿತು. ನಂತರ ರಾಷ್ಟ್ರೀಯ ಮಿಲಿಟರಿ ಶಾಲೆ ಮೈದಾನದತ್ತ ದೈಹಿಕ ಸಾಮರ್ಥ್ಯ ಪರೀಕ್ಷೆಗಾಗಿ ತೆರಳಿದರು. ಆಗ ಪೊಲೀಸ್ ಬಿಗಿ ಭದ್ರತೆ ಕೈಗೊಳ್ಳಲಾಗಿತ್ತು.

ನಗರದ ಕ್ಯಾಂಪ್ ಪ್ರದೇಶದಲ್ಲಿ ಮರಾಠ ರೆಜಿಮೆಂಟ್ ನಲ್ಲಿ ಸೇನಾ ನೇಮಕಾತಿ ಮುಕ್ತ ರಾಲಿ ನಡೆಯುತ್ತಿದ್ದು, ಸುಮಾರು ಮೂವತ್ತು ಸಾವಿರಕ್ಕೂ ಅಧಿಕ ಯುವಕರು ಭಾಗಿಯಾಗಿದ್ದರು. ಮಹಾರಾಷ್ಟ್ರ ಮತ್ತು ಉತ್ತರ ಕರ್ನಾಟಕ ಭಾಗದ ಅರ್ಜಿ ಹಾಕಿದ್ದ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆ ನಡೆಯುತ್ತಿದೆ.

# ವಸತಿ ಯೋಜನೆಯಡಿ 3680 ಅರ್ಜಿ: ನೈಜ ಫಲಾನುಭವಿಗಳ ಆಯ್ಕೆಗೆ ಸೂಚನೆ ಶಾಸಕಿ ಸೂಚನೆ

**ಕೋಲಾರ, ನ.12–** ಕೆಜಿಎಫ್ ನಗರದ ರೋಜರ್ ಕ್ಯಾಂಪ್ ಬಳಿ 15 ಎಕರೆ ಪ್ರದೇಶದಲ್ಲಿ ವಸತಿ ಯೋಜನೆಯಡಿ ನಿರ್ಮಾಣವಾಗುತ್ತಿರುವ ಬಡಾವಣೆಯ ನಿವೇಶನಕ್ಕಾಗಿ 3 ಸಾವಿರದ 680 ಅರ್ಜಿಗಳು ಬಂದಿದ್ದು ನೈಜ ಫಲಾನುಭವಿಗಳನ್ನು ಆಯ್ಕೆ ಮಾಡುವಂತೆ ಶಾಸಕಿ ರೂಪಕಲಾ ಶಶಿಧರ್ ತಿಳಿಸಿದರು.

ವಸತಿ ಸಮಿತಿ ಸಭೆ ನಡೆಸಿ ಮಾತನಾಡಿದ ಅವರು, ನಗರದ 35 ವಾರ್ಡ್‌ಗಳಲ್ಲಿ ಅರ್ಜಿ ಸಲ್ಲಿಸಿರುವ ಫಲಾನುಭವಿಗಳ ಆಯ್ಕೆ ಮಾಡಿ ವಾರದೊಳಗೆ ನಗರಸಭೆ ನೋಟೀಸ್ ಬೋರ್ಡ್‌ನಲ್ಲಿ ಪಟ್ಟಿ



ಪ್ರಕಟಿಸಬೇಕೆಂದು ಪೌರಾಯುಕ್ತರಿಗೆ ಸೂಚಿಸಿದರು.

ಒಂದು ವೇಳೆ ತಪ್ಪು ಮಾಹಿತಿ ನೀಡಿ, ನಿವೇಶನ ಇರುವುದನ್ನು ಮುಚ್ಚಿಟ್ಟು ಸರಕಾರದಿಂದ ನಿವೇಶನ ಪಡೆದಿರುವುದು ಪತ್ತೆಯಾದರೆ, ಅಂತಹವರ ನಿವೇಶನಗಳನ್ನು ತಕ್ಷಣ ರದ್ದುಪಡಿಸಬೇಕು. ಫಲಾನುಭವಿಗಳ ಆಯ್ಕೆ ಪಟ್ಟಿ ಪ್ರಕಟಗೊಂಡ ನಂತರ 10 ದಿನಗಳ ಒಳಗೆ ಆಕ್ಷೇಪಣೆ ಸಲ್ಲಿಸಬಹುದು, ಆನಂತರ ಲಾಟರಿ ಮುಖಾಂತರ ನಿವೇಶನ ಹಂಚಿಕೆ ಮಾಡಲಾಗುವುದು ಎಂದು ತಿಳಿಸಿದರು.

ಎರಡನೇ ಹಂತದಲ್ಲಿ ಬಲ್ಲಿಗಾನ ಹಳ್ಳಿಯ ಬಳಿ 9 ಎಕರೆ ಪ್ರದೇಶದಲ್ಲಿ ಬಡವರಿಗೆ 300 ನಿವೇಶನ ನೀಡಲು ಜಿಲ್ಲಾಡಳಿತಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಇದೇ ಸಂದರ್ಭದಲ್ಲಿ ತಿಳಿಸಿದರು.

# ಶಿಗ್ಗಾವಿ ಉಪಚುನಾವಣೆಯಲ್ಲಿ ವಿಶೇಷ ಮತಗಟ್ಟೆಗಳ ಸ್ಥಾಪನೆ: ಸಿಇಓ ಅಕ್ಷಯ್ ಶ್ರೀಧರ್

**ಹಾವೇರಿ, ನ.12–** ಶಿಗ್ಗಾಂವ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಹಿನ್ನೆಲೆಯಲ್ಲಿ ಮತದಾನದ ಪ್ರಮಾಣವನ್ನು ಹೆಚ್ಚಿಸಲು ವಿಧಾನಸಭಾ ಕ್ಷೇತ್ರದ ವಿವಿಧೆಡೆ ವಿಶೇಷ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಅಕ್ಷಯ್ ಶ್ರೀಧರ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯ ಮತದಾನ ನಾಳೆ (ನವೆಂಬರ್ 13ರಂದು) ಜರುಗಲಿದ್ದು, ಈ ನಿಟ್ಟಿನಲ್ಲಿ 5 ಸಖಿ ಮತಗಟ್ಟೆ, ಒಂದು ವಿಶೇಷ ಚೇತನರ ಮತಗಟ್ಟೆ, ಒಂದು ವಿಷಯಾಧಾರಿತ ಮತಗಟ್ಟೆ, ಒಂದು ಯುವ ಮತಗಟ್ಟೆ ಸೇರಿದಂತೆ ಒಟ್ಟು 8 ಕಡೆಗಳಲ್ಲಿ ವಿಶೇಷ ಮತಗಟ್ಟೆಗಳನ್ನು ತೆರೆಯಲಾಗಿದೆ. ಉಪ ಚುನಾವಣೆ ಅಧಿಸೂಚನೆ ಹೊರಡಿಸಿದ ದಿನದಿಂದ ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದಲ್ಲಿ ಹಲವು ಬಗೆಯ ಸ್ವೀಪ್ ಚಟುವಟಿಕೆಗಳನ್ನು ನಡೆಸಿ ಮತದಾನದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗಿದೆ ಎಂದು ಅವರು ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅಕ್ಷಯ್ ಶ್ರೀಧರ್ ಅವರ ಬೈಟ್ ಕಳುಹಿಸಲಾಗಿದೆ.

# ಮರುಳಾಧ್ಯ ಶ್ರೀಗಳ ವಿರುದ್ಧ ಎಫ್‌ಐಆರ್ ದಾಖಲು

**ಕಲಬುರಗಿ, ನ.12–** ವಕ್ಫ್ ಕಾಯ್ದೆ ವಿರುದ್ಧ ವಿವಿಧ ಮಠಾಧೀಶರ ಮುಂದಾಳತ್ವದಲ್ಲಿ ಅಫಜಲಪುರದಲ್ಲಿ ನಡೆದ ವಕ್ಫ್ ಹಟಾವೋ, ದೇಶ ಬಚಾವೋ ಹೋರಾಟದಲ್ಲಿ ಮಾಶಾಳ ಗ್ರಾಮದ ಸಿದ್ದಲಿಂಗೇಶ್ವರ ವಿರಕ್ತ ಮಠದ ಮರುಳಾರಾಧ್ಯ ಶಿವಾಚಾರ್ಯರು ಮಾತನಾಡುವ ಸಂದರ್ಭದಲ್ಲಿ ಹಿಂದುಗಳು ಇನ್ನೂ ಮುಂದೆ ಪೆನ್ನಿನ ಬದಲಾಗಿ ತಲ್ವಾರ್ ಇಟ್ಟುಕೊಳ್ಳಿ ಎಂದು ಹೇಳಿಕೆ ನೀಡಿದ್ದು ವಿವಾದಕ್ಕೆ ಕಾರಣವಾಗಿರುವ ಕಾರಣ ಅವರ ಮೇಲೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿರ್ದೇಶನದ ಮೇರೆಗೆ ಅಫಜಲಪುರ ಠಾಣೆ ಪೊಲೀಸ್‌ರು ಪ್ರಕರಣ ದಾಖಲು ಮಾಡಿಕೊಂಡಿದ್ದಾರೆ.

ಪಿಎಸ್‌ಐ ಸೋಮಲಿಂಗ ಒಡೆಯರ್ ಅವರು ಮೇಲಾಧಿಕಾರಿಗಳ ನಿರ್ದೇಶನದ ಮೇರೆಗೆ ಸ್ವಯಂ ಪ್ರೇರಿತ ದೂರು ದಾಖಲು ಮಾಡಿಕೊಂಡಿದ್ದು ವಕ್ಫ ಹಟಾವೋ, ದೇಶ ಬಚಾವೋ ಹೋರಾಟದ ಸಮಯದಲ್ಲಿ ಬಂದೋಬಸ್ತ್‌ನಲ್ಲಿದ್ದಾಗ ಮರುಳಾರಾಧ್ಯ ಶಿವಾಚಾರ್ಯರು ಮಾತನಾಡುತ್ತಾ ವಕ್ಫ ಬೋರ್ಡ್ ತೆಗಿಯಬೇಕು, ಇಲ್ಲದಿದ್ದರೆ ನಾವು ಜೀವ ತೆಗೆಯಲು ಸಿದ್ದ, ಜೀವ ಕೊಡಲು ಸಿದ್ದ, ಇನ್ನೂ ಮುಂದೆ ನಮ್ಮ ಹುಡುಗರ ಕೈಯಲ್ಲಿ ಪೆನ್ನಿನ ಬದಲಾಗಿ ತಲ್ವಾರ ಕೊಡಿ ಎಂದು ಹೇಳಿದ್ದರು. ಈ ಹೇಳಿಕೆಯಿಂದಾಗಿ ಸಮುದಾಯಗಳಲ್ಲಿ ವೈಮನಸ್ಸು ಭಾವನೆಯನ್ನುಂಟು ಮಾಡುವ ಕಾರಣದಿಂದಾಗಿ ಮತ್ತು ಮತೀಯ ಭಾವನೆಗಳಿಗೆ ಘಾಸಿಯುಂಟು ಮಾಡುವ ಉದ್ದೇಶ ಮತ್ತು ಶಾಂತಿಭಂಗ ಉಂಟು ಮಾಡುವ ರೀತಿಯ ಹೇಳಿಕೆಯಾಗಿದೆ ಎಂದು ಮರುಳಾರಾಧ್ಯ ಶಿವಾಚಾರ್ಯರ ಮೇಲೆ ಪ್ರಕರಣ ದಾಖಲಿಸಿಕೊಂಡಿದ್ದಾಗಿ ಎಫ್‌ಐಆರ್‌ನಲ್ಲಿ ಉಲ್ಲೇಖಿಸಿದ್ದಾರೆ.

**ಪ್ರಮೋದ ಮುತಾಲಿಕ್ ಎಚ್ಚರಿಕೆ:**

'ಸರ್ ತನ್‌ಸೆ ಜುದಾ' ಪ್ರಚೋದನೆಯಲ್ಲವೇ? ಮುಂಡದಿಂದ ರುಂಡ ಹಾರಿಸುವೆವು ಎನ್ನುವುದು ಪ್ರಚೋದನೆಯಲ್ಲವೇ? ಅಂಥವರ ವಿರುದ್ಧ ಯಾವುದೇ ಕ್ರಮ ಕೈಕೊಳ್ಳದ ಪೊಲೀಸರು, ಕೇವಲ ಕೈಯಲ್ಲಿ ತಲ್ವಾರ ಹಿಡಿಯಬೇಕು ಎಂದು ಹೇಳುವುದು ಅಪರಾಧವೇ? ಮಾಶಾಳ ಶ್ರೀಗಳಿಗೆ ಮುಟ್ಟಿದರೆ ಪೊಲೀಸ್ ಠಾಣೆಗೆ ಮುತ್ತಿಗೆ ಹಾಕುತ್ತೇವೆ. ಮುಂದಾಗುವ ಅನಾಹುತಗಳಿಗೆ ನೀವೇ ಜವಾಬ್ದಾರರಾಗುತ್ತೀರಿ ಎಂದು ಶ್ರೀರಾಮ ಸೇನೆ ಸಂಸ್ಥಾಪಕ ಪ್ರಮೋದ ಮುತಾಲಿಕ್ ಎಚ್ಚರಿಕೆ ನೀಡಿದರು. ವಕ್ಫ್ ಹಟಾವೋ, ದೇಶ



ಬಚಾವೋ ಹೋರಾಟದಲ್ಲಿ ಮಾತನಾಡುವಾಗ ಪೆನ್ನಿನ ಬದಲಾಗಿ ತಲ್ವಾರ್ ಇಟ್ಟುಕೊಳ್ಳಿ ಎಂದು ಹೇಳಿಕೆ ನೀಡಿದ್ದ ಕಾರಣಕ್ಕಾಗಿ ಮಾಶಾಳ ಮಠದ ಮರುಳಾಧ್ಯ ಶ್ರೀಗಳ ಮೇಲೆ ಪೊಲೀಸ್‌ರು ಕೇಸು ದಾಖಲಿಸಿಕೊಂಡಿರುವುದು ಸರಿಯಲ್ಲ, ಅವರೇನು ತಲ್ವಾರದಿಂದ ಹಲ್ಲೆ ಮಾಡಿ ಎಂದು ಹೇಳಿಲ್ಲ. ರಕ್ಷಣೆಗಾಗಿ ಇಟ್ಟುಕೊಳ್ಳಿ ಎಂದು ಹೇಳುವುದರಲ್ಲಿ ತಪ್ಪೇನಿಲ್ಲ. ಇಂಥ ನೆಪದಲ್ಲಿ ಹಿಂದೂ ಮಠಾಧೀಶರ ಬಂಧನವಾದರೆ, ಸಾವಿರಾರು ಮಠಾಧೀಶರು, ಹಿಂದು ಕಾರ್ಯಕರ್ತರು ಅಫಜಲಪುರ ಠಾಣೆಗೆ ಮುತ್ತಿಗೆ ಹಾಕಬೇಕಾಗುತ್ತದೆ ಎಂದು ಎಚ್ಚರಿಸಿದರು.

ಸುದ್ದಿಗಾರರೊಂದಿಗೆ, ರಾಜ್ಯದ ಸಚಿವ ಜಮೀರ್ ಅಹ್ಮದ್ ವಿಜಯಪುರದಲ್ಲಿ ಹಿಂದುಗಳನ್ನು ಸೈತಾನ್ ಎಂದು ಸಂಬೋಧಿಸಿದ್ದಾರೆ, ಒವೈಸಿ ಹಿಂದುಗಳ ವಿರುದ್ಧ ತೀರಾ ಅವಹೇಳನ ಮಾಡುವ ರೀತಿಯಲ್ಲಿ ಮಾತನಾಡುತ್ತಾರೆ, ಅನೇಕ ಮುಸಲ್ಮಾನರು ಬೆದರಿಕೆಯೊಡ್ಡುವ ಮಾತನಗಳನ್ನಾಡುತ್ತಾರೆ. ಆದರೂ ಅವರ ಮೇಲೆ ಯಾವ ಕೇಸು ದಾಖಲಾಗಿಲ್ಲ. ಆದರೆ ನಮ್ಮ ಹಿಂದುಗಳ ಆಸ್ತಿಯ ರಕ್ಷಣೆಗಾಗಿ ಸ್ವಾಮೀಜಿಗಳು ಬೀದಿಗಿಳಿದು ಹೋರಾಟ ಮಾಡುತ್ತಿರುವುದಲ್ಲದೆ ಹಿಂದು ಧರ್ಮದ ರಕ್ಷಣೆಗಾಗಿ ಪ್ರಾಣ ತ್ಯಾಗಕ್ಕೂ ಸಿದ್ದರಿದ್ದೇವೆ. ಎನ್ನುವಾಗ ತಲ್ವಾರ ಇಟ್ಟುಕೊಳ್ಳುವುದು ಒಳ್ಳೆಯದು ಎಂದು ಹೇಳಿಕೆ ನೀಡಿದ್ದಾರೆ. ಇದು ಯಾವ ರೀತಿಯ ವಿವಾದಾತ್ಮಕ ಹೇಳಿಕೆ ಎನ್ನುವುದು ತಿಳಿಯುತ್ತಿಲ್ಲ. ಅಫಜಲಪುರ ಪೊಲೀಸ್‌ರ ಕ್ರಮ ಸುತಾರಾಂ ಸರಿಯಲ್ಲ, ಕೂಡಲೇ ಮರುಳಾರಾಧ್ಯ ಶ್ರೀಗಳ ಮೇಲಿನ ಕೇಸು ಹಿಂಪಡೆದುಕೊಳ್ಳಬೇಕು ಇಲ್ಲದಿದ್ದರೆ ಠಾಣೆಗೆ ಮುತ್ತಿಗೆ ಹಾಕುತ್ತೇವೆ ಎಂದು ಎಚ್ಚರಿಕೆ ನೀಡಿದರು.

### ವಕ್ಫ್ ಆಸ್ತಿ ರಾಷ್ಟ್ರೀಕರಣ-ಸನಾತನ ಮಂಡಳಿ ರಚನೆಗೆ ಆಗ್ರಹ

# ಹಿಂದೂ ನಾಗರಿಕ ವೇದಿಕೆ ನೇತೃತ್ವದಲ್ಲಿ ಬೀದಿಗಿಳಿದ ಮಠಾಧೀಶರು

**ಕಲಬುರಗಿ, ನ.12–** ರೈತರ ಜಮೀನು ಹಾಗೂ ಮಠ ಮಂದಿರಗಳ ಆಸ್ತಿಯಲ್ಲಿ ವಕ್ಫ್ ನಮೂದನೆ ಮಾಡುತ್ತಿರುವುದು ಸಮಾಜದಲ್ಲಿ ಅಶಾಂತಿ ಹಾಗೂ ತಲ್ಲಣ ನಿರ್ಮಾಣ ಮಾಡುವುದು ಕಂಡು ಬರುತ್ತಿರುವ ಹಿನ್ನೆಲೆಯಲ್ಲಿ ವಕ್ಫ್ ಮಂಡಳಿ ರದ್ದುಗೊಳಿಸಿ, ವಕ್ಫ್ ಆಸ್ತಿಯನ್ನು ರಾಷ್ಟ್ರೀಕರಣಗೊಳಿಸಬೇಕು ಎಂದು ಹಿಂದೂ ನಾಗರೀಕರ ವೇದಿಕೆ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ನಾಡಿನ ವಿವಿಧ ಮಠಾಧೀಶರು ಪಾಲ್ಗೊಂಡಿದ್ದರು.

ಜಿಲ್ಲೆಯಲ್ಲಿ ನೂರಾರು ವರ್ಷಗಳಿಂದ ಉಳುಮೆ ಮಾಡುತ್ತಿರುವ ಜಮೀನು, ಮಠ, ಮಂದಿರಗಳ ಆಸ್ತಿಗಳ ಮೇಲೆ ವಕ್ಫ್ ಮಂಡಳಿ ತನ್ನ ಹೆಸರಿಗೆ ಖಾತೆ ಬದಲಾವಣೆ ಮಾಡುತ್ತಿರುವುದನ್ನು ತಕ್ಷಣ ತಡೆಹಿಡಿದು ಹಿಂದುಗಳಿಗೂ ಕೂಡಾ ಸನಾತನ ಮಂಡಳಿ ರಚನೆ ಮಾಡುವಂತೆ ಪ್ರತಿಭಟನಾಕಾರರು ಆಗ್ರಹಿಸಿದರು.

ರಾಜ್ಯಾದ್ಯಂತ ರೈತರು ಉಳುಮೆ ಮಾಡುತ್ತಿರುವ ಜಮೀನು, ಹಿಂದುಗಳ ಮಠ, ಮಂದಿರಗಳ ಮೇಲೆ ಹಾಗು ಸಂರಕ್ಷಿತ ಸ್ಮಾರಕಗಳ ಮೇಲೆ ವಕ್ಫ್ ಮಂಡಳಿ ಹೆಸರಿಗೆ ಅಸ್ತಿ ವರ್ಗಾವಣೆ ಮಾಡುತ್ತಿರುವುದು ಮತ್ತು ಪ್ರಕರಣಗಳನ್ನು ದಾಖಲಿಸುತ್ತಿರುವುದು ನಿಜಕ್ಕೂ ಖಂಡನೀಯವಾಗಿದೆಯಲ್ಲದೇ ಸಮಸ್ತ ಹಿಂದೂಗಳ ಸ್ವಾಭಿಮಾನಕ್ಕೆ ಧಕ್ಕೆ ತರುವಂತಾಗಿದೆ. ಮಠಾಧೀಶರ ಒಕ್ಕೂಟದ ನೇತೃತ್ವದಲ್ಲಿ ನಾಡಿನ ವಿವಿಧ ಮಠಾಧೀಶರು ಸಹ ಪಾಲ್ಗೊಂಡು, ಈಗಾಗಲೇ ಸುಮಾರು ಹಿಂದುಗಳ ಆಸ್ತಿಗಳ ಪಹಣಿಯಲ್ಲಿ ವಕ್ಫ್ ಬೋರ್ಡ್ ಎಂದು ಬಂದಿದ್ದು, ಅದನ್ನು ಈ ಕೂಡಲೇ ತೆಗೆದುಹಾಕಿ ಹಿಂದೂಗಳಿಗೆ ಮಾರಕವಾಗಿರುವ ವಕ್ಫ್ ಬೋರ್ಡ್ ರದ್ದುಗೊಳಿಸಿ ಎಲ್ಲಾ ವಕ್ಫ್ ಆಸ್ತಿಯನ್ನು ರಾಷ್ಟ್ರೀಕರಣಗೊಳಿಸಬೇಕು ಮತ್ತು ಹಿಂದೂಗಳಿಗಾಗಿ ಸನಾತನ ಮಂಡಳಿ ರಚಿಸುವಂತೆ ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕೆಂದು ಆಗ್ರಹಿಸಿದರು.ಹಿಂದೂ ನಾಗರಿಕ ಸಮಿತಿಯ ಸಂಚಾಲಕ ಎಂ ಎಸ್ ಪಾಟಾಲ ನರಿಬೋಳ ಮಾತನಾಡಿ, ವಕ್ಫ್ ಬೋರ್ಡ್ ತಕ್ಷಣದಿಂದ ಜಾರಿಗೆ ಬರುವಂತೆ ರದ್ದು ಮಾಡಿ ವಕ್ಫ್ ಆಸ್ತಿ ರಾಷ್ಟ್ರೀಕರಣ ಮಾಡಬೇಕು, ಸನಾತನ ಮಂಡಳಿ ರಚಿಸಿ ಪೇಜಾವರ ಶ್ರೀಗಳು ಹಾಗೂ ಜಗದ್ಗುರು ಪಂಚಾಚಾರ್ಯರು ಸೇರಿ ಹಿರಿಯ ಶ್ರೀಗಳ ಮಾರ್ಗದರ್ಶನ ಮಂಡಳಿ ಮಾಡಿ ಬಸನಗೌಡ ಪಾಟೀಲ ಯತ್ನಾಳ ಅವರನ್ನು ಅಧ್ಯಕ್ಷರನ್ನಾಗಿ ಮಾಡಿ ಹಿಂದೂಗಳಿಗೆ ನ್ಯಾಯ ಒದಗಿಸಲು ಕೇಂದ್ರ ಸರ್ಕಾರ ಮುಂದಾಗಬೇಕೆಂದು ಒತ್ತಾಯಿಸಿದರು.

ಪಾಳಾದ ಮಠದ ಗುರುಮೂರ್ತಿ ಶಿವಾಚಾರ್ಯರು ಮಾತನಾಡಿ, ವಕ್ಫ್ ಬೋರ್ಡನಿಂದ ಹಿಂದೂಗಳ ಜಮೀನು, ಮಠ ಮಂದಿರಗಳು ಹಾಗೂ ಮನೆಗಳನ್ನು ಕಬ್ಜಾ ಮಾಡಲು ಹೊರಟಿದೆ. ಒಂದೇ ದೇಶದಲ್ಲಿ ಎರಡೆರಡು ಕಾನೂನು ಒಪ್ಪುವಂತದ್ದಲ್ಲ. ಕೂಡಲೆ ವಕ್ಫ್ ಬೋರ್ಡ ರದ್ದು ಪಡಿಸಿ ಹಿಂದುಗಳ ಆಸ್ತಿ ಕಬಳಿಕೆ ಕುರಿತಾಗಿ ಎದ್ದಿರುವ ಗೊಂದಲ ಸರಿಪಡಿಸಿಬೇಕು. ಇಲ್ಲದಿದ್ದರೆ ಶಾಂತಿಯುತವಾದ ಹೋರಾಟ ಮುಂದೆ ದೇಶದ ಮಠಾಧೀಶರು, ಸಾಧು ಸಂತರು ಹಾಗೂ ಮತ್ತು ಇತರೆಲ್ಲರೂ ಸೇರಿ ಕ್ರಾಂತಿಕಾರಿಗಳಾಗ ಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಸಹ ಸಂಚಾಲಕ ಲಕ್ಷ್ಮಿಕಾಂತ ಸ್ವಾದಿ ಸಹ ಮಾತನಾಡಿ, ಹಿಂದೂ ಧರ್ಮಕ್ಕೆ ಋುತ್ತು ಬಂದಾಗ ಹಿಂದೆ ಮುಂದೆ ನೋಡದೆ ಹೋರಾಟಕ್ಕಿಳಿಯುವ ಮಠಾಧೀಶರು ನಮ್ಮ ಹೋರಾಟದಲ್ಲಿದ್ದಾರೆ. ಇನ್ನು ಕೆಲ ಮಠಾಧೀಶರು ಅನಿವಾರ್ಯ ಕಾರಣಗಳಿಂದ ಬರಲಿಕ್ಕಾಗಿಲ್ಲಾ. ಆದರೆ ಕೆಲ ಮಠಾಧೀಶರು ಹೇಗಿದ್ದಾರೆಂದರೆ ಅವರಿಗೆ ಧರ್ಮ ಹೋರಾಟ ಬೇಕಾಗಿಲ್ಲ. ಶೋಕಿ ಮಾಡುವುದರಲ್ಲಿ ಬಿಜಿ ಇದ್ದಾರೆ. ಮತ್ತು ರಾಜಕಾರಣಿ ಮನೆಗೆ ಕರೆದಾಗ ಹೋಗುತ್ತಾರೆ. ಇದನ್ನು ಭಕ್ತರು ಈಗ ಅವಲೋಕಿಸುವ ಕಾಲ ಬಂದಿದೆ ಎಂದರು.


ಕಲಬುರಗಿಯಲ್ಲಿ ವಕ್ಫ್ ಆಸ್ತಿ ರಾಷ್ಟ್ರೀಕರಣಗೊಳಿಸುವಂತೆ ಆಗ್ರಹಿಸಿ ಹಿಂದೂ ನಾಗರಿಕ ವೇದಿಕೆ ಮತ್ತು ಮಠಾಧೀಶರ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ಜರುಗಿತು.

## ಡಿಸಿ ವಿರುದ್ಧ ಆಕ್ರೋಶ

ಪ್ರತಿಭಟನೆ ನಡೆಸಿ ಗಂಟೆಗಟ್ಟಲೆ ಘೋಷಣೆಗಳನ್ನು ಕೂಗುತ್ತಿದ್ದರೂ ಯಾವ ಅಧಿಕಾರಿಗಳು ಮನವಿ ಪತ್ರ ಸ್ವಿಕರಿಸಲು ಬಾರದೆ ಇದ್ದಿದ್ದರ ಹಿನ್ನೆಲೆಯಲ್ಲಿ ಆಕ್ರೋಶಗೊಂಡ ಹೋರಾಟಗಾರರು ಹಿಂದೂ ವಿರೋಧಿ ಜಿಲ್ಲಾದಿಕಾರಿಗೆ ಧಿಕ್ಕಾರ ಜಿಲ್ಲಾಧಿಕಾರಿ ವರ್ಗಾವಣೆ ಮಾಡಿ ಎಂದು ಘೋಷ ಎನ್ನುವ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಿಸಿದ ಪ್ರಸಂಗ ಇದೇ ಸಂದರ್ಭದಲ್ಲಿ ನಡೆಯಿತು.


ಲೋಕಾಯುಕ್ತ ಅಧಿಕಾರಿಗಳ ತಂಡ ರಾಮನಗರದಲ್ಲಿ ಮಂಗಳವಾರ ದಾಳಿ ನಡೆಸಿತು.

### ವಕ್ಫ್ ನೋಟಿಸ್‌ಗೆ ಮಠಾಧೀಶರು ಗರಂ

# ರಾಜ್ಯದಲ್ಲಿ ದರೋಡೆ, ಲೂಟಿಕೋರರಿಂದ ರಾಜಕಾರಣ: ತಡೋಳ ಸ್ವಾಮೀಜಿ ಕಿಡಿ

**ಬೀದರ್, ನ.12–** ವಕ್ಫ್ ಬೋರ್ಡ್ ವಿವಾದ ವಿಜಯಪುರದಿಂದ ಪ್ರಾರಂಭವಾಗಿ ಬಳಿಕ ರಾಜ್ಯಾದ್ಯಂತ ವ್ಯಾಪಿಸಿಕೊಂಡಿತು. ಕಂಡ ಕಂಡ ರೈತರ ಜಮೀನುಗಳು, ಮಠ–ಮಂದಿರಗಳಿಗೂ ವಕ್ಫ್ ನೋಟಿಸ್ ನೀಡುವ ಮೂಲಕ ವಿವಾದದ ಕಿಚ್ಚು ಹೆಚ್ಚಿಸಿತ್ತು. ಇದಾದ ಬಳಿಕ ರೈತರು ವಿಪಕ್ಷ ಬಿಜೆಪಿ ರಾಜ್ಯಾದ್ಯಂತ ಕಾಂಗ್ರೆಸ್ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿತ್ತು. ಇದೀಗ ಬೀದರ್‌ನಲ್ಲಿ ತಡೋಳ ಮಠದ ರಾಜೇಶ್ವರ ಶಿವಾಚಾರ್ಯ ಸ್ವಾಮೀಜಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದ್ದಾರೆ.

ಜನಪ್ರತಿನಿಧಿಗಳನ್ನು ದರೋಡೆಕೋರರಿಗೆ ಹೋಲಿಕೆ ಮಾಡಿದ ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ತಡೋಳ ಮಠದ ರಾಜೇಶ್ವರ ಶಿವಾಚಾರ್ಯ ಸ್ವಾಮೀಜಿ, ರಾಜಕಾರಣಿಗಳ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಜನಪ್ರತಿನಿಧಿಗಳನ್ನು ದರೋಡೆಕೋರರಿಗೆ ಹೋಲಿಸಿದ್ದಾರೆ. ಜನಪ್ರತಿನಿಧಿಗಳನ್ನು ದರೋಡೆಕೋರರಂತಾಗಿ ಸಾರ್ವಜನಿಕರ ಆಸ್ತಿಪಾಸ್ತಿಗಳನ್ನು ಲೂಟಿ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

**ಬ್ರಿಟಿಷ್ ವೈಸ್‌ರಾಯ್ ಹೇಳಿಕೆ ಉಲ್ಲೇಖ! :** ಲಾರ್ಡ್ ವಿಲಿಯಮ್ ಬೆಂಟಿಂಕ್ ಹೇಳಿಕೆ ಉಚ್ಚರಿಸಿ ಮಾತನಾಡಿದ ಅವರು, ದರೋಡೆಕೋರರು, ಲೂಟಿಕೋರರೇ ರಾಜಕಾರಣ ಮಾಡ್ತಾರೆ ಅಂತಾ ಲಾರ್ಡ್ ವಿಲಿಯಮ್ ಬೆಂಟಿಂಕ್ ಮೊದಲೇ ಹೇಳಿದ್ರು, ಸದ್ಯದ ವಾತಾವರಣ ಕೂಡಾ ಹಾಗೇ ಇದೆ . ಕೃಷಿಕನ ಮಕ್ಕಳು ರಾಜಕಾರಣಿ ಅಗೋಕೆ ಸಾಧ್ಯವೇ ಇಲ್ಲ, ರೈತನ ವೇಷಧಾರಿಯಾಗಿ ರಾಜಕಾರಣಿ ಆಗ್ತಿದ್ದಾರೆ ಎಂದು ಆಕ್ರೋಶ ಹೊರಹಾಕಿದರು. ಚುನಾವಣೆ ಸಮಯದಲ್ಲಿ ರೈತನ ಮಕ್ಕಳು, ಕೃಷಿಕನ ಮಕ್ಕಳು, ರೈತ ದೇಶದ ಬೆನ್ನೆಲುಬು ಅಂತಾ ಹೇಳ್ತಾರೆ, ಈಗ ರೈತರ ಜಮೀನಿನಲ್ಲಿ ವಕ್ಫ್ ಹೆಸರು ಬಂದರೂ ಯಾರೂ ರೈತನ ವೇದನೆ ಕೇಳ್ತಾ ಇಲ್ಲಾ ಎಂದರು.

ರಾಜಕಾರಣಿಗಳಿಗೆ ಅಧಿಕಾರ ಬೇಕು, ಹಾಗಾಗಿ ರೈತರು ಬೇಕಾಗಿಲ್ಲಾ, ಮೂರು ಮಾತುಗಳ ಮೇಲೆ ಸದ್ಯದ ರಾಜಕಾರಣ ನಿಂತಿದೆ. ಅದು ರೈತರು, ಮಹಿಳೆಯರು ಹಾಗೂ ದಲಿತರು ಈ ಮೂರು ಹೆಸರು ಹೇಳಿಕೊಂಡು ಅಧಿಕಾರ ಹಿಡಿತಿದ್ದಾರೆ. ರಾಜಕಾರಣಿಗಳನ್ನು ದರೋಡೆಕೋರರಾಗಿದ್ದಾರೆ ಎಂದು ಆಕ್ರೋಶ ಹೊರ ಹಾಕಿದರು. ಒಂದು ತಿಂಗಳೊಳಗಾಗಿ ವಕ್ಫ್ ಹೆಸರು ಹೋಗದೇ ಇದ್ರೆ, ವಿಧಾನಸೌಧ ಮುತ್ತಿಗೆ ಹಾಕ್ತೇವೆ. ಸಿದ್ದರಾಮಯ್ಯಗೆ 1 ತಿಂಗಳ ಗಡುವು ನೀಡಿದರು. ನಾವೆಲ್ಲಾ ಮುತ್ತಿಗೆ ಹಾಕೋದಿಲ್ಲಾ, ನಾವೆಲ್ಲಾ ಎಲ್ಲಿ ಇರ್ತಿವೋ ಅಲ್ಲಿಗೆ ಸಿಎಂ ತಾನಾಗೆ ಓಡಿಕೊಂಡು ಬರ್ತಾರೆ. ಬರಲಿಲ್ಲಾ ಅಂದ್ರೆ ಸಿಎಂ ಸ್ಥಾನದಲ್ಲಿ ಸಿದ್ದ ರಾಮಯ್ಯ ಇರೋದೆ ಇಲ್ಲಾ. ನಿಮ್ಮ ಜೊತೆ ನಾವಿರ್ತೇವೆ ಎಂದು ಸರ್ಕಾರದ


ಬೀದರ್‌ನಲ್ಲಿ ವಕ್ಫ್ ವಿರೋಧಿಸಿ ವಿವಿಧ ಮಠಾಧೀಶರು ಬೀದಿಗಳಿದು ಹೋರಾಟ ನಡೆಸಿ, ಸಕಾರದ ವಿರುದ್ಧ ಆಕ್ರೋಶ ಹೊರಹಾಕಿದರು.

## ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ವಿಕಲಚೇತನರಿಗೆ ವೀಲ್ ಚೇರ್ ವಿತರಣೆ



**ಬಳ್ಳಾರಿ, ನ.12–**ವಿಕಲಚೇತನರಿಗೆ ಅನುಕಂಪ, ಕರುಣೆಗಿಂತ ಪ್ರೋತ್ಸಾಹ ಅತ್ಯಗತ್ಯ. ಅವರನ್ನು ಮುಖ್ಯ ವಾಹಿನಿಗೆ ತರುವ ಮತ್ತು ಎಲ್ಲರಂತೆ ಅವರನ್ನು ಗೌರವಿಸುವ ಕೆಲಸ ಸಮಾಜದ ಪ್ರತಿಯೊಬ್ಬರ ಮೇಲಿದೆ ಎಂದು ಬಳ್ಳಾರಿ ತಾಲೂಕಿನ ಕೊರ್ಲ ಗುಂದಿ ವಲಯದ ಬಸರಕೋಡ ಗ್ರಾಮದ *ದಳವಾಯಿ ವಂಡರಮ್ಮ* ಅವರಿಗೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಪೂಜ್ಯ ಖಾವಂದರು ಜನಮಂಗಳ ಕಾರ್ಯಕ್ರಮದಡಿಯಲ್ಲಿ ಸದಸ್ಯರಿಗೆ ವೀಲ್ ಚೇರ್ ಮಂಜೂರಾತಿ ನೀಡಿದ್ದು ಸದಸ್ಯರಿಗೆ ವಿತರಣೆ ಮಾಡಿದರು.

ಸಮಾಜದ ಪ್ರತಿಯೊಬ್ಬರೂ ಸಮಾನತೆಯ ಹಾದಿಯಲ್ಲಿ ಸಾಗಬೇಕು ಎಂದು ಬಳ್ಳಾರಿ–1 ತಾಲ್ಲೂಕಿನ ಕ್ಷೇತ್ರ ಯೋಜನಾಧಿಕಾರಿಗಳು ವೆಂಕಟೇಶ ಪಟಗಾರ್ ಕ್ಷೇತ್ರದಿಂದ ಮಂಜೂರಾತಿಯಾದ ವೀಲ್ ಚೇರನ್ನು ಸದಸ್ಯರಿಗೆ ಸದಸ್ಯರಿಗೆ ವಿತರಣೆ ಮಾಡಿ, ಸದಸ್ಯರಿಗೆ ಶುಭಹಾರೈಸಿದರು.

### ಸಂಡೂರು ವಿಧಾನಸಭೆ ಉಪಚುನಾವಣೆ

# ಇಂದು ಶಾಂತಿಯುತ ಮತದಾನಕ್ಕೆ ಸಕಲ ಕ್ರಮ: ಪ್ರಶಾಂತ್ ಕುಮಾರ್ ಮಿಶ್ರಾ



**ಬಳ್ಳಾರಿ, ನ.12–**ಸಂಡೂರು ವಿಧಾನಸಭೆ ಉಪಚುನಾವಣೆಗೆ ನ.13 ರಂದು ಮತದಾನ ನಡೆಯಲಿದ್ದು, ಮುಕ್ತ, ನ್ಯಾಯಸಮ್ಮತ ಹಾಗೂ ಶಾಂತಿಯುತ ಮತದಾನಕ್ಕೆ ಜಿಲ್ಲಾಡಳಿತದಿಂದ ಅಂತಿಮ ಸಿದ್ದತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಆದ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಸಂಡೂರು ವಿಧಾನಸಭೆ ಉಪಚುನಾವಣೆ ಹಿನ್ನಲೆಯಲ್ಲಿ ಸಂಡೂರು ತಾಲ್ಲೂಕು ತಹಶೀಲ್ದಾರರ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ನ.13 ರಂದು ಬೆಳಿಗ್ಗೆ 05.30 ಗಂಟೆಗೆ ರಾಜಕೀಯ ಪಕ್ಷಗಳ ಮುಖಂಡರ ಸಮಕ್ಷಮದಲ್ಲಿ ಅಣಕು ಮತದಾನ ನಡೆಯಲಿದೆ. ನಂತರ ಬೆಳಿಗ್ಗೆ 07 ಗಂಟೆಯಿಂದ ಮತದಾನ ಪ್ರಕ್ರಿಯೆ ಆರಂಭಗೊಂಡು ಸಂಜೆ 06 ಗಂಟೆಯವರೆಗೆ ನಡೆಯಲಿದೆ. ಮತದಾನಕ್ಕೆ ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಅವರು ತಿಳಿಸಿದರು.

ಸಂಡೂರು ವಿಧಾನಸಭೆ ವ್ಯಾಪ್ತಿಯಲ್ಲಿ ಒಟ್ಟು 2,36,402 ಮತದಾರರಿದ್ದಾರೆ. 1,17,935 ಪುರುಷ ಮತದಾರರು, 1,18,438 ಮಹಿಳೆ ಮತದಾರರು ಹಾಗೂ 29 ಅಲ್ಪಸಂಖ್ಯಾತ ಲಿಂಗತ್ವ ಮತದಾರರು ಇದ್ದಾರೆ. ಒಟ್ಟು 253 ಮತಗಟ್ಟೆ ಗಳಿವೆ ಎಂದು ಮಾಹಿತಿ ನೀಡಿದರು.

ನಗರ ವ್ಯಾಪ್ತಿಯಲ್ಲಿ 68 ಮತ್ತು ಗ್ರಾಮೀಣ ವ್ಯಾಪ್ತಿಯಲ್ಲಿ 185 ಮತದಾನ ಕೇಂದ್ರಗಳಿವೆ. ಸಂಡೂರು 17, ತೋರಣಗಲ್ಲು 27 ಮತ್ತು ಚೋರನೂರು 16 ಮತಗಟ್ಟೆ ಸೇರಿ ಒಟ್ಟು 60 ಮತಗಟ್ಟೆ ಗಳನ್ನು ಕ್ರಿಟಿಕಲ್ ಮತಗಟ್ಟೆ ಕೇಂದ್ರಗಳೆಂದು ಗುರುತಿಸಲಾಗಿದೆ. ಎಲ್ಲಾ ಮತಗಟ್ಟೆ ಕೇಂದ್ರಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ವಿಶ್ರಾಂತಿ ಕೊಠಡಿ, ಶೌಚಾಲಯ ವ್ಯವಸ್ಥೆ ಸೇರಿದಂತೆ ಅಗತ್ಯ ಮೂಲಭೂತ ಸೌಲಭ್ಯ ಕಲ್ಪಿಸಲಾಗಿದೆ ಎಂದು ಅವರು ಹೇಳಿದರು.

ಸಂಡೂರು ವಿಧಾನಸಭೆ ಉಪಚುನಾವಣೆಗೆ 324 ಬ್ಯಾಲೆಟ್ ಯುನಿಟ್, 324 ಕಂಟ್ರೋಲ್ ಯುನಿಟ್ ಮತ್ತು 379 ವಿವಿಪ್ಯಾಟ್ ಮತಯಂತ್ರಗಳನ್ನು ಬಳಸಲಾಗುವುದು. ಹೆಚ್ಚುವರಿಯಾಗಿ 304 ಬ್ಯಾಲೆಟ್ ಯುನಿಟ್, 304 ಕಂಟ್ರೋಲ್ ಯುನಿಟ್ ಮತ್ತು 329 ವಿವಿಪ್ಯಾಟ್ ಮತಯಂತ್ರಗಳು ಇರಿಸಲಾಗಿದೆ ಎಂದರು.

ಪಾರದರ್ಶಕ ಚುನಾವಣೆಗೆ ಎಲ್ಲಾ ಹಂತದಲ್ಲಿ ಇವಿಎಂ ಮತಯಂತ್ರಗಳನ್ನು ಪರಿಶೀಲನೆ ನಡೆಸಿದ್ದು, ಯಾವುದೇ ರೀತಿಯ ಗೊಂದಲವಾಗದಂತೆ ಅಗತ್ಯ ಕ್ರಮ ವಹಿಸಲಾಗಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

### ಅಕ್ಕನ ಬಳಗ ಕೇವಲ ಒಂದು ಕಾರ್ಯಕ್ರಮ

# ಸಂಸ್ಕಾರ, ಸಂಸ್ಕೃತಿ ಸದಾ ಉಳಿಸಿ, ಬೆಳೆಸಲು ಪ್ರೋತ್ಸಾಹಿಸಿ: ಬಸವಲಿಂಗ ಮಹಾಸ್ವಾಮಿ



**ಬಳ್ಳಾರಿ, ನ.12–** ಬಳ್ಳಾರಿ ನಗರದ ಶ್ರೀ ಕೊಟ್ಟೂರುಸ್ವಾಮಿ ಸಂಸ್ಥಾನ ಮಠ ಬಳ್ಳಾರಿಯಲ್ಲಿ ದಿನಾಂಕ 11 ನವಂಬರ್ ರಂದು ಪರಮ ಪೂಜ್ಯ ಶ್ರೀ ಜಗದ್ಗುರು ಸಂಗನ ಬಸವ ಮಹಾಸ್ವಾಮಿಗಳ ದಿವ್ಯ ಪ್ರಕಾಶದಲ್ಲಿ, ಹಂಪಿ ಹೇಮಕೂಟ ಶೂನ್ಯ ಸಿಂಹಾಸನಾಧೀಶ್ವರ ಶ್ರೀಮನ್ ನಿರಂಜನ ಜಗದ್ಗುರು ಕೊಟ್ಟೂರು ಬಸವಲಿಂಗ ಮಹಾಸ್ವಾಮಿಗಳು ಶ್ರೀ ಜಗದ್ಗುರು ಕೊಟ್ಟೂರುಸ್ವಾಮಿ ಸಂಸ್ಥಾನಮಠ ಬಳ್ಳಾರಿ, ಹೊಸಪೇಟೆ, ಹಾಲಕೆರೆ ಪಾವನ ಸನ್ನಿದಾನದಲ್ಲಿ ಪೂಜ್ಯ ಶ್ರೀ ಮ.ನಿ.ಪ್ರ ಕೊಟ್ಟೂರು ಸ್ವಾಮಿಗಳು ಶ್ರೀ ಸಂಗನ ಬಸವೇಶ್ವರ ಮಠ ದರೂರು, ಪೂಜ್ಯ ಶ್ರೀ ಸಿದ್ದಲಿಂಗ ದೇಶಿಕರು ವಿರಕ್ತಮಠ ಸೋಮಸಮುದ್ರ, ಪೂಜ್ಯ ಶ್ರೀ ಮರಿಕೊಟ್ಟೂರು ದೇಶಿಕರು ವಿರಕ್ತಮಠ ಶ್ರೀಧರಗಡ್ಡೆ. ಶ್ರೀಗಳ ಸಮ್ಮುಖದಲ್ಲಿ, ಕೊಟ್ಟೂರೇಶ್ವರರ ಕಾರ್ತಿಕೋತ್ಸವ (1001 ದೀಪ) ಹಾಗೂ ಶ್ರೀ ಜಗದ್ಗುರು ಕೊಟ್ಟೂರುಸ್ವಾಮಿ ಸಂಸ್ಥಾನ ಮಠದ ಅಕ್ಕನ ಬಳಗಕ್ಕೆ ಚಾಲನೆಯ ಕಾರ್ಯಕ್ರಮ ನೆರವೇರಿತು.

ಪರಮ ಪೂಜ್ಯ ಶ್ರೀಮನ್ ನಿರಂಜನ ಜಗದ್ಗುರು ಕೊಟ್ಟೂರು ಬಸವಲಿಂಗ ಮಹಾಸ್ವಾಮಿಗಳು, ಅಕ್ಕನ ಬಳಗದಲ್ಲಿ ಎಲ್ಲ ಮಾತೆಯರು ಸೇರಿ ನಿಸ್ವಾರ್ಥ ಮನೋಭಾವದಿಂದ ಕಾರ್ಯವನ್ನು ಮಾಡಿ, ಅದರಿಂದ ಸಾವಿರಾರು ಜನರಿಗೆ ಉಪಯೋಗ ವಾಗಬೇಕೆಂದು ಅಕ್ಕನ ಬಳಗದ ಕುರಿತು ಪುಷ್ಟಿದಾಯಕ ನುಡಿಗಳನ್ನಾಡಿ, ಅಕ್ಕನ ಬಳಗ ಕೇವಲ ಒಂದು ಕಾರ್ಯಕ್ರಮವಾಗದೆ, ನಮ್ಮ ಸಂಸ್ಕಾರ, ಸಂಸ್ಕೃತಿ ಸದಾ ಉಳಿಯುವಂತೆ, ಬೆಳೆಯುವಂತೆ ಪ್ರೋತ್ಸಾಹಿಸಿ ಎಂದು ತಮ್ಮ ಆಶೀರ್ವಚನದಲ್ಲಿ ಹೇಳಿದರು.

ಉದ್ಘಾಟಕರಾಗಿ ಶ್ರೀಮತಿ ಕೆ ಎಮ್ ಪಾರ್ವತಮ್ಮ (ಗಣಿ ಮಾಲಿಕರು ಬಳ್ಳಾರಿ), ಶ್ರೀಮತಿ ಅಲ್ಲಂ ಸುನಂದಮ್ಮ ನವರು ಉಪಸ್ಥಿತರಿದ್ದರು. ಮತ್ತು ಮುಖ್ಯ ಅತಿಥಿಗಳಾಗಿ ಶ್ರೀಮತಿ ಸಾವಿತ್ರಿ ಮುಜುಮದಾರ (ಚೇರಮನ್ ಮುಜುಮದಾರ್ ಪೌಂಡೇಶನ್), ಶ್ರೀಮತಿ ಸುರೇಖಾ ಮಲ್ಲನಗೌಡ (ಮಹಾನಗರ ಪಾಲಿಕೆ ಸದಸ್ಯರು), ಡಾ.ರಚನಾ, ಡಾ.ರೇಣುಕಾ, ಡಾ.ಭಾಗ್ಯ ಲಕ್ಷೀ, ಕಾತ್ಯಾಯಿನಿ ಇವರುಗಳು ಕೂಡಾ ಉಪಸ್ಥಿತರಿದ್ದರು.

ಶ್ರೀಮತಿ ಸುಶಿಲಾ ಶಿರೂರು, ನಿವೃತ್ತ ಉಪನ್ಯಾಸಕರು. (ಕೊಟ್ಟೂರು ಸ್ವಾಮಿ ಬಿಇಡಿ ಕಾಲೇಜ್ ಬಳ್ಳಾರಿ). ಉಪಸ್ಥಿತರಿದ್ದು, ಶ್ರೀಮತಿ ಸಾವಿತ್ರಿ ಮುಜುಮದಾರ ರವರು ಅಕ್ಕನ ಬಳಗದ ಕುರಿತು ಪ್ರೋತ್ಸಾಹದ ನುಡಿಗಳೊಂದಿಗೆ ಇಂದು ಹಚ್ಚಿರುವ 1001 ದೀಪಗಳಂತೆ ಅಕ್ಕನ ಬಳಗ ಸದಾ ಬೆಳಗುತ್ತಿರಲಿ ಎಂದು ನುಡಿದರು. ಶ್ರೀಮತಿ ಸುಶಿಲಾ ಶಿರೂರು ಅವರು ಕೂಡ ಅಕ್ಕನ ಬಳಗದ

### ಸಂಡೂರು ಉಪಚುನಾವಣೆ-ಸುಸೂತ್ರವಾಗಿ ನಡೆದ ಮಸ್ಟರಿಂಗ್ ಕಾರ್ಯ

# ಮತಗಟ್ಟೆಗಳಿಗೆ ತೆರಳಿದ ಅಧಿಕಾರಿ, ಸಿಬ್ಬಂದಿ

**ಬಳ್ಳಾರಿ,ನ12–**ಸಂಡೂರು ವಿಧಾನಸಭೆ ಉಪಚುನಾವಣೆಗೆ ನ.13 ಬುಧವಾರ ಬೆಳಿಗ್ಗೆ 7 ರಿಂದ ಸಂಜೆ 6 ಗಂಟೆಯವರೆಗೆ ಮತದಾನ ಜರುಗಲಿದ್ದು, ಸಂಡೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮತಗಟ್ಟೆಗಳಿಗೆ ಮತದಾನ ಕಾರ್ಯಕ್ಕೆ ಅಧಿಕಾರಿಗಳು ಹಾಗೂ ಸಿಬ್ಬಂದಿ ನಿಯೋಜನೆ ಮಾಡುವ ಮಸ್ಟರಿಂಗ್ ಕಾರ್ಯ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಂಗಳವಾರ ಜರುಗಿತು.

ಚುನಾವಣಾ ಕಾರ್ಯಕ್ಕೆ ನಿಯೋಜನೆಗೊಂಡ ಅಧಿಕಾರಿ, ಸಿಬ್ಬಂದಿಗಳಿಗೆ ಗೊಂದಲಕ್ಕೆ ಆಸ್ಪದವಿಲ್ಲದಂತೆ, ಮಸ್ಟರಿಂಗ್ ಕಾರ್ಯಕ್ಕೆ ಅಚ್ಚುಕಟ್ಟಾದ ವ್ಯವಸ್ಥೆಯನ್ನು ಕೈಗೊಳ್ಳಲಾಯಿತು. ಚುನಾವಣಾಧಿಕಾರಿ ಹಾಗೂ ಉಪ ವಿಭಾಗಾಧಿಕಾರಿ ರಾಜೇಶ್ ಹೆಚ್.ಡಿ ಅವರು ಮಸ್ಟರಿಂಗ್ ಕಾರ್ಯದ ಉಸ್ತುವಾರಿ ವಹಿಸಿದ್ದರು.ಚುನಾವಣೆ ಕಾರ್ಯ ಹಾಗೂ ಮತಗಟ್ಟೆಯ ಬಂದೋ ಬಸ್ತ್ ಗಾಗಿ ನಿಯೋಜಿತಗೊಂಡಿರುವ ಪೋಲಿಸರು, ಗೃಹರಕ್ಷಕ ದಳದವರು ಆಗಮಿಸಿದ್ದರು.

ಮತದಾನ ಪ್ರಕ್ರಿಯೆಗೆ ತೆರಳುವ ಅಧಿಕಾರಿ, ಸಿಬ್ಬಂದಿ ಹಾಗೂ ಪೊಲೀಸರನ್ನು ಆಯಾ ಗ್ರಾಮಗಳಲ್ಲಿನ ಮತಗಟ್ಟೆಗಳತ್ತ ತೆರಳುವಂತಹ ಮಾರ್ಗಗಳನ್ನು ಗುರುತಿಸಿ ಕರೆದು ಕೊಂಡು ಹೋಗಲು ಬಸ್, ಕ್ರೂಸರ್ ಹಾಗೂ ಜೀಪ್‌ಗಳು ಕಾಲೇಜು ಮುಂಭಾಗದಲ್ಲಿ ಸಾಲಾಗಿ ಜಮಾವಣೆಗೊಂಡಿದ್ದವು.



ಕಾಲೇಜು ಆವರಣದಲ್ಲಿ ಅಧಿಕಾರಿ, ಸಿಬ್ಬಂದಿಗಳಿಗೆ ತಾವು ತೆರಳಬೇಕಿರುವ ಮತಗಟ್ಟೆಯ ವಿವರ ಹಾಗೂ ಬಸ್‌ಗಳ ವಿವರವನ್ನು ಧ್ವನಿವರ್ಧಕ ಮೂಲಕ ತಿಳಿಸುವ ವ್ಯವಸ್ಥೆ ಮಾಡಲಾಗಿತ್ತು. ಮಸ್ಟರಿಂಗ್ ಕಾರ್ಯಕ್ಕೆ ಆಗಮಿಸಿದ ಅಧಿಕಾರಿ, ಸಿಬ್ಬಂದಿಗಳ ಆರೋಗ್ಯದಲ್ಲಿ ವ್ಯತ್ಯಯ ಉಂಟಾದಲ್ಲಿ, ತ್ವರಿತ ಸ್ಪಂದನೆಗಾಗಿ, ವೈದ್ಯರಿಂದ ಆರೋಗ್ಯ ತಪಾಸಣೆ, ಅಗತ್ಯ ಔಷಧಿಗಳು, ಓಆರ್‌ಎಸ್, ಆಂಬುಲೆನ್ಸ್ ವ್ಯವಸ್ಥೆ ಮಾಡಲಾಗಿತ್ತು. ಚುನಾವಣಾ ಸಾಮಗ್ರಿ ವಿತರಣೆ, ಮತಯಂತ್ರಗಳ ವಿತರಣೆ, ಚುನಾವಣೆಗೆ ಮತಗಟ್ಟೆಗಳಿಗೆ ನಿಯೋಜನೆ, ಚುನಾವಣಾ ಕರ್ತವ್ಯಕ್ಕೆ ತೆರಳಲು ಆಗಮಿಸಿದ್ದ ಅಧಿಕಾರಿ, ಸಿಬ್ಬಂದಿಗಳಿಗೆ ಕಾಲೇಜು ಆವರಣದಲ್ಲಿ ಕುಡಿಯುವ ನೀರು, ನೆರಳಿನ ವ್ಯವಸ್ಥೆ ಹಾಗೂ ಮತಗಟ್ಟೆಗಳತ್ತ ತೆರಳುವ ಮುನ್ನ ಮಧ್ಯಾಹ್ನದ ಊಟ ಪೂರೈಸಿಕೊಂಡು ಹೋಗುವ ರೀತಿ ವ್ಯವಸ್ಥೆ ಮಾಡಲಾಗಿತ್ತು.

*ಜಿಲ್ಲಾಧಿಕಾರಿ ಭೇಟಿ ಪರಿಶೀಲನೆ:– ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಮಸ್ಟರಿಂಗ್ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಯಾರೂ ಭಯಭೀತರಾಗದೇ ಚುನಾವಣಾ ಕಾರ್ಯ ಶಾಂತಿಯುತವಾಗಿ ಕೈಗೊಳ್ಳಬೇಕು. ಯಾವುದೇ ರೀತಿಯ ಗೊಂದಲ ಕಂಡುಬಂದಲ್ಲಿ ಸಂಬಂಧಿಸಿದ ಪಿಆರ್‌ಓಗಳ ಗಮನಕ್ಕೆ ತರಬೇಕು ಎಂದರು. ಚುನಾವಣೆ ಆಯೋಗ ಕೈಪಿಡಿಯಲ್ಲಿನ ಚೆಕ್‌ಲಿಸ್ಟ್ ನಂತೆಯೇ ಮತಗಟ್ಟೆಗಳಿಗೆ ತೆರಳುವ ಅಧಿಕಾರಿ ಹಾಗೂ ಸಿಬ್ಬಂದಿಗೆ ವಿದ್ಯುನ್ಮಾನ ಮತಯಂತ್ರ, ಮತದಾರ ಪಟ್ಟಿ, ಸ್ಪರ್ಧಿಸುತ್ತಿರುವ ಉಮೇದುವಾರರ ಪಟ್ಟಿ, ಶಾಹಿ ಸೇರಿದಂತೆ ಇತರೆ ಸ್ಟೇಷನರಿ ಕಿಟ್‌ಗಳನ್ನು ಚೆಕ್ ಲಿಸ್ಟ್‌ನ ಕ್ರಮದಲ್ಲಿ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.


# ಜಮೀರ್ ಅಹ್ಮದ್ ವಿರುದ್ಧ ಕಠಿಣ ಕ್ರಮ ರಾಯಚೂರು ಜಿಲ್ಲಾ ಜೆಡಿಎಸ್ ಆಗ್ರಹ



**ಬಳ್ಳಾರಿ, ನ.12–** ಭಾರತ ಸರ್ಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕ ಸಚಿವರು ಹಾಗೂ ಜನತಾದಳ (ಜಾತ್ಯಾತೀತ) ಪಕ್ಷದ ರಾಜ್ಯಾಧ್ಯಕ್ಷರಾದ ಎಚ್.ಡಿ. ಕುಮಾರಸ್ವಾಮಿರವರ ಬಗ್ಗೆ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯ ಪ್ರಚಾರದ ಭಾಷಣದಲ್ಲಿ ಅವಹೇಳನಕಾರಿ ಹಾಗೂ ಅಸಭ್ಯ ಭಾಷೆಯನ್ನು ಜಮೀರ್‌ಖಾನ್ ಬಳಸಿರುತ್ತಾರೆ.

ರಾಜ್ಯ ಕಾಂಗ್ರೆಸ್ ಸರ್ಕಾರದ ವಸತಿ, ವಕ್ಸ್ ಹಾಗೂ ಅಲ್ಪಸಂಖ್ಯಾತ ಕಲ್ಯಾಣ ಸಚಿವರಾದ ಬಿ.ಝಡ್. ಜಮೀರ್ ಅಹ್ಮದ್ ಖಾನ್‌ರವರ ವರ್ತನೆಯನ್ನು ಬಳ್ಳಾರಿ ಜಿಲ್ಲಾ ಜನತಾದಳ (ಜಾತ್ಯಾತೀತ) ಪಕ್ಷವು ತೀವ್ರವಾಗಿ ಖಂಡಿಸುತ್ತದೆ. ಬಿ.ಝಡ್. ಜಮೀರ್ ಅಹ್ಮದ್ ಖಾನ್‌ರವರನ್ನು ಸಚಿವ ಸಂಪುಟ ಸ್ಥಾನದಿಂದ ವಜಗೊಳಿಸಿ, ಅವರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕಾಗಿ ಬಳ್ಳಾರಿ ಜಿಲ್ಲಾ ಜೆಡಿಎಸ್ ಜಿಲ್ಲಾಧ್ಯಕ್ಷರಾದ ಮೀನಳ್ಳಿ ತಾಯಣ್ಣ ಪ್ರತಿಭಟನೆ ನಡೆಸಿ ಮನವಿ ಪತ್ರ ಸಲ್ಲಿಸಿದ್ದಾರೆ. ಈ ಸಂದರ್ಭದಲ್ಲಿ ಬಳ್ಳಾರಿ ನಗರ ಅಧ್ಯಕ್ಷರಾದ ಹೊನ್ನುರುಸ್ವಾಮಿ (ವಂಡ್ರಿ),ಕಿರಣ್, ಸಂಗನಕಲ್ಲು ಅಶೋಕ್,ಮುತ್ತು, ಪ್ರದೀಪ್, ಜಾವೀದ್, ಭವಾನಿ, ರುಮಾನ, ನೀಲಾ, ಫೈಮುನಿ, ಶಬಾನಾ, ಹಾಗೂ ಮತ್ತಿತರರು ಭಾಗವಹಿಸಿದ್ದರು.

# ಮಕ್ಕಳ ಸಮಸ್ಯೆ ಪರಿಹರಿಸಲು ಪ್ರಯತ್ನ ನಡೆಯಲಿ: ಶಶಿಧರ ಕೋಸಂಬೆ



**ಬಸವಕಲ್ಯಾಣ, ನ.12–** ಸರ್ಕಾರ ಮತ್ತು ಸ್ವಯಂ ಸೇವಾ ಸಂಸ್ಥೆಗಳು ಸೇರಿಕೊಂಡು ಮಕ್ಕಳ ಸಮಸ್ಯೆಗಳನ್ನು ಆಲಿಸಿ ಪರಿಹರಿಸಿದಲ್ಲಿ ಮಕ್ಕಳಿಗೆ ಸಂಪೂರ್ಣವಾಗಿ ಅವರ ಹಕ್ಕುಗಳು ದೊರೆಯುವಂತಾಗುತ್ತದೆ. ಜೊತೆಗೆ ಅವರಲ್ಲಿ ಹಕ್ಕುಗಳ ಕುರಿತು ತಿಳಿವಳಿಕೆ ಮೂಡಲು ಸಾಧ್ಯವಾಗುತ್ತದೆ ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ಹೇಳಿದರು.

ಮೈಸೂರಿನ ಗ್ರಾಮೀಣ ಶಿಕ್ಷಣ ಮತ್ತು ಆರೋಗ್ಯ ಸಂಸ್ಥೆ ಆರ್‌ಎಲ್‌ಎಚ್‌ಪಿ, ಬೀದರ್ ಜಿಲ್ಲಾಡಳಿತ, ಬಸವಕಲ್ಯಾಣ ತಾಲ್ಲೂಕು ಆಡಳಿತ, ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಆಯೋಗದೊಂದಿಗೆ ಇಲ್ಲಿಯ ಬಸವ ಮಹಾಮನೆಯಲ್ಲಿ ಹಮ್ಮಿಕೊಂಡ ಮಕ್ಕಳ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳೊಂದಿಗೆ ಸಂವಾದ ಕಾರ್ಯಕ್ರಮ ಹಮ್ಮಿಕೊಂಡಿರುವದು ತುಂಬಾ ಶ್ಲಾಘನಿಯವಾಗಿದೆ. ಮಕ್ಕಳು ಹೇಳಿರುವ ಸಮಸ್ಯೆಗಳನ್ನು ಗಮನಿಸಿ ಸಂಬಂಧಪಟ್ಟ ಆಯಾ ಇಲಾಖೆಗಳಿಗೆ ಸೂಕ್ತ ನಿರ್ದೇಶನವನ್ನು ನೀಡಲಾಗುವುದು.

ಇದೊಂದು ವಿಶೇಷ ಅಭೂತಪೂರ್ವ ಕಾರ್ಯಕ್ರಮವಾಗಿದ್ದು, ಮಕ್ಕಳು ಮೂಲಭೂತ ಸಮಸ್ಯೆಗಳಿಗೆ ಸಂಬಂಧಪಟ್ಟಂತೆ ಪ್ರಶ್ನೆಗಳನ್ನು ಮಂಡಿಸಿದ್ದಾರೆ ಇದು ನಿಜಕ್ಕೂ ತುಂಬಾ ಶೋಚನೀಯವಾಗಿದೆ. ಸ್ವತಂತ್ರ ಬಂದು 75 ವರ್ಷ ಕಳೆದರೂ ಸಹ ಇಂದಿಗೂ ಇಂತಹ ಸಮಸ್ಯೆಗಳು ಜೀವಂತವಾಗಿರುವುದು ತುಂಬಾ ದುರದೃಷ್ಟಕರವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ತಹಶೀಲ್ದಾರ ಡಾ. ದತ್ತಾತ್ರೇಯ ಗಾದಾ ಮಾತನಾಡಿ ಇಂದಿನ ಸಂವಾದ ಕಾರ್ಯಕ್ರಮದಲ್ಲಿ ಮಕ್ಕಳು ತಮ್ಮ ಸಮಸ್ಯೆಗಳನ್ನು ತಿಳಿಸಿದ್ದು ಅವುಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲಾಗುವದು ಎಂದರು.

# ವಾಯುಮಾಲಿನ್ಯ: ಜನರ ಓಡಾಟಕ್ಕೆ ಬ್ರೇಕ್ ಹಾಕಿದ ಪಾಕ್ ಸರ್ಕಾರ



**ಇಸ್ಲಾಮಾಬಾದ್,ನ.12:** ಪಾಕಿಸ್ತಾನದಲ್ಲಿ ದಿನೇ ದಿನೇ ವಾಯುಮಾಲಿನ್ಯ ಹೆಚ್ಚಾಗುತ್ತಿದೆ. ವಾಯುಮಾಲಿನ್ಯದಿಂದ ಜನರು ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿದ್ದಾರೆ. ಹೀಗಾಗಿ, ಸರ್ಕಾರ ಜನರ ಓಡಾಟಕ್ಕೆ ಬ್ರೇಕ್ ಹಾಕಿದೆ. ಪಾಕಿಸ್ತಾನದ ಪಂಜಾಬ್ ಪ್ರಾಂತ್ಯವು ಹೆಚ್ಚಿನ ಹೊರಾಂಗಣ ಚಟುವಟಿಕೆಗಳನ್ನು ನಿಷೇಧಿಸಿದೆ. ತೀವ್ರವಾದ ವಾಯುಮಾಲಿನ್ಯದಿಂದ ಉಂಟಾಗುವ ಕಾಯಿಲೆಗಳನ್ನು ನಿಗ್ರಹಿಸಲು ಸೋಮವಾರದಿಂದ ಕೆಲವು ಪ್ರದೇಶಗಳಲ್ಲಿ ಅಂಗಡಿಗಳು, ಮಾರುಕಟ್ಟೆಗಳು ಮತ್ತು ಮಾಲ್‌ಗಳನ್ನು ಮುಚ್ಚಲು ಆದೇಶಿಸಿದೆ. ಜನರು ಹೊರಗಡೆ ಹೆಚ್ಚು ಓಡಾಡದಂತೆ ಕ್ರಮ ವಹಿಸಲಾಗಿದೆ.

ಸ್ವಿಸ್ ಗ್ರೂಪ್ IQAirನ ಲೈವ್ ರೇಟಿಂಗ್‌ಗಳ ಪ್ರಕಾರ, ವಾಯು ಗುಣಮಟ್ಟದಲ್ಲಿ ವಿಶ್ವದ ಅತ್ಯಂತ ಕಲುಷಿತ ನಗರವಾದ ಲಾಹೋರ್ ಸೇರಿದಂತೆ ವಿವಿಧ ಸ್ಥಳಗಳಲ್ಲಿ ನ.17 ರ ವರೆಗೆ ಶಿಕ್ಷಣ ಸಂಸ್ಥೆಗಳು ಮತ್ತು ಉದ್ಯಾನಗಳು ಮತ್ತು ಪ್ರಾಣಿಸಂಗ್ರಹಾಲಯಗಳಂತಹ ಸಾರ್ವಜನಿಕ ಸ್ಥಳಗಳನ್ನು ಮುಚ್ಚಲಾಗಿದೆ. ಲಾಹೋರ್, ಮುಲ್ತಾನ್, ಫೈಸಲಾಬಾದ್ ಮತ್ತು ಗುಜ್ರಾನ್ವಾಲಾ ಜಿಲ್ಲೆಗಳಲ್ಲಿ ಉಸಿರಾಟದ ಕಾಯಿಲೆಗಳು, ಕಣ್ಣು ಮತ್ತು ಗಂಟಲಿನ ಕಿರಿಕಿರಿ ಮತ್ತು ಗುಲಾಬಿ ಕಣ್ಣಿನ ಕಾಯಿಲೆಯ ರೋಗಿಗಳ ಸಂಖ್ಯೆ ಹೆಚ್ಚುತ್ತಿರುವುದು ಆತಂಕ ಮೂಡಿಸಿದೆ.

ಹೊಸ ನಿರ್ಬಂಧಗಳು ನ.17 ರವರೆಗೆ ಜಾರಿಯಲ್ಲಿರುತ್ತವೆ. ಬ್ಯಾಕ್ಟೀರಿಯಾ ಅಥವಾ ವೈರಲ್ ಸೋಂಕು, ಹೊಗೆ, ಧೂಳು ಅಥವಾ ರಾಸಾಯನಿಕ ಮಾನ್ಯತೆಯಿಂದಾಗಿ ಗುಲಾಬಿ ಕಣ್ಣಿನ ಕಾಯಿಲೆಯ ಹರಡುವಿಕೆಯು ಸಾರ್ವಜನಿಕ ಆರೋಗ್ಯಕ್ಕೆ ಗಂಭೀರ ಅಪಾಯವನ್ನುಂಟುಮಾಡುತ್ತಿದೆ ಎಂದು ಪಂಜಾಬ್ ಸರ್ಕಾರ ಹೇಳಿದೆ. ಕ್ರೀಡಾ ಕಾರ್ಯಕ್ರಮಗಳು, ಪ್ರದರ್ಶನಗಳು, ಉತ್ಸವಗಳು ಮತ್ತು ರೆಸ್ಟೋರೆಂಟ್‌ಗಳಲ್ಲಿ ಆಹಾರ ಸೇವನೆ ಸೇರಿದಂತೆ ಹೊರಾಂಗಣ ಚಟುವಟಿಕೆಗಳನ್ನು ನಿಷೇಧಿಸಲಾಗಿದೆ. ಅನಿವಾರ್ಯ ಧಾರ್ಮಿಕ ಕಾರ್ಯಗಳಿಗೆ ಮಾತ್ರ ವಿನಾಯಿತಿ ನೀಡಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

# ಹಸೀನಾ ಬಂಧನಕ್ಕೆ ರೆಡ್ ಕಾರ್ನರ್ ನೋಟೀಸ್ ಇಂಟರ್‌ಪೋಲ್ ಸಹಾಯ ಕೇಳಿದ ಬಾಂಗ್ಲಾದೇಶ



**ಬಾಂಗ್ಲಾದೇಶ,ನ.12:** ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಬಂಧನಕ್ಕೆ ರೆಡ್ ಕಾರ್ನರ್ ನೋಟೀಸ್ ಜಾರಿ ಮಾಡುವಂತೆ ಬಾಂಗ್ಲಾದೇಶದ ವಿಶೇಷ ನ್ಯಾಯಮಂಡಳಿ ಅಂತಾರಾಷ್ಟ್ರೀಯ ಪೊಲೀಸ್ ಸಂಸ್ಥೆ ಇಂಟರ್‌ಪೋಲ್‌ಗೆ ಮಂಗಳವಾರ ಸೂಚಿಸಿದೆ.

ಶೇಖ್ ಹಸೀನಾ ತನ್ನ ಆಪ್ತ ಸಹಾಯಕರು ಮತ್ತು ಮಾಜಿ ಸಚಿವರೊಂದಿಗೆ ಆಗಸ್ಟ್ 5 ರಂದು ಭಾರತಕ್ಕೆ ಪಲಾಯನ ಮಾಡುವ ಮೂಲಕ ಅವರ 15 ವರ್ಷಗಳ ಆಡಳಿತ ಅಂತ್ಯಗೊಂಡಿತ್ತು.

ನೊಬೆಲ್ ಶಾಂತಿ ಪ್ರಶಸ್ತಿ ವಿಜೇತ ಮೊಹಮ್ಮದ್ ಯೂನಸ್ ಅವರು ಆಗಸ್ಟ್ 8 ರಂದು ದಕ್ಷಿಣ ಏಷ್ಯಾ ರಾಷ್ಟ್ರದ ಹಂಗಾಮಿ ನಾಯಕರಾಗಿ ಅಧಿಕಾರ ವಹಿಸಿಕೊಂಡರು. ಇದೀಗ ಬಿ.ಎಂ. ಹಸೀನಾ ಮತ್ತು ಇತರರ ಬಂಧನದಲ್ಲಿ ಫ್ರಾನ್ಸ್ ಮೂಲದ ಸಂಸ್ಥೆಯಿಂದ ನೆರವು ಕೋರಿ ಪೊಲೀಸ್ ಮುಖ್ಯಸ್ಥರ ಮೂಲಕ ಇಂಟರ್‌ಪೋಲ್‌ಗೆ ಪತ್ರ ಬರೆದಿದ್ದೇವೆ ಎಂದು ನ್ಯಾಯಮಂಡಳಿಯ ಪ್ರಾಸಿಕ್ಯೂಟರ್ ಸುಲ್ತಾನ್ ಮಹಮೂದ್ ಅಸೋಸಿಯೇಟೆಡ್ ಪ್ರೆಸ್‌ಗೆ ತಿಳಿಸಿದ್ದಾರೆ.

ಯೂನಸ್ ನೇತೃತ್ವದ ಸರ್ಕಾರವು ಹಸೀನಾರನ್ನು ವಿಚಾರಣೆಗೆ ಒಳಪಡಿಸುವುದಾಗಿ ಹೇಳಿದ್ದು, ಅವರನ್ನು ಭಾರತದಿಂದ ಹಸ್ತಾಂತರಿಸಲು ಪ್ರಯತ್ನಿಸುವುದಾಗಿ ಹೇಳಿದೆ. ಈ ಹಿಂದೆ, ಬಾಂಗ್ಲಾದೇಶದ ಅಧಿಕಾರಿಗಳು ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರನ್ನು ಭಾರತದಿಂದ ಹಸ್ತಾಂತರಿಸಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವುದಾಗಿ ಹೇಳಿದ್ದರು. ಬಾಂಗ್ಲಾದೇಶದ ನ್ಯಾಯಮಂಡಳಿ, ದೇಶಭ್ರಷ್ಟ ಮಾಜಿ ನಾಯಕಿ ಶೇಖ್ ಹಸೀನಾಗೆ ಬಂಧನ ವಾರಂಟ್ ಸಹ ಆದೇಶಿಸಿದೆ.

# ಅಮೆರಿಕ ರಾಷ್ಟ್ರೀಯ ಭದ್ರತಾ ಸಲಹೆಗಾರರಾಗಿ ಭಾರತೀಯ ಸಭಾ ಮುಖ್ಯಸ್ಥ ಮೈಕ್ ವಾಲ್ಟ್ಜ ಆಯ್ಕೆಗೆ ಟ್ರಂಪ್ ಸೂಚನೆ

**ವಾಷಿಂಗ್ಟನ್,ನ.12:** ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಭಾರತೀಯ ಸಭಾ ಮುಖ್ಯಸ್ಥ, ನಿವೃತ್ತ ಸೇನಾ ರಾಷ್ಟ್ರೀಯ ಗಾರ್ಡ್ ಅಧಿಕಾರಿ ಮತ್ತು ಯುದ್ಧ ಅನುಭವಿ ಮೈಕ್ ವಾಲ್ಟ್ಜ ಅವರನ್ನು ರಾಷ್ಟ್ರೀಯ ಭದ್ರತಾ ಸಲಹೆಗಾರರನ್ನಾಗಿ ಕೇಳಿದ್ದಾರೆ.

ರಾಷ್ಟ್ರೀಯ ಭದ್ರತಾ ಸಲಹೆಗಾರರು ಸೆನೆಟ್ ದೃಢೀಕರಣದ ಅಗತ್ಯವಿಲ್ಲದ ಪ್ರಬಲ ಸ್ಥಾನವನ್ನು ಹೊಂದಿದ್ದಾರೆ.

ಪ್ರಮುಖ ರಾಷ್ಟ್ರೀಯ ಭದ್ರತಾ ವಿಷಯಗಳ ಕುರಿತು ಟ್ರಂಪ್ಗೆ ಬ್ರೀಫ್ ಮಾಡುವ ಮತ್ತು ವಿವಿಧ ಏಜೆನ್ಸಿಗಳಾದ್ಯಂತ ಪ್ರಯತ್ನಗಳನ್ನು ಸಂಘಟಿಸುವ ಕಾರ್ಯವನ್ನು ವಾಲ್ಟ್ಜ ವಹಿಸಲಿದ್ದಾರೆ.



**ಮೈಕ್ ವಾಲ್ಟ್ಜ ಯಾರು?**

ಪೂರ್ವ–ಮಧ್ಯ ಫ್ಲೋರಿಡಾದಿಂದ ಮೂರು–ಅವಧಿಯ ಉಔಕ ಕಾಂಗ್ರೆಸ್ಸಿಗರಾದ ವಾಲ್ಟ್ಜ ಅವರು ವೈಟ್‌ಹೌಸ್‌ಗೆ ಚುನಾಯಿತರಾದ ಮೊದಲ ಗ್ರೀನ್ ಬೆರೆಟ್ ಆಗಿದ್ದರು ಮತ್ತು ಕಳೆದ ವಾರ ಸುಲಭವಾಗಿ ಮರು ಚುನಾವಣೆಯನ್ನು ಗೆದ್ದರು. ಅವರು ಸನ್ನದ್ಧತೆಗಾಗಿ ಹೌಸ್ ಸಶಸ್ತ್ರ ಸೇವೆಗಳ ಉಪಸಮಿತಿಯ ಅಧ್ಯಕ್ಷರಾಗಿದ್ದಾರೆ ಮತ್ತು ಹೌಸ್ ವಿದೇಶಾಂಗ ವ್ಯವಹಾರಗಳ ಸಮಿತಿ ಮತ್ತು ಗುಪ್ತಚರ ಕಾಯಂ ಆಯ್ಕೆ ಸಮಿತಿಯ ಸದಸ್ಯರಾಗಿದ್ದಾರೆ.

ನ್ಯಾಷನಲ್ ಗಾರ್ಡ್‌ನಲ್ಲಿ ಕರ್ನಲ್ ಆಗಿ ಸೇವೆ ಸಲ್ಲಿಸಿದ ಟ್ರಂಪ್ ನಿಷ್ಠಾವಂತ ವಾಲ್ಟ್ಜ ಅವರು ಏಷ್ಯಾ–ಪೆಸಿಫಿಕ್‌ನಲ್ಲಿ ಚೀನಾದ ಚಟುವಟಿಕೆಯನ್ನು ಟೀಕಿಸಿದ್ದಾರೆ. ಈ ಪ್ರದೇಶದಲ್ಲಿ ಸಂಭಾವ್ಯ ಸಂಘರ್ಷಕ್ಕೆ ಅಮೆರಿಕ ಸಿದ್ಧವಾಗಬೇಕಾದ ಅಗತ್ಯ ಬಗ್ಗೆ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

# ಶೂಟಿಂಗ್: ಭವತೇಗ್‌ಗೆ ಚಿನ್ನ

**ನವದೆಹಲಿ,ನ.12:** ಯುವ ಸ್ಕೀಟ್ ಶೂಟರ್ ಭವತೇಗ್ ಸಿಂಗ್ ಗಿಲ್ ಅವರು ಇಲ್ಲಿ ನಡೆಯುತ್ತಿರುವ ವಿಶ್ವ ಯುನಿವರ್ಸಿಟಿ ಶೂಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಚಿನ್ನ ಗೆದ್ದರು. ಈ ಮೂಲಕ ಭಾರತದ ಖಾತೆಗೆ ಎರಡನೇ ಚಿನ್ನವನ್ನು ಸೇರಿಸಿದರು.

ಮಂಗಳವಾರ ಭಾರತದ ಶೂಟರ್‌ಗಳು ವೈಯಕ್ತಿಕ ವಿಭಾಗದಲ್ಲಿ ಮೂರು ಕಂಚಿನ ಪದಕ ಗೆದ್ದರು.

ಮಹಿಳೆಯರ 25 ಮೀಟರ್ ಸ್ಪೋರ್ಟ್ಸ್ ಪಿಸ್ತೂಲ್‌ನಲ್ಲಿ ಸಿಮ್ರಾನ್‌ಪ್ರೀತ್ ಕೌರ್ ಬ್ರಾರ್, ಮಹಿಳೆಯರ ಸ್ಕೀಟ್‌ನಲ್ಲಿ ಯಶಸ್ವಿ ರಾಥೋಡ್ ಮತ್ತು ಪುರುಷರ ಸ್ಕೀಟ್‌ನಲ್ಲಿ ಅಭಯ್ ಸಿಂಗ್ ಸೆಖೋನ್ ಕಂಚು ಜಯಿಸಿದರು.

ಜೂನಿಯರ್ ವಿಭಾಗದಲ್ಲಿ ನಾಲ್ಕು ಅಂತಾರಾಷ್ಟ್ರೀಯ ಪದಕಗಳನ್ನು ಗೆದ್ದಿರುವ 21 ವರ್ಷ ವಯಸ್ಸಿನ ಗಿಲ್ ಪುರುಷರ ಸ್ಕೀಟ್ ಅರ್ಹತಾ ಸುತ್ತಿನಲ್ಲಿ ನಾಲ್ಕನೇ ಸ್ಥಾನದೊಂದಿಗೆ ಫೈನಲ್ ಪ್ರವೇಶಿಸಿದ್ದರು. ಅವರು ಸೈಪ್ರಸ್‌ನ ಪೆಟ್ರೋಸ್ ಎಂಗಲ್‌ಜೌಡಿಸ್ ಅವರ ಪ್ರಬಲ ಸವಾಲನ್ನು ಮೆಟ್ಟಿ ನಿಂತು ಚಾಂಪಿಯನ್ ಆದರು. ಅರ್ಹತಾ ಸುತ್ತಿನಲ್ಲಿ ಅಗ್ರಸ್ಥಾನ ಪಡೆದಿದ್ದ ಸೆಖೋನ್ ಕಂಚು ಜಯಿಸಿದರು.

ಮಹಿಳೆಯರ ಸ್ಕೀಟ್‌ನಲ್ಲಿ ಇಟಲಿಯ ಗಿಯಾಡಾ ಲಾಂಗಿ ಚಿನ್ನ ಗೆದ್ದರೆ, ಸ್ಲೋವಾಕಿಯಾದ ಅಡೆಲಾ ಸುಪೆಕೋವಾ ಬೆಳ್ಳಿ ಜಯಿಸಿದರು. ಅರ್ಹತಾ ಸುತ್ತಿನಲ್ಲಿ ಎರಡನೇ ಸ್ಥಾನದೊಂದಿಗೆ ಫೈನಲ್ ಪ್ರವೇಶಿಸಿದ್ದ ಯಶಸ್ವಿ ಕಂಚು ಗೆದ್ದರು.

ಅರ್ಹತಾ ಸುತ್ತಿನಲ್ಲಿ ಮೂರನೇ ಸ್ಥಾನ ಗಳಿಸಿದ್ದ ಸಿಮ್ರಾನ್ ಫೈನಲ್‌ನಲ್ಲೂ ಮೂರನೇ ಸ್ಥಾನಕ್ಕೆ ತೃಪ್ತಿಪಟ್ಟರು. ಕೊರಿಯಾದ ಕಿಮ್ ಮಿನೆಸೊ ಮತ್ತು ಫ್ರಾನ್ಸ್‌ನ ಫೋರ್ ಹೆಲೋಯಿಸ್ ಕ್ರಮವಾಗಿ ಚಿನ್ನ ಮತ್ತು ಬೆಳ್ಳಿ ಗಳಿಸಿದರು.

# ವಿಶ್ವಸಂಸ್ಥೆಯಲ್ಲಿ ಭದ್ರತಾ ಮಂಡಳಿಯ ಸ್ವರೂಪ ತಿರುಚುವ ಪ್ರಯತ್ನ: ಭಾರತ ಆರೋಪ



**ವಿಶ್ವಸಂಸ್ಥೆ,ನ.12:** ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಚೌಕಟ್ಟನ್ನು ತಿರುಚುವ ಪ್ರಯತ್ನಗಳ ವಿರುದ್ಧ ಭಾರತ ಎಚ್ಚರಿಕೆ ನೀಡಿದೆ. ಇಂತಹ ಕ್ರಮಗಳು ಶಾಶ್ವತ ಸದಸ್ಯತ್ವದ ವಿಸ್ತರಣೆ ಮತ್ತು ಏಷ್ಯಾ, ಆಫ್ರಿಕಾ ಮತ್ತು ಲ್ಯಾಟಿನ್ ಅಮೆರಿಕದ ಕಡಿಮೆ ಪ್ರಾತಿನಿಧ್ಯವನ್ನು ಪರಿಹರಿಸುವ ಮಹತ್ವದ ಅಂಶಗಳನ್ನು ಅನಿರ್ದಿಷ್ಟವಾಗಿ ಮುಂದೂಡುವ ಹುನ್ನಾರವಾಗಿದೆ ಎಂದು ಆರೋಪಿಸಿದೆ.

ಭದ್ರತಾ ಮಂಡಳಿಯ ಸದಸ್ಯತ್ವದಲ್ಲಿ ಸಮಾನ ಪ್ರಾತಿನಿಧ್ಯ ಮತ್ತು ಹೆಚ್ಚಳದ ಪ್ರಶ್ನೆ ಕುರಿತು ವಿಶ್ವಸಂಸ್ಥೆಯ ವಾರ್ಷಿಕ ಮಹಾಸಭೆಯಲ್ಲಿ ಭಾರತದ ಖಾಯಂ ಪ್ರತಿನಿಧಿ ಪಿ.ಹರೀಶ್ ಈ ಹೇಳಿಕೆ ನೀಡಿದ್ದಾರೆ.

ಯುಎನ್‌ಎಸ್ಸಿ ಸುಧಾರಣೆಯ ತುರ್ತು ಅಗತ್ಯವನ್ನು ಹಲವಾರು ದಶಕಗಳಿಂದ ಸಾಮೂಹಿಕವಾಗಿ ಪುನರುಚ್ಚರಿಸಿದರೂ, 1965 ರಿಂದ ಕೌನ್ಸಿಲ್ ಅನ್ನು ಕೊನೆಯದಾಗಿ ಶಾಶ್ವತವಲ್ಲದ ವಿಭಾಗದಲ್ಲಿ ವಿಸ್ತರಿಸಿದಾಗಿನಿಂದ ಈ ನಿಟ್ಟಿನಲ್ಲಿ ತೋರಿಸಲು ನಮಗೆ ಯಾವುದೇ ಫಲಿತಾಂಶಗಳಿಲ್ಲ ಎಂಬುದು ನಿರಾಶಾದಾಯಕವಾಗಿದೆ ಎಂದು ಅವರು ಹೇಳಿದರು.

# ದಕ್ಷಿಣ ಕೊರಿಯಾವನ್ನು ಮಣಿಸಿದ ಭಾರತ



**ರಾಜ್‌ಗೀರ್,ನ.12:** ಬಿಹಾರದ ರಾಜ್‌ಗೀರ್‌ನಲ್ಲಿ ನಡೆದ ವನಿತಾ ಏಷ್ಯನ್ ಹಾಕಿ ಚಾಂಪಿಯನ್‌ಶಿಪ್‌ನಲ್ಲಿ ಹಾಲಿ ಚಾಂಪಿಯನ್ ಭಾರತ ಸತತ 2ನೇ ಗೆಲುವು ದಾಖಲಿಸಿದೆ. ಮಂಗಳವಾರದ ಜಿದ್ದಾಜಿದ್ದಿ ಸೆಣಸಾಟ ದಲ್ಲಿ ದಕ್ಷಿಣ ಕೊರಿಯಾವನ್ನು 3–2 ಗೋಲುಗಳಿಂದ ಮಣಿಸಿದೆ.

ಮೊದಲಾರ್ಧದಲ್ಲಿ ಭಾರತ 2–0 ಮುನ್ನಡೆ ಸಾಧಿಸಿತ್ತು.

ಸಂಗೀತಾ ಕುಮಾರಿ 3ನೇ ನಿಮಿಷದಲ್ಲಿ ಗೋಲಿನ ಖಾತೆ ತೆರೆದರು. 20ನೇ ನಿಮಿಷದಲ್ಲಿ ದೀಪಿಕಾ ಈ ಮುನ್ನಡೆಯನ್ನು ವಿಸ್ತರಿಸಿದರು.

3ನೇ ಕ್ವಾರ್ಟರ್‌ನಲ್ಲಿ ಕೊರಿಯಾ ಭರ್ಜರಿ ಪುನರಾಗಮನ ಸಾರಿತು. ಯುರೀ ಲೀ ಮತ್ತು ನಾಯಕಿ ಎಯುನ್‌ಬಿ ಶೆಯಾನ್ ಸೇರಿಕೊಂಡು ಪಂದ್ಯವನ್ನು ಸಮಬಲಕ್ಕೆ ತರುವಲ್ಲಿ ಯಶಸ್ವಿಯಾದರು.

ಅನಂತರ ಹೋರಾಟ ಇನ್ನಷ್ಟು ತೀವ್ರ ಗೊಂಡಿತು. ಪಂದ್ಯ ಡ್ರಾಗೊಳ್ಳುವುದು ಬಹುತೇಕ ಖಚಿತ ಎಂಬ ಸ್ಥಿತಿ ನಿರ್ಮಾಣಗೊಂಡಿತು. ಆದರೆ 57ನೇ ನಿಮಿಷದಲ್ಲಿ ದೀಪಿಕಾ ಕೊರಿಯಾ ಕೋಟೆಗೆ ಲಗ್ಗೆ ಹಾಕಿ ತಂಡದ 3ನೇ ಹಾಗೂ ವೈಯಕ್ತಿಕ 2ನೇ ಗೋಲು ಸಿಡಿಸಿ ಗೆಲುವನ್ನು ಸಾರಿದರು.

ಗುರುವಾರ ಥಾಯ್ಲೆಂಡ್ ವಿರುದ್ಧ ಆಡಲಿದೆ. ಮಂಗಳ ವಾರದ ಥಾಯ್ಲೆಂಡ್–ಜಪಾನ್ ಪಂದ್ಯ 1–1ರಿಂದ ಡ್ರಾಗೊಂಡಿತು. ಒಲಿಂಪಿಕ್ಸ್ ಬೆಳ್ಳಿ ಪದಕ ವಿಜೇತ ಚೀನ 5–0 ಅಂತರದಿಂದ ಮಲೇಷ್ಯಾವನ್ನು ಮಣಿಸಿ ಸತತ 2ನೇ ಗೆಲುವು ದಾಖಲಿಸಿತು.

# ಪಾಕ್ ಕ್ರೀಡಾಪಟುಗಳಿಗೆ ವೀಸಾ ನಿರಾಕರಿಸಿದ ಭಾರತ

**ನವದೆಹಲಿ,ಟ.12:** ದೆಹಲಿಯಲ್ಲಿ ನಡೆಯಲಿರುವ ಏಷ್ಯಾ ಕಪ್ ಯೂತ್ ಸ್ಕ್ರ್ಯಾಬಲ್ ಚಾಂಪಿಯನ್ಶಿಪ್ ನಲ್ಲಿ ಭಾಗವಹಿಸಲು ಪಾಕಿಸ್ತಾನದ ಹೆಚ್ಚಿನ ಸ್ಕ್ರಾಬಲ್ ಆಟಗಾರರಿಗೆ ಭಾರತ ವೀಸಾ ನೀಡಲು ನಿರಾಕರಿಸಿದೆ. ಪಾಕಿಸ್ತಾನ ವರ್ಲ್ಡ್ ಯೂತ್ ಚಾಂಪಿಯನ್ಶಿಪ್ ಮತ್ತು ಏಷ್ಯನ್ ಯೂತ್ ಚಾಂಪಿಯನ್‌ಶಿಪ್ ಎರಡೂ ಪಟ್ಟವನ್ನು ಹೊಂದಿದ್ದು, ಆದಾಗ್ಯೂ ಭಾರತದಲ್ಲಿ ನಡೆಯಲಿರುವ ಪಂದ್ಯಕ್ಕೆ ಪಾಕಿಸ್ತಾನದ ಹೆಚ್ಚಿನ ಆಟಗಾರರಿಗೆ ಭಾರತದ ಕಡೆಯಿಂದ ವೀಸಾ ನಿರಾಕರಿಸಲಾಗಿದೆ.

ಈ ಬಗ್ಗೆ ಮಾತನಾಡಿರುವ ಪಾಕಿಸ್ತಾನ್ ಸ್ಕ್ರ್ಯಾಬಲ್ ಅಸೋಸಿಯೇಷನ್ ನಿರ್ದೇಶಕ ತಾರಿಕ್ ಪೆರೇಜ್ ಎರಡು ತಿಂಗಳ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸಿದ್ದರೂ, ಭಾರತೀಯ ಹೈಕಮಿಷನ್ ಪ್ರಕ್ರಿಯೆಯಲ್ಲಿ ವಿಳಂಬ ಮಾಡಿದೆ, ಕೆಲವು ಆಟಗಾರರಿಗೆ ಮಾತ್ರ ತಡವಾಗಿ ವೀಸಾಗಳನ್ನು ನೀಡಲು ಮುಂದಾಗಿದೆ ಜೊತೆಗೆ ಯಾವುದೇ ವಿವರಣೆಯಿಲ್ಲದೆ ಉಳಿದ ಅರ್ಧದಷ್ಟು ಆಟಗಾರರಿಗೆ ವೀಸಾ ನಿರಾಕರಿಸಲಾಗಿದೆ ಎಂದು ಹೇಳಿದ್ದಾರೆ.

ತಾರಿಕ್ ಪೆರೇಜ್ ಹೇಳಿರುವ ಪ್ರಕಾರ, ಪಾಕಿಸ್ತಾನದ ಆಟಗಾರರು ಲಾಹೋರ್ಗೆ ತೆರಳಿದ್ದು, ಅಲ್ಲಿ ಅವರಿಗೆ ವೀಸಾ ಸಿಗಬೇಕಿತ್ತು. ಆದ್ರೆ ಭಾರತ ವೀಸಾ ನೀಡಿಲ್ಲ. ಹೀಗಾಗಿ ವಾಪಸ್ ಕರಾಚಿಗೆ ಮರಳಿದ್ದಾರೆ ಎಂದು ಹೇಳಿದ್ದಾರೆ. ಹೀಗಾಗಿ ನಮ್ಮ ಆಟಗಾರರು ಏಷ್ಯಾ ಕಪ್ ಯೂತ್ ಸ್ಕ್ರ್ಯಾಬಲ್ ಚಾಂಪಿಯನ್‌ಶಿಪ್ ಬದಲು ಈಗ ಅಂತರರಾಷ್ಟ್ರೀಯ ಸ್ಪರ್ಧೆಗಳ ಮೇಲೆ ಕೇಂದ್ರೀಕರಿಸುತ್ತಾರೆ ಎಂದು ಹೇಳಿಕೊಂಡಿದ್ದಾರೆ.

# ಚೀನಾದಲ್ಲಿ ಕ್ರೀಡಾ ಕೇಂದ್ರಕ್ಕೆ ಕಾರು ನುಗ್ಗಿಸಿದ ಚಾಲಕ: 35 ಮಂದಿ ಸಾವು



**ಬ್ಯಾಂಕಾಕ್,ನ.12:** ವ್ಯಕ್ತಿಯೊಬ್ಬ ದಕ್ಷಿಣ ಚೀನಾದ ಝುಹೈನಲ್ಲಿರುವ ಕ್ರೀಡಾ ಕೇಂದ್ರದಲ್ಲಿ ವ್ಯಾಯಾಮ ಮಾಡುತ್ತಿದ್ದ ಜನರ ಮೇಲೆ ಉದ್ದೇಶಪೂರ್ವಕವಾಗಿ ತನ್ನ ಕಾರನ್ನು ನುಗ್ಗಿಸಿದ್ದು, ಭೀಕರ ಅಪಘಾತದಲ್ಲಿ 35 ಮಂದಿ ಸಾವನ್ನಪ್ಪಿದ್ದಾರೆ ಮತ್ತು 43 ಜನ ತೀವ್ರವಾಗಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ಮಂಗಳವಾರ ತಿಳಿಸಿದ್ದಾರೆ.

ಪೀಪಲ್ಸ್ ಲಿಬರೇಶನ್ ಆರ್ಮಿ ನಗರದಲ್ಲಿ ವಾರ್ಷಿಕವಾಗಿ ಆಯೋಜಿಸಲಾಗುವ ದೇಶದ ಪ್ರಮುಖ ವೈಮಾನಿಕ ಪ್ರದರ್ಶನದ ಮುನ್ನಾದಿನ ಸೋಮವಾರ ತಡರಾತ್ರಿ ಈ ದಾಳಿ ನಡೆದಿದ್ದು, ದಕ್ಷಿಣ ಚೀನಾದ ಝುಹೈ ನಗರದ ಕ್ರೀಡಾ ಕೇಂದ್ರಕ್ಕೆ ಕಾರು ನುಗ್ಗಿಸಿದ 62 ವರ್ಷದ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ.

ಚೀನಾ ಅಧಿಕಾರಿಗಳ ಪ್ರಕಾರ, ಪೊಲೀಸರು ಫ್ಯಾನ್ ಎಂಬ ಆತನ ಕುಟುಂಬದ ಹೆಸರಿನಿಂದ ಆರೋಪಿಯನ್ನು ಗುರುತಿಸಿದ್ದಾರೆ. ಕೃತ್ಯದ ಬಳಿಕ ಚಾಲಕ ಚಾಕು ಬಳಸಿ ಆತ್ಮಹತ್ಯೆಗೆ ಮುಂದಾಗಿದ್ದ ಎಂದು ವರದಿಯಾಗಿದೆ.

ಫ್ಯಾನ್ ಕಾರಿನಲ್ಲಿ ಚಾಕು ಪತ್ತೆಯಾಗಿದೆ. ಆತನ ಕುತ್ತಿಗೆಗೆ ಗಾಯಗಳಾಗಿದ್ದು, ಸ್ವಯಂ–ಹಾನಿ ಮಾಡಿಕೊಂಡಿರಬಹುದು ಎಂದು ಭಾವಿಸಲಾಗಿದೆ. ಆರೋಪಿ ಪ್ರಜ್ಞಾಹೀನರಾಗಿದ್ದು, ವೈದ್ಯಕೀಯ ಚಿಕಿತ್ಸೆ ಪಡೆಯುತ್ತಿದ್ದಾರೆ.

ಘಟನೆ ನಡೆದು ಸುಮಾರು 24 ಗಂಟೆಗಳ ಕಾಲ, ಸಾವು ಅಥವಾ ಗಾಯದ ಸಂಖ್ಯೆ ಎಷ್ಟು ಎಂಬುದು ಸ್ಪಷ್ಟವಾಗಿ ತಿಳಿದು ಬಂದಿಲ್ಲ. ಚಿಕಿತ್ಸೆಗಾಗಿ ಜನರನ್ನು ನಾಲ್ಕು ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ. 20 ಕ್ಕೂ ಹೆಚ್ಚು ಜನ ಗಾಯಗೊಂಡಿದ್ದಾರೆ ಎಂದು ಸರ್ಕಾರಿ ಮಾಧ್ಯಮ ಸೋಮವಾರ ವರದಿ ಮಾಡಿದೆ.

ಮಂಗಳವಾರ ಬೆಳಗ್ಗೆ ಚೀನೀ ಸಾಮಾಜಿಕ ಮಾಧ್ಯಮದಲ್ಲಿ ಘಟನೆಯ ಹುಡುಕಾಟಗಳ ಬಗ್ಗೆ ಚೀನಾ ಸೆನ್ಸಾರ್ ಮಾಡಿದೆ. ಸಾಮಾಜಿಕ ಜಾಲತಾಣ Weibo ನಲ್ಲಿ ಈ ಘಟನೆಯ ಬಗ್ಗೆ ಸರ್ಚ್ ಮಾಡಿದರೆ ಕೇವಲ ಒಂದೆರಡು ಚಿತ್ರಗಳು ಮಾತ್ರ ಕಾಣುತ್ತಿದೆ.

ಸೋಮವಾರ ರಾತ್ರಿಯಿಂದಲೇ ಈ ಘಟನೆಯ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಎಲ್ಲಾ ಪೋಸ್ಟ್‌ಗಳನ್ನು ತೆಗೆದು ಹಾಕಲಾಗಿದೆ ಎಂದು ವರದಿಯಾಗಿದೆ. ಈ ಘಟನೆಯ ನಂತರ ಮುಂದಿನ ಸೂಚನೆ ಬರುವವರೆಗೆ ವ್ಯಾಯಾಮ ಕೇಂದ್ರವನ್ನು ಬಂದ್ ಮಾಡಲಾಗಿದೆ.

# ಚಾಂಪಿಯನ್ಸ್ ಟ್ರೋಫಿ ದಕ್ಷಿಣ ಆಫ್ರಿಕಾಗೆ ಸ್ಥಳಾಂತರ: ಪಾಕ್‌ಗೆ ಐಸಿಸಿ ಎಚ್ಚರಿಕೆ




**ನವದೆಹಲಿ,ನ.12:** ಮುಂಬರುವ 2025ರ ಐಸಿಸಿ ಚಾಂಪಿಯನ್ಸ್ ಟ್ರೋಫಿ ಟೂರ್ನಿಯನ್ನು ಆಡಲು ಭಾರತ ತಂಡ ಪಾಕಿಸ್ತಾನಕ್ಕೆ ಹೋಗುವುದಿಲ್ಲ ಎಂಬುದು ಖಚಿತವಾಗುತ್ತಿದ್ದಂತೆ ಸಾಕಷ್ಟು ಬೆಳವಣಿಗೆಗಳು ನಡೆಯುತ್ತಿವೆ. ಅದರಂತೆ ಪಾಕಿಸ್ತಾನ ಕ್ರಿಕೆಟ್ ಮಂಡಳಿಗೆ ಟೂರ್ನಿಯಲ್ಲಿನ ಭಾರತ ತಂಡದ ಪಂದ್ಯಗಳನ್ನು ಹೈಬ್ರಿಡ್ ಮಾದರಿಯಲ್ಲಿ ಆಯೋಜಿಸಲು ಸೂಚನೆ ನೀಡಿದೆ.

ಆದರೆ, ಇದಕ್ಕೆ ಪಿಸಿಬಿ ಒಪ್ಪಿಲ್ಲವಾದರೆ ಸಂಪೂರ್ಣ ಟೂರ್ನಿಯನ್ನು ದಕ್ಷಿಣ ಆಫ್ರಿಕಾದಲ್ಲಿ ನಡೆಸಲು ಕ್ರಮಕೈಗೊಳ್ಳಲಾಗುವುದು ಎಂದು ವರದಿಯಾಗಿದೆ.

ಪಾಕಿಸ್ತಾನ ಟೂರ್ನಿಯ ಬಹುತೇಕ ಪಂದ್ಯಗಳನ್ನು ತನ್ನ ದೇಶದಲ್ಲಿ ಆಡಿಸಬೇಕು ಹಾಗೂ ಭಾರತ ತಂಡದ ಪಂದ್ಯಗಳನ್ನು ದುಬೈನಲ್ಲಿ ಆಡಿಸಬೇಕು ಎಂದು ಅಂತಾರಾಷ್ಟ್ರೀಯ ಕ್ರಿಕೆಟ್ ಕೌನ್ಸಿಲ್ ಯೋಜನೆ ರೂಪಿಸಿದೆ. ಟೂರ್ನಿಯ ಪಂದ್ಯ ಕೂಡ ಯುಎಇನಲ್ಲಿ ಆಯೋಜಿಸಲು ನಿರ್ಧರಿಸಲಾಗಿದೆ. ಹೈಬ್ರಿಡ್ ಮಾಡೆಲ್ ಅನ್ನು ಪಾಕಿಸ್ತಾನ ಕ್ರಿಕೆಟ್ ಮಂಡಳಿ ಒಪ್ಪಿಕೊಂಡರೆ ಪಿಸಿಬಿಗೆ ಟೂರ್ನಿಯ ಸಂಪೂರ್ಣ ಆತಿಥ್ಯದ ಹಕ್ಕುಗಳನ್ನು ನೀಡಲಾಗುತ್ತದೆ. ಆದರೆ, ಇಲ್ಲಿಯವರೆಗೂ ಪಿಸಿಬಿ ಎಲ್ಲಾ ಪಂದ್ಯಗಳನ್ನು ಪಾಕಿಸ್ತಾನದಲ್ಲಿ ಆಯೋಜಿಸಬೇಕೆಂಬ ಒಮ್ಮತವನ್ನು ಹೊಂದಿದೆ.

**ಚಾಂಪಿಯನ್ಸ್ ಟ್ರೋಫಿ ದಕ್ಷಿಣ ಆಫ್ರಿಕಾಗೆ ಸ್ಥಳಾಂತರ?**

ಐಸಿಸಿ ಚಾಂಪಿಯನ್ಸ್ ಟ್ರೋಫಿ ಟೂರ್ನಿಯನ್ನು ಹೈಬ್ರಿಡ್ ಮಾದರಿಯಲ್ಲಿ ಆಯೋಜಿಸುವ ಬಗ್ಗೆ ಖಚಿತಪಡಿಸುವಂತೆ ಪಿಸಿಬಿಗೆ ಐಸಿಸಿ ಪತ್ರ ಬರೆದಿದೆ ಎಂದು ಪಿಟಿಐ ವರದಿ ಮಾಡಿದೆ. ಒಂದು ವೇಳೆ ಹೈಬ್ರಿಡ್ ಮಾದರಿಯನ್ನು ಪಿಸಿಬಿ ಸ್ವೀಕರಿಸಿಲ್ಲವಾದರೆ, ಸಂಪೂರ್ಣ ಟೂರ್ನಿಯನ್ನು ದಕ್ಷಿಣ ಆಫ್ರಿಕಾಗೆ ಐಸಿಸಿ ಸ್ಥಳಾಂತರಿಸಬಹುದು. ಈ ಬಗ್ಗೆ ಇನ್ನು ಪಾಕಿಸ್ತಾನ ಕ್ರಿಕೆಟ್ ಮಂಡಳಿಯು ಯಾವುದೇ ತೀರ್ಮಾನ ತೆಗೆದುಕೊಂಡಿಲ್ಲ. ಆದರೆ, ವರದಿಗಳ ಪ್ರಕಾರ ಈ ಬಗ್ಗೆ ಪಿಸಿಬಿ, ಪಾಕಿಸ್ತಾನ ಸರ್ಕಾರದ ಬಳಿ ಈ ಬಗ್ಗೆ ಚರ್ಚೆ ನಡೆಸುತ್ತಿದೆ ಎಂದು ಹೇಳಲಾಗುತ್ತಿದೆ.

**ಕ್ರೀಡಾ ನ್ಯಾಯಾಲಯಕ್ಕೆ ಪಿಸಿಬಿ ಮೊರೆ?**

ಮತ್ತೊಂದೆಡೆ ಭಾರತವನ್ನು ಕ್ರೀಡಾ ಮಧ್ಯಸ್ಥಿಕೆ ನ್ಯಾಯಾಲಯಕ್ಕೆ (ಸಿಎಎಸ್) ಕರೆದೊಯ್ಯುವುದು ಹಾಗೂ ಯಾವುದೇ ಐಸಿಸಿ ಟೂರ್ನಿಗಳಲ್ಲಿ ಭಾರತದ ವಿರುದ್ಧ ಆಡದಿರುವುದು ಮತ್ತು 2036ರ ಒಲಿಂಪಿಕ್ಸ್ ಆತಿಥ್ಯ ವಹಿಸುವ ಭಾರತದ ಪ್ರಯತ್ನದ ವಿರುದ್ಧ ಲಾಬಿ ಮಾಡುವಂತಹ ಕಾನೂನು ಆಯ್ಕೆಗಳಿಗೆ ಪಿಸಿಬಿ ಮೊರೆ ಹೋಗಲಿದೆ ಎಂದು ಪಾಕಿಸ್ತಾನದ ಮಾಧ್ಯಮಗಳು ವರದಿ ಮಾಡಿವೆ.

2008ರ ಏಷ್ಯಾ ಕಪ್ ಟೂರ್ನಿಯ ಬಳಿಕ ಭಾರತ ತಂಡ ಪಾಕಿಸ್ತಾನದ ನೆಲದಲ್ಲಿ ಇಲ್ಲಿಯವರೆಗೂ ಒಂದೇ ಒಂದು ಪಂದ್ಯವನ್ನು ಆಡಿಲ್ಲ. ರಾಜಕೀಯ ಭಿನ್ನಾಭಿಪ್ರಾಯಗಳಿಂದಾಗಿ ಭಾರತ ಹಾಗೂ ಪಾಕಿಸ್ತಾನ ತಂಡಗಳು 2012–13ರ ಸಾಲಿನ ಬಳಿಕ ದ್ವಿಪಕ್ಷೀಯ ಸರಣಿಗಳಲ್ಲಿ ಆಡುತ್ತಿಲ್ಲ. ಇದರ ಬದಲಿಗೆ ಕೇವಲ ಐಸಿಸಿ ಹಾಗೂ ಎಸಿಸಿ ಟೂರ್ನಿಗಳಲ್ಲಿ ಮಾತ್ರ ಮುಖಾಮುಖಿಯಾಗುತ್ತಿವೆ. ಕಳೆದ ವರ್ಷ ಪಾಕಿಸ್ತಾನ ಏಷ್ಯಾ ಕಪ್ ಟೂರ್ನಿಗೆ ಆತಿಥ್ಯ ವಹಿಸಿತ್ತು. ಆದರೆ, ಭಾರತ ತಂಡದ ಪಂದ್ಯಗಳು ಶ್ರೀಲಂಕಾದಲ್ಲಿ ನಡೆದಿದ್ದವು.

# ಮತ್ತೊಂದು ಸೋಲು ಕಂಡ ಬೆಂಗಳೂರು ಬುಲ್ಸ್




11ನೇ ಆವೃತ್ತಿ ಪ್ರೊ ಕಬಡ್ಡಿ ಟೂರ್ನಿಯಲ್ಲಿ ಬೆಂಗಳೂರು ಬುಲ್ಸ್ ತಂಡದ ಸೋಲಿನ ಸರಪಳಿ ಮುಂದುವರೆದಿದೆ. ಮಂಗಳವಾರ ನಡೆದ ಪ್ರಸಕ್ತ ಆವೃತ್ತಿಯ 49ನೇ ಪಂದ್ಯದಲ್ಲಿ ಬೆಂಗಳೂರು ಬುಲ್ಸ್ 32–39 ರಿಂದ ಜೈಪುರ ಪಿಂಕ್ ಪ್ಯಾಂಥರ್ಸ್ ತಂಡದ ವಿರುದ್ಧ ಸೋಲು ಕಂಡಿತು. ಮಹತ್ವದ ಪಂದ್ಯದಲ್ಲಿ ಬುಲ್ಸ್ ತಂಡದ ರಕ್ಷಣಾ ವಿಭಾಗದ ಆಟಗಾರರು ಉತ್ತಮ ಪ್ರದರ್ಶನ ನೀಡುವಲ್ಲಿ ವಿಫಲರಾದರು.

ಪರಿಣಾಮ ಬುಲ್ಸ್ ಟೂರ್ನಿಯಲ್ಲಿ ಏಳನೇ ಸೋಲು ಕಂಡಿದೆ.

ಪಂದ್ಯದಲ್ಲಿ ಅಮೋಘ ಪ್ರದರ್ಶನ ನೀಡಿರುವ ಜೈಪುರ ಪಿಂಕ್ ತಂಡ ದಾಳಿ ಹಾಗೂ ಟ್ಯಾಕಲ್‌ನಲ್ಲಿ ಸ್ಥಿರ ಪ್ರದರ್ಶನ ನೀಡಿ ಜಯ ಸಾಧಿಸಿತು. ಈ ಮೂಲಕ ಪೂರ್ಣ ಅಂಕ ಕಲೆ ಹಾಕಿತು. ಆಡಿದ 8 ಪಂದ್ಯಗಳಲ್ಲಿ ಜೈಪುರ 4 ಜಯ, 3 ಸೋಲು, 1 ಡ್ರಾ ಸಾಧಿಸಿದ್ದು, 25 ಅಂಕಗಳನ್ನು ಕಲೆಹಾಕಿ ಏಳನೇ ಸ್ಥಾನವನ್ನು ಪಡೆದಿದೆ.

**ಬುಲ್ಸ್ ಭರ್ಜರಿ ಆರಂಭ**

ಬೆಂಗಳೂರು ಸಾಲು ಸಾಲು ಸೋಲುಗಳಿಂದ ಪಾಠ ಕಲಿತಂತೆ ಆಡಿದ ಬುಲ್ಸ್ ಸ್ಥಿರ ಪ್ರದರ್ಶನ ಅಂಕಗಳನ್ನು ಗಳಿಸುತ್ತ ಸಾಗಿತ್ತು. ಈ ಅವಧಿಯಲ್ಲಿ ಬುಲ್ಸ್ ದಾಳಿಯಲ್ಲಿ 11 ಹಾಗೂ ಟ್ಯಾಕಲ್‌ನಲ್ಲಿ 5 ಅಂಕಗಳನ್ನು ಕಲೆ ಹಾಕಿತು. ಅವಧಿಯಲ್ಲಿ ಪಿಂಕ್ ಪ್ಯಾಂಥರ್ಸ್ ಒಂದು ಬಾರಿ ಆಲೌಟ್ ಆಯಿತು.

**ಮುಂಬಾ ಮಣಿಸಿದ ಸ್ಟೀಲರ್ಸ್‌ಗೆ ಅಗ್ರ ಪಟ್ಟ: ಬುಲ್ಸ್, ಜೈಪುರ ಕಾದಾಟ**

ಎರಡನೇ ಅವಧಿಯ ಆಟದಲ್ಲಿ ಬುಲ್ಸ್ ತಂಡದ ರಣ ತಂತ್ರವನ್ನು ಮೆಟ್ಟಿ ನಿಂತು ಅಮೋಘ ಪ್ರದರ್ಶನ ನೀಡಿತು. ಈ ಅವಧಿಯಲ್ಲಿ ಪ್ಯಾಂಥರ್ಸ್ ದಾಳಿಯಲ್ಲಿ 7, ಟ್ಯಾಕಲ್‌ನಲ್ಲಿ 10 ಅಂಕಗಳನ್ನು ಕಲೆ ಹಾಕಿತು. ಈ ಅವಧಿಯಲ್ಲಿ ಬೆಂಗಳೂರು ತಂಡ ಎರಡು ಬಾರಿ ಅಂಗಳ ಖಾಲಿ ಮಾಡಿದ್ದರಿಂದ ಜೈಪುರ ಬೋನಸ್ ಅಂಕವನ್ನು ಕಲೆಹಾಕಿತು.

ಜೈಪುರ ಪರ ಅರ್ಜುನ್ ದೇಶ್ವಾಲ್ 19 ಅಂಕಗಳನ್ನು ಕಲೆ ಹಾಕಿ ಗೆಲುವಿನಲ್ಲಿ ಮಿಂಚಿದರು. ಪರಾಜಿತ ತಂಡದ ಪರ ಅಜಿಂಕ್ಯ ಪವಾರ 9 ಅಂಕ ಸೇರಿಸಿದರು.

**ಪುಣೇರಿ, ದಬಾಂಗ್ ಪಂದ್ಯ ಟೈ**

ಪ್ರಸಕ್ತ ಟೂರ್ನಿಯ 50ನೇ ಪಂದ್ಯದಲ್ಲಿ ದಬಾಂಗ್ ದೆಹಲಿ ಕೆಸಿ ಹಾಗೂ ಪುಣೇರಿ ಪಲ್ಟನ್ ತಂಡಗಳು ತಲಾ 38 ಅಂಕಗಳನ್ನು ಕಲೆ ಹಾಕಿ, ಅಂಕಗಳನ್ನು ಹಂಚಿಕೊಂಡವು. ಈ ಪಂದ್ಯದಲ್ಲಿ ಡ್ರಾ ಸಾಧಿಸಿದ ಪುಣೇರಿ 33 ಅಂಕಗಳನ್ನು ಕಲೆ ಹಾಕಿ ಮೊದಲ ಸ್ಥಾನಕ್ಕೆ ಬಡ್ತಿ ಪಡೆಯಿತು. ಇನ್ನು ದಬಾಂಗ್ ದೆಹಲಿ ಆಡಿದ 10 ಪಂದ್ಯಗಳಲ್ಲಿ, 4 ಜಯ, 5 ಸೋಲು, 1 ಡ್ರಾ ಸಾಧಿಸಿದ್ದು, 27 ಅಂಕಗಳನ್ನು ಕಲೆ ಹಾಕಿದ್ದು ಅಂಕ ಪಟ್ಟಿಯಲ್ಲಿ ಐದನೇ ಸ್ಥಾನದಲ್ಲಿದೆ.

ದಬಾಂಗ್ ಪರ ಆಶು ಮಲಿಕ್ 17 ಅಂಕಗಳನ್ನು ಕಲೆಹಾಕಿದರು. ಪುಣೇರಿ ಪರ ಆಕಾಶ್ ಶಿಂಧೆ 8 ಅಂಕಗಳನ್ನು ಬಾಚಿಕೊಂಡರು.

ಬುಧವಾರ ಗುಜರಾತ್ ಜೈಂಟ್ಸ್ ಹಾಗೂ ಬಂಗಾಳ ವಾರಿಯರ್ಸ್ ತಂಡಗಳು ಮೊದಲ ಪಂದ್ಯದಲ್ಲಿ ಕಾದಾಟ ನಡೆಸಲಿವೆ. ಎರಡನೇ ಪಂದ್ಯದಲ್ಲಿ ಪಾಟ್ನಾ ಪೈರೇಟ್ಸ್, ಹರಿಯಾಣ ಸ್ಟೀಲರ್ಸ್ ನಡುವೆ ಹೋರಾಟ ನಡೆಸಲಿದೆ.